ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಜೂನ್ 20 ಗುರುವಾರ 2024

ಸಂಪುಟ: 45 | ಸಂಚಿಕೆ: 65 | ಪುಟಗಳು: 12

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com



ಮೈಸೂರು-ಚೆನ್ನೈ ಬುಲೆಟ್ ಟ್ರೈನ್ ಯೋಜನೆ ಕಾಲಮಿತಿಯಲ್ಲಿ ಪೂರ್ಣ

ಉಕ್ಕು, ಬೃಹತ್ ಕೈಗಾರಿಕಾ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರಿಗೆ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಭರವಸೆ

● ಬೆಂಗಳೂರು–ಚಾಮರಾಜನಗರ–ಸತ್ಯಮಂಗಲ ಯೋಜನೆ ಶೀಘ್ರ ಪೂರ್ಣಗೊಳಿಸುವ ಆಶ್ವಾಸನೆ ● ಹೊರರಾಜ್ಯದಿಂದ ಬರುವ ರೈಲುಗಳು ಮೈಸೂರಿಗೆ ವಿಸ್ತರಣೆ ಪ್ರಸ್ತಾಪ

ಬೆಂಗಳೂರು, ಜೂ.19 (ಕೆಎಂಶಿ)– ಮೈಸೂರು–ಬೆಂಗಳೂರು–ಚೆನ್ನೈ ಬುಲೆಟ್ ಟ್ರೈನ್ ಸೇರಿದಂತೆ ಕರ್ನಾಟಕದ ರೈಲ್ವೆ ಯೋಜನೆಗಳನ್ನು ಕಾಲಮಿತಿಯಲ್ಲಿ ಪೂರ್ಣಗೊಳಿಸುವುದಲ್ಲದೆ, ಅಗತ್ಯ ಆರ್ಥಿಕ ನೆರವು ದೊರಕಿಸುವುದಾಗಿ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರು ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರಿಗೆ ಭರವಸೆ ನೀಡಿದ್ದಾರೆ.



ರಾಜ್ಯದ ವಿವಿಧ ರೈಲ್ವೆ ಯೋಜನೆಗಳ ಸಂಬಂಧ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಬುಧವಾರ ನವದೆಹಲಿಯಲ್ಲಿ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರೊಂದಿಗೆ ಚರ್ಚಿಸಿದರು.

ಕರ್ನಾಟಕದ ರೈಲ್ವೆ ಯೋಜನೆಗಳಿಗೆ ಸಂಬಂಧಿಸಿದಂತೆ ಕುಮಾರಸ್ವಾಮಿ ಇಂದು ದೆಹಲಿಯಲ್ಲಿ ವೈಷ್ಣವ್ ಅವರನ್ನು ಭೇಟಿ ಮಾಡಿ ಸುಮಾರು ಒಂದು ಗಂಟೆಗೂ ಹೆಚ್ಚು ಕಾಲ ಚರ್ಚೆ ನಡೆಸಿದ ಸಂದರ್ಭದಲ್ಲಿ ಈ ಆಶ್ವಾಸನೆ ನೀಡಿದ್ದಾರೆ. ದೇವೇಗೌಡರು ಪ್ರಧಾನಿಯಾಗಿದ್ದ ಸಂದರ್ಭದಲ್ಲಿ ಮಂಜೂರಾಗಿದ್ದ ಬೆಂಗಳೂರು–ಚಾಮರಾಜನಗರ– ಸತ್ಯಮಂಗಲ (ಕನಕಪುರ– ಮಳವಳ್ಳಿ ಮಾರ್ಗ) ರೈಲ್ವೆ ಯೋಜನೆಯನ್ನು ಕೈಗೆತ್ತಿಕೊಂಡು ಆದಷ್ಟು ಶೀಘ್ರ ಪೂರ್ಣಗೊಳಿಸುವುದಾಗಿಯೂ ರೈಲ್ವೆ ಸಚಿವರು ಭರವಸೆ ನೀಡಿದ್ದಾರೆ. ಹೊರರಾಜ್ಯದಿಂದ ಬರುವ ರೈಲುಗಳನ್ನು ಬೆಂಗಳೂರು ಮಾರ್ಗವಾಗಿ ಮಂಡ್ಯ–ಮೈಸೂರಿಗೆ ವಿಸ್ತರಿಸುವ ಪ್ರಸ್ತಾವವೂ ಚರ್ಚೆಯಲ್ಲಿ ಬಂದಿದೆ. ಕೆಲವು ಯೋಜನೆಗಳು ಕುಂಟುತ್ತಾ ಸಾಗಿರುವುದರಿಂದ ವರ್ಷದಿಂದ ● 2ನೇ ಪುಟಕ್ಕೆ

ಮೂರು ವಿಧಾನಸಭಾ ಕ್ಷೇತ್ರದ ಉಪಚುನಾವಣೆಯಲ್ಲೂ ಬಿಜೆಪಿ–ಜೆಡಿಎಸ್ ಮೈತ್ರಿ ಮುಂದುವರಿಕೆ

● ಕೇಂದ್ರ ಸಚಿವ ಅಮಿತ್ ಷಾರೊಂದಿಗೆ ಕುಮಾರಸ್ವಾಮಿ ಮಾತುಕತೆ
● ಚನ್ನಪಟ್ಟಣದಲ್ಲಿ ಜೆಡಿಎಸ್; ಶಿಗ್ಗಾಂವ್, ಸಂಡೂರಲ್ಲಿ ಬಿಜೆಪಿ ಸ್ಪರ್ಧೆ ನಿರ್ಧಾರ

ಬೆಂಗಳೂರು, ಜೂ.19 (ಕೆಎಂಶಿ)–ಕರ್ನಾಟಕದಲ್ಲಿ ಜರುಗಲಿರುವ ಮೂರು ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಯಲ್ಲೂ ಬಿಜೆಪಿ–ಜೆಡಿಎಸ್ ಮೈತ್ರಿ ಮುಂದುವರೆಯಲಿದೆ.



ಗೃಹ ಸಚಿವ ಅಮಿತ್ ಶಾ ಅವರೊಂದಿಗೆ ಕುಮಾರಸ್ವಾಮಿ ಸಮಾಲೋಚನೆ

ಉಪಚುನಾವಣೆ ಹಾಗೂ ಇತರ ರಾಜಕೀಯ ವಿಚಾರಗಳಿಗೆ ಸಂಬಂಧಿಸಿದಂತೆ ಎಚ್.ಡಿ.ಕುಮಾರಸ್ವಾಮಿ ಅವರೊಂದಿಗೆ ಕೇಂದ್ರ ಗೃಹ ಸಚಿವ ಅಮಿತ್ ಷಾ ದೆಹಲಿಯಲ್ಲಿಂದು ಚರ್ಚಿಸಿದ್ದಾರೆ. ಕುಮಾರಸ್ವಾಮಿ, ಬಸವರಾಜ ಬೊಮ್ಮಾಯಿ ಹಾಗೂ ಇ.ತುಕಾರಾಂ ಲೋಕಸಭೆಗೆ ಆಯ್ಕೆಗೊಂಡಿರುವುದರಿಂದ ಅವರುಗಳು ಪ್ರತಿನಿಧಿಸುತ್ತಿದ್ದ ಚನ್ನಪಟ್ಟಣ, ಶಿಗ್ಗಾಂವ್ ಹಾಗೂ ಸಂಡೂರು ವಿಧಾನಸಭಾ ಕ್ಷೇತ್ರಗಳಿಗೆ ಉಪಚುನಾವಣೆ ನಡೆಯಲಿದೆ.

ಚನ್ನಪಟ್ಟಣವನ್ನು ಜೆಡಿಎಸ್‌ಗೆ ಬಿಟ್ಟುಕೊಟ್ಟು ಶಿಗ್ಗಾಂವ್ ಹಾಗೂ ಸಂಡೂರಿನಲ್ಲಿ ಬಿಜೆಪಿ ಅಭ್ಯರ್ಥಿಗಳನ್ನು ಕಣಕ್ಕಿಳಿಸಲು ಸಭೆಯಲ್ಲಿ ಸಮ್ಮತಿಸಲಾಗಿದೆ.

ಲೋಕಸಭಾ ಚುನಾವಣೆಯಲ್ಲಿ ಉಭಯ ಪಕ್ಷದ ನಾಯಕರು ಮತ್ತು ಕಾರ್ಯಕರ್ತರು ಒಗ್ಗಟ್ಟಿನಿಂದ ಹೋರಾಟ ನಡೆಸಿ ಮೂರೂ ಕ್ಷೇತ್ರಗಳನ್ನು ತೆಕ್ಕೆಗೆ ತೆಗೆದುಕೊಳ್ಳಬೇಕು. ಕಳೆದ ವಿಧಾನಸಭಾ ಚುನಾವಣೆಯಲ್ಲಿ ಈ ಕ್ಷೇತ್ರಗಳಲ್ಲಿ ಜೆಡಿಎಸ್, ಬಿಜೆಪಿ ಹಾಗೂ ಕಾಂಗ್ರೆಸ್ ಜಯ ಗಳಿಸಿತ್ತು. ಆದರೆ, ಮೈತ್ರಿ ನಂತರ ನಡೆಯುತ್ತಿರುವ ಉಪಚುನಾವಣೆಯನ್ನು ಪ್ರತಿಷ್ಠೆಯಾಗಿ ತೆಗೆದುಕೊಂಡು ಬಲ ಹೆಚ್ಚಿಸಿಕೊಳ್ಳಲು ಉಭಯ ನಾಯಕರು ನಿರ್ಧರಿಸಿದ್ದಾರೆ. ಉಪಚುನಾವಣೆ ನಡೆಯಲಿರುವ ● 2ನೇ ಪುಟಕ್ಕೆ

ಪಕ್ಷ ತೀರ್ಮಾನಿಸಿದರೆ ಚನ್ನಪಟ್ಟಣದಿಂದ ಸ್ಪರ್ಧೆ

ಕನಕಪುರ ಅಭಿವೃದ್ಧಿಪಡಿಸಿದಂತೆ ಇಲ್ಲಿಯೂ ಅಭಿವೃದ್ಧಿಗೆ ಅವಕಾಶವಿದೆ



ಬೆಂಗಳೂರು, ಜೂ.19 (ಕೆಎಂಶಿ)– ಉಪಚುನಾವಣೆಯಲ್ಲಿ ಚನ್ನಪಟ್ಟಣದ ಜನ ನನ್ನ ಮೇಲೆ ಒಲವು ತೋರಿದರೆ, ಪಕ್ಷ ತೀರ್ಮಾನಿಸಿದರೆ ನಾನು ಸ್ಪರ್ಧೆ ಮಾಡದೇ ಬೇರೆ ವಿಧಿ ಇಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಇಂದಿಲ್ಲಿ ತಿಳಿಸಿದ್ದಾರೆ.

ಚನ್ನಪಟ್ಟಣ ಪ್ರವಾಸಕ್ಕೂ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚನ್ನಪಟ್ಟಣ ನನ್ನ ಹೃದಯದಲ್ಲಿದೆ, ಹಿಂದೆ ಸಾತನೂರು ವಿಧಾನಸಭಾ ಕ್ಷೇತ್ರದ ಭಾಗವಾಗಿತ್ತು. ಈ ಭಾಗ ನನಗೆ ರಾಜಕೀಯವಾಗಿ ಜನ್ಮ ನೀಡಿದ ಸ್ಥಳ, ಜನ ಕಷ್ಟಕಾಲದಲ್ಲಿ ನಮಗೆ ಹೆಚ್ಚಿನ ಮತ ನೀಡಿ ಬೆಂಬಲ ನೀಡಿದ್ದಾರೆ. ನಾನು ಅವರ ಋಣ ತೀರಿಸಬೇಕು ಎಂದರು. ಕನಕಪುರ ಯಾವ ರೀತಿ ಅಭಿವೃದ್ಧಿ ಮಾಡಿದ್ದೇನೋ ಅದಕ್ಕಿಂತ ಹೆಚ್ಚಿನ ಅಭಿವೃದ್ಧಿಗೆ ಅವಕಾಶವಿದೆ, ಕ್ಷೇತ್ರದ ಮೇಲೆ ನನಗೆ ವಿಶೇಷವಾದ ಕಾಳಜಿ ಇದೆ. ಚನ್ನಪಟ್ಟಣ ಅಭಿವೃದ್ಧಿ ಹಾಗೂ ಬದಲಾವಣೆಗೆ ನಾನು ಬದ್ಧವಾಗಿದ್ದೇನೆ. ಜನ ಏನು ಹೇಳುತ್ತಾರೆ ಎಂದು ತಿಳಿದು ನಂತರ ತೀರ್ಮಾನ ಮಾಡುತ್ತೇನೆ. ಚನ್ನಪಟ್ಟಣದಲ್ಲಿ ಸಹೋದರ ಸುರೇಶ್ ಸ್ಪರ್ಧೆ ವಿಚಾರ ಇನ್ನೂ ತೀರ್ಮಾನವಾಗಿಲ್ಲ. ನನಗೆ ಮತ ನೀಡಿ ಎಂದು ಅಲ್ಲಿನ ಮತದಾರರಿಗೆ ಮನವಿ ಮಾಡುತ್ತೇನೆ.

ಬೆಂಗಳೂರಿನಲ್ಲಿ ಕಳೆದ ಹತ್ತು ವರ್ಷಗಳಿಂದ ನೀರಿನ ದರ ಪರಿಷ್ಕರಣೆ ಮಾಡಿಲ್ಲ, ಜಲ ಮಂಡಳಿ ದೊಡ್ಡ ನಷ್ಟಕ್ಕೆ ಸಿಲುಕಿದೆ, ಬಿಡಬ್ಲ್ಯೂಎಸ್‌ಎಸ್‌ಬಿಗೆ ಆರ್ಥಿಕ ನೆರವು ನೀಡಲು ಯಾವುದೇ ಬ್ಯಾಂಕ್ ಮುಂದೆ ಬರುತ್ತಿಲ್ಲ. ● 2ನೇ ಪುಟಕ್ಕೆ

ಹೆಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್ ಅಳವಡಿಕೆಗೆ ಸೆ.15ರವರೆಗೆ ಅವಕಾಶ

ಬೆಂಗಳೂರು, ಜೂ.19– ಕರ್ನಾಟಕದಲ್ಲಿ ವಾಹನಗಳಿಗೆ ಹೆಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್ ಅಳವಡಿಕೆ ಕಡ್ಡಾಯ ಮಾಡಲಾಗಿದೆ. ಹಲವು ಗಡುವುಗಳನ್ನು ನೀಡಿದರೂ ಬಹುತೇಕ ವಾಹನ ಮಾಲೀಕರು ಇನ್ನೂ ಅಳವಡಿಸಿಲ್ಲ. ಇದೀಗ ರಾಜ್ಯ ಸರ್ಕಾರ ಇನ್ನೂ ಹೆಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್ ಅಳವಡಿಸದವರಿಗೆ ಬಿಗ್ ರಿಲೀಫ್ ನೀಡಿದೆ. ಜೂನ್ 12ರ ಗಡುವು ಅಂತ್ಯಗೊಂಡ ಬೆನ್ನಲ್ಲೇ ಜುಲೈ 4ರವರೆಗೆ ವಿಸ್ತರಿಸಲಾಗಿತ್ತು. ಇದೀಗ ಮಹತ್ವದ ಸಭೆ ನಡೆಸಿ ಇದೀಗ ಅಂತಿಮ ಗಡುವನ್ನು ಸೆಪ್ಟೆಂಬರ್ 15ರ ವರೆಗೆ ವಿಸ್ತರಿಸಲಾಗಿದೆ.



ರಾಜ್ಯದ ಸರ್ಕಾರದ ನೂತನ ಆದೇಶದ ಪ್ರಕಾರ ಹೆಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್ ಅಳವಡಿಕೆಗೆ ಸೆಪ್ಟೆಂಬರ್ 15ರವರೆಗೆ ಅವಕಾಶವಿದೆ. ಸೆಪ್ಟೆಂಬರ್ 16ರಿಂದ ದುಬಾರಿ ದಂಡ ವಿಧಿಸಲಾಗುತ್ತಿದೆ ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಹೇಳಿದ್ದಾರೆ. ಈಗಾಗಲೇ ಹಲವು ಬಾರಿ ಗಡುವು ವಿಸ್ತರಣೆ ಮಾಡಿದ್ದೇವೆ. ಆದರೂ ಹಲವು ವಾಹನಗಳು ಇನ್ನೂ ನಂಬರ್ ● 2ನೇ ಪುಟಕ್ಕೆ

ಹಿರಿಯ ರಂಗಕರ್ಮಿ ಡಾ.ನ.ರತ್ನ ಇನ್ನಿಲ್ಲ

ಬೆಂಗಳೂರಲ್ಲಿ ನಿಧನರಾದ ಆಯಿಷ್ ಮಾಜಿ ನಿರ್ದೇಶಕರ ಪಾರ್ಥಿವ ಶರೀರ ಜೆಎಸ್‌ಎಸ್ ಮೆಡಿಕಲ್ ಕಾಲೇಜಿಗೆ ದಾನ



ಮೈಸೂರು, ಜೂ.19(ಆರ್‌ಕೆ)– ಡಾ.ನರತ್ನ ಎಂದೇ ಖ್ಯಾತರಾಗಿದ್ದ ರಂಗಕರ್ಮಿ ಹಾಗೂ ಅಖಿಲ ಭಾರತ ವಾಕ್ ಶ್ರವಣ ಸಂಸ್ಥೆ (ಎಐಐಎಸ್‌ಹೆಚ್) ಮಾಜಿ ನಿರ್ದೇಶಕ ಡಾ.ನಟೇಶ್ ರತ್ನ (89) ತೀವ್ರ ಹೃದಯಾಘಾತದಿಂದ ಬೆಂಗಳೂರಿನ ಇಂದಿರಾನಗರದಲ್ಲಿರುವ ಮಗನ ಮನೆಯಲ್ಲಿ ಇಂದು ಬೆಳಿಗ್ಗೆ 6.30 ಗಂಟೆಯಲ್ಲಿ ನಿಧನರಾದರು.

ಅವರು ಪತ್ನಿ ಪ್ರೇಮಲತಾ ರತ್ನ, ಪುತ್ರ ಅಜಿತ್ ರತ್ನ, ಪುತ್ರಿ ಕವಿತಾ ರತ್ನ, ಅಪಾರ ಬಂಧು–ಬಳಗ, ಸ್ನೇಹಿತರು ಹಾಗೂ ಶಿಷ್ಯಂದಿರನ್ನು ಅಗಲಿದ್ದಾರೆ. ಇಂದು ಮಧ್ಯಾಹ್ನ ಪಾರ್ಥಿವ ಶರೀರವನ್ನು ಮೈಸೂರಿಗೆ ತಂದು ಸರಸ್ವತಿಪುರಂನ ವಿಶ್ವಮಾನವ ಜೋಡಿ ರಸ್ತೆಯ ನಿವಾಸದಲ್ಲಿ ಸಾರ್ವಜನಿಕರ ದರ್ಶನಕ್ಕೆ ಇರಿಸಲಾಗಿತ್ತು. ಮಧ್ಯಾಹ್ನ 3.30 ಗಂಟೆ ನಂತರ ರಂಗಾಯಣದಲ್ಲಿರಿಸಿ ಕಲಾವಿದರು, ರಂಗಾಸಕ್ತರು, ಸಾಹಿತಿಗಳು, ಶಿಷ್ಯರು ಅಂತಿಮ ದರ್ಶನ ಪಡೆದ ಬಳಿಕ ಡಾ.ನ.ರತ್ನ ಅವರು ಬಯಸಿದ್ದಂತೆ, ಅವರ ಪಾರ್ಥಿವ ಶರೀರವನ್ನು ಸಂಜೆ 6.30ರ ವೇಳೆ ಮೈಸೂರಿನ ಜೆಎಸ್‌ಎಸ್ ಮೆಡಿಕಲ್ ಕಾಲೇಜಿಗೆ ಹಸ್ತಾಂತರಿಸಲಾಯಿತು ಎಂದು ಕುಟುಂಬದ ಸದಸ್ಯರು ತಿಳಿಸಿದ್ದಾರೆ.

ರೇಣುಕಾಸ್ವಾಮಿ ಹತ್ಯೆ ಪ್ರಕರಣ: ಮುಲಾಜಿಲ್ಲದೆ ದರ್ಶನ್ ವಿಚಾರಣೆ

● ಗೃಹ ಸಚಿವ ಪರಮೇಶ್ವರ್ ಸ್ಪಷ್ಟನೆ ● ಪಬ್ಲಿಕ್ ಪ್ರಾಸಿಕ್ಯೂಟರ್ ಕಾರಣಗಳೇನಾದರೂ ಇದ್ದರಷ್ಟೇ ಬದಲಾವಣೆ

ಬೆಂಗಳೂರು, ಜೂ.19 (ಕೆಎಂಶಿ)–



ಚಿತ್ರನಟ ದರ್ಶನ್ ವಿರುದ್ಧದ ರೇಣುಕಾಸ್ವಾಮಿ ಕೊಲೆ ಪ್ರಕರಣದ ತನಿಖೆ ಮುಲಾಜಿಲ್ಲದೇ, ಯಾವುದೇ ಒತ್ತಡಕ್ಕೆ ಒಳಗಾಗದೇ ನಡೆಯುತ್ತಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಇಂದಿಲ್ಲಿ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೊಲೆ ಪ್ರಕರಣದ ತನಿಖೆ ಸಡಿಲಗೊಳಿಸುವ ಉದ್ದೇಶ ಸರ್ಕಾರಕ್ಕಿಲ್ಲ ಎಂದು ಸ್ಪಷ್ಟಪಡಿಸಿದರು. ರೇಣುಕಾಸ್ವಾಮಿ ಕೊಲೆ ಪ್ರಕರಣದ ಸರ್ಕಾರಿ ಅಭಿಯೋಜಕರ ಬದಲಾವಣೆ ಪ್ರಸ್ತಾವನೆ ಸರ್ಕಾರದ ಮುಂದಿಲ್ಲ. ಎಸ್‌ಪಿಪಿ ಬದಲಾವಣೆ ಮಾಡಿದರೂ ಅದರಲ್ಲೇನು ತಪ್ಪಿಲ್ಲ. ಕಾರಣ ಇಟ್ಟುಕೊಂಡೇ ತೀರ್ಮಾನ ತೆಗೆದುಕೊಳ್ಳಲಾಗಿರುತ್ತದೆ.

ಎಸ್‌ಪಿಪಿ ಬದಲಾವಣೆಗೆ ಪ್ರಸ್ತಾವನೆ ನನ್ನ ಮುಂದಿಲ್ಲ: ಸಿಎಂ

ಬೆಂಗಳೂರು, ಜೂ.19 (ಕೆಎಂಶಿ)– ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದ ಮೊಕದ್ದಮೆಯ ವಿಶೇಷ ಸರ್ಕಾರಿ ಅಭಿಯೋಜಕರ (ಎಸ್‌ಪಿಪಿ) ಬದಲಾವಣೆಗೆ ನನ್ನ ಮೇಲೆ ಯಾವ ಸಚಿವರ ಅಥವಾ ಶಾಸಕರ ಒತ್ತಡವಿಲ್ಲ, ಒತ್ತಡ ಹಾಕಿದರೆ ಕೇಳುವುದೂ ಇಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದಿಲ್ಲಿ ಸ್ಪಷ್ಟಪಡಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸುದ್ದಿ ಮಾಧ್ಯಮಗಳಲ್ಲಿ ಬಿತ್ತರವಾಗುತ್ತಿರುವುದು ಸುಳ್ಳು ಹಾಗೂ ಸತ್ಯಕ್ಕೆ ದೂರವಾದುದು, ಕಾನೂನು ಏನು ಹೇಳುತ್ತದೆಯೋ ಅದನ್ನೇ ಮಾಡುತ್ತೇವೆ ಎಂದರು. ಪೊಲೀಸರಿಗೆ ಪ್ರಕರಣದಲ್ಲಿ ಎಲ್ಲಾ ಸ್ವಾತಂತ್ರ್ಯ ನೀಡಿದ್ದು, ಕಾನೂನಿನ ಪ್ರಕಾರ ತನಿಖೆ ಮಾಡಲು ಸೂಚಿಸಲಾಗಿದೆ, ಎಸ್‌ಪಿಪಿ ಬದಲಾವಣೆ ಪ್ರಸ್ತಾವನೆ ನನ್ನ ಮುಂದಿಲ್ಲ ಎಂದು ಅವರು ಮತ್ತೊಮ್ಮೆ ಸ್ಪಷ್ಟಪಡಿಸಿದರು.



ದರ್ಶನ್ ಪತ್ನಿ ವಿಜಯಲಕ್ಷ್ಮಿ ವಿಚಾರಣೆ; ಹೇಳಿಕೆ ದಾಖಲು

ಬೆಂಗಳೂರು, ಜೂ.19– ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಆರೋಪಿಯಾಗಿರುವ ನಟ ದರ್ಶನ್ ಅವರ ಪತ್ನಿ ವಿಜಯಲಕ್ಷ್ಮಿ ಇಂದು ಅನ್ನಪೂರ್ಣೇಶ್ವರಿ ನಗರ ಪೊಲೀಸ್ ಠಾಣೆಗೆ ಹಾಜರಾಗಿ, ವಿಚಾರಣೆ ಎದುರಿಸಿದ್ದಾರೆ.

ಪ್ರಕರಣದ ಬಗ್ಗೆ ತನಿಖೆ ಹಾಗೂ ಮನೆಯಲ್ಲಿ ಸಿಕ್ಕ ಶೂ ಬಗ್ಗೆ ಮಾಹಿತಿ ಕೊಡಲು ಕಾಮಾಕ್ಷಿಪಾಳ್ಯ ಪೊಲೀಸರು ವಿಜಯಲಕ್ಷ್ಮಿ ಅವರಿಗೆ ● 2ನೇ ಪುಟಕ್ಕೆ

ಪಬ್ಲಿಕ್ ಪ್ರಾಸಿಕ್ಯೂಟರ್ ಬದಲಾಯಿಸುವ ಸಂದರ್ಭ ಬಂದರೆ ಕಾರಣ ಇರುತ್ತದೆ.



ಏನೂ ಇಲ್ಲದೇ ಮಾಡುವುದಿಲ್ಲ. ಕಾನೂನು ಸಲಹೆಗಾರರು ನೀಡುವ ಸಲಹೆಗಳ ಆಧಾರದ ಮೇಲೆ ಮುಂದಿನ ನಿರ್ಧಾರ ಕೈಗೊಳ್ಳಬೇಕಾಗುತ್ತದೆ. ಎಲ್ಲರೂ ಕಾನೂನಿಗೆ ಬದ್ಧವಾಗಿಯೇ ಕೆಲಸ ಮಾಡಬೇಕಾಗುತ್ತದೆ, ಕಾನೂನು ಬಿಟ್ಟು ಹೋಗಲಾಗದು, ಕಾನೂನು ಪ್ರಕಾರವೇ ಪಬ್ಲಿಕ್ ಪ್ರಾಸಿಕ್ಯೂಟರ್‌ಗಳು ಸಹ ಕೆಲಸ ಮಾಡಬೇಕು. ಯಾರನ್ನೇ ನೇಮಿಸಿದರೂ ಕಾನೂನು ಪುಸ್ತಕ ಒಂದೇ ಅಲ್ಲವೇ, ಅದರ ಪ್ರಕಾರವೇ ಕೆಲಸ ಮಾಡಬೇಕಾಗುತ್ತದೆ ಎಂದರು.

ನಟ ದರ್ಶನ್ ಅವರ ಮಾಜಿ ಮ್ಯಾನೇಜರ್ ಮಲ್ಲಿಕಾರ್ಜುನ್ ನಾಪತ್ತೆ ಪ್ರಕರಣವನ್ನು ಪೊಲೀಸರು ● 2ನೇ ಪುಟಕ್ಕೆ

ಕೇಂದ್ರದಿಂದ 14 ಬೆಳೆಗಳ ಕನಿಷ್ಠ ಬೆಂಬಲ ಬೆಲೆ ಹೆಚ್ಚಳ

ನವದೆಹಲಿ: ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ನಡೆದ ಕೇಂದ್ರ ಸಚಿವ ಸಂಪುಟ ಸಭೆಯಲ್ಲಿ 14 ಬೆಳೆಗಳಿಗೆ ಕನಿಷ್ಠ ಬೆಂಬಲ ಬೆಲೆ (ಎಂಎಸ್‌ಪಿ) ಹೆಚ್ಚಿಸಲು ನಿರ್ಧರಿಸಿದೆ.

ಈ ಬಗ್ಗೆ ಕೃಷಿ ಸಚಿವಾಲಯ ಪ್ರಕಟಣೆ ಬಿಡುಗಡೆ ಮಾಡಿದ್ದು, ರೈತರ ಉತ್ಪನ್ನಗಳಿಗೆ ಲಾಭದಾಯಕ ಬೆಲೆಗಳನ್ನು ನೀಡಲು ಕೇಂದ್ರ ಸರ್ಕಾರ 2024–25ರ ಮಾರ್ಕೆಟಿಂಗ್ ಸೀಸನ್‌ನಲ್ಲಿ ಖಾರಿಫ್ ಬೆಳೆಗಳ ಎಂಎಸ್‌ಪಿ ಅನ್ನು ಹೆಚ್ಚಿಸಿದೆ ಎಂದು ಹೇಳಿದೆ. ಎಣ್ಣೆ ಕಾಳುಗಳು ಮತ್ತು ಬೇಳೆ ಕಾಳುಗಳಿಗೆ ಅತ್ಯಧಿಕ ಎಂಎಸ್‌ಪಿ ಹೆಚ್ಚಳವನ್ನು ಶಿಫಾರಸು ಮಾಡಲಾಗಿದೆ. ಎಳ್ಳು (ಕ್ವಿಂಟಾಲ್‌ಗೆ 632 ರೂಪಾಯಿ ಹೆಚ್ಚಳ), ನೈಜರ್‌ಬೀಡ್ (ಕ್ವಿಂಟಲ್‌ಗೆ 983 ರೂ. ಹೆಚ್ಚಳ), ಅರ್ಹರ್ ದಾಲ್ (ಕ್ವಿಂಟಲ್‌ಗೆ 550 ರೂ) ಹೆಚ್ಚಳ ಮಾಡಲಾಗಿದೆ.

ಭತ್ತದ ಮೇಲಿನ ಎಂಎಸ್‌ಪಿಯನ್ನು 1,533 ರೂ.ನಿಂದ 2,300 ರೂ.ಗೆ ಹೆಚ್ಚಿಸಲಾಗಿದ್ದು, ಜೋಳದ ಎಂಎಸ್‌ಪಿ 2,247 ರೂ.ನಿಂದ 3,371 ರೂ.ಗೆ ಏರಿಕೆಯಾಗಿದೆ ಎಂದು ಸಚಿವ ಸಂಪುಟದ ನಿರ್ಧಾರವನ್ನು ಕೇಂದ್ರ ಮಾಹಿತಿ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್ ಪ್ರಕಟಿಸಿದ್ದಾರೆ.

ಎಂಜಿ ರಸ್ತೆ ತರಕಾರಿ ಮಾರುಕಟ್ಟೆ ಬಳಿ ಸಂಚಾರಕ್ಕೆ ಸಂಚಕಾರ...! ಸ್ಥಳಕ್ಕೆ ಜಿಲ್ಲಾಧಿಕಾರಿಗಳ ತಂಡ ಭೇಟಿ; ಪರಿಶೀಲನೆ

ರಸ್ತೆ ಬದಿ ರೈತರು, ವ್ಯಾಪಾರಿಗಳು, ಗ್ರಾಹಕರ ವಾಹನ ನಿಲುಗಡೆ ನಿರ್ಬಂಧಿಸಿ: ಡಿಸಿ ಸೂಚನೆ

ಬ್ಯಾರಿಕೇಡ್, ರಸ್ತೆ ವಿಭಜಕ, ಸಿಸಿ ಕ್ಯಾಮರಾ ಅಳವಡಿಸಿ ನಿಯಮ ಉಲ್ಲಂಘಿಸಿದವರ ವಿರುದ್ಧ ಪ್ರಕರಣ ದಾಖಲಿಸಿ; ದಂಡ ವಿಧಿಸಿ

ಮೈಸೂರು, ಜೂ. 19 (ಆರ್‌ಕೆ)– ಮೈಸೂರಿನ ಎಂಜಿ ರಸ್ತೆಯ ತರಕಾರಿ ಮಾರುಕಟ್ಟೆ ಬಳಿ ರೈತರು, ವ್ಯಾಪಾರಿಗಳು ಹಾಗೂ ಗ್ರಾಹಕರ ವಾಹನಗಳ ರಸ್ತೆಬದಿ ನಿಲುಗಡೆ ಮಾಡುವುದನ್ನು ನಿರ್ಬಂಧಿಸಿ ಎಂದು ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ, ಸಂಚಾರ ಪೊಲೀಸರಿಗೆ ಸೂಚನೆ ನೀಡಿದ್ದಾರೆ.

ಇಲ್ಲಿ ಹಾದು ಹೋಗುವ ಎಂ.ಜಿ. ರಸ್ತೆಯಲ್ಲಿ ವಾಹನ ಸಂಚಾರಕ್ಕೆ ಅಡಿಗಡಿಗೂ ಅಡ್ಡಿಯಾಗುತ್ತಿದೆ ಎಂಬ ಸಾರ್ವಜನಿಕ ದೂರಿನ ಮೇರೆಗೆ ಮಂಗಳವಾರ ಸಂಜೆ ನಗರ ಪೊಲೀಸ್ ಆಯುಕ್ತ ಬಿ.ರಮೇಶ್, ಮೈಸೂರು ಮಹಾನಗರ ಪಾಲಿಕೆ ಆಯುಕ್ತ ಅಶಾದ್ ಉರ್ ರೆಹಮಾನ್ ಷರೀಫ್, ಸೂಪರಿಂಟೆಂಡಿಂಗ್ ಇಂಜಿನಿಯರ್ ಸಿಂಧೂ, ಸಂಚಾರ ವಿಭಾಗದ ಎಸಿಪಿ ಪರಶುರಾಮಪ್ಪ, ದೇವರಾಜ ಉಪವಿಭಾಗದ ಎಸಿಪಿ ಶಾಂತಮಲ್ಲಪ್ಪ, ಎಪಿಎಂಸಿ ಅಧಿಕಾರಿಗಳೊಂದಿಗೆ ಎಂಜಿ ರಸ್ತೆಯ ತರಕಾರಿ ಮಾರುಕಟ್ಟೆಗೆ ಭೇಟಿ ನೀಡಿ, ಪರಿಶೀಲಿಸಿದ ಜಿಲ್ಲಾಧಿಕಾರಿಗಳು ರಸ್ತೆ ಬದಿ ವ್ಯಾಪಾರ ಮಾಡುವುದು, ತರಕಾರಿಗಳನ್ನು ವಾಹನದಿಂದ ಇಳಿಸುವುದು ಹಾಗೂ ಸಾರ್ವಜನಿಕರು ವಾಹನ ನಿಲುಗಡೆ ಮಾಡುತ್ತಿರುವುದರಿಂದ ಎಂ.ಜಿ.ರಸ್ತೆಯಲ್ಲಿ ವಾಹನ ಸಂಚಾರಕ್ಕೆ ತೀವ್ರ ಅಡಚಣೆ ಆಗುತ್ತಿದೆ.



ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಅವರು ಪೊಲೀಸ್ ಆಯುಕ್ತ ಬಿ.ರಮೇಶ್, ಪಾಲಿಕೆ ಆಯುಕ್ತ ಆಶಾದ ಉರ್‌ರೆಹಮಾನ್ ಷರೀಫ್, ಸಂಚಾರ ಎಸಿಪಿ ಪರಶುರಾಮಪ್ಪ ಹಾಗೂ ಇತರ ಅಧಿಕಾರಿಗಳೊಂದಿಗೆ ಮಂಗಳವಾರ ಸಂಜೆ ಮೈಸೂರಿನ ಎಂಜಿ ರಸ್ತೆಯ ತರಕಾರಿ ಮಾರುಕಟ್ಟೆ ಬಳಿ ಸಂಚಾರ ಸಮಸ್ಯೆ ಪರಿಶೀಲಿಸಿದರು.

ರಸ್ತೆಯಲ್ಲೇ ವಾಹನ ನಿಲ್ಲಿಸಿಕೊಂಡು ತರಕಾರಿ ಹಣ್ಣು ಅನ್‌ಲೋಡ್, ಲೋಡ್ ಮಾಡುವುದು ಸರಿಯಲ್ಲ. ನೀವೇನಿದ್ದರೂ ಮಾರುಕಟ್ಟೆ ಒಳಗೆ ಇರುವ ವಿಶಾಲ ಜಾಗದಲ್ಲಿ ಲೋಡ್, ಅನ್‌ಲೋಡ್ ಮಾಡಿಕೊಳ್ಳಿ, ನಂತರ ದೂರದ ಖಾಲಿ ಜಾಗದಲ್ಲಿ ಸರಕು ಸಾಗಣೆ ವಾಹನ ನಿಲ್ಲಿಸಬೇಕು ಎಂದು ವ್ಯಾಪಾರಿಗಳಿಗೆ ತಿಳಿಹೇಳಿದರು. ಇದೇ ವೇಳೆ ಯಾರೂ ಫುಟ್‌ಪಾತ್‌ನಲ್ಲಿ ತರಕಾರಿ ಮಾರುವಂತಿಲ್ಲ ಎಂದು ತಾಕೀತು ಮಾಡಿದರು. ಪಾಲಿಕೆಯಿಂದ ನಿರ್ಮಿಸಿರುವ ಶೆಡ್‌ಗಳಲ್ಲೇ ವ್ಯಾಪಾರ ಮಾಡಬೇಕು. ಗ್ರಾಹಕರು ವಾಹನಗಳನ್ನು ಮಾರುಕಟ್ಟೆಯ ಖಾಲಿ ಜಾಗದಲ್ಲೇ ನಿಲ್ಲಿಸಬೇಕು. ರಸ್ತೆ ಬದಿ ವ್ಯಾಪಾರ ಮಾಡಿದರೆ ಕ್ರಮ ಕೈಗೊಳ್ಳಬೇಕಾ ಗುತ್ತದೆ ಎಂದು ಎಚ್ಚರಿಕೆ ನೀಡಿದರು.

ನಿತ್ಯ ಪೆಟ್ರೋಲಿಂಗ್ ಮಾಡಿ ರಸ್ತೆ ಬದಿ ಯಾವುದೇ ವಾಹನ ನಿಲ್ಲಿಸುವುದು, ವ್ಯಾಪಾರ ಮಾಡುವುದು ನಿರ್ಬಂಧಿಸಿ, ಸ್ಥಳದಲ್ಲಿ ಸಿಸಿ ಟಿವಿ ಕ್ಯಾಮರಾಗಳನ್ನು ಅಳವಡಿಸಿ ನಿಗಾ ವಹಿಸಿ, ರಸ್ತೆ ಬದಿ ಬ್ಯಾರಿಕೇಡ್ ಅಳವಡಿಸಿ ಜನರು ರಸ್ತೆಗಿಳಿಯದಂತೆ ಎಚ್ಚರ ವಹಿಸಿ ಎಂದೂ ಸಂಚಾರ ಠಾಣೆ ಇನ್ಸ್‌ಪೆಕ್ಟರ್‌ಗೆ ಡಾ.ರಾಜೇಂದ್ರ ಸೂಚನೆ ನೀಡಿದರು.

ಮಾರುಕಟ್ಟೆ ಬಳಿ ಎತ್ತರದ ರಸ್ತೆ ವಿಭಜಕವನ್ನು ಅಳವಡಿಸಿ ವಾಹನ ಸವಾರರು, ಪಾದಚಾರಿಗಳು ಕಂಡಕಂಡಲ್ಲಿ ರಸ್ತೆದಾಟದಂತೆ ಕ್ರಮವಹಿಸಿ, ನಿಯಮ ಉಲ್ಲಂಘಿಸಿದವರ ವಿರುದ್ಧ ಪ್ರಕರಣ ದಾಖಲಿಸಿ ದಂಡ ವಿಧಿಸುವ ಮೂಲಕ ಅಲ್ಲಿನ ಸಂಚಾರ ಸಮಸ್ಯೆ ಬಗೆಹರಿಸಿ ಎಂದು ಅವರು ಪೊಲೀಸ್ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಇಲ್ಲಿ ವಾಹನ ದಟ್ಟಣೆ ಕಡಿಮೆ ಮಾಡಲು ಮಾರುಕಟ್ಟೆ ಹಿಂಬಾಗ ಕಾಮತ್ ಹೋಟೆಲ್ ಮತ್ತು ಎಂಆರ್‌ಸಿ ಕಡೆಯಿಂದ ಪ್ರವೇಶಾವಕಾಶ ಕಲ್ಪಿಸಿಕೊಂಡು ನಂಜನಗೂಡು, ತಿ.ನರಸೀಪುರ, ಹೆಚ್.ಡಿ.ಕೋಟೆಗಳಿಂದ ತರಕಾರಿ ತುಂಬಿಕೊಂಡು ಬರುವ ವಾಹನಗಳು ಅತ್ತ ಕಡೆಯಿಂದ ಪ್ರವೇಶಿಸುವಂತೆ ಮಾಡಿದ್ದಲ್ಲಿ ಎಂಜಿ ರಸ್ತೆಯಲ್ಲಿ ವಾಹನ ದಟ್ಟಣೆ, ಒತ್ತಡ ಕಡಿಮೆ ಯಾಗಿ ಸಂಚಾರ ಸುಗಮವಾಗುತ್ತದೆ ಎಂದು ಜಿಲ್ಲಾಧಿಕಾರಿಗಳು ಅಭಿಪ್ರಾಯಪಟ್ಟರು.

ಎಂಜಿ ರಸ್ತೆಯಲ್ಲಿ ಮಾರುಕಟ್ಟೆಯಿಂದ ಸಂಚಾರ ಸೇರಿದಂತೆ ಹಲವು ಸಮಸ್ಯೆ ಉಂಟಾಗುತ್ತಿರುವುದರಿಂದ ನೀವು ಬಂಡಿಪಾಳ್ಯ ಎಪಿಎಂಸಿ ಆವರಣದ ವಿಶಾಲ ಸ್ಥಳಕ್ಕೆ ಸ್ಥಳಾಂತರವಾಗುವುದು ಸೂಕ್ತ ಎಂದು ಡಾ.ಕೆ.ವಿ.ರಾಜೇಂದ್ರ ಹೇಳಿದರಾದರೂ, ವ್ಯಾಪಾರಸ್ಥರು ಇದಕ್ಕೆ ● 2ನೇ ಪುಟಕ್ಕೆ

ಮೈಸೂರು ಮಿತ್ರ



ಜಿ. ಪ್ರೇಮ್‌ಕುಮಾರ್‌ಗೆ ಪಿಹೆಚ್.ಡಿ.

ಮೈಸೂರು: ಡಾ. ಎಂ. ದತ್ತಾತ್ರೇಯ ಅವರ ಮಾರ್ಗದರ್ಶನದಲ್ಲಿ ಜಿ. ಪ್ರೇಮ್‌ಕುಮಾರ್ ಅವರು ರಸಾಯನಶಾಸ್ತ್ರ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ 'ಮೈಗ್ರೇಷನ್ ಅಂಡ್ ಐಡೆಂಟಿಟಿ : ಒಂದು ಅಧ್ಯಯನ ಮಹಾಪ್ರಬಂಧವನ್ನು ಕುವೆಂಪು ವಿಶ್ವವಿದ್ಯಾನಿಲಯ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.

ಒಂದನೇ ಪುಟದಿಂದ

ಯೋಜನೆ ಕಾಲಮಿತಿಯಲ್ಲಿ ಪೂರ್ಣ

ವರ್ಷಕ್ಕೆ ಯೋಜನಾ ವೆಚ್ಚ ಹೆಚ್ಚುತ್ತಿದೆ. ಅಲ್ಲದೆ, ಕರ್ನಾಟಕ ಸರ್ಕಾರದ ಜೊತೆಗಿನ ತಲಾ ಶೇಕಡ 50 ಪಾಲುದಾರಿಕೆ ಯೋಜನೆಗಳಿಗೂ ಚಾಲನೆ ದೊರಕಿಸುವಂತೆ ಕುಮಾರಸ್ವಾಮಿ ಮನವಿ ಮಾಡಿದ್ದಾರೆ. ಬುಲೆಟ್ ಟ್ರೈನ್ ವಿಚಾರದಲ್ಲಿ ಈಗಾಗಲೇ ತಮಿಳುನಾಡು, ಆಂಧ್ರ ಪ್ರದೇಶ ಭಾಗದಲ್ಲಿ ಪ್ರತ್ಯೇಕ ಮಾರ್ಗಕ್ಕಾಗಿ ಸಮೀಕ್ಷೆ ಮತ್ತು ಭೂಸ್ವಾಧೀನ ಕಾರ್ಯ ನಡೆದಿದೆ. ರಾಷ್ಟ್ರದಲ್ಲಿ ಬುಲೆಟ್ ಟ್ರೈನ್‌ಗಳನ್ನು ಕೆಲವು ಮಾರ್ಗಗಳಲ್ಲಿ ಅಳವಡಿಸುವ ಪ್ರಧಾನಿ ಅವರ ಆಲೋಚನೆ ಈಗಾಗಲೇ ಕಾರ್ಯರೂಪಕ್ಕೆ ತರಲಾಗುತ್ತಿದೆ ಎಂದಿದ್ದಾರೆ. ಉನ್ನತ ಮೂಲಗಳ ಪ್ರಕಾರ ಚೆನ್ನೈ–ಮೈಸೂರು ನಡುವಿನ ಬುಲೆಟ್ ಟ್ರೈನ್ ಯೋಜನೆಗಾಗಿಯೇ ಪ್ರತ್ಯೇಕ ರೈಲು ಮಾರ್ಗ ನಿರ್ಮಾಣವಾಗಲಿದೆ, ಕೆಲವೆಡೆ ರೈಲ್ವೆ ಎಲಿವೇಟೆಡ್ ಮಾರ್ಗ ಅಳವಡಿಸಲಾಗುವುದು ಎಂಬ ಮಾಹಿತಿಯೂ ಇದೆ.

ಬಿಜೆಪಿ–ಜೆಡಿಎಸ್ ಮೈತ್ರಿ ಮುಂದುವರಿಕೆ

ಮೂರೂ ಕ್ಷೇತ್ರಗಳಿಗೆ ಅಭ್ಯರ್ಥಿಗಳನ್ನು ಈಗಲೇ ಹೆಸರಿಸುವುದು ಬೇಡ. ಪಕ್ಷ ಕ್ಷೇತ್ರ ಸಮೀಕ್ಷೆ ನಡೆಸಿದ ನಂತರ ಅದರ ವರದಿ ಆಧಾರದ ಮೇಲೆ ಸಮರ್ಥ ಅಭ್ಯರ್ಥಿಯನ್ನು ಕಣಕ್ಕಿಳಿಸೋಣ ಎಂದು ಷಾ ಅವರು ಕುಮಾರಸ್ವಾಮಿ ಅವರಿಗೆ ತಿಳಿಸಿದ್ದಾರೆ ಎನ್ನಲಾಗಿದೆ.

ಚನ್ನಪಟ್ಟಣ ಕ್ಷೇತ್ರದ ಉಪಚುನಾವಣೆಯಲ್ಲಿ ಡಿ.ಕೆ.ಶಿವಕುಮಾರ್ ಕುಟುಂಬ ಸ್ಪರ್ಧಿಸುವ ಮಾತುಗಳು ಕೇಳಿಬರುತ್ತಿರುವ ಜೊತೆಗೆ ಅವರು ಇಂದಿನಿಂದಲೇ ಕ್ಷೇತ್ರದಲ್ಲಿ ಪ್ರವಾಸ ಕೈಗೊಂಡಿರುವುದೂ ಈ ತುರ್ತು ಚರ್ಚೆಗೆ ಕಾರಣ ಎನ್ನಲಾಗಿದೆ. ಬೆಂಗಳೂರು ಗ್ರಾಮಾಂತರದಲ್ಲಿ ಡಿ.ಕೆ. ಕುಟುಂಬವನ್ನು ಮಣಿಸಿದಂತೆ ಇಲ್ಲಿಯೂ ಅವರು ಕಣಕ್ಕಿಳಿದರೆ ಅದೇ ಫಲಿತಾಂಶ ಮರುಕಳಿಸುವಂತಾಗಬೇಕು ಎಂದು ಷಾ ತಿಳಿಸಿದ್ದಾರೆ. ಇದಲ್ಲದೆ, ಪಕ್ಷ ಸಂಘಟನೆ ಸೇರಿದಂತೆ ಕೆಲವು ರಾಜಕೀಯ ವಿಚಾರಗಳ ಬಗ್ಗೆಯೂ ಉಭಯ ನಾಯಕರು ಚರ್ಚಿಸಿದ್ದಾರೆ ಎನ್ನಲಾಗಿದೆ.

ಚನ್ನಪಟ್ಟಣದಿಂದ ಸ್ಪರ್ಧೆ

ಸದ್ಯದಲ್ಲೇ ಕಾವೇರಿ ಐದನೇ ಹಂತದ ಯೋಜನೆ ಪೂರ್ಣಗೊಳ್ಳುತ್ತಿದೆ. ಪ್ರತಿ ವರ್ಷ ನಷ್ಟ ಎದುರಿಸುತ್ತಿರುವುದರಿಂದ ಪರಿಹಾರ ಸಾಧ್ಯತೆಗಳನ್ನು ಪರಿಶೀಲಿಸಲಾಗುತ್ತಿದೆ, ವಿಶ್ವ ಬ್ಯಾಂಕ್ ಸೇರಿದಂತೆ ಎಲ್ಲಾ ಸಂಸ್ಥೆಗಳು ಮಂಡಳಿ ನಷ್ಟದಿಂದ ಮೇಲೆ ಬರುವ ಪರ್ಯಾಯ ವಿಧಾನದ ಬಗ್ಗೆ ಪ್ರಶ್ನಿಸುತ್ತಿವೆ. ಕಾವೇರಿಯ 6 ಟಿಎಂಸಿ ನೀರನ್ನು ಬೆಂಗಳೂರಿಗೆ ಬಳಸಲು ನಾನು ಆದೇಶ ಹೊರಡಿಸಿದ್ದು, ಮತ್ತೊಂದು ಹಂತದ ಯೋಜನೆ ಅಗತ್ಯವಿದೆ, ನೀರಿನ ದರ ಪರಿಷ್ಕರಣೆ ವಿಚಾರ ಪರಿಶೀಲಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ, ನಂತರ ದರ ಏರಿಕೆ ಬಗ್ಗೆ ಅಧಿಕೃತ ತೀರ್ಮಾನ ಕೈಗೊಳ್ಳಲಾಗುವುದು ಎಂದರು.

ಕೆಂಪೇಗೌಡ ಜಯಂತಿ ಆಚರಣೆಗೆ ಹೆಚ್ಚಿನ ಅನುದಾನ ನೀಡಲಾಗುತ್ತಿದೆ ಎಂಬ ಬಿಜೆಪಿ ಆರೋಪಕ್ಕೆ ಪ್ರತಿಕ್ರಿಯಿಸಿದ ಅವರು, ವಿಮಾನ ನಿಲ್ದಾಣದ ಬಳಿ ಕೆಂಪೇಗೌಡ ಪ್ರತಿಮೆ ಅನಾವರಣಕ್ಕೆ ಪ್ರಧಾನಿ ನರೇಂದ್ರ ಮೋದಿ ಅವರನ್ನು ಕರೆಸಿದ್ದು ಯಾಕೆ, ಆ ಕಾರ್ಯಕ್ರಮಕ್ಕೆ ಜನ ಸೇರಿಸಲಾಗದೆ, ಬಲವಂತವಾಗಿ ಶಾಲಾ–ಕಾಲೇಜು ಮಕ್ಕಳನ್ನು ಕರೆಸಿದ್ದು ಯಾಕೆ, ಪ್ರತಿಮೆಗೆ ತಗುಲಿದ ವೆಚ್ಚಕ್ಕಿಂತ ಉದ್ಘಾಟನಾ ಕಾರ್ಯಕ್ರಮದ ವೆಚ್ಚವೇ ಹೆಚ್ಚಾಗಿತ್ತು, ಈ ಕುರಿತು ಕೃಷ್ಣಬೈರೇಗೌಡ ಅವರನ್ನು ಕೇಳಿ ಸಂಪೂರ್ಣ ದಾಖಲೆ ನೀಡುತ್ತಾರೆ ಎಂದರು.

ಸೆ.15ರವರೆಗೆ ಅವಕಾಶ

ಪ್ಲೇಟ್ ಅಳವಡಿಸಿಲ್ಲ. ಹೆಚ್ಚಿನ ಸಂಖ್ಯೆಯ ವಾಹನಗಳಿಗೆ ನಂಬರ್ ಪ್ಲೇಟ್ ಅಳವಡಿಕೆ ಬಾಕಿ ಇರುವ ಕಾರಣ ಇದೀಗ ಕೊನೆಯದಾಗಿ ಗಡುವು ವಿಸ್ತರಿಸಲಾಗುತ್ತಿದೆ ಎಂದು ರಾಮಲಿಂಗಾ ರೆಡ್ಡಿ ಹೇಳಿದ್ದಾರೆ. ಜೂನ್ 12ಕ್ಕೆ ಗಡುವು ಅಂತ್ಯಗೊಂಡಿದ್ದ ಕಾರಣ ಜುಲೈ 4ರ ವರೆಗೆ ಗಡುವು ವಿಸ್ತರಿಸಲಾಗಿತ್ತು. ಇದಕ್ಕೂ ಮುನ್ನ ಬಿಎನ್‌ಡಿ ಎನರ್ಜಿ ಲಿಮಿಟೆಡ್ ಸೇರಿದಂತೆ ಕೆಲ ಸಂಸ್ಥೆಗಳು, ಸಾರ್ವಜನಿಕರು ಹೈಕೋರ್ಟ್ ಮೊರೆ ಹೋಗಿ, ಗಡುವು ವಿಸ್ತರಿಸಲು ಸರ್ಕಾರಕ್ಕೆ ಹೈಕೋರ್ಟ್ ಸೂಚನೆ ನೀಡಬೇಕು ಎಂದು ಮನವಿ ಮಾಡಿದ್ದವು. ಈ ಕುರಿತು ವಿಚಾರಣೆ ನಡೆಸಿದ್ದ ಕರ್ನಾಟಕ ಹೈಕೋರ್ಟ್, ಈ ಹಿಂದಿನ ಆದೇಶಕ್ಕೆ ತಿದ್ದುಪಡಿ ತಂದು ಗಡುವು ವಿಸ್ತರಣೆಗೆ ಅವಕಾಶ ನೀಡಿತ್ತು. ಹೈಕೋರ್ಟ್ ಸೂಚನೆ ಬಳಿಕ ಸಭೆ ನಡೆಸಿದ ಸರ್ಕಾರ ಇದೀಗ ಸೆಪ್ಟೆಂಬರ್ 15ರ ವರೆಗೆ ವಿಸ್ತರಿಸಿದೆ.

ಮುಲಾಜಿಲ್ಲದೆ ದರ್ಶನ್ ವಿಚಾರಣೆ

ಪರಿಶೀಲನೆ ಮಾಡುತ್ತಾರೆ, ತನಿಖೆ ಅಗತ್ಯವಿದ್ದರೆ ಮಾಡುತ್ತಾರೆ, ಬೇಕಿದ್ದರೆ ಸರ್ಕಾರದ ಅನುಮತಿಯನ್ನೂ ನೀಡಲಾಗುವುದು. ದರ್ಶನ್ ಪ್ರಕರಣಕ್ಕೂ ಶ್ರೀಧರ್ ಎಂಬುವರ ಆತ್ಮಹತ್ಯೆಗೂ ಸಂಬಂಧ ಇದ್ದರೆ ತನಿಖೆ ಮಾಡುತ್ತಾರೆ, ಏನಾದರೂ ಪ್ರತ್ಯೇಕವಾಗಿ ತನಿಖೆ ನಡೆಸಬೇಕು ಅಂತ ಸರ್ಕಾರವನ್ನು ಕೇಳುತ್ತಾರೆ. ಕಾರಣಗಳನ್ನು ಆಧರಿಸಿ ತೀರ್ಮಾನ ಕೈಗೊಳ್ಳುತ್ತೇವೆ. ಮರು ತನಿಖೆ ನಡೆಸಲು ಅನುಮತಿ ಕೇಳಿದರೆ ನೀಡಲಾಗುವುದು ಎಂದರು.

ಇಂಧನ ದರ ಏರಿಕೆ ವಿರುದ್ಧ ರಸ್ತೆ ತಡೆಗೆ ಕ್ರಮ: ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆ ಖಂಡಿಸಿ ಬಿಜೆಪಿ ರಸ್ತೆ ತಡೆ, ಮುಖ್ಯಮಂತ್ರಿಗೆ ಘೇರಾವ್ ಸಂಬಂಧ ಏನೇನು ಕ್ರಮ ಕೈಗೊಳ್ಳ ಬೇಕೋ ಅದನ್ನು ತೆಗೆದುಕೊಳ್ಳುತ್ತೇವೆ, ರಸ್ತೆ ತಡೆ ನಡೆಸಲು ಪೊಲೀಸರು ಅನುಮತಿ ಕೊಡುತ್ತಾರೆ, ಅನುಮತಿ ಕೊಟ್ಟಿದ್ದರೆ ಸಮಂಜಸವಾಗಿರುತ್ತದೆ. ರಸ್ತೆ ತಡೆ ನಡೆಸುವಂತಿಲ್ಲ ಎಂದು ಸುಪ್ರೀಂಕೋರ್ಟ್ ಹೇಳಿದೆ ಈ ಹಿನ್ನೆಲೆಯಲ್ಲಿ ಸೂಕ್ತ ಕ್ರಮ ತೆಗೆದುಕೊಳ್ಳ ಲಾಗುವುದು. ಪ್ರತಿಭಟನೆ ಬೇಡ ಎನ್ನಲಾಗದು ಅದು ಅವರ ಹಕ್ಕು, ಸಾರ್ವಜನಿಕರಿಗೆ ತೊಂದರೆ ಆಗದಂತೆ ಮಾಡಲಿ, ಈಗಾಗಲೇ ಫ್ರೀಡಂಪಾರ್ಕ್ ಮತ್ತು ಪ್ರತಿ ಜಿಲ್ಲೆಯಲ್ಲಿ ಪ್ರತಿಭಟನೆ ಮಾಡಿದ್ದಾರೆ, ಮತ್ತೆ ರಸ್ತೆಗೆ ಇಳಿ ಯುತ್ತೇವೆ ಎಂದರೆ ಏನು ಮಾಡಬೇಕೋ ಅದನ್ನು ಮಾಡುತ್ತೇವೆ ಎಂದರು.

ರಾಜ್ಯದಲ್ಲಿ ಪೆಟ್ರೋಲ್, ಡೀಸೆಲ್ ಬೆಲೆ ಕಡಿಮೆ ಇರುವುದರಿಂದ ಪಕ್ಕದ ರಾಜ್ಯದವರು ಸಹಾ ಇಲ್ಲಿಗೆ ಬಂದು ಖರೀದಿಸುತ್ತಿದ್ದಾರೆ, ದರ ಇಳಿಕೆ ಪ್ರಶ್ನೆಯೇ ಇಲ್ಲ ಎಂದರು.

ವಿಚಾರಣೆ; ಹೇಳಿಕೆ ದಾಖಲು

ನೋಟಿಸ್ ನೀಡಿದ್ದರು. ಈ ಹಿನ್ನೆಲೆಯಲ್ಲಿ ಅನ್ನಪೂರ್ಣೇಶ್ವರಿ ನಗರ ಪೊಲೀಸ್ ಠಾಣೆಗೆ ವಿಜಯಲಕ್ಷ್ಮಿ ಹಾಜರಾದರು. ಸುಮಾರು ಐದೂವರೆ ಗಂಟೆಗಳ ಕಾಲ ವಿಜಯಲಕ್ಷ್ಮಿ ಅವರನ್ನು ವಿಚಾರಣೆ ನಡೆಸಿದ ಪೊಲೀಸರು ಅವರ ಹೇಳಿಕೆಯನ್ನು ದಾಖಲಿಸಿಕೊಂಡಿದ್ದಾರೆ. ರೇಣುಕಾಸ್ವಾಮಿ ಹತ್ಯೆಯ ತನಿಖೆ ನಡೆಸುತ್ತಿರುವ ಪೊಲೀಸರು ಮೊನ್ನೆ ತಡರಾತ್ರಿ ನಟ ದರ್ಶನ್ ಮನೆಯಲ್ಲಿ ಮಹಜರು ನಡೆಸಿದ್ದರು. ಈ ವೇಳೆ ಹತ್ಯೆ ದಿನ ದರ್ಶನ್ ಧರಿಸಿದ್ದ ಬಟ್ಟೆ, ಶೂ ಪೊಲೀಸರು ವಶಕ್ಕೆ ಪಡೆದಿದ್ದರು. ಮನೆಯಲ್ಲಿ ಒಗೆಯದೇ ಇಟ್ಟಿದ್ದ ದರ್ಶನ್ ಬಟ್ಟೆ ಹಾಗೂ ಶೂಗಳನ್ನು ಎಫ್‌ಎಸ್‌ಎಲ್‌ಗೆ ಕಳುಹಿಸಿದ್ದಾರೆ. ಇತ್ತ ರೇಣುಕಾಸ್ವಾಮಿ ಮೇಲೆ ಚಪ್ಪಲಿಯಿಂದ ಹಲ್ಲೆ ಮಾಡಿದ್ದ ಪವಿತ್ರಾ ಗೌಡ ಚಪ್ಪಲಿ ಹಾಗೂ ಅಂದು ಧರಿಸಿದ್ದ ಬಟ್ಟೆಯನ್ನು ಕೂಡ ಸೀಜ್ ಮಾಡಲಾಗಿದೆ.

ನಿಲುಗಡೆ ನಿರ್ಬಂಧಿಸಿ: ಡಿಸಿ ಸೂಚನೆ

ಆಕ್ಷೇಪ ವ್ಯಕ್ತಪಡಿಸಿ ಅಲ್ಲಿಗೆ ಗ್ರಾಹಕರು ಬರುವುದಿಲ್ಲ ದಯಮಾಡಿ ನಮ್ಮ ಹೊಟ್ಟೆ ಮೇಲೆ ಹೊಡೆಯಬೇಡಿ ಎಂದು ಅಂಗಲಾಚಿದರು. ಇದು ತಾತ್ಕಾಲಿಕ ವ್ಯವಸ್ಥೆ. ಆದರೆ ಇನ್ನು ಮುಂದೆ ಎಂಜಿ ರಸ್ತೆ ಬದಿ ಸುಳಿಯಕೂಡದು. ಏನಿದ್ದರೂ ಒಳಗೆ ನಿಗದಿಪಡಿಸಿರುವ ಜಾಗದಲ್ಲೇ ವ್ಯಾಪಾರ ಮಾಡಬೇಕು ಎಂದು ತಾಕೀತು ಮಾಡಿದ ಅವರು, ನಿತ್ಯ ಪೌರಕಾರ್ಮಿಕರಿಂದ ಮಾರುಕಟ್ಟೆ ಸ್ವಚ್ಛಗೊಳಿಸಿ ಅಲ್ಲಿ ಕುಡಿಯುವ ನೀರು, ಶೌಚಾಲಯ ವ್ಯವಸ್ಥೆ ಮಾಡುವಂತೆ ಪಾಲಿಕೆ ಆಯುಕ್ತರಿಗೆ ಸಲಹೆ ನೀಡಿದರು. ಸ್ಥಳ ಪರಿಶೀಲನೆ ನಂತರ ಜಿಲ್ಲಾಧಿಕಾರಿಗಳು ತಮ್ಮ ಕಛೇರಿ ಸಭಾಂಗಣದಲ್ಲಿ ಎಂಜಿ ರಸ್ತೆ ತರಕಾರಿ ಮಾರುಕಟ್ಟೆ ಸಮಸ್ಯೆ ನಿವಾರಣೆ ಸಂಬಂಧ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಕೆಲವು ಸೂಚನೆ ನೀಡಿದರು.

ಡಿಸಿ, ಪೊಲೀಸ್ ಅಧಿಕಾರಿಗಳ 2ನೇ ಬಾರಿ ಸ್ಥಳ ಪರಿಶೀಲನೆ

ಮೈಸೂರು, ಜೂ. 19 (ಆರ್‌ಕೆ)– ಕೆಲ ದಿನಗಳ ಹಿಂದೆಯೂ ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ, ನಗರ ಪೊಲೀಸ್ ಆಯುಕ್ತ ಬಿ.ರಮೇಶ್ ಅವರು ಮೈಸೂರಿನ ಎಂಜಿ ರಸ್ತೆಯ ತರಕಾರಿ ಮಾರುಕಟ್ಟೆಗೆ ತೆರಳಿ ಪರಿಶೀಲನೆ ನಡೆಸಿದ್ದರು.

ಎಂಜಿ ರಸ್ತೆಯ ಅಂಡರ್‌ಬ್ರಿಡ್ಜ್‌ನಿಂದ ಮಾಲ್ ಆಫ್ ಮೈಸೂರ್ ಜಂಕ್ಷನ್‌ವರೆಗೆ ಆಗಿಂದಾಗ್ಗೆ ಟ್ರಾಫಿಕ್ ಜಾಮ್ ಆಗಿ ಆಂಬುಲೆನ್ಸ್ ಸಂಚಾರಕ್ಕೂ ಅಡ್ಡಿಯುಂಟಾಗುತ್ತಿದ್ದ ಹಿನ್ನೆಲೆಯಲ್ಲಿ ಸ್ಥಳ ಪರಿಶೀಲಿಸಿದ ಅವರು, ತರಕಾರಿ ವ್ಯಾಪಾರಿಗಳು ರಸ್ತೆ ಬದಿ ವ್ಯಾಪಾರ ಮಾಡದಂತೆ ಸೂಚಿಸಿದ್ದರಲ್ಲದೆ, ರಸ್ತೆ ಬದಿ ಲೋಡ್, ಅನ್‌ಲೋಡ್ ಮಾಡದಂತೆ ಕ್ರಮವಹಿಸುವಂತೆಯೂ ಸಂಚಾರ ಪೊಲೀಸರಿಗೆ ತಾಕೀತು ಮಾಡಿದರು. ನಂತರ ಸಿದ್ದಾರ್ಥ ಸಂಚಾರ ಠಾಣೆ ಅಂದಿನ ಇನ್ಸ್‌ಪೆಕ್ಟರ್ ಯೋಗೇಶ್ ಅವರು ನಿತ್ಯ ಗಸ್ತು ತಿರುಗಿ ಮೇಲ್ವಿಚಾರಣೆ ನಡೆಸಿದ್ದರಿಂದ ಕೆಲವು ದಿನ ಸಂಚಾರ ಸುಗಮಗೊಂಡಿತ್ತಾದರೂ, ನಂತರ ಯಥಾ ಪರಿಸ್ಥಿತಿ ನಿರ್ಮಾಣವಾಯಿತು. ಎಂಜಿ ರಸ್ತೆ ಮಾರುಕಟ್ಟೆ ಜಾಗದ ವಿವಾದವಿರುವುದರಿಂದ ಲೋಕಸಭಾ ಚುನಾವಣೆ ಬಳಿಕ ಜನಪ್ರತಿನಿಧಿಗಳು, ವ್ಯಾಪಾರಸ್ಥರು, ಮುಖಂಡರು, ಅಧಿಕಾರಿಗಳೊಂದಿಗೆ ಸಭೆ ನಡೆಸಿ ಸಮಸ್ಯೆಗೆ ಪರಿಹಾರ ಕಂಡು ಹಿಡಿಯುವುದಾಗಿಯೂ ಡಾ.ಕೆ.ವಿ.ರಾಜೇಂದ್ರ ಅವರು ತಿಳಿಸಿದ್ದನ್ನು ಸ್ಮರಿಸಬಹುದಾಗಿದೆ.

ಗ್ಯಾರಂಟಿಗಳಿಗಾಗಿ ಪೆಟ್ರೋಲ್, ಡೀಸೆಲ್ ಬೆಲೆ ಹೆಚ್ಚಳ ಮಾಡಿಲ್ಲ

ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ಮೆರೋಜ್ ಖಾನ್ ಸ್ಪಷ್ಟನೆ



ಮೈಸೂರಿನ ಕಾಂಗ್ರೆಸ್ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ಮೆರೋಜ್ ಖಾನ್ ಮಾತನಾಡಿದರು.

ಮೈಸೂರು, ಜೂ.19(ಬಿಎಲ್‌ಯು)– ಗ್ಯಾರಂಟಿ ಯೋಜನೆಗಳಿಗೆ ಹಣ ಹೊಂದಿಸಲು ಪೆಟ್ರೋಲ್, ಡೀಸೆಲ್ ಹಾಗೂ ತೆರಿಗೆ ಹೆಚ್ಚಳ ಮಾಡುತ್ತಿಲ್ಲ ಎಂದು ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ಮೆರೋಜ್ ಖಾನ್ ಸ್ಪಷ್ಟಪಡಿಸಿದರು.

ನಗರದ ಕಾಂಗ್ರೆಸ್ ಕಚೇರಿಯಲ್ಲಿ ಬುಧವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಪೆಟ್ರೋಲ್, ಡೀಸೆಲ್ ಬೆಲೆ ಹಾಗೂ ತೆರಿಗೆ ಹೆಚ್ಚಳಕ್ಕೂ ಗ್ಯಾರಂಟಿ ಯೋಜನೆಗೂ ಯಾವುದೇ ಸಂಬಂಧವಿಲ್ಲ ಎಂದು ಹೇಳಿದರು.

ಪೆಟ್ರೋಲ್, ಡೀಸೆಲ್ ಬೆಲೆ ಹಾಗೂ ತೆರಿಗೆ ಹೆಚ್ಚಳ ಮಾಡುವುದು ಸಾಮಾನ್ಯ ಪ್ರಕ್ರಿಯೆಯಾಗಿದೆ. ಯಾವುದೇ ಸರ್ಕಾರ ಬಂದರೂ ತೆರಿಗೆ ಏರಿಕೆ ಸರ್ವೆ ಸಾಮಾನ್ಯವಾಗಿರುತ್ತದೆ ಎಂದರು.

ಪಂಚ ಗ್ಯಾರಂಟಿ ಯೋಜನೆಗಳಿಗೆ ಅವಶ್ಯವಿರುವ ಹಣ ಸರ್ಕಾರದ ಬಳಿ ಇದೆ. ಇದರಿಂದ ಗ್ಯಾರಂಟಿ ಯೋಜನೆಗಳಿಗೆ ತೆರಿಗೆ ಹೆಚ್ಚಳ ಮಾಡಿ ಸರಿದೂಗಿಸಲಾಗುತ್ತಿದೆ ಎಂಬ ಬಿಜೆಪಿ ಆರೋಪ ಶುದ್ಧ ಸುಳ್ಳು ಎಂದು ತಿಳಿಸಿದರು.

ಬಡವರ ಜೊತೆಗೆ ಶ್ರೀಮಂತರು ಕೂಡ ಗ್ಯಾರಂಟಿ ಯೋಜನೆಯ ಅನುಕೂಲ ಪಡೆಯುತ್ತಿದ್ದಾರೆ. ಶ್ರೀಮಂತರನ್ನು ಗ್ಯಾರಂಟಿ ಯೋಜನೆಯಿಂದ ಹೊರಗಿಡಬೇಕೆಂಬ ಕೆಲವು ಕಾಂಗ್ರೆಸ್ ನಾಯಕರ ಆಗ್ರಹಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ತೀರ್ಮಾನ ಕೈಗೊಳ್ಳುತ್ತಾರೆ ಎಂದು ಮೆರೋಜ್ ಖಾನ್ ತಿಳಿಸಿದರು.

ಗ್ಯಾರಂಟಿ ಯೋಜನೆಯಿಂದ 4 ಕೋಟಿ ಜನರು ಲಾಭ ಪಡೆಯುತ್ತಿದ್ದಾರೆ. 1.20 ಕೋಟಿ ಕುಟುಂಬಗಳಿಗೆ ಅನುಕೂಲವಾಗುತ್ತಿದೆ. 36 ಸಾವಿರ ಕೋಟಿ ರೂ.ಗಳನ್ನು ಸಂಪೂರ್ಣ ಖರ್ಚು ಮಾಡಲಾಗಿದ್ದು, 2024–25 ನೇ ಸಾಲಿಗೆ 52,009 ಕೋಟಿ ಹಣ ಮೀಸಲಿಡಲಾಗಿದೆ ಎಂದು ಹೇಳಿದರು.

ಅನ್ನಭಾಗ್ಯ ಯೋಜನೆಯಡಿ 4,09,34,896 ಫಲಾನುಭವಿಗಳಿಗೆ 5,754 ಕೋಟಿ ಹಣವನ್ನು ವರ್ಗಾವಣೆ ಮಾಡಲಾಗಿದೆ. ಗೃಹ ಜ್ಯೋತಿ ಯೋಜನೆಯಲ್ಲಿ 1.60 ಕೋಟಿ ಜನರಿಗೆ 200 ಯೂನಿಟ್ ಉಚಿತ ವಿದ್ಯುತ್ ನೀಡಲಾಗುತ್ತಿದ್ದು, ಇದಕ್ಕಾಗಿ 7,436 ಕೋಟಿ ವೆಚ್ಚ ಮಾಡಲಾಗಿದೆ ಎಂದು ಮೆರೋಜ್ ಖಾನ್ ಅಂಕಿ ಅಂಶಗಳ ವಿವರ ನೀಡಿದರು.


ಗೃಹ ಲಕ್ಷ್ಮಿ ಯೋಜನೆಯಲ್ಲಿ 1.2 ಕೋಟಿ ಮನೆಗಳ ಯಜಮಾನಿಗೆ 2 ಸಾವಿರದಂತೆ 20,296 ಕೋಟಿ ನೀಡಲಾಗಿದ್ದು, ಶಕ್ತಿ ಯೋಜನೆಯಲ್ಲಿ 201 ಕೋಟಿ ಮಹಿಳೆಯರು ಉಚಿತ ಪ್ರಯಾಣ ಮಾಡಿದ್ದು, ಇದಕ್ಕೆ 4,857 ಕೋಟಿ ರೂಪಾಯಿ ವೆಚ್ಚ ಮಾಡಲಾಗಿದೆ ಎಂದು ಹೇಳಿದರು.

ಗ್ಯಾರಂಟಿ ಯೋಜನೆಗಳಿಂದ ರಾಜ್ಯ ಆರ್ಥಿಕ ಸ್ಥಿತಿ ದಿವಾಳಿತನಕ್ಕೆ ಸಿಲುಕುತ್ತದೆ ಎಂಬ ಬಿಜೆಪಿ ಆರೋಪ ಸುಳ್ಳು ಮಾಡಲಾಗಿದೆ. ರಾಜ್ಯದ ಆರ್ಥಿಕ ಪರಿಸ್ಥಿತಿಗೆ ಯಾವುದೇ ಧಕ್ಕೆ ಆಗದಂತೆ ಗ್ಯಾರಂಟಿ ಯೋಜನೆಗಳನ್ನು ಯಶಸ್ವಿಯಾಗಿ ಅನುಷ್ಠಾನ ಮಾಡಲಾಗಿದೆ ಎಂದು ಮೆರೋಜ್ ಖಾನ್ ತಿಳಿಸಿದರು. ನಗರ ಕಾಂಗ್ರೆಸ್ ಅಧ್ಯಕ್ಷ ಆರ್.ಮೂರ್ತಿ, ಜಿಲ್ಲಾಧ್ಯಕ್ಷ ಡಾ.ಬಿ.ಜೆ. ವಿಜಯಕುಮಾರ್, ಪ್ರಧಾನ ಕಾರ್ಯದರ್ಶಿ ಭಾಸ್ಕರ್‌ಗೌಡ, ಗಿರೀಶ್, ಮುಖಂಡರಾದ ಅರುಣ್‌ಕುಮಾರ್ ಹಾಗೂ ಶಿವಕುಮಾರ್ ಪತ್ರಿಕಾಗೋಷ್ಠಿಯಲ್ಲಿದ್ದರು.

> "ಚುನಾವಣೆ ದೃಷ್ಟಿಯಿಂದ ಗ್ಯಾರಂಟಿ ಯೋಜನೆ ಅನುಷ್ಠಾನ ಮಾಡಿಲ್ಲ. ಜನರಿಗೆ ಸಾಮಾಜಿಕ ಭದ್ರತೆ ಕಲ್ಪಿಸುವ ದೃಷ್ಟಿಯಿಂದ ಇವುಗಳ ಜಾರಿಗೊಳಿಸಲಾಗಿದೆ. ಆದ ಕಾರಣ ಲೋಕಸಭಾ ಚುನಾವಣೆ ತರುವಾಯ ಗ್ಯಾರಂಟಿ ಯೋಜನೆ ರದ್ದು ಮಾಡಲಾಗುತ್ತದೆ ಎಂಬ ಆರೋಪ ಸತ್ಯಕ್ಕೆ ದೂರವಾಗಿದೆ.
> –ಮೆರೋಜ್ ಖಾನ್

ಇಂದಿನಿಂದ ಮೋದಿ ಎರಡು ದಿನ ಕಾಶ್ಮೀರ ಪ್ರವಾಸ

ಯೋಗ ದಿನದಲ್ಲಿ ಭಾಗಿ



ನವದೆಹಲಿ, ಜೂ.19 –ಪ್ರಧಾನಿ ನರೇಂದ್ರ ಮೋದಿ ಅವರು ಜೂ.20 ಹಾಗೂ 21ರಂದು ಕಾಶ್ಮೀರ ಪ್ರವಾಸ ಕೈಗೊಳ್ಳಲಿದ್ದು, ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳಲ್ಲಿ ಭಾಗಿಯಾಗಲಿದ್ದಾರೆ. ಈ ನಡುವೆ ಜೂ.21ರಂದು ಮೋದಿ ಶ್ರೀನಗರದ ಶೇರ್–ಎ–ಕಾಶ್ಮೀರ್ ಅಂತರ ರಾಷ್ಟ್ರೀಯ ಸಮ್ಮೇಳನ ಕೇಂದ್ರದಲ್ಲಿ ಅಂತರ ರಾಷ್ಟ್ರೀಯ ಯೋಗ ದಿನದಲ್ಲಿ ಭಾಗಿಯಾಗಲಿದ್ದಾರೆ

'ಸ್ವಯಂ ಮತ್ತು ಸಮಾಜಕ್ಕಾಗಿ ಯೋಗ' ವಿಷಯದ ಅಡಿಯಲ್ಲಿ ಈ ವರ್ಷದ ಯೋಗ ದಿನವನ್ನು ಆಚರಿಸಲಾಗುತ್ತಿದ್ದು, ಸ್ವಯಂನ ಆಂತರ್ಯ ಮತ್ತು ಬಾಹ್ಯ ಪ್ರಪಂಚದ ನಡುವಿನ ಸಂಬಂಧವನ್ನು ಉತ್ತೇಜಿಸುವುದು ಇದರ ಉದ್ದೇಶ ಎಂದು ಕೇಂದ್ರ ಆಯುಷ್ ಖಾತೆ ರಾಜ್ಯಸಚಿವ ಪ್ರತಾಪ್ ರಾವ್ ಜಾಧವ್ ಹೇಳಿದ್ದಾರೆ.

ಗ್ರಾಮೀಣ ಭಾಗಗಳಲ್ಲಿಯೂ ಯೋಗವನ್ನು ಉತ್ತೇಜಿಸುವ ನಿಟ್ಟಿನಲ್ಲಿ ಪ್ರಧಾನಿ ಗ್ರಾಮಗಳ ಪ್ರಧಾನರಿಗೆ ಪತ್ರ ಬರೆದಿದ್ದಾರೆ ಎಂದರು.

ಲೋಕಸಭೆ ಚುನಾವಣೆ ಕಾರಣ ನಿಂತಿದ್ದ ಪ್ರಧಾನಿ ಮೋದಿ ಅವರ 'ಮನ್ ಕೀ ಬಾತ್' ರೇಡಿಯೋ ಕಾರ್ಯಕ್ರಮ ಜೂ.30ರಿಂದ ಪುನಾರಂಭ ಆಗಲಿದೆ. ಮಂಗಳವಾರ ಈ ವಿಷಯವನ್ನು ಟ್ವೀಟ್‌ನಲ್ಲಿ ಪ್ರಕಟಿಸಿರುವ ಮೋದಿ, 'ಕಾರ್ಯಕ್ರಮದ ಬಗ್ಗೆ ಜನರು ತಮ್ಮ ವಿಚಾರಗಳನ್ನು ಮೈಗೌ ಓಪನ್ ಫೋರಂ, ನಮೋ ಆಪ್ ಅಥವಾ 1800 11 7800ಕ್ಕೆ ಸಂದೇಶ ಕಳಿಸಿ ಹಂಚಿಕೊಳ್ಳಬಹುದು' ಎಂದು ಕೇಳಿಕೊಂಡಿದ್ದಾರೆ. ಮನ್–ಕೀ–ಬಾತ್ ಕೊನೆಯ ಬಾರಿಗೆ ಫೆ.25ರಂದು ಪ್ರಸಾರವಾಗಿತ್ತು. ಚುನಾವಣೆಯ ಸಮಯದ ಮಾದರಿ ನೀತಿ ಸಂಹಿತೆ ಕಾರಣ ಕಾರ್ಯಕ್ರಮ ನಿಲ್ಲಿಸಲಾಗಿತ್ತು.

ಶ್ರೀ ಕೃಷ್ಣರಾಜೇಂದ್ರ ಸಹಕಾರ ಬ್ಯಾಂಕಿನ ಸಂಸ್ಥಾಪಕರ ದಿನಾಚರಣೆ



ಮೈಸೂರಿನ ಶ್ರೀ ಕೃಷ್ಣರಾಜೇಂದ್ರ ಸಹಕಾರ ಬ್ಯಾಂಕಿನ ಸಂಸ್ಥಾಪಕರ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಗುಂಡ್ಲುಪೇಟೆ ಶಾಸಕ ಎಚ್.ಎಂ.ಗಣೇಶ್ ಪ್ರಸಾದ್ ಬ್ಯಾಂಕಿನ ಸಂಸ್ಥಾಪಕರಾದ ಶಟ್ಟಪ್ಪ ಸಿದ್ದಪ್ಪನವರ ಪ್ರತಿಮೆಗೆ ಮಾಲಾರ್ಪಣೆ ಮಾಡಿದರು. ಈ ವೇಳೆ ಬ್ಯಾಂಕಿನ ಅಧ್ಯಕ್ಷ ಪ್ರತಿಧ್ವನಿ ಪ್ರಸಾದ್, ಉಪಾಧ್ಯಕ್ಷ, ಬಸವರಾಜು, ನಿರ್ದೇಶಕರಾದ ನಂ.ಸಿದ್ದಪ್ಪ, ಎಂ.ಡಿ.ಪಾರ್ಥಸಾರಥಿ, ನವೀನ್‌ಕುಮಾರ್, ಎಚ್.ವಿ.ಭಾಸ್ಕರ್, ಸರ್ವಮಂಗಳ, ತಾಯೂರು ವಿಠಲಮೂರ್ತಿ, ಶಂಕರ ನಾರಾಯಣ ಶಾಸ್ತ್ರಿ, ನಾಗರಾಜ್, ಅರುಣ್ ಸಿದ್ದಪ್ಪ ಹಾಗೂ ಬ್ಯಾಂಕಿನ ಸಿಬ್ಬಂದಿ ಉಪಸ್ಥಿತರಿದ್ದರು.

ಉಚಿತ ಆರೋಗ್ಯ ತಪಾಸಣೆ ಶಿಬಿರ; ಬಡವರಿಗೆ ಅನುಕೂಲಕಾರಿ

ಕೆ.ಆರ್. ಕ್ಷೇತ್ರದ ಶಾಸಕ ಟಿ.ಎಸ್.ಶ್ರೀವತ್ಸ ಅಭಿಮತ



ವಿವಿಧ ತಪಾಸಣೆಗಳ ಮಾಹಿತಿವುಳ್ಳ ಪೋಸ್ಟರ್ ಬಿಡುಗಡೆಗೊಳಿಸಲಾಯಿತು.

ಮೈಸೂರು, ಜೂ. 19– ಉಚಿತ ಆರೋಗ್ಯ ತಪಾಸಣಾ ಶಿಬಿರಗಳು, ಬಡ ಜನರು ಆರೋಗ್ಯಕ್ಕೆ ಸಂಬಂಧಪಟ್ಟಂತೆ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಲು ಉತ್ತಮ ಅವಕಾಶವಾಗಿದೆ ಎಂದು ಶಾಸಕ ಟಿ.ಎಸ್.ಶ್ರೀವತ್ಸ ಹೇಳಿದರು.


ಮೈಸೂರಿನ ಬಿಜೆಪಿ ಕಚೇರಿಯಲ್ಲಿ ತ್ರಿವೇಣಿ ಗೆಳೆಯರ ಬಳಗದ 30ನೇ ವರ್ಷದ ವಾರ್ಷಿಕೋತ್ಸವ ಅಂಗವಾಗಿ ವಾರ್ಡ್ ನಂ.35ರ ತ್ರಿವೇಣಿ ವೃತ್ತದ ಕೆಎಸ್‌ಇಬಿ ಕಾಲೋನಿಯಲ್ಲಿ ಸ್ಪರ್ಶ ಆಸ್ಪತ್ರೆಯ ಸಹಯೋಗದೊಂದಿಗೆ ಬೃಹತ್ ಉಚಿತ ಆರೋಗ್ಯ ತಪಾಸಣೆ ಹಾಗೂ ಕಣ್ಣಿನ ತಪಾಸಣೆ ಮತ್ತು ದಂತ ತಪಾಸಣೆ, ಹಾಗೂ ಸ್ವಯಂ ಪ್ರೇರಿತ ರಕ್ತದಾನ ಶಿಬಿರವನ್ನು ಆಯೋಜಿಸಿದ್ದು, ಅದರ ಪೋಸ್ಟರ್ ಬಿಡುಗಡೆಗೊಳಿಸಿ ಮಾತನಾಡಿದ ಅವರು, ಹಿಂದುಳಿದ ಪ್ರದೇಶಗಳಲ್ಲಿ ಆರೋಗ್ಯ ಜಾಗೃತಿಗೆ ಉಚಿತ ಆರೋಗ್ಯ ಶಿಬಿರಗಳು ಸಹಕಾರಿಯಾಗಿವೆ. ಬಡ ಜನತೆ ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ತೋರದೆ ತಜ್ಞ ವೈದ್ಯರು ಲಭ್ಯವಿದ್ದಾಗ ಶಿಬಿರದಲ್ಲಿ ಪಾಲ್ಗೊಂಡು ಉಚಿತ ಆರೋಗ್ಯ ಶಿಬಿರದ ಸದುಪಯೋಗಪಡೆದುಕೊಳ್ಳಬೇಕು. ಆದರೆ ಇತ್ತೀಚಿನ ದಿನಗಳಲ್ಲಿ ಪ್ರತಿಯೊಬ್ಬರಿಗೂ ಬಿಪಿ, ಶುಗರ್, ಹೃದ್ರೋಗ ಹಾಗೂ ಕಿಡ್ನಿ ಕಾಯಿಲೆಗಳು ಸಾಮಾನ್ಯವಾಗಿವೆ. ಇವು ಶ್ರೀಮಂತ ಖಾಯಿಲೆಗಳಾಗಿದ್ದು, ಬಡ ಜನರು ಆರ್ಥಿಕವಾಗಿ ಭರಿಸಲು ಅಸಾಧ್ಯ. ಗ್ರಾಮೀಣ ಭಾಗದ ಹಾಗೂ ನಗರ ಪ್ರದೇಶದ ಬಡ ಜನರಿಗೆ ಇಂತಹ ಉಚಿತ ಶಿಬಿರಗಳ ಮೂಲಕವೇ ಚಿಕಿತ್ಸೆಗೊಳಪಡಿಸಿದಾಗ ಮಾತ್ರ ಅವರನ್ನು ಸಂಕಷ್ಟದಿಂದ ಪಾರು ಮಾಡಲು ಸಾಧ್ಯ ಎಂದರು.

ತ್ರಿವೇಣಿ ಗೆಳೆಯರ ಬಳಗದ ಅಧ್ಯಕ್ಷ ಬಿ ಆನಂದ್ ಮಾತನಾಡಿ, ಈ ಆರೋಗ್ಯ ತಪಾಸಣೆ ಶಿಬಿರವನ್ನು ಸಾರ್ವಜನಿಕರು ಸದುಪಯೋಗಪಡಿಸಿಕೊಳ್ಳಬೇಕು. ಉಚಿತ ಆರೋಗ್ಯ ಶಿಬಿರದಲ್ಲಿ ಕಣ್ಣಿನ ತಪಾಸಣೆ, ದಂತ ತಪಾಸಣೆ, ಸಕ್ಕರೆ ಕಾಯಿಲೆ ಮತ್ತು ಬಿಪಿ ಪರೀಕ್ಷೆಯನ್ನು ನುರಿತ ತಜ್ಞರಿಂದ ನಡೆಸಲಾಗುವುದು. ಸ್ವಯಂಪ್ರೇರಿತ ರಕ್ತದಾನ ಶಿಬಿರವನ್ನು ಆಯೋಜಿಸಿದ್ದು, ರಕ್ತದಾನ ಮಾಡಲು ಇಚ್ಚಿಸುವವರು 9901259093/9900809019 ನಂಬರಿಗೆ ಸಂಪರ್ಕಿಸಿ ನೊಂದಾಯಿಸಿಕೊಳ್ಳಬಹುದು ಎಂದು ಹೇಳಿದರು. ಬಿಜೆಪಿ ಮುಖಂಡರಾದ ಜಯರಾಮ್, ಪ್ರದೀಪ್‌ಕುಮಾರ್, ಕಿಶೋರ್, ಕೀರ್ತಿ, ಸಚಿನ್ ನಾಯಕ್ ಇನ್ನಿತರರಿದ್ದರು.

ಅರ್ಜಿ ಆಹ್ವಾನ

ಮೈಸೂರು, ಜೂ.19– 2024–25ನೇ ಸಾಲಿನ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದಲ್ಲಿ ಡಿಪ್ಲೊಮಾ ಪ್ರವೇಶಕ್ಕಾಗಿ ವಿವಿಧ ಕೋರ್ಸ್‌ಗಳಿಗೆ ಪ್ರವೇಶಾತಿ ಪ್ರಾರಂಭಿಸಿದ್ದು, ಎಸ್‌ಎಸ್‌ಎಲ್‌ಸಿ ಪಾಸಾದ ಅಭ್ಯರ್ಥಿಗಳಿಂದ ಆಫ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಡಿಪ್ಲೊಮಾ ಇನ್ ಟೂಲ್ ಅಂಡ್ ಡೈ ಮೇಕಿಂಗ್, ಡಿಪ್ಲೊಮಾ ಇನ್ ಪ್ರಿಶಿಷನ್ ಮ್ಯಾನುಫ್ಯಾಕ್ಚರಿಂಗ್, ಡಿಪ್ಲೊಮಾ ಇನ್ ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಶನ್ ಕೋರ್ಸ್‌ಗಳು ಲಭ್ಯವಿದ್ದು, 3 ವರ್ಷ ಹಾಗೂ ಕಡ್ಡಾಯ 1 ವರ್ಷದ ಇಂಟರ್ನ್‌ಶಿಪ್ ತರಬೇತಿ ನೀಡಲಾಗುವುದು. ಅರ್ಜಿ ಸಲ್ಲಿಸಲು ಜೂ.29 ಕೊನೇ ದಿನ. ಮಾಹಿತಿಗಾಗಿ ದೂ.ಸಂ: 0821–2582750, ಸಹಾಯವಾಣಿ: 155 267, ಮೊ.: 9980557205, 8660139259, 9141630315, 9880068986 ಅನ್ನು ಸಂಪರ್ಕಿಸಬಹುದು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

20.06.2024 ಗುರುವಾರ, ಮಳೆ ನಕ್ಷತ್ರ: ಮೃಗಶಿರ, 08.06.2024ರಿಂದ 21.06.2024
ಕ್ರೋಧಿನಾಮ ಸಂವತ್ಸರ, ಉತ್ತರಾಯಣ, ಗ್ರೀಷ್ಮ ಋತು, ಜ್ಯೇಷ್ಠ ಮಾಸ, ಶುಕ್ಲ ಪಕ್ಷ,
ತಿಥಿ: ತ್ರಯೋದಶಿ, ನಕ್ಷತ್ರ: ಅನೂರಾಧ, ರಾಹುಕಾಲ: ಮಧ್ಯಾಹ್ನ 1.30ರಿಂದ 3 ಗಂಟೆಯವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ರೀಜುವೆನೇಷನ್ ಕುರಿತು ವೈದ್ಯಕೀಯ ತಪಾಸಣಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಬೆಳಗ್ಗೆ 9 ಗಂಟೆಯಿಂದ.

■ **ಕೋರಮಂಡಲ್ ಶುಗರ್ಸ್ ಲಿಮಿಟೆಡ್, ಬಿ.ಎಸ್. ನಿಜಲಿಂಗಪ್ಪ ಶುಗರ್ ಇನ್ಸ್‌ಟಿಟ್ಯೂಟ್, ಬೆಳಗಾವಿ :** ದಕ್ಷಿಣ ಕರ್ನಾಟಕದ 22ನೇ ಸಕ್ಕರೆ ಸಂಶೋಧನೆ ಮತ್ತು ಅಭಿವೃದ್ಧಿ ಕಾರ್ಯಾಗಾರ, ಮುಖ್ಯ ಭಾಷಣ: ಐಸಿಎಆರ್–ಶುಗರ್‌ಕೇನ್ ಬ್ರೀಡಿಂಗ್ ಇನ್ಸ್‌ಟಿಟ್ಯೂಟ್, ಕೊಯಮತ್ತೂರು ನಿರ್ದೇಶಕ ಡಾ.ಜಿ.ಹೇಮಪ್ರಭಾ, ಉಪಸ್ಥಿತರು: ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ, ಕೃಷಿ ನಿರ್ದೇಶಕ ಡಾ. ಜಿ.ಟಿ. ಪುತ್ರ, ಯುಎಎಸ್–ಬೆಂಗಳೂರು ಸಂಶೋಧನಾ ನಿರ್ದೇಶಕ ಡಾ.ಹೆಚ್.ಎಸ್. ಶಿವರಾಂ, ಬಿ.ಎಸ್. ನಿಜಲಿಂಗಪ್ಪ ಶುಗರ್ ಇನ್ಸ್‌ಟಿಟ್ಯೂಟ್ ನಿರ್ದೇಶಕ ಸಿ.ಬಿ. ಪಾಟೀಲ್, ಕೋರಮಂಡಲ್ ಶುಗರ್ಸ್ ಲಿಮಿಟೆಡ್ ಹಿರಿಯ ಉಪಾಧ್ಯಕ್ಷ ವಿ.ಜೆ. ರವಿ, ಸ್ಥಳ: ರಾಣಿ ಬಹದ್ದೂರ್ ಸಭಾಂಗಣ, ಬೆಳಗ್ಗೆ 10ಕ್ಕೆ.

■ **ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು :** ಯೋಗೋತ್ಸವದ ಅಂಗವಾಗಿ 70ರಲ್ಲೂ 20ರ ಉತ್ಸಾಹದ ವಿವಿಧ ಕ್ಷೇತ್ರದ ಸ್ವಾಸ್ಥ್ಯ ಸಾಧಕರಿಗೆ ಸನ್ಮಾನ, ಅಧ್ಯಕ್ಷತೆ: ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಸನ್ಮಾನಿಸುವವರು: ಡಾ.ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶನ ಕಲೆಗಳ ವಿಶ್ವವಿದ್ಯಾಲಯ ಉಪಕುಲಪತಿ ಪ್ರೊ.ವಿ.ನಾಗೇಶ್ ಬೆಟ್ಟಕೋಟೆ, ಮುಖ್ಯ ಅತಿಥಿಗಳು : ಹಿರಿಯ ಸಮಾಜ ಸೇವಕ ಡಾ.ರಘುರಾಂ ವಾಜಪೇಯಿ, ಡಾ.ಕೆ.ಕೃಷ್ಣಮೂರ್ತಿ ಸಂಶೋಧನಾ ಪ್ರತಿಷ್ಠಾನ ನಿರ್ದೇಶಕರಾದ ಡಾ.ಕೆ.ಲೀಲಾ ಪ್ರಕಾಶ್, ಸನ್ಮಾನಿತ ಸ್ವಾಸ್ಥ್ಯ ಸಾಧಕರು: ಮಹಾಕವಯತ್ರಿ ಡಾ.ಲತಾ ರಾಜಶೇಖರ್, ಮೈಸೂರು–ಚಾಮರಾಜನಗರ ಜಿಲ್ಲಾ ಆರ್ಯ ಈಡಿಗರ ಸಂಘದ ಅಧ್ಯಕ್ಷ ಎಂ.ಕೆ.ಪೋತರಾಜು, ನಿವೃತ್ತ ಪ್ರಾಂಶುಪಾಲರಾದ ಪ್ರೊ. ಪದ್ಮಿನಿ ಹೆಗಡೆ, ಸ್ಥಳ: ಜಿಲ್ಲಾ ಪತ್ರಕರ್ತರ ಭವನ, ಅಗ್ರಹಾರ, ಬೆಳಗ್ಗೆ 10.30ಕ್ಕೆ.

■ **ವಿದ್ಯಾವರ್ಧಕ ಪದವಿಪೂರ್ವ ಕಾಲೇಜು:** ಸ್ಪರ್ಧೆ ಹಾಗೂ ಸನ್ಮಾನ ಕಾರ್ಯಕ್ರಮ, ಸಾನ್ನಿಧ್ಯ: ಶ್ರೀ ರಾಮಕೃಷ್ಣ ವಿದ್ಯಾಲಯದ ಸ್ವಾಮಿ ಯುಕ್ತೇಶಾನಂದಜೀ ಮಹಾರಾಜ್, ಅಧ್ಯಕ್ಷತೆ: ವಿದ್ಯಾವರ್ಧಕ ಸಂಘದ ಅಧ್ಯಕ್ಷ ಗುಂಡಪ್ಪಗೌಡ, ಗೌರವ ಅತಿಥಿಗಳು: ಸಂಘದ ಸಂಘದ ಕಾರ್ಯದರ್ಶಿ ಪಿ.ವಿಶ್ವನಾಥ್, ಖಜಾಂಚಿ ಶ್ರೀಶೈಲ ರಾಮಣ್ಣವರ್, ಕಾರ್ಯನಿರ್ವಾಹಕ ಕಮಿಟಿ ಸದಸ್ಯ ಎಸ್.ಶಿವಲಿಂಗಯ್ಯ, ಸ್ಥಳ: ಪಿ.ಎಂ.ಚಿಕ್ಕಬೋರಯ್ಯ ಸಭಾಂಗಣ, ಬೆಳಗ್ಗೆ 10.30ಕ್ಕೆ.

■ **ಜೆಎಸ್‌ಎಸ್ ಮಹಿಳಾ ಪದವಿಪೂರ್ವ ಕಾಲೇಜು:** ಪ್ರತಿಭಾ ಪುರಸ್ಕಾರ ಸಮಾರಂಭ, ಅಧ್ಯಕ್ಷತೆ: ಜೆಎಸ್‌ಎಸ್ ಮಹಾವಿದ್ಯಾಪೀಠ ಕಾಲೇಜು ಶಿಕ್ಷಣ ಇಲಾಖೆ ನಿರ್ದೇಶಕ ಪ್ರೊ.ಆರ್.ಮೂಗೇಶಪ್ಪ, ಮುಖ್ಯ ಅತಿಥಿಗಳು: ಕಾಲೇಜು ಶಿಕ್ಷಣ ವಿಭಾಗದ ಸಹಾಯಕ ನಿರ್ದೇಶಕ ಬಿ.ನಿರಂಜನಮೂರ್ತಿ, ಪ್ರತಿಭಾ ಪುರಸ್ಕಾರ: ಮಹಾರಾಣಿ ವಿಜ್ಞಾನ ಕಾಲೇಜು ಸಹಾಯಕ ಪ್ರಾಧ್ಯಾಪಕರಾದ ಶ್ರೀಮತಿ ಎಂ. ಮಮತ, ಸ್ಥಳ: ನವಜ್ಯೋತಿ ಸಭಾಂಗಣ, ಬೆಳಗ್ಗೆ 11ಕ್ಕೆ.

■ **ಶ್ರೀ ಭುವನೇಶ್ವರಿ ಸೇವಾ ಟ್ರಸ್ಟ್ :** ವಿಶ್ವ ಸಂಗೀತ ದಿನಾಚರಣೆ ಅಂಗವಾಗಿ ವಿವಿಧ ಸಂಗೀತ ಕ್ಷೇತ್ರದ ಸಾಧಕರಿಗೆ ಸನ್ಮಾನ, ಮುಖ್ಯ ಅತಿಥಿಗಳು : ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡಿಕೆರೆ ಗೋಪಾಲ್, ಮೈಸೂರು ನಗರ ಮತ್ತು ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ಡಿ.ಟಿ. ಪ್ರಕಾಶ್, ಹಿರಿಯ ಸಮಾಜ ಸೇವಕ ಡಾ. ರಘುರಾಂ ವಾಜಪೇಯಿ, ಕಾಂಗ್ರೆಸ್ ಮುಖಂಡರಾದ ಎನ್.ಎಂ. ನವೀನ್‌ಕುಮಾರ್, ನಗರಪಾಲಿಕೆ ಮಾಜಿ ಸದಸ್ಯ ಬಿ.ವಿ.ಮಂಜುನಾಥ್, ಜೀವಧಾರ ರಕ್ತನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ಸ್ಥಳ: ನಮೋ ಯೋಗ ಭವನ, ರಾಮಾನುಜ ರಸ್ತೆ, ಮಧ್ಯಾಹ್ನ 12ಕ್ಕೆ.

■ **ಮೈಸೂರು ನಗರ (ಜಿಲ್ಲಾ) ಕಾಂಗ್ರೆಸ್ ಸಮಿತಿ, ಚಾಮರಾಜ ಕ್ಷೇತ್ರ ಇಂದಿರಾ ಗಾಂಧಿ ಬ್ಲಾಕ್ :** ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಿದ ಮತದಾರರು ಮತ್ತು ಅಭ್ಯರ್ಥಿ ಪರವಾಗಿ ದುಡಿದ ಕಾರ್ಯಕರ್ತರಿಗೆ ಕೃತಜ್ಞತಾ ಸಮಾರಂಭ, ಉಪಸ್ಥಿತರು : ಶಾಸಕ ಕೆ. ಹರೀಶ್‌ಗೌಡ, ಕೆಪಿಸಿಸಿ ವಕ್ತಾರ ಎಂ. ಲಕ್ಷ್ಮಣ್, ನಗರ ಕಾಂಗ್ರೆಸ್ ಅಧ್ಯಕ್ಷ ಆರ್. ಮೂರ್ತಿ, ಸ್ಥಳ: ಕಾಂಗ್ರೆಸ್ ಭವನ, ರೈಲ್ವೆ ನಿಲ್ದಾಣದ ಬಳಿ, ಸಂಜೆ 4.30ಕ್ಕೆ.

■ **ಕಲಾಸೌರಭ :** ರಾಗಾಲಾಪನಾ ಸರಣಿ, ರಾಗ : ಭೈರವಿ ಮತ್ತು ತನಿ ಆವರ್ತನದ ವಿಕಸನ ಮತ್ತು ವೈಶಿಷ್ಟ್ಯ, ನಡೆಸಿಕೊಡುವವರು : ವಿದುಷಿ ಮೇಧಾ ಮಂಜುನಾಥ್ ಮತ್ತು ವಿದ್ವಾನ್ ವಿನೋದ್ ಶ್ಯಾಮ್ ಆನೂರ್, ಸ್ಥಳ: ಸುರಭಿ ಗಾನಕಲಾ ಮಂದಿರ, ಗೋಕುಲಂ 3ನೇ ಹಂತ, ಸಂಜೆ 5ಕ್ಕೆ.

■ **ಶ್ರೀರಾಮಕೃಷ್ಣ ಆಶ್ರಮ :** ಸ್ವಾಮಿ ಜ್ಞಾನಯೋಗಾನಂದ ಅವರಿಂದ ಶ್ರೀ ಮದ್ಭಗವದ್ಗೀತಾ ಕುರಿತು ಉಪನ್ಯಾಸ, ಸ್ಥಳ: ಆಶ್ರಮದ ಸಭಾಂಗಣ, ಯಾದವಗಿರಿ, ಸಂಜೆ 6ಕ್ಕೆ.

■ **ಶ್ರೀ ವಿದ್ಯಾಗಣಪತಿ ಹಾಗೂ ಶ್ರೀ ಮಹಾಲಕ್ಷ್ಮೀ ದೇವಸ್ಥಾನ ಟ್ರಸ್ಟ್ :** 5ನೇ ವರ್ಷದ ಶ್ರೀನಿವಾಸ ಕಲ್ಯಾಣೋತ್ಸವ, ಸಂಜೆ 6ಕ್ಕೆ ಮಹಾಗಣಪತಿ ಪೂಜೆ, ಪುಣ್ಯಾಹ, ಅಂಕುರಾರ್ಪಣೆ, ಪಂಚಗವ್ಯ, ದೇವನಾಂದಿ, ಧ್ವಜಾರೋಹಣ ಶ್ರೀ ಸ್ವಾಮಿಯವರಿಗೆ ಪಂಚಾಮೃತಾಭಿಷೇಕ, ಶೋಡಷ ದ್ರವ್ಯಾಭಿಷೇಕ, ಭಕ್ತಾದಿಗಳಿಂದ ಸ್ವಾಮಿ ಅವರಿಗೆ ಸಾಮೂಹಿಕವಾಗಿ ಅರಿಶಿಣ ನೀರಿನಿಂದ ಅಭಿಷೇಕ, ತೈಲಮಜ್ಜನ ಸ್ನಾನ, ಮಹಾಮಂಗಳಾರತಿ, ಸ್ಥಳ: ಶ್ರೀ ಮಹಾಲಕ್ಷ್ಮೀ ದೇವಸ್ಥಾನ, ವಿನಾಯಕನಗರ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಸಂವಹನ ಸಮಾಚಾರ–ಬಾನುಲಿ ಸರಣಿ.ಪ್ರಸ್ತುತಿ: ಅಲಕಾ ಕಟ್ಟೆಮನೆ, 6.40 ಪದ ಸಂಸ್ಕೃತಿ, ಪ್ರಸ್ತುತಿ: ಎಸ್.ಎಸ್.ಯದುರಾಜನ್, 6.50 ರೈತರಿಗೆ ಸಲಹೆ, 7.15 ಯೋಗೋತ್ಸವ: ಅಂತರರಾಷ್ಟ್ರೀಯ ಯೋಗ ದಿನದ ಅಂಗವಾಗಿ ಪ್ರಾಯೋಜಿತ ಕಾರ್ಯಕ್ರಮ. ಪ್ರಾಯೋಜಕರು: ಆಯುಷ್ ಇಲಾಖೆ, ಕರ್ನಾಟಕ ಸರ್ಕಾರ, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ: ಅರುಣಾ ಸಾಯಿರಾಂ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ನೇರ ಫೋನ್ ಇನ್ ಕಾರ್ಯಕ್ರಮ, ಪ್ರಸ್ತುತಿ: ಜಿ.ಶಾಂತಕುಮಾರ್

ಮಧ್ಯಾಹ್ನ: 12.30 ದೇವರನಾಮ, 12.45 ಚಟ್–ಪಟ್ ಚುರುಮುರಿ, ಪ್ರಸ್ತುತಿ: ಪ್ರಭುಸ್ವಾಮಿ ಮಳೀಮಠ್ ಹಾಗೂ ಕೆ.ಬಿ.ಮೀನಾ, 1.20 ಭಾವಗೀತೆಗಳು–ಮಧುಲಿಕ ಶ್ರೀನಿವಾಸ್, 4.00 ಜನಪದ ಸಂಗೀತ, 4.30 ವಿಜ್ಞಾನ ಭಾರತಿ, 6.10 'ಸಂವಹನ ಸಮಾಚಾರ' ಬಾನುಲಿ ಸರಣಿ. ಪ್ರಸ್ತುತಿ: ಅಲಕಾ ಕಟ್ಟೆಮನೆ, 6.50 ಕೃಷಿರಂಗ–ಕಿಸಾನ್‌ವಾಣಿ, ಪ್ರಾಯೋಜಕರು: ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ ರೈತ ಬ್ರ್ಯಾಂಡ್‌ಗಳ ನೇರ ಮಾರಾಟ ಕುರಿತ ನೇರ ಫೋನ್ ಇನ್ ಕಾರ್ಯಕ್ರಮ. ಭಾಗವಹಿಸುತ್ತಾರೆ: ಮಂಡ್ಯದ ಯೋಗೀಶ್ ಅಪ್ಪಾಜಯ್ಯ, ಪ್ರಸ್ತುತಿ: ಎನ್.ಕೇಶವಮೂರ್ತಿ, 7.45 ಟಿ–20 ವಿಶ್ವಕಪ್ ಅಂಗವಾಗಿ ಭಾರತ ಹಾಗೂ ಆಫ್ಘಾನಿಸ್ತಾನ ತಂಡಗಳ ನಡುವೆ ಕೆನ್ಸಿಂಗ್‌ಟನ್ ಓವಲ್, ಬ್ರಿಡ್ಜ್‌ಟೌನ್, ಬಾರ್ಬಡೋಸ್ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆಯುವ ಕ್ರಿಕೆಟ್ ಪಂದ್ಯದ ವೀಕ್ಷಕ ವಿವರಣೆ.

ಪ್ರಖರ ಎಲ್‌ಇಡಿ ಹೆಡ್ ಲೈಟ್ ಅಳವಡಿಕೆ; ಎಡಿಜಿಪಿ ಅಲೋಕ್ ಕುಮಾರ್ ಎಚ್ಚರಿಕೆ



ಮೈಸೂರು, ಜೂ.19(ಬಿಎಲ್‌ಯು)– ಪ್ರಖರ ಬೆಳಕಿನ ಎಲ್‌ಇಡಿ ಹೆಡ್ ಲೈಟ್ ಅಳವಡಿಸಿರುವ ವಾಹನ ಸವಾರರ ವಿರುದ್ಧ ಪ್ರಕರಣ ದಾಖಲಿಸಲಾಗುವುದು ಎಂದು ಸಂಚಾರ ಮತ್ತು ರಸ್ತೆ ಸುರಕ್ಷತಾ ವಿಭಾಗದ ಎಡಿಜಿಪಿ ಅಲೋಕ್ ಕುಮಾರ್ ಎಚ್ಚರಿಸಿದ್ದಾರೆ.

ಇತ್ತೀಚಿನ ದಿನಗಳಲ್ಲಿ ಹೆಚ್ಚು ಬೆಳಕು ಸೂಸುವ ಎಲ್‌ಇಡಿ ದೀಪಗಳನ್ನು ವಾಹನಗಳಿಗೆ ಅಳವಡಿಸಲಾಗುತ್ತಿದೆ. ಇದರಿಂದ ಎದುರುಗಡೆ ಬರುವ ವಾಹನ ಸವಾರರಿಗೆ ತೀವ್ರ ತೊಂದರೆ ಆಗುತ್ತಿದೆ ಎಂದು ಹೇಳಿದ್ದಾರೆ.

ಈ ಹಿನ್ನೆಲೆಯಲ್ಲಿ ಕೇಂದ್ರ ಮೋಟಾರು ಕಾಯ್ದೆ (ಸಿಎಂವಿ)ಯಲ್ಲಿ ನಮೂದಿಸಿರುವ ಮಾನದಂಡದಂತೆ ವಾಹನ ಸವಾರರು ಹೆಡ್ ಲೈಟ್ ಅಳವಡಿಸಿಕೊಳ್ಳಬೇಕು ಎಂದು ಸೂಚಿಸಿದ್ದಾರೆ. ಒಂದು ವೇಳೆ ಕಾಯ್ದೆ ಉಲ್ಲಂಘನೆ ಮಾಡಿದರೆ ಅಂತಹ ವಾಹನ ಸವಾರರ ವಿರುದ್ಧ ಪ್ರಕರಣ ದಾಖಲಿಸಲಾಗುವುದು ಎಂದು ಅಲೋಕ್ ಕುಮಾರ್ ತಮ್ಮ ಎಕ್ಸ್ ಖಾತೆಯಲ್ಲಿ ಎಚ್ಚರಿಕೆ ನೀಡಿದ್ದಾರೆ.

ಸಾಲಬಾಧೆ; ಆಟೋ ಚಾಲಕ ಆತ್ಮಹತ್ಯೆ

ಮೈಸೂರು, ಜೂ.19(ಎಸ್‌ಪಿಎನ್)– ಸಾಲದ ಬಾಧೆ ತಾಳಲಾರದೇ ಆಟೋ ಚಾಲಕ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿರುವ ಘಟನೆ ಮೈಸೂರಿನ ಹಳೆ ಕೆಸರೆಯಲ್ಲಿ ನಡೆದಿದೆ. ಇಲ್ಲಿನ ನಿವಾಸಿ ಕುಮಾರ್(56) ಮೃತ ಚಾಲಕನಾಗಿದ್ದು, ಸಾಲದ ಹೊರೆಗೆ ಬೇಸತ್ತು ಈತ ಕುಡಿತದ ದಾಸನಾಗಿದ್ದ. ತನ್ನ ಮನೆಯಲ್ಲೇ ನೇಣುಬಿಗಿದು ಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಈ ಸಂಬಂಧ ಎನ್.ಆರ್.ಠಾಣೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಉಪ ಚುನಾವಣೆಗೆ ಕಾಂಗ್ರೆಸ್ ಉಸ್ತುವಾರಿ ಸಮಿತಿ ರಚನೆ

ಬೆಂಗಳೂರು, ಜೂ.19–ರಾಜ್ಯದಲ್ಲಿ ನಡೆಯಲಿರುವ ಉಪ ಚುನಾವಣೆಗೆ ಕಾಂಗ್ರೆಸ್ ಸಿದ್ದತೆ ನಡೆಸಿದ್ದು, ಉಸ್ತುವಾರಿ ಸಮಿತಿಗಳನ್ನು ರಚಿಸಿದೆ.

ಸಂಡೂರು ವಿಧಾನಸಭಾ ಕ್ಷೇತ್ರ: ಸಂಡೂರಿಗೆ ವಸತಿ ಸಚಿವ ಜಮೀರ್ ಅಹಮದ್ ಖಾನ್ ಅಧ್ಯಕ್ಷರಾಗಿದ್ದು, ಮಂಯೂರ ಜಯಕುಮಾರ್ ಮತ್ತು ವಸಂತಕುಮಾರ್ ಉಸ್ತುವಾರಿ ವಹಿಸಲಿದ್ದಾರೆ. ಬಳ್ಳಾರಿ ಸಂಸದ ಇ.ತುಕಾರಾಂ, ಶಾಸಕರಾದ ಬಿ ನಾಗೇಂದ್ರ, ಡಾ. ಎನ್.ಟಿ. ಶ್ರೀನಿವಾಸ್, ಪಿ.ಟಿ. ಪರಮೇಶ್ವರ ನಾಯ್ಕ್, ಶಿವಂಗೋಗಿ ಸದಸ್ಯರಾಗಿದ್ದಾರೆ. ಬಳ್ಳಾರಿಯಿಂದ ಹಾಲಿ ಶಾಸಕ ಇ.ತುಕಾರಾಂ ಗೆದ್ದ ನಂತರ ಸಂಡೂರು ಕ್ಷೇತ್ರಕ್ಕೆ ಉಪ ಚುನಾವಣೆ ನಡೆಯಲಿದೆ.

ಶಿಗ್ಗಾಂವೆ ವಿಧಾನಸಭಾ ಕ್ಷೇತ್ರ: ಅರಣ್ಯ ಸಚಿವ ಈಶ್ವರ ಖಂಡ್ರೆ ಸಮಿತಿ ಅಧ್ಯಕ್ಷರಾಗಿದ್ದು, ಮಂಯೂರ ಜಯಕುಮಾರ್ ಮತ್ತು ವಿನಯ ಕುಲಕರ್ಣಿ ಉಸ್ತುವಾರಿ ವಹಿಸಲಿದ್ದಾರೆ. ಸಚಿವರಾದ ಶಿವಾನಂದ ಪಾಟೀಲ, ಸಂತೋಷ ಲಾಡ್, ಎಂಎಲ್‌ಸಿ ಸಲೀಂ ಅಹ್ಮದ್, ಸಂಜೀವಕುಮಾರ ನೀರಲಗಿ, ಆನಂದ ಗಡ್ಡದೇವರಮಠ ಸದಸ್ಯರು. ಹಾವೇರಿ ಲೋಕಸಭೆ ಕ್ಷೇತ್ರದಿಂದ ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಗೆದ್ದ ನಂತರ ಶಿಗ್ಗಾಂವ್‌ಗೆ ಉಪಚುನಾವಣೆ ನಡೆಯಲಿದೆ.

ಸ್ಥಳೀಯ ಸಂಸ್ಥೆ ಚುನಾವಣೆ: ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅಧ್ಯಕ್ಷರಾಗಿರುವ ಸಮಿತಿಯಲ್ಲಿ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್, ವಿನಯ್ ಕುಮಾರ್ ಸೊರಕೆ, ರಮಾನಾಥ ರೈ, ಶಾಸಕ ಅಶೋಕ್ ರೈ, ಕೆ.ಜಯಪ್ರಕಾಶ್ ಹೆಗ್ಡೆ, ಪದ್ಮರಾಜ್, ಹರೀಶ್ ಕುಮಾರ್, ಉದಯ ಶೆಟ್ಟಿ, ಕಿಶನ್ ಹೆಗ್ಡೆ ಸದಸ್ಯರಾಗಿದ್ದಾರೆ. ರೋಜಿ ಜಾನ್ ಮತ್ತು ಮಂಜುನಾಥ್ ಭಂಡಾರಿ ಉಸ್ತುವಾರಿ ವಹಿಸಲಿದ್ದಾರೆ.

ದೆಹಲಿ ಸಿಎಂ ಕೇಜ್ರಿವಾಲ್ ನ್ಯಾಯಾಂಗ ಬಂಧನ ಅವಧಿ ಜುಲೈ 3 ರವರೆಗೆ ವಿಸ್ತರಣೆ



ನವದೆಹಲಿ, ಜೂ.19– ಅಬಕಾರಿ ಹಗರಣಕ್ಕೆ ಸಂಬಂಧಿಸಿದ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಬಂಧನಕ್ಕೊಳಗಾಗಿರುವ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರ ನ್ಯಾಯಾಂಗ ಬಂಧನದ ಅವಧಿಯನ್ನು ದೆಹಲಿ ನ್ಯಾಯಾಲಯವು ಜುಲೈ 3 ರವರೆಗೆ ವಿಸ್ತರಿಸಿದೆ.

ಕೇಜ್ರಿವಾಲ್ ಅವರ ನ್ಯಾಯಾಂಗ ಬಂಧನದ ಅವಧಿ ಇಂದು ಅಂತ್ಯಗೊಂಡ ಹಿನ್ನೆಲೆಯಲ್ಲಿ ವಿಡಿಯೊ ಕಾನ್ಫರೆನ್ಸ್ ಮೂಲಕ ಆರೋಪಿಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಲಾಯಿತು. ವಿಚಾರಣೆ ನಡೆಸಿದ ವಿಶೇಷ ನ್ಯಾಯಾಧೀಶ ನಿಯಾಯ್ ಬಿಂದು ಅವರು ಕೇಜ್ರಿವಾಲ್ ಅವರ ನ್ಯಾಯಾಂಗ ಬಂಧನದ ಅವಧಿಯನ್ನು ವಿಸ್ತರಿಸಿದರು.

ವಿಚಾರಣೆ ವೇಳೆ ಕೇಜ್ರಿವಾಲ್ ಪರ ವಾದ ಮಂಡಿಸಿದ ವಕೀಲರು, ನ್ಯಾಯಾಂಗ ಬಂಧನದ ಅವಧಿ ವಿಸ್ತರಿಸುವಂತೆ ಇಡಿ ಸಲ್ಲಿಸಿದ್ದ ಅರ್ಜಿಯನ್ನು ವಿರೋಧಿಸಿದರು ಮತ್ತು ನ್ಯಾಯಾಂಗ ಬಂಧನ ವಿಸ್ತರಣೆಯನ್ನು ಸಮರ್ಥಿಸುವ ಯಾವುದೇ ಆಧಾರಗಳಿಲ್ಲ ಎಂದು ಹೇಳಿದರು. ದೆಹಲಿ ಸಿಎಂ ಅರವಿಂದ್ ಕೇಜ್ರಿವಾಲ್ ಅವರನ್ನು ಕಳೆದ ಮಾರ್ಚ್ 21ರಂದು ಇಡಿ ಬಂಧಿಸಿತ್ತು. ಚುನಾವಣಾ ಪ್ರಚಾರಕ್ಕಾಗಿ ಸುಪ್ರೀಂ ಕೋರ್ಟ್ ಜೂನ್ 1ರವರೆಗೆ ಮಧ್ಯಂತರ ಜಾಮೀನು ನೀಡಿತ್ತು. ಜೂನ್ 2 ರಂದು ಅವರು ಮತ್ತೆ ಶರಣಾಗಿದ್ದರು.

ಸೂರಿಲ್ಲ... ಮಾಸಾಶನ ಬರ್ತಿಲ್ಲ... ಕೆಲಸ ಇಲ್ಲ... ತ್ರಿಚಕ್ರ ವಾಹನ ಕೊಡ್ಸಿ... ಬ್ಯಾಂಕ್ ಸಾಲ ಕೊಡ್ಸಿ... ವಿಕಲಕಚೇತನರ ಮನವಿಗೆ ಮರುಗಿದ ಡಿಸಿ

ವಿಕಲಚೇತನರ ಕುಂದು ಕೊರತೆ ಸಭೆಯಲ್ಲಿ ಹತ್ತಾರು ಅಳಲು

ಮೈಸೂರು, ಜೂ.19(ಎಂಕೆ)– ದಯವಿಟ್ಟು ಜೀವನಕ್ಕೊಂದು ಸೂರು ಮಾಡಿಕೊಡಿ... ಹಲವು ತಿಂಗಳಿಂದ ಮಾಸಾಶನ ಬರುತ್ತಿಲ್ಲ.. ಓದಿದ್ದೇವೆ ಮಾಡಲು ಕೆಲಸ ಇಲ್ಲ, ಕೆಲ್ಸ ಕೊಡ್ಸಿ... ತ್ರಿಚಕ್ರ ವಾಹನಗಳನ್ನು ಕೊಡ್ಸಿ... ಸ್ವಯಂ ಉದ್ಯೋಗಕ್ಕೆ ಬ್ಯಾಂಕ್ ಸಾಲ ಕೊಡ್ಸಿ... ವಿಕಲಚೇತನರ ಮನವಿಗಳಿಗೆ ಜಿಲ್ಲಾಧಿಕಾರಿಗಳು ಮಮ್ಮಲ ಮರುಗಿದರು...!

ಮೈಸೂರು ಜಿಪಂ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಪಂ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಸಹಯೋಗದಲ್ಲಿ ನಡೆದ 'ವಿಕಲಚೇತನರ ಕುಂದು–ಕೊರತೆ ಸಭೆ'ಯಲ್ಲಿ ಹತ್ತಾರು ಮನವಿಗಳ ಜೊತೆಗೆ ವಿಕಲಚೇತನರು ಎದುರಿಸುತ್ತಿರುವ ಸಮಸ್ಯೆಗಳು ವ್ಯಕ್ತವಾದವು.

ಸಭೆ'ಯ ಆರಂಭ'ದಲ್ಲೇ ಬಹುತೇಕ ವಿಕಲಚೇತನರು ವಾಸಕ್ಕೆ ಮನೆಯಿಲ್ಲ. ಆಶ್ರಯ ಯೋಜನೆಯಡಿ ಮನೆ ಕೊಡಿಸಿಕೊಡಿ. ಇಲ್ಲವೇ ಯಾವುದಾದರೊಂದು ಯೋಜನೆಯಡಿ ಕಟ್ಟಿರುವ ಮನೆಯನ್ನಾದರೂ ಕೊಂಡುಕೊಳ್ಳಲು ಸಹಾಯ ಮಾಡಿ. ಮುಡಾ(ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ)ದಲ್ಲಿ ವಿಕಲಚೇತನರಿಗೆ ಮೀಸಲಿರುವ ನಿವೇಶನಗಳನ್ನು ಕೊಡಿಸಿ, ಮನೆ ಕೊಡಿಸದಿದ್ದರೆ ಬೀದಿಯೇ ಗತಿ ಎಂದು ಪರಿ ಪರಿಯಾಗಿ ಮನವಿ ಮಾಡಿದರೆ, ಹಿರಿಯ ವಿಕಲಚೇತನರೊಬ್ಬರು ಬಿಕ್ಷಾಟನೆ ಮಾಡುತ್ತಾ ಜೀವನ ಸಾಗಿಸುತ್ತಿದ್ದೇವೆ. ಸದ್ಯ ಬಾಡಿಗೆ ಮನೆಯಲ್ಲಿದ್ದು, ನಾಲ್ಕು ತಿಂಗಳಿಂದ ಬಾಡಿಗೆ ಕಟ್ಟಿಲ್ಲ. ಮನೆ ಮಾಲೀಕರು ಹೊರಗೆ ಹಾಕಿದರೆ ಬೀದಿಯೇ ಗತಿ. ಇರಲೊಂದು ಸೂರು ಕೊಡಿಸಿ ಎಂದು ಅಂಗಲಾಚಿದರು.

ಬಳಿಕ ಪ್ರತಿಕ್ರಿಯಿಸಿ ಜಿಲ್ಲಾಧಿಕಾರಿ ಡಾ.ಕೆ.ವಿ. ರಾಜೇಂದ್ರ ಆಶ್ರಯ ಯೋಜನೆಯಡಿ ಮನೆ ಕೊಡಿಸುವ ಪ್ರಯತ್ನ ಮಾಡಲಾಗುವುದು. ನಗರಪಾಲಿಕೆಯಲ್ಲಿ ವಿಕಲಚೇತನರಿಗೆ ನಿವೇಶನ ಪಡೆಯಲು ಲಕ್ಷಕ್ಕೂ ಅಧಿಕ ಹಣವನ್ನು ಸಬ್ಸಿಡಿ ರೂಪದಲ್ಲಿ ನೀಡಲಾಗುವುದು. ಆದರೆ ಯಾರೊಬ್ಬರು ಅರ್ಜಿ ಸಲ್ಲಿಸಿಲ್ಲ. ಕೂಡಲೇ ಅರ್ಜಿ ಸಲ್ಲಿಸಿ. ಕಟ್ಟಿರುವ ಮನೆಗಳನ್ನು ಖರೀದಿಸಲು ಆರ್ಥಿಕವಾಗಿ ಅನುದಾನ ನೀಡಲು ಸಾಧ್ಯವಿಲ್ಲ. ಆದರೂ ಈ ಕುರಿತು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು. ಮುಡಾ ಅಭಿವೃದ್ಧಿಪಡಿಸಿರುವ ಬಡಾವಣೆಗಳಲ್ಲಿ ಶೇ.5 ಮನೆಗಳನ್ನು ವಿಕಲಚೇತನರಿಗೆ ನೀಡಬೇಕು ಎಂದಿದೆ. ಇದರ ಬಗ್ಗೆಯೂ ಗಮನ ಹರಿಸಲಾಗುವುದು. ಮನೆಯೇ ಇಲ್ಲದೆ ಇರುವ ವಯೋವೃದ್ಧ ವಿಕಲಚೇತನರು, ತಾತ್ಕಾಲಿಕವಾಗಿಯಾದರೂ ನಿರಾಶ್ರಿತ ಕೇಂದ್ರಗಳನ್ನು ಆಶ್ರಯ ಪಡೆದುಕೊಳ್ಳಿ ಎಂದು ಸಲಹೆ ನೀಡಿದರಲ್ಲದೆ ನಗರದಿಂದ 10 ಕಿ.ಮೀ ವ್ಯಾಪ್ತಿಯಲ್ಲಿ ಸರ್ಕಾರಿ ಜಾಗಗಳನ್ನು ಗುರ್ತಿಸಿ, ವಿಕಲಚೇತನರ ಬಡಾವಣೆ ನಿರ್ಮಾಣ ಕುರಿತು ಚರ್ಚಿಸಿ, ನಿರ್ಧರಿಸಲಾಗುವುದು ಎಂದು ಭರವಸೆ ನೀಡಿದರು.

ಮೈಸೂರು ನಗರ ಪಾಲಿಕೆಯಲ್ಲಿ 2019ರಿಂದಲೂ ತ್ರಿಚಕ್ರ ವಾಹನಗಳನ್ನು ನೀಡಿಲ್ಲ. ಅರ್ಜಿ ಸಲ್ಲಿಸಿದವರ ಮನೆಗೆ ಸೆಲೆಕ್ಟ್ ಆಗಿದ್ದೀರಿ ಎಂದು ಪತ್ರ ಬಂದಿದೆ. ಯಾವಾಗ ಕೊಡುತ್ತೀರಿ ಎಂದರೆ ನಿಮ್ಮ ಅರ್ಜಿ ಕ್ಯಾನ್ಸಲ್ ಆಗಿದೆ ಎಂದು ಹೇಳುತ್ತಿದ್ದಾರೆ. ಕಾರಣ ಕೇಳಿದರೆ ಹೇಳುತ್ತಿಲ್ಲ. ಹಿಂದಿದ್ದ ಪಾಲಿಕೆ ಹೆಚ್ಚುವರಿ ಆಯುಕ್ತರು ಏನೇನೋ ನೆಪ ಹೇಳಿ ದಿನದೂಡುತ್ತಿದ್ದರು ಎಂದು ದೂರಿದರು. ಇದಕ್ಕೆ ಪ್ರತಿಕ್ರಿಯಿಸಿ ಪಾಲಿಕೆ ಹೆಚ್ಚುವರಿ ಆಯುಕ್ತೆ ಕುಸುಮಾಕುಮಾರಿ, ಪಾಲಿಕೆಯಿಂದ 112 ತ್ರಿಚಕ್ರ ವಾಹನಗಳನ್ನು ಖರೀದಿ ಮಾಡಲಾಗಿದೆ. ಅರ್ಜಿ ಸಲ್ಲಿಸಿ, ಆಯ್ಕೆಯಾದವರ ಪಟ್ಟಿ ತಯಾರಿಸಿ, ಒಂದೆರಡು ವಾರದಲ್ಲಿ ತ್ರಿಚಕ್ರ ವಾಹನಗಳನ್ನು ನೀಡುವ ವ್ಯವಸ್ಥೆ ಮಾಡಲಾಗುವುದು ಎಂದರು.

ಹಾಗೆಯೇ ಪಾಲಿಕೆಯಿಂದ ವಿಕಲಚೇತನ ಕ್ರೀಡಾಪಟುಗಳಿಗೆ ಪ್ರೋತ್ಸಾಹ ಧನ ದೊರೆಯುತ್ತಿಲ್ಲ. ಪಾಲಿಕೆ ಕೇಂದ್ರ ಕಚೇರಿಯಲ್ಲಿರುವ ವಿಕಲಚೇತನರ ಬಳಕೆಗೆ ಇರುವ ಲೀಫ್ಟ್ ಬಳಿ ಹೋಗಲು ದಾರಿಯಿಲ್ಲ. ಸ್ವಯಂ ಉದ್ಯೋಗಕ್ಕಿರುವ ಸಾಲ–ಸೌಲಭ್ಯ ಕುರಿತು ಸರಿಯಾಗಿ ಮಾಹಿತಿ ನೀಡುತ್ತಿಲ್ಲ. ಹಾಗೆಯೇ ಸ್ವಯಂ ಉದ್ಯೋಗಕ್ಕೆ ಸಾಲ ಕೊಡಲು ಬ್ಯಾಂಕ್‌ನವರು ಹಿಂದೇಟು ಹಾಕುತ್ತಾರೆ. ಆದಾಯ ಎಷ್ಟಿದೆ ಎಂದು ಕೇಳಿ ಅರ್ಜಿ ತಿರಸ್ಕರಿಸುತ್ತಾರೆ. ಇದರಿಂದ ಜೀವನ ಕಂಡುಕೊಳ್ಳುವುದೇ ಕಷ್ಟವಾಗಿದೆ ಎಂದು ತಮ್ಮ ಅಳಲು ತೋಡಿಕೊಂಡರು.

ನಂತರ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿಗಳು, ತ್ರಿಚಕ್ರ ವಾಹನಕ್ಕೆ ಅರ್ಜಿ ಸಲ್ಲಿಸಿ, ಆಯ್ಕೆಯಾದವರ ಪಟ್ಟಿಯನ್ನು ನೋಟಿಸ್ ಬೋರ್ಡ್‌ನಲ್ಲಿ ಹಾಕುವಂತೆ ಪಾಲಿಕೆ ಹೆಚ್ಚುವರಿ ಆಯುಕ್ತರಿಗೆ ತಾಕೀತು ಮಾಡಿದರು. ಹಾಗೆಯೇ ಲೋನ್ ಕೊಡಲು ನಿರಾಕರಿಸುವ ಬ್ಯಾಂಕ್‌ಗಳ ಬಗ್ಗೆ ಮಾಹಿತಿ ನೀಡಿದರೆ ಜಿಲ್ಲಾ ಬ್ಯಾಂಕರ್‌ಗಳ ಕಮಿಟಿ ಸಭೆಯಲ್ಲಿ ಚರ್ಚಿಸಿ, ಲೋನ್ ಕೊಡಿಸುವ ಪ್ರಯತ್ನ ಮಾಡಲಾಗುವುದು ಎಂದರು.

ಕೆಲ್ಸ ಕೊಡ್ಸಿ: ಪದವಿ, ಡಿಪ್ಲೊಮಾ ಕೋರ್ಸ್ ಮಾಡಿದ್ದೇವೆ. ಆದರೆ ಕೆಲಸ ಇಲ್ಲ. ಎಲ್ಲಿಯಾದರೂ ಹೊರಗುತ್ತಿಗೆ ಆಧಾರದಲ್ಲಿ ಕೆಲಸ ಕೊಡಿಸುವಂತೆ ಕೆಲವರು ಕೋರಿದರು. ಅರ್ಜಿ ಸ್ವೀಕರಿಸಿದ ಜಿಲ್ಲಾಧಿಕಾರಿಗಳು, ಸ್ವಲ್ಪ ಕಾಲಾವಕಾಶ ನೀಡಿ ಗಮನಿಸಿ ತಿಳಿಸುತ್ತೇನೆ ಎಂದರು. ಹಾಗೆಯೇ ವಿಕಲಚೇತನರು ಯಾವುದೇ ಸಮಸ್ಯೆ ಇದ್ದರೂ ಮೊದಲು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಬಳಿ ಮನವಿ ಮಾಡಿ. ಅಲ್ಲಿಯೂ ಪರಿಹಾರವಾಗದಿದ್ದರೂ ನೇರವಾಗಿ ನನಗೆ ಅರ್ಜಿ ಕೊಡಿ ಎಂದು ಕಿವಿಮಾತು ಹೇಳಿದರು.

ಜಿಪಂ ಸಿಇಓ ಕೆ.ಎಂ.ಗಾಯತ್ರಿ, ಮುಡಾ ಆಯುಕ್ತ ದಿನೇಶ್‌ಕುಮಾರ್, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಕೆ.ವಿ.ಜ್ಯೋತಿ ಮತ್ತಿತರರಿದ್ದರು.



ಮೈಸೂರು ಜಿಪಂ ಸಭಾಂಗಣದಲ್ಲಿ ನಡೆದ 'ವಿಕಲಚೇತನರ ಕುಂದು–ಕೊರತೆ ಸಭೆ'ಯಲ್ಲಿ ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ವಿಕಲಚೇತನರಿಂದ ಮನವಿ ಸ್ವೀಕರಿಸಿದರು.

ವಿಕಲಚೇತನರ ಪುನರ್‌ವಸತಿ ಕೇಂದ್ರ ಸ್ಥಗಿತ...

ತಿಲಕ್‌ನಗರದಲ್ಲಿರುವ ವಿಕಲಚೇತನರ ಪುನರ್‌ವಸತಿ ಕೇಂದ್ರ ಸ್ಥಗಿತವಾಗಿದೆ. ಯಾವೊಬ್ಬ ಸಿಬ್ಬಂದಿ ಕಾರ್ಯನಿರ್ವಹಿಸುತ್ತಿಲ್ಲ. ಕೂಡಲೇ ಇದರ ಬಗ್ಗೆ ಗಮನಹರಿಸಬೇಕು ಎಂಬ ಮನವಿಗೆ ಪುನರ್‌ವಸತಿ ಕೇಂದ್ರವನ್ನು ರೆಡ್‌ಕ್ರಾಸ್ ಸಂಸ್ಥೆ ನಡೆಸುತ್ತಿದೆ. ಆದರೆ ನಿರ್ವಹಣೆ ಸರಿ ಇಲ್ಲದಿರುವುದರಿಂದ ಮುಂದಿನ ದಿನಗಳಲ್ಲಿ ಬೇರೆ ಸಂಸ್ಥೆಗೆ ವರ್ಗಾಯಿಸುವ ಕುರಿತು ಚಿಂತನೆ ನಡೆಸಲಾಗುವುದು. ಯಾರಿಗೆ ತಿಂಗಳ ಮಾಸಾಶನ ಬರುತ್ತಿಲ್ಲವೋ ಅವರು ಅರ್ಜಿ ಕೊಡಿ ಪರಿಶೀಲಿಸಿ ಸಮಸ್ಯೆ ಬಗೆಹರಿಸಲಾಗುವುದು.

- ಡಾ.ಕೆ.ವಿ.ರಾಜೇಂದ್ರ, ಜಿಲ್ಲಾಧಿಕಾರಿ

ಉದ್ದೇಶಕ್ಕೆ ಬಳಸದಿರುವ ಸಿಎ ನಿವೇಶನಗಳ ಮಂಜೂರಾತಿ ರದ್ದು

ಮುಡಾ ಅಧ್ಯಕ್ಷ ಕೆ. ಮರೀಗೌಡ ಪ್ರಕಟ

ಮೈಸೂರು, ಜೂ.19(ಆರ್‌ಕೆ)– ಮಂಜೂರಾಗಿ ಹಲವು ವರ್ಷ ಕಳೆದರೂ, ನಿರ್ದಿಷ್ಟ ಉದ್ದೇಶಕ್ಕೆ ಬಳಸದೇ ಪಾಳು ಬಿದ್ದಿರುವ ಸಿಎ (ನಾಗರಿಕ ಸೇವೆ) ನಿವೇಶನಗಳನ್ನು ನಿರ್ದಾಕ್ಷಿಣ್ಯವಾಗಿ ಮಂಜೂರಾತಿ ರದ್ದುಗೊಳಿಸಿ, ಮುಟ್ಟುಗೋಲು ಹಾಕಿಕೊಳ್ಳುವುದಾಗಿ ಮುಡಾ ಅಧ್ಯಕ್ಷ ಕೆ. ಮರೀಗೌಡ ತಿಳಿಸಿದ್ದಾರೆ.


ಅಧಿಕಾರಿಗಳೊಂದಿಗೆ ಇಂದು ಮೈಸೂರು ನಗರದಾದ್ಯಂತ ಪ್ರದಕ್ಷಿಣೆ ಹಾಕಿ ಪ್ರಾಧಿಕಾರದ ಆಸ್ತಿಗಳನ್ನು ಪರಿಶೀಲಿಸಿದ ಅವರಿಗೆ 30, 90 ವರ್ಷಗಳ ಅವಧಿಗೆ ಗುತ್ತಿಗೆ ಆಧಾರದಲ್ಲಿ ಮುಡಾ ನಾಗರಿಕ ಸೇವೆ ಒದಗಿಸುವ ಸಲುವಾಗಿ ರಿಯಾಯಿತಿ ದರದಲ್ಲಿ ಸಿಎ ನಿವೇಶನ ಮಂಜೂರು ಮಾಡಿ ಹಲವು ವರ್ಷ ಕಳೆದರೂ ಕಟ್ಟಡ ನಿರ್ಮಿಸದೇ, ಯಾವುದೇ ಚಟುವಟಿಕೆ ಆರಂಭಿಸದಿರುವುದು ಕಂಡು ಬಂದಿದೆ.

ಷರತ್ತಿನನ್ವಯ ನಿಗದಿತ ಅವಧಿಯೊಳಗೆ ಹಣ ಪಾವತಿಸಬೇಕು. ಆದರೆ, ಸಂಘ–ಸಂಸ್ಥೆ ಟ್ರಸ್ಟ್‌ಗಳು ನಿಯಮ ಉಲ್ಲಂಘಿಸಿರುವುದರಿಂದ ಅಂತಹ ಸಿಎ ನಿವೇಶನಗಳ ಮಂಜೂರಾತಿ ರದ್ದುಗೊಳಿಸಿ ಪ್ರಾಧಿಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗುವುದು ಎಂದು ತಿಳಿಸಿದರು.

ಸಿದ್ಧಾರ್ಥನಗರದ ಸಿಐಟಿಬಿ ಛತ್ರ, ಭರತ್‌ನಗರ, ರಮ್ಮನಹಳ್ಳಿ, ಕಾಳಿಸಿದ್ದನಹುಂಡಿ, ಬನ್ನಿಮಂಟಪ, ಬೆಲವತ್ತ, ಶಾದನಹಳ್ಳಿ ಹಾಗೂ ಗೋಕುಲಂ ಟ್ರಸ್ಟ್ ಸೇರಿದಂತೆ ಹಲವೆಡೆ ಸಿಎ ನಿವೇಶನ ಮಂಜೂರು ಮಾಡಿಸಿಕೊಂಡು ಖಾಲಿ ಬಿಟ್ಟಿರುವುದರಿಂದ ಅಂತಹ ನಿವೇಶನಗಳನ್ನು ರದ್ದುಗೊಳಿಸುತ್ತೇವೆ ಎಂದು ಮರೀಗೌಡ ತಿಳಿಸಿದರು.

ಶಿಥಿಲಾವಸ್ಥೆಯಲ್ಲಿರುವ ಸಿಐಟಿಬಿ ಛತ್ರ ನೆಲಸಮಗೊಳಿಸಿ ಕೋಟಿ ರೂ. ವೆಚ್ಚದಲ್ಲಿ ಸುಸಜ್ಜಿತ ಛತ್ರ ನಿರ್ಮಿಸುವುದು, ರಮ್ಮನಹಳ್ಳಿಯಲ್ಲಿ 1.70 ಕೋಟಿ ರೂ. ವೆಚ್ಚದ ಸೆಪ್ಟಿಕ್ ಟ್ಯಾಂಕ್ ಸೇರಿದಂತೆ ಹಲವು ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳುವುದಾಗಿಯೂ ಅವರು ಇದೇ ಸಂದರ್ಭ ತಿಳಿಸಿದರು.

ಮುಡಾ ಆಯುಕ್ತ ಜಿ.ಟಿ. ದಿನೇಶ್‌ಕುಮಾರ್, ಕಾರ್ಯದರ್ಶಿ ಶೇಖರ್, ಸೂಪರಿಂಟೆಂಡಿಂಗ್ ಇಂಜಿನಿಯರ್ ಧರಣೇಂದ್ರ, ಎಕ್ಸಿಕ್ಯೂಟಿವ್ ಇಂಜಿನಿಯರ್ ಎ. ನಾಗೇಶ್. ವಿಶೇಷ ತಹಸೀಲ್ದಾರ್ ಮೋಹನ್ ಕುಮಾರಿ, ನಗರ ಯೋಜಕ ಸದಸ್ಯ ಶಿವರಾಂ ಸೇರಿದಂತೆ ಹಲವು ಅಧಿಕಾರಿಗಳು ಪರಿಶೀಲನೆ ವೇಳೆ ಉಪಸ್ಥಿತರಿದ್ದರು.



ಮುಡಾ ಅಧ್ಯಕ್ಷ ಕೆ. ಮರೀಗೌಡ ಅವರು ಬುಧವಾರ ಮೈಸೂರಿನ ಸಿದ್ಧಾರ್ಥನಗರದಲ್ಲಿ ಪ್ರಾಧಿಕಾರದ ಆಸ್ತಿಗಳ ಪರಿಶೀಲನೆ ನಡೆಸಿದರು. ಆಯುಕ್ತ ಜಿ.ಟಿ. ದಿನೇಶ್‌ಕುಮಾರ್ ಹಾಗೂ ಇತರರನ್ನು ಚಿತ್ರದಲ್ಲಿ ಕಾಣಬಹುದು.

ಕಲ್ಲು ಕ್ವಾರಿಯಲ್ಲಿ ರೀಲ್ಸ್ ಮಾಡುವಾಗ ನೀರಿನಲ್ಲಿ ಮುಳುಗಿ ಇಬ್ಬರು ವಿದ್ಯಾರ್ಥಿಗಳು ಸಾವು

ಧಾರವಾಡ, ಜೂ.19– 10ನೇ ತರಗತಿಯ ಇಬ್ಬರು ವಿದ್ಯಾರ್ಥಿಗಳು ಸೆಲ್ಫಿ ಕ್ಲಿಕ್ಕಿಸಿಕೊಳ್ಳುತ್ತಾ, ಸಾಮಾಜಿಕ ಜಾಲತಾಣಗಳಿಗೆ ರೀಲ್ಸ್‌ಗಳನ್ನು ಶೂಟ್ ಮಾಡುತ್ತಿದ್ದ ವೇಳೆ ನೀರು ತುಂಬಿದ್ದ ಕಲ್ಲು ಕ್ವಾರಿಯಲ್ಲಿ ಮುಳುಗಿ ಸಾವಿಗೀಡಾಗಿದ್ದಾರೆ. ಮೃತರನ್ನು ಮಾಳಮಡ್ಡಿ ನಿವಾಸಿ ಶ್ರೇಯಸ್ ನವಲೆ (16) ಮತ್ತು ಸಪ್ತಾಪುರದ ದ್ರುವ ದಾಸರ್ (16) ಎಂದು ಗುರುತಿಸಲಾಗಿದೆ.

ಮನಸೂರ್ ರಸ್ತೆಯಲ್ಲಿದ್ದ ಕಲ್ಲು ಕ್ವಾರಿಗೆ ಆರು ಜನರ ತಂಡ ಹೋಗಿತ್ತು. ಶ್ರೇಯಸ್ ಮತ್ತು ದ್ರುವ ನೀರಿನೊಳಗೆ ಪೋಸ್ ನೀಡುತ್ತಿದ್ದರೆ, ಅವರ ಸ್ನೇಹಿತರು ವಿಡಿಯೋ ಚಿತ್ರೀಕರಿಸುತ್ತಿದ್ದರು. ಆದರೆ, ಇಬ್ಬರೂ ನೀರಿನೊಳಗಿನ ಹಳ್ಳದಲ್ಲಿ ಸಿಲುಕಿಕೊಂಡಿದ್ದಾರೆ. ಘಟನೆ ಬಗ್ಗೆ ಮಾಹಿತಿ ನೀಡಲು ಉಳಿದ ಹುಡುಗರು ಪೊಲೀಸ್ ಠಾಣೆಗೆ ಧಾವಿಸಿದರು. ಸ್ಥಳಕ್ಕೆ ಪೊಲೀಸರು ಹಾಗೂ ಅಗ್ನಿಶಾಮಕ ಸಿಬ್ಬಂದಿ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಶ್ರೇಯಸ್‌ನ ಮೃತದೇಹವನ್ನು ಸೋಮವಾರ ಸಂಜೆ ಮತ್ತು ದ್ರುವ ಅವರ ಮೃತದೇಹವನ್ನು ಮಂಗಳವಾರ ಮಧ್ಯಾಹ್ನ ಹೊರತೆಗೆಯಲಾಯಿತು. ಧಾರವಾಡ ಎಸ್ಪಿ ಗೋಪಾಲ್ ಬ್ಯಾಕೋಡ್ ಮಾತನಾಡಿ, ನಿವೇಶನದ ಮಾಲೀಕರೊಂದಿಗೆ ಸಭೆ ನಡೆಸಿ ನಿರ್ಬಂಧಿತ ಫಲಕಗಳನ್ನು ಅಳವಡಿಸುವಂತೆ ಕೋರಲಾಗುವುದು ಎಂದರು.

ಶ್ರೀ ವ್ಯಾಸರಾಜರ ಅನುಗ್ರಹದಿಂದ 'ಶ್ರೀಮನ್ ನ್ಯಾಯ ಸುಧಾ ಮಂಗಳ ಮಹೋತ್ಸವ' ಸಾಂಗವಾಗಿ ಸಂಪನ್ನ

ಸೋಸಲೆ ಶ್ರೀ ವ್ಯಾಸರಾಜರ ಮಠದ ಶ್ರೀ ವಿದ್ಯಾಶ್ರೀಶತೀರ್ಥ ಸ್ವಾಮೀಜಿ

ಮೈಸೂರು,ಜೂ.19(ಪಿಎಂ)– ದೈವ ಕೃಪೆ ಮತ್ತು ವಿಶ್ವಗುರು ಶ್ರೀ ವ್ಯಾಸರಾಜರ ಅನುಗ್ರಹದಿಂದ ಬಹು ಮಹತ್ವದ 'ಶ್ರೀಮನ್ ನ್ಯಾಯ ಸುಧಾ ಮಂಗಳ ಮಹೋತ್ಸವ' ಸಾಂಗವಾಗಿ ಸಂಪನ್ನಗೊಂಡಿದೆ. ಆ ಮೂಲಕ ಮೈಸೂರಿನಲ್ಲಿ ಹೊಸ ಅಧ್ಯಾಯ ಆರಂಭಕ್ಕೆ ಸಾಕ್ಷಿಯಾಗಿದೆ ಎಂದು ಸೋಸಲೆ ಶ್ರೀ ವ್ಯಾಸರಾಜರ ಮಹಾಸಂಸ್ಥಾನ ಮಠದ ಶ್ರೀ ವಿದ್ಯಾಶ್ರೀಶತೀರ್ಥ ಸ್ವಾಮೀಜಿ ಹೇಳಿದರು.

ಮೈಸೂರಿನ ಕೃಷ್ಣಮೂರ್ತಿಪುರಂನ ಶ್ರೀವ್ಯಾಸತೀರ್ಥ ವಿದ್ಯಾಪೀಠದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಶ್ರೀಮನ್ ನ್ಯಾಯ ಸುಧಾ ಮಂಗಳ ಮಹೋತ್ಸವದ ಅವಲೋಕನ ಮತ್ತು ಕೃತಜ್ಞತಾ ಸಮರ್ಪಣಾ ಸಭೆಯ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ಶ್ರೀ ಮಠದ ವತಿಯಿಂದ ಹಮ್ಮಿಕೊಂಡಿದ್ದ 9 ದಿನಗಳ ಶ್ರೀಮನ್ ನ್ಯಾಯ ಸುಧಾ ಮಂಗಳ ಮಹೋತ್ಸವಕ್ಕೆ ನಾಡಿನ 25ಕ್ಕೂ ಹೆಚ್ಚು ಮಠಾಧೀಪತಿಗಳು, 150ಕ್ಕೂ ಹೆಚ್ಚು ವಿದ್ವಾಂಸರು, ಪಂಡಿತರು ಮತ್ತು ಸಾಧಕರು ಸಾಕ್ಷಿಯಾದರು. ಅಲ್ಲದೆ, ವಿವಿಧ ಕ್ಷೇತ್ರದ ಗಣ್ಯರು ಆಗಮಿಸಿದ್ದರು. ಈ ಸಂದರ್ಭದಲ್ಲಿ ಕರ್ನಾಟಕ, ತಮಿಳುನಾಡು ಮತ್ತು ಆಂಧ್ರ ಪ್ರದೇಶದ ಸಾವಿರಾರು ಭಕ್ತರು ಸಂಗಮಿಸಿ, ಮೈಸೂರಿನಲ್ಲಿ ಹೊಸ ಇತಿಹಾಸವನ್ನೇ ನಿರ್ಮಿಸಿದರು ಎಂದು ಹರ್ಷ ವ್ಯಕ್ತಪಡಿಸಿದರು.

ನಮ್ಮ ವಿದ್ಯಾಪೀಠದ ನಾಲ್ವರು ಯುವಕರು ಸುಧಾ ವಿದ್ವಾಂಸರಾಗಿ ಮಾನ್ಯರಾದರು. ಈ ಎಲ್ಲಾ ಕಾರ್ಯಗಳು ಅತ್ಯಂತ ಸುಗಮ ಮತ್ತು ಸಾಂಗವಾಗಿ ಸಂಪನ್ನಗೊಂಡಿದ್ದರ ಹಿಂದೆ ಹಲವರ ಶ್ರಮ ಸಮರ್ಪಣೆಯಾಗಿದೆ. ಭಗವಂತನ ಕೃಪೆ ಮತ್ತು ನಮ್ಮ ಗುರುಗಳ ಆಶೀರ್ವಾದವೇ ಬಹುದೊಡ್ಡ ಶಕ್ತಿಯಾಗಿ ಇಲ್ಲಿ ಕೆಲಸ ಮಾಡಿಸಿದೆ ಎಂದು ಧನ್ಯತಾ ಪೂರ್ವಕವಾಗಿ ಸ್ಮರಿಸಿದರು.

ಸುಧಾ ಮಂಗಳ ಮಹೋತ್ಸವದ ಯಶಸ್ವಿಗಾಗಿ ನೂರಾರು ಜನರು ಹಗಲಿರುಳು ಶ್ರಮಿಸಿದ್ದಾರೆ. ಅವರ ಶ್ರಮದ ಹಿಂದೆ ಮಠದ ಬಗೆಗಿನ ಭಕ್ತಿ, ಗೌರವ ಮತ್ತು ಉನ್ನತ ಭಾವ ದೊಡ್ಡದಾಗಿ ಕೆಲಸ ನಿರ್ವಹಿಸಿದೆ. ಎಲ್ಲರ ಸಮರ್ಪಣಾ ಮನೋಭಾವವೇ ಈ ಮಹೋತ್ಸವ ಯಶಸ್ವಿಯಾಗಲು ಕಾರಣವಾಗಿದೆ. ಆ ಎಲ್ಲಾ ಕಾರ್ಯಕರ್ತರು ಮತ್ತು ಭಕ್ತರಲ್ಲಿ ಭಗವಂತ ನಿಂತು ಈ ಕಾರ್ಯಕ್ರಮವನ್ನು ಸುಗಮಗೊಳಿಸಿದ್ದಾನೆ. ಇಂತಹ ಸ್ವಯಂ ಸೇವಕರಿಗೆ ದೇವರು ಇನ್ನಷ್ಟು ಶಕ್ತಿ ಮತ್ತು ಭಕ್ತಿ ದಯಪಾಲಿಸಿ ಮುಂಬರುವ ದಿನಗಳಲ್ಲಿ ಇಂತಹ ನೂರಾರು ಧಾರ್ಮಿಕ ಚಟುವಟಿಕೆಗಳು ನಡೆಸಲು ಅನುಗ್ರಹಿಸಲಿ ಎಂದು ಆಶಿಸಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಶ್ರೀವ್ಯಾಸತೀರ್ಥ ವಿದ್ಯಾಪೀಠದ ಗೌರವ ಕಾರ್ಯದರ್ಶಿ ಡಿ.ಪಿ.ಮಧುಸೂಧನಚಾರ್ಯ, ಶ್ರೀಮನ್ ನ್ಯಾಯ ಸುಧಾ ಮಂಗಳ ಮಹೋತ್ಸವ ಮತ್ತು ಶ್ರೀ ವಿದ್ಯಾಶ್ರೀಶ ತೀರ್ಥ ಸ್ವಾಮೀಜಿ ಅವರ ಸಹಸ್ರ ಚಂದ್ರ ದರ್ಶನ ಶಾಂತಿ ಮಹೋತ್ಸವ ಅಂದುಕೊಂಡಿದಕಿಂತಲೂ ನೂರು ಪಟ್ಟು ಯಶಸ್ವಿಯಾಗಿ ನೆರವೇರಿದೆ. ಈ ಒಂದು ಮಹೋತ್ಸವದ ಯಶಸ್ಸಿಗೆ ಹಲವರ ಶ್ರಮ ಕಾರಣವಾಗಿದೆ. ಅವರೆಲ್ಲರಿಗೂ ಶ್ರೀಮಠ ಅತ್ಯಂತ ಅಭಾರಿಯಾಗಿದೆ. ಶ್ರೀ ವ್ಯಾಸರಾಜರ ಸಂಸ್ಥಾನ ಮುಂಬರುವ ದಿನಗಳಲ್ಲಿ ಇನ್ನಷ್ಟು ಚಟುವಟಿಕೆಗಳನ್ನು ಹಮ್ಮಿಕೊಳ್ಳಲು ಭಗವದ್ಭಕ್ತರು ಸಹಕಾರವನ್ನು ನೀಡಬೇಕು. ವಿದ್ಯಾಪೀಠದ ಪ್ರಗತಿಗೆ ಬೆಂಬಲ ನೀಡಬೇಕು ಎಂದು ವಿನಂತಿಸಿದರು.

ಬೆಂಗಳೂರಿನ ಪೇಜಾವರ ವಿದ್ಯಾಪೀಠದ ಪ್ರಾಧ್ಯಾಪಕ ಮತ್ತು ಶ್ರೀಮಠದ ತತ್ವ ಚಂದ್ರಿಕಾ ಧಾರ್ಮಿಕ ಮಾಸ ಪತ್ರಿಕೆ ಸಂಪಾದಕರೂ ಆದ ವಿದ್ವಾನ್ ಮಾತರಿಶ್ವಾಚಾರ್ಯ ಮಾತನಾಡಿ, ಗುರುಗಳ ಅನುಗ್ರಹ ಮತ್ತು ಕಾರುಣ್ಯವೇ ಶ್ರೀಮನ್ ನ್ಯಾಯ ಸುಧಾ ಮಂಗಳ ಮಹೋತ್ಸವದ ಯಶಸ್ಸಿಗೆ ಕಾರಣ ಎಂದು ಧನ್ಯತೆ ಸಮರ್ಪಿಸಿದರು.

ಇದೇ ಸಂದರ್ಭದಲ್ಲಿ ಮಹೋತ್ಸವದ ಯಶಸ್ವಿಗೆ ಕಾರಣರಾದ ಸ್ವಯಂ ಸೇವಕರು, ಕಾರ್ಯಕರ್ತರು ಮತ್ತು ವಿವಿಧ ಕ್ಷೇತ್ರಗಳ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳನ್ನು ಸನ್ಮಾನಿಸಲಾಯಿತು. ವಿಧಾನ ಪರಿಷತ್ತಿನ ಮಾಜಿ ಸದಸ್ಯ ಗೋ.ಮಧುಸೂದನ್, ಶ್ರೀ ವ್ಯಾಸತೀರ್ಥ ವಿದ್ಯಾಪೀಠದ ಪ್ರಾಚಾರ್ಯ ಡಾ.ಶ್ರೀನಿಧಿ ಪ್ಯಾಟಿ, ಗುರುಗಳ ಆಪ್ತ ಕಾರ್ಯದರ್ಶಿ ಅಭಿಜಿತ್ ಶ್ರೀಧರ ರಾವ್, ಹಿರಿಯ ಉದ್ಯಮಿಗಳಾದ ನಾಗೇಶ್, ಪವನ್ ಕಟ್ಟಿ, ಸಾಂಸ್ಕೃತಿಕ ಕಾರ್ಯಕ್ರಮಗಳ ಆಯೋಜಕ ರವಿ ಕುಮಾರ್, ಜನ ಸೇವಾ ಕೇಂದ್ರದ ಮುಖ್ಯಸ್ಥ ಮಧುಸೂದನ ಸೇರಿದಂತೆ ಮಠದ ಸಿಬ್ಬಂದಿ ಮತ್ತು ವಿದ್ಯಾಪೀಠದ ಉಪನ್ಯಾಸಕರು ಹಾಜರಿದ್ದರು.



ಮೈಸೂರಿನ ಶ್ರೀವ್ಯಾಸತೀರ್ಥ ವಿದ್ಯಾಪೀಠದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಶ್ರೀಮನ್ ನ್ಯಾಯ ಸುಧಾ ಮಂಗಳ ಮಹೋತ್ಸವದ ಅವಲೋಕನ ಮತ್ತು ಕೃತಜ್ಞತಾ ಸಮರ್ಪಣಾ ಸಭೆಯಲ್ಲಿ ಸೋಸಲೆ ವ್ಯಾಸರಾಜರ ಮಠದ ಶ್ರೀ ವಿದ್ಯಾಶ್ರೀಶತೀರ್ಥ ಸ್ವಾಮೀಜಿ ಮಾತನಾಡಿದರು.

ಸೋಸಲೆಯಲ್ಲಿ 8ನೇ ಚಾತುರ್ಮಾಸ್ಯ

ಮೈಸೂರು ಸಮೀಪದ ಸೋಸಲೆ ಗ್ರಾಮದಲ್ಲಿ 8ನೇ ಚಾತುರ್ಮಾಸ್ಯ ವ್ರತ ಸಂಕಲ್ಪ ಕೈಗೊಳ್ಳಲು ನಿರ್ಧರಿಸಿರುವುದಾಗಿ ಶ್ರೀವ್ಯಾಸರಾಜರ ಮಠದ ಪೀಠಾಧಿಪತಿ ಶ್ರೀ ವಿದ್ಯಾಶ್ರೀಶತೀರ್ಥ ಸ್ವಾಮೀಜಿ ಹೇಳಿದರು.

ಸೋಸಲೆ ನಮ್ಮ ಮಠದ ಪರಂಪರೆಯಲ್ಲಿ ಮಹತ್ವದ ಕ್ಷೇತ್ರವಾಗಿದೆ. ಚಾತುರ್ಮಾಸದ ಅವಧಿಯಲ್ಲಿ ಎಲ್ಲಾ ಭಕ್ತರು ಕ್ಷೇತ್ರಕ್ಕೆ ಆಗಮಿಸಿ ಭಗವಂತನ ಸೇವೆಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಳ್ಳಬೇಕು. ಆಗಸ್ಟ್ 2ರಿಂದ ಸೆಪ್ಟೆಂಬರ್ 18ರವರೆಗೆ ಚಾತುರ್ಮಾಸ್ಯ ವ್ರತಧಾರಣೆಯನ್ನು ತಾವು ಮಾಡುವುದಾಗಿ ತಿಳಿಸಿದ ಅವರು, ಸೋಸಲೆ ಕ್ಷೇತ್ರದಲ್ಲಿ ಎಲ್ಲಾ ವ್ರತ ನಿಯಮಗಳನ್ನು ಆಚರಿಸಿಕೊಂಡು, ಹಬ್ಬ ಹರಿದಿನಗಳನ್ನು ನಡೆಸಲು ಯೋಜನೆ ರೂಪಿಸಲಾಗಿದೆ ಎಂದು ನುಡಿದರು.

ನಕ್ಕರೆ ಅದೇ ಸ್ವರ್ಗ

ಹುಡುಗ : ಸಿಸ್ಟರ್, ನಂಗೆ ಒಂದು ಬಾಟಲಿ ಬ್ಲಡ್ ಬೇಕು.
ನರ್ಸ್ : ಬ್ಲಡ್ ಗ್ರೂಪ್ ಹೇಳಿ
ಹುಡುಗ : ಯಾವ್ದಾದ್ರು ಆಗುತ್ತೆ
ನರ್ಸ್ : ಅದು ಹೇಗೆ ಆಗುತ್ತೆ?
ಹುಡುಗ : ಅದು ನನ್ನ ಗರ್ಲ್ ಫ್ರೆಂಡ್‌ಗೆ ಲವ್ ಲೆಟರ್ ಬರೆಯೋಕೆ.

ಮೈಸೂರು ಮಿತ್ರ

ಗುರುವಾರ, 20 ಜೂನ್ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ..........

ಗೊರಕೆ ಹೊಡೆಯುವ ಸಾಧಕನಿಗೆ ಗರಿಕೆ ಹುಲ್ಲು ಬುದ್ಧಿ ಕಲಿಸುವುದು. ಸೋತು ಸುಣ್ಣವಾದ ಛಲಗಾರನಿಗೆ ಸೋಲೇ ಮತ್ತಷ್ಟು ಬಲ ಹೆಚ್ಚಿಸುವುದು– ನುಡಿಮುತ್ತು

ವೇದ ಸುಳ್ಳಾದರೂ / ಗಾದೆ ಸುಳ್ಳಾಗದು { ತಿನ್ನಲು, ಉಣ್ಣಲು ಇದ್ದರೆ ಯಾವತ್ತೂ ನೆಂಟರು.

ನಿಮ್ಮ ಪತ್ರಗಳು

■ ಅಧಿಕ ಲಾಭದ ಆಸೆಗೆ ಬಿದ್ದು ಹಣ ಕಳೆದುಕೊಳ್ಳುವ ಮುನ್ನ ಪರಿಶೀಲಿಸಿ

ಮಾನ್ಯರೆ,

ಪ್ರತಿನಿತ್ಯ ದಿನಪತ್ರಿಕೆಗಳಲ್ಲಿ ಅತಿ ಆಸೆಗೆ ಬಿದ್ದು ಆನ್‌ಲೈನ್ ವಂಚಕರಿಂದ ಮೋಸ ಹೋಗಿ ದೊಡ್ಡ ಮೊತ್ತದ ಹಣ ಕಳೆದುಕೊಳ್ಳುತ್ತಿರುವವರ ಬಗ್ಗೆ ವರದಿಯಾಗುತ್ತಲೇ ಇದೆ. ಮೋಸ ಹೋದವರಲ್ಲಿ ವಿದ್ಯಾವಂತರೂ ಇದ್ದಾರೆ ಎನ್ನುವುದು ವಿಷಾದನೀಯ. ಈ ತರಹದ ಮೋಸ ಹೋಗುವವರಿಗೆ ಒಂದಷ್ಟು ಸಲಹೆಗಳು.

1. ಅಪರಿಚಿತರು ಕಳುಹಿಸಿದ ಯಾವುದೇ ಆಮಿಷಗಳಿಗೆ ಬಲಿಯಾಗದಿರಿ. ಅವರು ಕಳಿಸಿದ ಲಿಂಕ್ ಒತ್ತದಿರಿ.

2. ಅಪರಿಚಿತರು ಫೋನ್ ಮಾಡಿದರೆ ಪ್ರತಿಕ್ರಿಯಿಸಬೇಡಿ. ಅನುಮಾನ ಬಂದರೆ ಪೊಲೀಸರಿಗೆ ಮಾಹಿತಿ ನೀಡಿ.

3.ನಿಮಗೆ ಯಾರೂ ಮಾಯಮಾಡಿ ಕಡಿಮೆ ಅವಧಿಯಲ್ಲಿ ಹಣ ದ್ವಿಗುಣ ಮಾಡಿಕೊಡಲು ಸಾಧ್ಯವಿಲ್ಲ. ಈ ತರಹದ ಆಸೆ ತೋರಿಸುವವರೆಲ್ಲಾ ವಂಚಕರು ಎಂಬ ಸರಳ ಸತ್ಯ ಅರಿಯಿರಿ.

4. ಮ್ಯೂಚುಯಲ್ ಫಂಡ್ ಮತ್ತು ಷೇರು ವ್ಯವಹಾರ ನಡೆಸುವ ಮುನ್ನ ಸೆಬಿ (SEBI)ಯಿಂದ ಮಾನ್ಯತೆ ಪಡೆದ ಸಂಸ್ಥೆಗಳೇ ಅಂತ ಪರಿಶೀಲಿಸಿ. ಡೆಪಾಸಿಟ್ ಅನ್ನು RBI ನಿಂದ ಮಾನ್ಯತೆ ಪಡೆದ ಬ್ಯಾಂಕುಗಳಲ್ಲಿ ಮಾಡಿರಿ. ಈಗ ಬಹುತೇಕ ಬ್ಯಾಂಕುಗಳು 'ಹಣಕಾಸು ಸೂಪರ್ ಮಾರುಕಟ್ಟೆ'ಯಾಗಿ ಕಾರ್ಯ ನಿರ್ವಹಿಸುತ್ತಿವೆ. ನಿಮ್ಮ ಖಾತೆ ಇರುವ ಬ್ಯಾಂಕಿಗೆ ಅಥವಾ ಸಮೀಪವಿರುವ ಬ್ಯಾಂಕಿಗೆ ಹೋಗಿ ಮಾಹಿತಿ ಪಡೆದು ಬ್ಯಾಂಕಿನ ಮೂಲಕವೇ ನೀವು ಮ್ಯೂಚುವಲ್ ಫಂಡ್, ಜೀವವಿಮೆ, ಷೇರುಗಳ ಮೇಲೆ ಹೂಡಿಕೆ ಎಲ್ಲವನ್ನೂ ಅಲ್ಲೇ ಮಾಡಬಹುದು. ಇದು ಬಹಳ ಸುರಕ್ಷಿತ. ಕಷ್ಟ ಪಟ್ಟು ದುಡಿದ, ಉಳಿಸಿದ ಹಣವನ್ನು ವಿವೇಚನೆಯಿಂದ ಸರಿಯಾದ ಕಡೆ ಹೂಡಿಕೆ ಮಾಡಿ. ಆಮಿಷಕ್ಕೆ ಬಲಿಯಾಗಿ ಕಳೆದುಕೊಳ್ಳದಿರಿ.

–ರಾಘವೇಂದ್ರ ಜೋಯಿಸ್, ಮೈಸೂರು

■ ಒಬ್ಬ ವ್ಯಕ್ತಿ ಎರಡು ಕ್ಷೇತ್ರಗಳಿಗೆ ಸ್ಪರ್ಧೆ ಮಾಡೋ ನಿಯಮಕ್ಕೆ ತಿದ್ದುಪಡಿ ತರಬಾರದೇ?

ಮಾನ್ಯರೆ,

ಇತ್ತೀಚೆಗೆ ತಾನೇ ಲೋಕಸಭೆಗೆ ಚುನಾವಣೆ ನಡೆದು ಅಭ್ಯರ್ಥಿಗಳು, ಜನರು, ಪಕ್ಷದ ಮುಖಂಡರು, ಚುನಾವಣಾ ಆಯೋಗ, ಚುನಾವಣಾ ಕಾರ್ಯಕ್ಕೆ ನಿಯೋಜಿಸಿದ್ದ ವಿವಿಧ ಇಲಾಖೆಗಳ ಸಿಬ್ಬಂದಿ, ಚುನಾವಣೆ ಮುಗಿಸಿ ನಿಟ್ಟುಸಿರು ಬಿಟ್ಟು ತಮ್ಮ ದೈನಂದಿನ ಚಟುವಟಿಕೆಯಲ್ಲಿ ತೊಡಗಿಸಿಕೊಳ್ಳುವಷ್ಟರಲ್ಲಿ ಕೆಲವು ಕ್ಷೇತ್ರಗಳಲ್ಲಿ ಉಪಚುನಾವಣೆ ನಡೆಸುವ ಅನಿವಾರ್ಯತೆ ಎದುರಾಗಿದೆ. ಅದಕ್ಕೆ ಮೂಲಕಾರಣ ಒಬ್ಬ ವ್ಯಕ್ತಿ ಎರಡು ಕ್ಷೇತ್ರಗಳಲ್ಲಿ ಚುನಾವಣೆಗೆ ಸ್ಪರ್ಧೆ ಮಾಡಿ ಎರಡರಲ್ಲೂ ಗೆಲುವು ಸಾಧಿಸಿ ಒಂದು ಕ್ಷೇತ್ರ ಉಳಿಸಿಕೊಳ್ಳಲು ತೀರ್ಮಾನ ಮಾಡಿ ಮತ್ತೊಂದಕ್ಕೆ ರಾಜೀನಾಮೆ ನೀಡುವರು. ಇದು ಅವರನ್ನು ಗೌರವಿಸಿ, ಬೆಂಬಲಿಸಿ ಗೆಲ್ಲಿಸಿದ್ದ ಆ ಕ್ಷೇತ್ರದ ಜನರ ಭಾವನೆಗೆ, ಸಮಯಕ್ಕೆ, ಅಲ್ಲಿ ಶ್ರಮಿಸಿದ್ದ ಎಲ್ಲ ಸಿಬ್ಬಂದಿಗಳ, ಕಾರ್ಯಕರ್ತರ, ಶ್ರಮಕ್ಕೆ ಮಾಡಿದ ಅಪಮಾನವೇ ಸರಿ.

ಇನ್ನು ಈಗಾಗಲೇ ಒಂದು ಸ್ಥಾನದಲ್ಲಿದ್ದು ಅಂದರೆ ವಿಧಾನಸಭೆ, ವಿಧಾನ ಪರಿಷತ್ ಸದಸ್ಯರು ಚುನಾವಣೆಗೆ ನಿಂತು ಜಯಿಸಿ ಈಗ ಲೋಕಸಭೆಗೆ ಹೋಗಲು ತಮ್ಮ ಸ್ಥಾನಗಳಿಗೆ ರಾಜೀನಾಮೆ ನೀಡಿ ಮತ್ತೆ ಚುನಾವಣೆ ನಡೆಯುವಂತೆ ಮಾಡುವುದು ಸಹ ಸಾರ್ವಜನಿಕರ ಹಣವನ್ನು ಅನವಶ್ಯಕವಾಗಿ ಪೋಲು ಮಾಡಿದಂತೆ ಆಗುತ್ತದೆ. ಅದಕ್ಕೆ ನಿಯೋಜಿಸುವ ಸಿಬ್ಬಂದಿಗಳ ಕೆಲಸ ಕಾರ್ಯಗಳು ಸ್ಥಗಿತಗೊಳ್ಳುತ್ತದೆ. ನೀತಿ ಸಂಹಿತೆ ಹೆಸರಿನಲ್ಲಿ ಅಭಿವೃದ್ಧಿ ಕಾರ್ಯಗಳು ಕುಂಠಿತಗೊಳ್ಳುತ್ತವೆ. ಆದ್ದರಿಂದ ಈ ವಿಷಯವನ್ನು ಜನಮತದ ಅಭಿಪ್ರಾಯ ಸಂಗ್ರಹ ಮಾಡಿ ಅಥವಾ ಸುಪ್ರೀಮ್ ಕೋರ್ಟ್ ಮಧ್ಯೆ ಪ್ರವೇಶ ಮಾಡಿ ಸಂವಿಧಾನದ ಪರಿಚ್ಛೇದ Section 33 (7) of R. P. Act, 1951ಗೆ ತಿದ್ದುಪಡಿ ಮಾಡಿದಾಗ ಸಾರ್ವಜನಿಕರ ಸಮಯ, ಹಣ, ಶ್ರಮ ಎಲ್ಲಕ್ಕೂ ಗೌರವ ಸಿಗುತ್ತದೆ. ಉಪ ಚುನಾವಣೆ ಹೆಸರಿನಲ್ಲಿ ನಡೆಯುವ ಅಕ್ರಮ ತಪ್ಪುತ್ತದೆ. ಇಲ್ಲವಾದಲ್ಲಿ ಗೆದ್ದಿರುವ ಕ್ಷೇತ್ರಕ್ಕೆ ರಾಜೀನಾಮೆ ನೀಡಿದಾಗ ಸಮೀಪದ ಪರಾಜಿತ ಪ್ರತಿಸ್ಪರ್ಧಿಯನ್ನು ಜಯಶಾಲಿ ಎಂದು ಘೋಷಣೆ ಮಾಡಿದರೆ ರಾಜಕಾರಣಿಗಳು ಬುದ್ಧಿ ಕಲಿಯಬಹುದು. –ನಾಗೇಂದ್ರ ಕಿಲಗೆರೆ, ಮೈಸೂರು

■ ರೈಲ್ವೆ ಸಿಗ್ನಲ್ ವ್ಯವಸ್ಥೆ ಬಗ್ಗೆ ಹೆಚ್ಚು ಗಮನ ಹರಿಸಲಿ

ಮಾನ್ಯರೆ,

ಪಶ್ಚಿಮ ಬಂಗಾಳದ ಡಾರ್ಲಿಂಗ್ ಜಿಲ್ಲೆಯಲ್ಲಿ ಸೋಮವಾರ ಬೆಳಗ್ಗೆ ಹಳಿ ಮೇಲೆ ನಿಂತಿದ್ದ ಕಾಂಜನಜುಂಗ ಎಕ್ಸ್‌ಪ್ರೆಸ್ ರೈಲಿಗೆ ಗೂಡ್ಸ್ ರೈಲು ಒಂದು ಡಿಕ್ಕಿ ಹೊಡೆದು ಸಂಭವಿಸಿದ ಭೀಕರ ಅಪಘಾತದಲ್ಲಿ ಕನಿಷ್ಠ 9 ಜನರು ಮೃತಪಟ್ಟಿ 60 ಮಂದಿ ಗಾಯಗೊಂಡಿದ್ದಾರೆ. ಸಿಗ್ನಲ್ ದೋಷ ಅವಘಡಕ್ಕೆ ಕಾರಣ ಎಂದು ಹೇಳಲಾಗಿದೆ. ಇಂತಹ ಆಧುನಿಕರಣದ ವ್ಯವಸ್ಥೆಯಲ್ಲೂ ಸಿಗ್ನಲ್ ದೋಷಗಳು ಎಂದರೆ ಸಂಬಂಧಪಟ್ಟವರ ಮೇಲೆ ಕ್ರಮ ಕೈಗೊಳ್ಳಲಿ.

ಕೇಂದ್ರ ರೈಲ್ವೆ ಸಚಿವರು ಮೃತರ ಕುಟುಂಬಗಳಿಗೆ ತಲಾ 10 ಲಕ್ಷ ರೂ.ಗಳು ಹಾಗೂ ಗಾಯಾಳುಗಳಿಗೆ ತಲಾ 5 ಲಕ್ಷ ರೂ ಪರಿಹಾರ ಒದಗಿಸಲು ಹೇಳಿದ್ದಾರೆ. ಏನೇ ಆಗಲಿ ಸತ್ತು ಹೋದ ಜೀವಗಳು ಮತ್ತೆ ಬರುವುದೇ? ದೇಶದಲ್ಲಿ ಆಗಾಗ ಈ ರೀತಿ ರೈಲು ದುರಂತಗಳು ನಡೆಯುತ್ತಲೇ ಇವೆ. ಸಿಗ್ನಲ್‌ಗಳ ಸಮಸ್ಯೆಗಳಿಂದಲೇ ಹಲವು ದುರಂತಗಳು ಸಂಭವಿಸಿವೆ. ರೈಲು ಹಳಿಗಳ ಸುರಕ್ಷತೆಯ ಬಗ್ಗೆ ಹೆಚ್ಚು ಗಮನಹರಿಸಲಿ. ಸುರಕ್ಷತಾ ವ್ಯವಸ್ಥೆಯನ್ನು ರೈಲ್ವೆ ಇಲಾಖೆ ಮತ್ತಷ್ಟು ಹೆಚ್ಚಿಸಲಿ.

–ಪಿ.ಸಿ.ಕಂಗಾಣಿಸೋಮು, ಕ್ಯಾತಮಾರನಹಳ್ಳಿ, ಮೈಸೂರು




ನಿವೇದಿತ ಹೆಚ್.
ಇಂಗ್ಲಿಷ್ ಉಪನ್ಯಾಸಕಿ
ಯುವರಾಜ ಕಾಲೇಜು
ಮೈಸೂರು.

ಮಂಥನ

ಮಹಿಳಾ ಸಬಲೀಕರಣಕ್ಕಾಗಿ ಯೋಗ

ಯೋಗೇನ ಚಿತ್ತಸ್ಯ ಪದೇನ ವಾಚಾಂ ।
ಮಲಂ ಶರೀರಸ್ಯ ಚ ವೈದ್ಯಕೇನ್ ॥
ಯೋತ್ರಪಾಕರೋತ್ತಮಂ ಪ್ರವರಂ ಮುನೀನಾಂ ।
ಪತಂಜಲಿಂ ಪ್ರಾಂಜಲಿರಾನತೋಽಯಸ್ಮಿ ॥

ಇಡೀ ವಿಶ್ವಕ್ಕೆ ಭಾರತ ನೀಡಿರುವ ಕೊಡುಗೆ ಅಪಾರ. ಕಲೆ, ಸಂಸ್ಕೃತಿ, ಸಂಗೀತ, ನೃತ್ಯ, ವಿಜ್ಞಾನ, ಖಗೋಳ ಶಾಸ್ತ್ರ , ವಾಸ್ತುಶಿಲ್ಪ ಹೀಗೆ ಭಾರತ ಎಲ್ಲ ಜ್ಞಾನ ಶಾಖೆಗಳಿಗೂ ತನ್ನ ಶ್ರೇಷ್ಠ ಕೊಡುಗೆ ನೀಡಿದೆ. ಅವುಗಳಲ್ಲಿ ಅತೀ ಅಮೂಲ್ಯವಾದದ್ದು ಬಹುಶಃ 'ಯೋಗ'. ಪತಂಜಲಿ ಮುನಿ ನೀಡಿದ ಈ ಅದ್ಭುತ ವಿಜ್ಞಾನ, ಆಬಾಲ ವೃದ್ಧರಾದಿಯಾಗಿ ಪ್ರತಿಯೊಬ್ಬರೂ ರೂಢಿಸಿ ಕೊಳ್ಳಬಹುದಾದ 'ಅಷ್ಟಾಂಗ ಯೋಗ' ಇಂದು ವಿಶ್ವವ್ಯಾಪಿ ಯಾಗಿದೆ. ಭಾರತೀಯರಾದ ನಮ್ಮೆಲ್ಲರಿಗೂ ಹೆಮ್ಮೆಯ ವಿಷಯ.



ಯೋಗಾಭ್ಯಾಸದಿಂದ ದೇಹ ಮನಸುಗಳೆರಡೂ ಉಲ್ಲಾಸಿತವಾಗುತ್ತವೆ ರೋಗಮುಕ್ತವಾಗಿ ಸದೃಢಗೊಳ್ಳುತ್ತವೆ. ಈಗಾಗಲೇ ಯೋಗಾಭ್ಯಾಸದಲ್ಲಿ ತೊಡಗಿರುವವರು ಚೆನ್ನಾಗಿ ಬಲ್ಲರು. ವಸುಧೈವ ಕುಟುಂಬಕಂ ಎನ್ನುವ ಸದ್ಭಾವನೆ ನಮ್ಮದು. ಹಾಗಿದ್ದಾಗ, ಬಹುಪಯೋಗಿ ಯೋಗಾಭ್ಯಾಸದ ಲಾಭವನ್ನು ಇಡೀ ವಿಶ್ವಕ್ಕೆ ಪ್ರಚುರಪಡಿಸಬೇಕು ಎಂಬ ಆಶಯದಿಂದ ವಿಶ್ವ ಯೋಗ ದಿನವನ್ನು ಆಚರಿಸುವ ಹೊಸ ಸಂಪ್ರದಾಯಕ್ಕೆ ನಾಂದಿ ಹಾಡಿದವರು ನಮ್ಮ ಪ್ರಧಾನಿ ಮೋದಿ. ವಿಶ್ವಸಂಸ್ಥೆಯಲ್ಲಿ ಯೋಗ ದಿನಾಚರಣೆಯ ಪ್ರಸ್ತಾಪವನ್ನು ಎಲ್ಲ ಸದಸ್ಯರ ಮುಂದಿಟ್ಟಾಗ ದಾಖಲೆಯ 177 ದೇಶಗಳ ಬೆಂಬಲ ದೊರೆಯಿತು. ವಿಶ್ವಸಂಸ್ಥೆ ಭಾರತದ ಈ ಯೋಜನೆಗೆ ಒಪ್ಪಿ ಸಹಕರಿಸಿದ್ದು ಈಗ ಇತಿಹಾಸ.

'ವಿಶ್ವ ಶಾಂತಿ ಹಾಗೂ ಸಾಮರಸ್ಯಕ್ಕಾಗಿ ಯೋಗ' ಆಶಯದೊಂದಿಗೆ ಆಚರಿಸಲ್ಪಟ್ಟ ಮೊದಲ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯಲ್ಲಿ ಭಾಗವಹಿಸಿದ್ದ ರಾಷ್ಟ್ರಗಳ ಸಂಖ್ಯೆ ನೂರಾರು. ಅಂದು ಕರ್ತವ್ಯ ಪಥದಲ್ಲಿ ನಡೆದ ಮುಖ್ಯ ಸಮಾರಂಭದಲ್ಲಿ ಪ್ರಧಾನ ಮಂತ್ರಿ ಮೋದಿ ಅವರೊಂದಿಗೆ 35 ಸಾವಿರಕ್ಕೂ ಹೆಚ್ಚು ಮಂದಿ ಭಾಗವಹಿಸಿದ್ದರು. 21 ಆಸನಗಳನ್ನು ಅಂದು ಅಲ್ಲಿ ಎಲ್ಲರೂ ಅಭ್ಯಸಿಸಿದರು. ಪ್ರಪಂಚದ ಬಹು ದೊಡ್ಡ ಯೋಗ ತರಗತಿ ಅಲ್ಲಿ ಅಂದು ನಡೆದದ್ದು ಇತಿಹಾಸದಲ್ಲಿ ದಾಖಲಾಯಿತು. ನಂತರದ ವರ್ಷಗಳಲ್ಲಿ ಭಾರತದ ಅನೇಕ ನಗರಗಳಲ್ಲಿ ನಡೆಯುವ ಯೋಗ ದಿನಾಚರಣೆಯಲ್ಲಿ, ಯಾವುದಾದರೂ ಒಂದು ಕಡೆ ಭಾಗವಹಿಸುವ ಸಂಪ್ರದಾಯವನ್ನು ನಮ್ಮ ಪ್ರಧಾನ ಮಂತ್ರಿಗಳು ಪಾಲಿಸಿಕೊಂಡು ಬಂದರು. ಕಳೆದ ಬಾರಿ ಯೋಗ ನಗರಿ ಎಂದೇ ಖ್ಯಾತವಾಗಿರುವ ನಮ್ಮ ಮೈಸೂರಿನ ಅರಮನೆಯ ಆವರಣದಲ್ಲಿ ನಡೆದ ಪ್ರಧಾನ ಕಾರ್ಯಕ್ರಮದಲ್ಲಿ ಪ್ರಧಾನಿಗಳು ಭಾಗವಹಿಸಿದ ನೆನಪು ಇನ್ನೂ ಹಸಿರಾಗಿದೆ.

2024ರ ಜೂನ್ 21ರ ಯೋಗ ಸಂಭ್ರಮದಲ್ಲಿ ನೂರಾರು ದೇಶಗಳು ಭಾಗವಹಿಸುವ ನಿರೀಕ್ಷೆಯಿದೆ. ಜೂನ್ 21ರಂದೇ ಯೋಗ ದಿನ ಆಚರಿಸುವ ಹಿಂದಿನ ಉದ್ದೇಶ ಬಹುಶಃ ನಿಮಗೆಲ್ಲರಿಗೂ ತಿಳಿದೇ ಇರುತ್ತದೆ. ಅಂದು ಭೂಮಿಯ ಉತ್ತರ ಗೋಲದಲ್ಲಿ ದಿನದ ಅವಧಿ ಹೆಚ್ಚಾಗಿರುತ್ತದೆ. ಆಗಿದ್ದು ಇಡೀ ವರ್ಷದಲ್ಲಿ ಈ ದಿನದ ಸಮಯ ಹೆಚ್ಚಿರುತ್ತದೆ. ಅಲ್ಲದೇ ದಕ್ಷಿಣಾಯನವೂ ಅಂದು ಪ್ರಾರಂಭವಾಗುವುದರಿಂದ ಅದೇ ದಿನವನ್ನು ಆರಿಸಲಾಗಿದೆ. ಮತ್ತೊಂದು ನಂಬಿಕೆ ಎಂದರೆ, ಆದಿಯೋಗಿ ಎನಿಸಿಕೊಂಡ ಶಿವ ಅಂದೇ ಯೋಗದ ಬಗೆಗಿನ ಜ್ಞಾನವನ್ನು ಎಲ್ಲರಿಗೂ ನೀಡಲು ಪ್ರಾರಂಭಿಸಿದ ಎಂಬುದು.

ಪ್ರತಿ ಶಾಲೆ, ಕಾಲೇಜು, ಆಫೀಸು, ಖಾಸಗಿ ಸಂಸ್ಥೆಗಳು, ಯೋಗ ತರಬೇತಿ ಸಂಸ್ಥೆಗಳು, ಸ್ವಯಂಪ್ರೇರಿತರಾಗಿ ಯೋಗ ದಿನಾಚರಣೆಯಲ್ಲಿ ಉತ್ಸಾಹದಿಂದ ಭಾಗವಹಿಸುವುದು ಯೋಗವನ್ನು ಎಲ್ಲರೂ ಪ್ರೀತಿಯಿಂದ ಜೀವನ ವಿಧಾನವನ್ನಾಗಿ ಅಳವಡಿಸಿಕೊಂಡಿರುವುದಕ್ಕೆ ಸಾಕ್ಷಿ. ನಾಳೆಯೂ ಕೂಡ ಅರಮನೆ ಆವರಣದಲ್ಲಿ ನಡೆಯುವ ಪ್ರಧಾನ ಕಾರ್ಯಕ್ರಮದಲ್ಲಿ ಭಾಗವಹಿಸಲು ಎಲ್ಲರೂ ಉತ್ಸುಕರಾಗಿರುವುದು ನಿಜವೇ.

ನಾಳಿನ ಕಾರ್ಯಕ್ರಮಕ್ಕೆ ಕೂಡ 28 ಆಸನಗಳ ಯೋಗಾಭ್ಯಾಸವನ್ನು ರೂಪಿಸಿ ನೀಡಲಾಗಿದೆ. ಪ್ರತಿವರ್ಷ ಯೋಗ ದಿನಾಚರಣೆಗೆ ವಿಶ್ವಸಂಸ್ಥೆಯೇ ಒಂದು ಘೋಷವಾಕ್ಯವನ್ನು ನೀಡುತ್ತದೆ. ಈ ಬಾರಿ, **'ಯೋಗ ಮತ್ತು ಮಹಿಳಾ ಸಬಲೀಕರಣ'**. ಎಲ್ಲರ ಆರೋಗ್ಯ ವರ್ಧನೆಗೂ ಯೋಗ ಅತ್ಯಂತ ಪೂರಕವಾದ ವಿಧಾನ. ಆದರೆ ಮಹಿಳೆಯರಿಗೆ ಉತ್ತಮ ಸಶಕ್ತ ದೇಹ ಮನಸುಗಳ ಅಗತ್ಯ ಅತೀ ಹೆಚ್ಚು ಎಂದರೆ ತಪ್ಪಾಗಲಾರದು. ದೈವದತ್ತವಾಗಿ ಸ್ತ್ರೀ ಅತ್ಯಂತ ಬಲಾಢ್ಯಳೇ ಸರಿ. ಆದ್ದರಿಂದಲೇ ಪ್ರಕೃತಿ ಅವಳಿಗೆ ಹೆಚ್ಚಿನ ಜವಾಬ್ದಾರಿ ನೀಡಿದೆ, ದೈಹಿಕ ಹಾಗೂ ಮಾನಸಿಕವಾಗಿ. ಮಾತೃತ್ವದ ಅತ್ಯಮೂಲ್ಯ ವರವನ್ನು ಪಡೆದಿರುವ ಸ್ತ್ರೀ, ಭ್ರೂಣವೊಂದು ಗರ್ಭದಲ್ಲಿ ಅಂಕುರಿಸಿದಾಗಿನಿಂದ, ಅದು ಶಿಶುವಾಗಿ ಭೂಮಿಗೆ ಬಂದು, ಎಳೆ ಬೊಮ್ಮಟೆಯಿಂದ ಕೈಮಗುವಾಗಿ, ನಂತರ ಅಂಬೆಗಾಲಿಕ್ಕಿ, ನಡೆಯುವ, ಓಡುವ ಮನುಷ್ಯನಾಗಿ ಸ್ವತಂತ್ರನಾಗುವವರೆಗೂ ತಾಯಿಗೆ ಬೇಕಾಗುವ ದೃಢತೆ ಅಸದೃಶ. ಮಗುವಿನ ಬೆಳವಣಿಗೆಯ ಆ ಎಲ್ಲ ಹಂತಗಳಲ್ಲೂ ಆಕೆಗೆ ವಿಶ್ರಾಂತಿ ಎಂಬುದಿರುವುದಿಲ್ಲ. ಪ್ರಕೃತಿ ದಯಪಾಲಿಸಿರುವ ಈ ಬೃಹತ್ ಜವಾಬ್ದಾರಿ ಬೇಡುವ ವಿರಾಟ್ ಶಕ್ತಿಯ ಪ್ರಮಾಣ ಒಂದೆಡೆಯಾದರೆ, ಹೆಣ್ಣಾಗಿ ಹುಟ್ಟಿದ್ದಕ್ಕೆ ಸಮಾಜ ಆಕೆಗೆ ನಿಗದಿ ಮಾಡಿರುವ ಸಹಸ್ರ ಜವಾಬ್ದಾರಿಗಳ ಮೂಟೆ ಒಂದೆಡೆ! ಅದರಲ್ಲೂ ಈ ಆಧುನಿಕ ಯುಗದಲ್ಲಿ ಮನೆಯ ಒಳಗೆ, ಹೊರಗೆ ದುಡಿಯುವ ಅನಿವಾರ್ಯತೆ ಅಥವಾ ಅದಮ್ಯ



ಸೂರ್ಯ ನಮಸ್ಕಾರ

ಬಯಕೆ ಹೆಣ್ಣಿನದು. ತನ್ನ ಅಸ್ಮಿತೆಯನ್ನು ನಿರೂಪಿಸಲೇಬೇಕಾದ ಅಗತ್ಯವೂ ಇದೆ. ಇವಕ್ಕೆಲ್ಲಾ ಅಪರಿಮಿತ ದೈಹಿಕ ದಾರ್ಢ್ಯಬೇಕು. ಈ ಎಲ್ಲಾ ಸಾಧನೆಯ ಹಾದಿಯಲ್ಲಿ ಮೈದೋರುವ ಅಸಂಖ್ಯ ಸವಾಲು ಗಳನ್ನು ಎದುರಿಸಲು ದೈಹಿಕ ಶಕ್ತಿಯ ಜೊತೆ ಮಾನಸಿಕ ಸ್ಥೈರ್ಯ ಅತ್ಯಗತ್ಯ.

ಒಬ್ಬ ಸ್ತ್ರೀಯ ಈ ಎಲ್ಲ ಅಗತ್ಯಗಳನ್ನು ಪೂರೈಸುವ ದಿವ್ಯಾಸ್ತ್ರ ಯೋಗ! ಯೋಗಾಭ್ಯಾಸದಲ್ಲಿನ ದೈಹಿಕ ಕಸರತ್ತು ದೇಹಕ್ಕೆ ಬಲ ತುಂಬಿದರೆ, ಯೋಗಾಭ್ಯಾಸದ ಅಂಗಗಳಾದ ಧ್ಯಾನ, ಪ್ರಾಣಾಯಾಮ ಆಕೆಗೆ ಅಗತ್ಯವಿರುವ ಮನೋಸ್ವಾಸ್ಥ್ಯವನ್ನು ನೀಡುತ್ತದೆ. ಹಾಗಾಗಿ ಯೋಗಾಭ್ಯಾಸದ ಅಗತ್ಯ ಸ್ತ್ರೀಗೆ ಅತಿ ಹೆಚ್ಚು ಎಂದರೆ ಅದು ಸತ್ಯವೇ. ಅದನ್ನು ಮನಗಂಡು, ವಿಶ್ವಸಂಸ್ಥೆ ಈ ಬಾರಿ 'ಯೋಗ ಮತ್ತು ಮಹಿಳಾ ಸಬಲೀಕರಣ' ಎಂಬ ಘೋಷವಾಕ್ಯವನ್ನು ಅಳವಡಿಸಿಕೊಂಡಿದೆ. ಸಾಮಾನ್ಯ ಆರೋಗ್ಯವನ್ನು ಕಾಪಾಡಿಕೊಳ್ಳಲು ಯೋಗ ಸಹಕಾರಿ ಎಂಬ ಪರಿಕಲ್ಪನೆಯೇ ಹಿಂದೆ ಜನರಿಗಿರಲಿಲ್ಲ. ಜೀವನ ಶೈಲಿ ಬದಲಾದಂತೆ, ಹೊಸ ಹೊಸ ರೋಗಗಳು ಬರತೊಡಗಿದಾಗ, ಯಾವುದೇ ಅಡ್ಡಪರಿಣಾಮ ಇಲ್ಲದ ಚಿಕಿತ್ಸೆಯನ್ನು ಹುಡುಕುತ್ತಿದ್ದಾಗ ದೊರಕಿದ್ದೇ ಯೋಗ. ಅಲ್ಲಿಯವರೆಗೂ ನಮಗಲ್ಲ ಎಂದು ಯೋಗವನ್ನು ದೂರವಿಟ್ಟವರೆಲ್ಲಾ ಈಗ ಯೋಗದ ಹಿರಿಮೆಯನ್ನು ಅರಿತು ಅಭ್ಯಾಸದಲ್ಲಿ ತೊಡಗಿದರು.

ಜೂನ್ 21ರಂದು ಯೋಗ ದಿನಾಚರಣೆ

ಯೋಗವನ್ನು ಸಾಮಾನ್ಯ ಜನರ ಬಳಿ ಕೊಂಡೊಯ್ಯುವುದಕ್ಕೆ ಸಾಕಷ್ಟು ಸಂಸ್ಥೆಗಳು, ವ್ಯಕ್ತಿಗಳು ನಿಸ್ವಾರ್ಥದಿಂದ ಕೆಲಸ ಮಾಡಿದ್ದಾರೆ. ಮಾಡುತ್ತಲೇ ಇದ್ದಾರೆ. ಹಾಗಾಗಿಯೇ ಇಂದು ಸಣ್ಣ ಹಳ್ಳಿಯಲ್ಲೂ ಯೋಗವನ್ನು ಉಚಿತವಾಗಿ ಕಲಿಸಿಕೊಡುವ ಸಂಸ್ಥೆಗಳಿದ್ದಾವೆ. ಇನ್ನು ನಗರಗಳಲ್ಲಂತೂ, ಪ್ರತೀ ಬಡಾವಣೆಗೆ ಒಂದೊಂದು ಶಾಖೆಗಳಿದ್ದು, ಯೋಗಾಭ್ಯಾಸ ಸುಲಭವಾಗಿದೆ.

ಘೋಷವಾಕ್ಯದಂತೆ ಹೇಳುವುದಾದರೆ, ಯೋಗಾಭ್ಯಾಸವು ಸ್ತ್ರೀಯರಿಗೂ ಅತ್ಯಂತ ಲಾಭದಾಯಕ. ಯೋಗದಲ್ಲಿರುವ ಬಹುತೇಕ ಎಲ್ಲ ಆಸನಗಳನ್ನು ಭೇದಭಾವವಿಲ್ಲದೆ ಸ್ತ್ರೀ ಪುರುಷರು ಮಾಡಬಹುದಾಗಿದೆ. ಮಹಿಳೆಯರ ದೈಹಿಕ ಸ್ವರೂಪವನ್ನು ಮನಸ್ಸಿನಲ್ಲಿಟ್ಟುಕೊಂಡು, ಪಶ್ಚಿಮೋತ್ತಾಸನ, ವೀರಭದ್ರಾಸನ, ಮಾರ್ಜಾಲಾಸನ, ಶಿಶು ಆಸನ, ಅರ್ಧಚಕ್ರಾಸನ, ಹಸ್ತಪಾದಾಸನ, ಉತ್ಕಟಾಸಾನ, ಬದ್ಧಕೋನಾಸನ ಮತ್ತು ಯೋಗನಿದ್ರೆ ಮಹಿಳೆಯರ ದೈಹಿಕ ಸ್ಥಿತಿಯನ್ನು ಅತ್ಯುತ್ತಮಗೊಳಿಸುವಂಥವು ಎಂದು ಹಲವರು ಅಭಿಪ್ರಾಯ ಪಡುತ್ತಾರೆ. ಇವಲ್ಲದೆ, ಸೂರ್ಯ ನಮಸ್ಕಾರ, ವಿಶೇಷವಾಗಿ ಚಂದ್ರ ನಮಸ್ಕಾರ ಸ್ತ್ರೀಯರಿಗಾಗಿಯೇ ಹೇಳಿ ಮಾಡಿಸಿದ ಆಸನ.


ಸೂರ್ಯ ನಮಸ್ಕಾರದ ಬಗ್ಗೆ ನಾವೆಲ್ಲಾ ಕೇಳಿದ್ದೇವೆ. ದಿನಕ್ಕೆ ಕನಿಷ್ಠ ಐದು ಸೂರ್ಯ ನಮಸ್ಕಾರ ಮಾಡಿದರೆ, ಆರೋಗ್ಯ ಬಹಳಷ್ಟು ಸುಧಾರಿಸುತ್ತದೆ ಎಂಬುದು ವಾಸ್ತವ. ಆದರೆ ಚಂದ್ರ ನಮಸ್ಕಾರದ ಬಗ್ಗೆ ಕೇಳಿರುವುದು ಸ್ವಲ್ಪ ಕಡಿಮೆಯೇ ಎನ್ನಬೇಕು.

ಚಂದ್ರ ನಮಸ್ಕಾರವೂ ಸೂರ್ಯ ನಮಸ್ಕಾರದಂತೆ ಆರೋಗ್ಯಕ್ಕೆ, ಅದರಲ್ಲೂ ಸ್ತ್ರೀಯರ ಆರೋಗ್ಯಕ್ಕೆ ಬಹಳ ಉಪಕಾರಿ. ಸೂರ್ಯ ನಮಸ್ಕಾರದಲ್ಲಿ 12 ಆಸನಗಳಿದ್ದರೆ, ಚಂದ್ರ ನಮಸ್ಕಾರದಲ್ಲಿ 14 ಆಸನಗಳ ಗುಚ್ಛವಿದೆ. ಪ್ರಣಾಮಾಸನ, ಹಸ್ತ ಉತ್ಥಾನಾಸನ, ಪಾದ ಹಸ್ತಾಸನ, ಅಶ್ವ ಸಂಚಲನಾಸನ, ಅರ್ಧ ಚಂದ್ರಾಸನ, ಪರ್ವತಾಸನ, ಅಷ್ಟಾಂಗ ನಮಸ್ಕಾರ, ಭುಜಂಗಾಸನ, ಪರ್ವತಾಸನ, ಅಶ್ವಸಂಚಲನಾಸನ, ಅರ್ಧ ಚಂದ್ರಾಸನ, ಪಾದ ಹಸ್ತಾಸನ, ಹಸ್ತ ಉತ್ಥಾನಾಸನ, ಪ್ರಣಾಮಾಸನ.

ಈ 14 ಆಸನಗಳನ್ನು ಎಡ–ಬಲಗಳಂತೆ ಎರಡೂ ಬದಿ ಮಾಡಿದರೆ, ಒಂದು ಪೂರ್ಣ ಚಂದ್ರಾಸನವನ್ನು ಮಾಡಿದಂತಾಗುತ್ತದೆ. 28 ಆಸನಗಳು, ಚಾಂದ್ರಮಾಸದ 28 ದಿನಗಳನ್ನು ಸೂಚಿಸುತ್ತವೆ. ಸಂಜೆ ಚಂದ್ರ ನಮಸ್ಕಾರಕ್ಕೆ ಪ್ರಶಸ್ತ ಸಮಯ. ಅದರಲ್ಲೂ ಚಂದ್ರ ಕಾಣುವ ಸಮಯದಲ್ಲಿ ಮಾಡಿದರೆ ಇನ್ನೂ ಒಳ್ಳೆಯದು ಎನ್ನುತ್ತಾರೆ ಯೋಗ ತಜ್ಞರು.

ನಿತ್ಯವೂ ನಿಯಮದಂತೆ ದೀರ್ಘಾವಧಿಯಲ್ಲಿ ಚಂದ್ರ ನಮಸ್ಕಾರದ ಅಭ್ಯಾಸವನ್ನು ಮಾಡಿದರೆ ಸ್ತ್ರೀಯರಲ್ಲಿ ಶಕ್ತಿ ಸಂಚಯನವಾಗುತ್ತದೆ. ದೇಹ ಮತ್ತು ಮನಸ್ಸಿಗೆ ಶಾಂತಿ ಮತ್ತು ಸ್ಥಿರತೆಯನ್ನು ಉಂಟು ಮಾಡುತ್ತದೆ. ಕೋಪವನ್ನು ಶಮನಗೊಳಿಸುತ್ತದೆ. ದೇಹದಲ್ಲಿರುವ ಚಕ್ರಗಳನ್ನು ಉದ್ದೀಪನಗೊಳಿಸಿ ಆತಂಕ ನಿವಾರಣೆ ಮಾಡುತ್ತದೆ. ಈಸ್ಟ್ರೋಜೆನ್‌ನ ಉತ್ಪತ್ತಿಯನ್ನು ಹೆಚ್ಚು ಮಾಡುತ್ತದೆ, ಇದರಿಂದಾಗಿ ಋತುಚಕ್ರದ ಸಮಸ್ಯೆಗಳು ಇಲ್ಲವಾಗಿ ಋತುಚಕ್ರ ನಿಯಮಿತವಾಗುತ್ತದೆ. ಅಲ್ಲದೆ ಗರ್ಭಕೋಶವೂ ಆರೋಗ್ಯವಾಗಿರುತ್ತದೆ. ರಕ್ತಪರಿಚಲನೆ ಸರಾಗವಾಗಿ ರಕ್ತದ ಒತ್ತಡ ನಿವಾರಣೆಯಾಗಿ ಹೃದಯದ ನಾಡಿಗಳು ಸಶಕ್ತವಾಗುತ್ತವೆ. ಬೆನ್ನು ನೋವಿನ ಸಮಸ್ಯೆಯಿದ್ದಲ್ಲಿ ಅದಕ್ಕೂ ಪರಿಹಾರ ಸಿಗುತ್ತದೆ.

ಇಷ್ಟು ಲಾಭದಾಯಕವಾದ ಚಂದ್ರ ನಮಸ್ಕಾರವನ್ನು ಗುರು ಮುಖೇನ ಕಲಿತು ರೂಢಿಸಿಕೊಂಡರೆ ಸ್ತ್ರೀ ಸಬಲೀಕರಣ ಆಗದಿರುತ್ತದೆಯೇ 'ಆರೋಗ್ಯವೇ ಭಾಗ್ಯವಲ್ಲವೇ'. ಉಪಯೋಗಗಳು ಹಲವಿದ್ದರೂ, ಚಂದ್ರ ನಮಸ್ಕಾರವನ್ನು ಎಲ್ಲ ಸ್ತ್ರೀಯರೂ ಮಾಡುವಂತಿಲ್ಲ. ಅದಕ್ಕೆ ಒಂದಷ್ಟು



ಚಂದ್ರ ನಮಸ್ಕಾರ

> ಆಧುನಿಕ ಯುಗದಲ್ಲಿ ಮನೆಯ ಒಳಗೆ, ಹೊರಗೆ ದುಡಿಯುವ ಅನಿವಾರ್ಯತೆ ಅಥವಾ ಅದಮ್ಯ ಬಯಕೆ ಹೆಣ್ಣಿನದು. ತನ್ನ ಅಸ್ಮಿತೆಯನ್ನು ನಿರೂಪಿಸಲೇಬೇಕಾದ ಅಗತ್ಯವೂ ಇದೆ. ಇವಕ್ಕೆಲ್ಲಾ ಅಪರಿಮಿತ ದೈಹಿಕ ದಾರ್ಢ್ಯಬೇಕು. ಈ ಎಲ್ಲ ಸಾಧನೆಯ ಹಾದಿಯಲ್ಲಿ ಮೈದೋರುವ ಅಸಂಖ್ಯ ಸವಾಲುಗಳನ್ನು ಎದುರಿಸಲು ದೈಹಿಕ ಶಕ್ತಿಯ ಜೊತೆಗೆ ಮಾನಸಿಕ ಸ್ಥೈರ್ಯ ಅತ್ಯಗತ್ಯ.

ಕಟ್ಟುಪಾಡುಗಳಿವೆ. ಹೊಸದಾಗಿ ಯೋಗಾಭ್ಯಾಸವನ್ನು ಪ್ರಾರಂಭಿಸಿದವರು. ಗರ್ಭಿಣಿಯರು, ಬೆನ್ನುನೋವಿನ ಸಮಸ್ಯೆ ಇರುವವರು, ರಕ್ತದೊತ್ತಡದ ಸಮಸ್ಯೆಯಿದ್ದವರು ಚಂದ್ರ ನಮಸ್ಕಾರವನ್ನು ಅಭ್ಯಸಿಸುವಂತಿಲ್ಲ.

ಇವೆಲ್ಲವನ್ನೂ ಮನಸ್ಸಿನಲ್ಲಿ ಇಟ್ಟುಕೊಂಡು ಯೋಗಾಭ್ಯಾಸವನ್ನು ನಿಯಮಿತವಾಗಿ ಮಾಡಿ ಅದರಲ್ಲಿ ಚಂದ್ರ ನಮಸ್ಕಾರವನ್ನೂ ಅಳವಡಿಸಿಕೊಂಡರೆ ಅದರ ಪೂರ್ಣಲಾಭ ದೊರೆಯುವುದರಲ್ಲಿ ಸಂದೇಹವೇ ಇಲ್ಲ.

ಇದೆಲ್ಲ ಯೋಗದಿಂದಾಗುವ ವೈಯಕ್ತಿಕ ಲಾಭಗಳಾದರೆ, ಯೋಗ ಹಣ ಗಳಿಕೆಯ ಮೂಲವಾಗಿರುವುದನ್ನು ಕಡೆಗಣಿಸುವಂತಿಲ್ಲ. ಯಾವುದೇ ಅಪೇಕ್ಷೆ ಇಲ್ಲದೆ ಸೇವೆಯೆಂದು ಯೋಗ ಕಲಿಸುವವರು ಇದ್ದಾರೆ. ಜೊತೆಗೆ ಇಂದು ಹಲವು ಚಿಕಿತ್ಸಾ ವಿಧಾನಗಳಲ್ಲಿ ಯೋಗಾಭ್ಯಾಸವನ್ನೂ ಔಷಧಿಯೆಂದೇ ಪರಿಗಣಿಸುತ್ತಾರೆ. ಕೆಲವು ನಿರ್ದಿಷ್ಟ ಆಸನಗಳನ್ನು ನಿರ್ದಿಷ್ಟ ರೋಗಗಳಿಗೆ ಪರಿಹಾರವಾಗಿ ಸೂಚಿಸುತ್ತಾರೆ. ಸಾಮಾನ್ಯ ತರಗತಿಗಳಲ್ಲಿ ಇಂತಹ ಅಭ್ಯಾಸ ಕಷ್ಟ, ಅದಕ್ಕಾಗಿ ವಿಶೇಷ ತರಗತಿಗಳನ್ನು ತೆಗೆದುಕೊಳ್ಳುವ ಯೋಗ ಶಿಕ್ಷಕರಿದ್ದಾರೆ. ಇದಕ್ಕೆ ಉತ್ತಮ ಸಂಭಾವನೆಯನ್ನೂ ಪಡೆಯುತ್ತಾರೆ. ಕೊರೊನಾ ಸಮಯದ ನಂತರ ಆನ್‌ಲೈನ್ ತರಗತಿಗಳ ಭರಾಟೆ ಪ್ರಾರಂಭವಾಯಿತು. ಆಗಲೇ ಯೋಗದ ಕಲಿಕೆ ಕೂಡಾ ಆನ್‌ಲೈನ್‌ನಲ್ಲಿ ಪ್ರಾರಂಭವಾಯಿತು. ಪುರುಷರಷ್ಟೇ ಅಲ್ಲದೇ, ಮಹಿಳೆಯರೂ ತಮ್ಮ ಬಿಡುವಿನ ಸಮಯದಲ್ಲಿ ಯೋಗಾಭ್ಯಾಸದ ಆನ್‌ಲೈನ್ ತರಗತಿಗಳನ್ನು ತೆಗೆದುಕೊಳ್ಳತೊಡಗಿದರು. ಪ್ರಪಂಚದ ಯಾವ ಮೂಲೆಯಲ್ಲಿರುವ ವಿದ್ಯಾರ್ಥಿಗೂ ಸುಲಭವಾಗಿ ಯೋಗ ಕಲಿಯುವಂತಾಯಿತು. ಈಗಂತೂ ಶಾಲಾ ಕಾಲೇಜುಗಳಲ್ಲಿ ಯೋಗ ಕಲಿಕೆ ಬಹುತೇಕ ಕಡ್ಡಾಯ. ವಿದೇಶಗಳಲ್ಲಿಯೂ ಯೋಗ ಶಿಕ್ಷಕರಿಗೆ ಬಹಳ ಬೇಡಿಕೆಯಿದೆ.

ಗುರುಕುಲ ಪದ್ಧತಿಯಲ್ಲಿ ಯೋಗ ಕಲಿಕೆ ಈಗಲೂ ಪ್ರಚಲಿತ. ಜೊತೆಗೆ ವಿಶ್ವವಿದ್ಯಾನಿಲಯಗಳೂ ಯೋಗ ವಿಜ್ಞಾನದ ಕೋರ್ಸ್‌ಗಳನ್ನು ಕಲಿಸುತ್ತಿವೆ. ಪ್ರಕೃತಿ ಚಿಕಿತ್ಸೆ ಮತ್ತು ಯೋಗ ಪದವಿಯನ್ನು ಆಸಕ್ತರು ಪಡೆದುಕೊಳ್ಳಬಹುದು. ಅಲ್ಲದೆ ಬಹಳಷ್ಟು ಇತರೇ ಸಂಸ್ಥೆಗಳು 6 ತಿಂಗಳಿನಿಂದ 3 ವರ್ಷಗಳವರೆಗಿನ ಕೋರ್ಸ್‌ಗಳನ್ನು ಕಲಿಸುತ್ತವೆ.

"ಯೋಗಾಭ್ಯಾಸದ 3 ವರ್ಷದ ಕೋರ್ಸ್ ಮಾಡಿರುವ ನಾನು ಇಂದು ತಿಂಗಳಿಗೆ 40 ಸಾವಿರಕ್ಕೂ ಹೆಚ್ಚು ಸಂಪಾದನೆ ಮಾಡುತ್ತೇನೆ. ಎಲ್ಲಿಯೂ ಗುಣವಾಗದ ರೋಗಗಳಿಗೆ ಕೊನೆಯ ಪರಿಹಾರ ಎಂಬಂತೆ ನಿರೀಕ್ಷೆಗಳೊಂದಿಗೆ ನನ್ನ ಬಳಿ ಬರುತ್ತಾರೆ. ಅವರೆಲ್ಲರ ಸಮಸ್ಯೆಗಳನ್ನು ಪರಿಹಾರ ಮಾಡಿ ಆರೋಗ್ಯವಂತರನ್ನಾಗಿಸಿದ ಹೆಮ್ಮೆ ನನ್ನದು" ಎಂದು ಸಂತಸದಿಂದ ಹೇಳಿಕೊಳ್ಳುತ್ತಾರೆ. ಮೈಸೂರು ಮೂಲದ ಈಗ ಚೆನ್ನೈನಲ್ಲಿ ಯೋಗ ಶಿಕ್ಷಕಿ ಯಾಗಿರುವ ಸುಷ್ಮಾ.

'ಯೋಗ ಮತ್ತು ಮಹಿಳಾ ಸಬಲೀಕರಣ' ಧ್ಯೇಯ ವಾಕ್ಯ ಅದೆಷ್ಟು ಸೂಕ್ತ ಅಲ್ಲವೇ? ರೋಗ ಬಂದ ನಂತರ ವೈದ್ಯರ ಬಳಿ ಹೋಗುವುದಕ್ಕಿಂತ, ಯೋಗಾಭ್ಯಾಸವನ್ನು ಅಳವಡಿಸಿಕೊಂಡು ಸ್ವಸ್ಥ ಜೀವನ ನಡೆಸುವ ಅವಕಾಶ ನಮಗಿರುವಾಗ ಬಳಸಿಕೊಳ್ಳದಿರುವುದು ನಮ್ಮ ಮೂರ್ಖತನವಾಗುತ್ತದೆ. ಮಹಿಳೆಯರಿಗೆ ತಮಗಾಗಿ ಸಮಯ ಹೊಂದಿಸಿಕೊಳ್ಳುವುದು ಅಷ್ಟು ಸುಲಭವಲ್ಲ. ಆದರೆ ಬದಲಾಗಿರುವ ಜೀವನಶೈಲಿ ಇಂದು ಆರೋಗ್ಯದ ಮೇಲೆ ಅತೀ ಹೆಚ್ಚು ದುಷ್ಪರಿಣಾಮವನ್ನು ಉಂಟು ಮಾಡುತ್ತಿದೆ. ಆದ್ದರಿಂದ ಒಂದಷ್ಟು ಸಮಯವನ್ನು ಮಹಿಳೆಯರು ತಮಗಾಗಿ ಮೀಸಲಿರಿಸಿಕೊಳ್ಳುವುದು ಅಗತ್ಯ ಕೂಡ. 'Multi tasking' ಮಹಿಳೆಗೆ ಹೊಸತೇನಲ್ಲ. ಅವಳ To Do Listಗೆ ಯೋಗ ಸೇರುವಂತಾಗಲಿ ಎಂಬುದೇ ವಿಶ್ವಸಂಸ್ಥೆ ಆಶಯ ಕೂಡ.

ಶ್ರದ್ಧಾಂಜಲಿ



ಮೈಸೂರಿನ ರಂಗಾಯಣದ ಆವರಣದಲ್ಲಿ ರಂಗಕರ್ಮಿ ನ.ರತ್ನ ಅವರ ಪಾರ್ಥಿವ ಶರೀರದ ಅಂತಿಮ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿತ್ತು

ಡಾ.ನ.ರತ್ನರಿಗೆ ನಮನ...!

ಡಾ.ಎ.ಎಂ.ನಟೇಶ್ ಮತ್ತು ವಿನೋಬಾಯಿ ಅಮ್ಮಳ್ ದಂಪತಿ ಪುತ್ರನಾಗಿ 1934ರ ಡಿಸೆಂಬರ್ 12ರಂದು ತಮಿಳುನಾಡಿನ ಚಿದಂಬರಂನಲ್ಲಿ ಜನಿಸಿದ ಡಾ. ನ.ರತ್ನ ಅವರು ಮೈಸೂರಿನ ಮಹಾರಾಜ ಹೈಸ್ಕೂಲ್‌ನಲ್ಲಿ ಎಸ್‌ಎಸ್‌ಎಲ್‌ಸಿ (1950), ಯುವರಾಜ ಕಾಲೇಜಿನಲ್ಲಿ ಇಂಟರ್ ಮೀಡಿಯೇಟ್(1950–1952), ಇಂಗ್ಲಿಷ್ ಸಾಹಿತ್ಯದಲ್ಲಿ ಬಿಎ ಪದವಿಯನ್ನು ಮಹಾರಾಜ ಕಾಲೇಜಿನಲ್ಲಿ (1952–1955) ಹಾಗೂ ದಿ ಇನ್ಸಿಟ್ಯೂಟ್ ಆಫ್ ಎಜುಕೇಷನ್‌ನಲ್ಲಿ ಬಿಎಡ್ ಪದವಿ(1955–1956) ಗಳಿಸಿದರು.

ನಂತರ ನ್ಯೂಯಾರ್ಕ್‌ನಲ್ಲಿ 1956ರಿಂದ 1957ರವರೆಗೆ ಹಂಟರ್ ಯೂನಿವರ್ಸಿಟಿಯಿಂದ ಎಜುಕೇಷನ್ ಆಫ್ ದಿ ಬ್ಲೈಂಡ್‌ನಲ್ಲಿ ಎಂಎಸ್ ಪದವಿ, ವಾಷಿಂಗ್‌ಟನ್ ಗಲೌಡೆಟ್ ಕಾಲೇಜಿನಲ್ಲಿ ಸ್ಪೀಚ್ ಅಂಡ್ ಆಡಿಯೋಲಜಿಯಲ್ಲಿ ಎಂಎಸ್ ಪದವಿ (1957–1958), ಬ್ಲೂಮಿಂಗ್‌ಟನ್‌ನ ಇಂಡಿಯಾನ ಯೂನಿವರ್ಸಿಟಿಯಲ್ಲಿ ಸ್ಪೀಚ್ ಅಂಡ್ ಆಡಿಯಾಲಜಿ ವಿಷಯದ ಎಮ್‌ಎಟಿ ಮುಗಿಸಿದ ನಂತರ ಡಾ.ರತ್ನ ಅವರು, ವಿಶೇಷ ಶಿಕ್ಷಣ ಮತ್ತು ಶೈಕ್ಷಣಿಕ ಆಡಳಿತ ವಿಷಯದಲ್ಲಿ ಡಾಕ್ಟರೇಟ್ ಪದವಿ ಗಳಿಸಿದರು.

1987ರಿಂದ 89ರವರೆಗೆ ಮೈಸೂರಿನ ಆಯಿಷ್ ನಿರ್ದೇಶಕರಾಗಿ, ಅಲಿಯವರಜಂಗ್ ನ್ಯಾಷನಲ್ ಇನ್ಸಿಟಿಟ್ಯೂಟ್ ಆಫ್ ಹಿಯರಿಂಗ್ ನಿರ್ದೇಶಕ ರಾಗಿ (1985–87) ಸೇವೆ ಸಲ್ಲಿಸಿದ್ದ ಡಾ. ರತ್ನ ಅವರು, ನವದೆಹಲಿಯ ಆರೋಗ್ಯ ಮತ್ತು ಸಮಾಜ ಕಲ್ಯಾಣ ಸಚಿವಾಲಯ, ಒರಿಸ್ಸಾದ ಭುವನೇಶ್ವರದಲ್ಲಿ ರೆಡ್‌ಕ್ರಾಸ್ ಸೊಸೈಟಿ ಫಾರ್ ದಿ ಬ್ಲೈಂಡ್ ಅಂಡ್ ಡೆಫ್ ಪ್ರಾಂಶುಪಾಲರಾಗಿ, ಮುಂಬೈನ ನಾಯರ್ ಆಸ್ಪತ್ರೆಯಲ್ಲಿ ಸ್ಪೀಚ್ ಥೆರಪಿಸ್ಟ್ ಅಂಡ್ ಸೈಂಟಿಫಿಕ್ ಆಫೀಸರ್ ಆಗಿಯೂ ಸೇವೆ ಸಲ್ಲಿಸಿದ್ದರು.

ಬ್ಲೂಮಿಂಗ್‌ಟನ್‌ನ ಸ್ಪೀಚ್ ಕ್ಲಿನಿಕ್ ಇನ್ ಇಂಡಿಯನ್ ಯೂನಿವರ್ಸಿಟಿ ಸಂಶೋಧನಾ ಸಹಾಯಕರಾಗಿ, ಯುಎಸ್‌ಎಯ ಇಂಡಿಯನ್ ಪಾಲಿಸನಲ್ಲಿರುವ ಇಂಡಿಯಾನ ಸ್ಪೀಚ್ ಸ್ಕೂಲ್ ಫಾರ್ ದಿ ಡೆಫ್ ಶಿಕ್ಷಕರಾಗಿಯೂ ಸೇವೆ ಸಲ್ಲಿಸಿದ್ದರು.

ಮೈಸೂರಿನ ಸರಸ್ವತಿಪುರಂನಲ್ಲಿ 'ಸಮತೆಂತೋ' (ಸರಸ್ವತಿಪುರಂ ಮಧ್ಯದ ತೆಂಗಿನ ತೋಟ) ಎಂಬ ರಂಗ ಸಂಸ್ಥೆ ಆರಂಭಿಸಿ ಅಲ್ಲಿ ಕಲಾವಿದರನ್ನೊಳಗೊಂಡ ರಂಗ ಚಟುವಟಿಕೆಗಳನ್ನು ನಡೆಸುತ್ತಿದ್ದ ಡಾ.ನ.ರತ್ನ ಅವರು, 'ಎಲ್ಲಿಗೆ', 'ಗೋಡೆ ಬೇಕೆ ಗೋಡೆ', 'ಬೊಂತೆ', 'ಪುನರ್ಜನ್ಮ', 'ಭಿನ್ನ ಬೆನಕ', 'ಬೋಳಚರಿಗೆ ನಮನ', 'ಕೆಸ್ರಿನಲ್ಲಿ ಕೇರಿತ್', ಮತ್ತು 'ಒಬ್ಬ ಮನುಷ್ಯನಿಗೆ ಎಷ್ಟು ಜಮೀನು ಬೇಕು', ಎಂಬಿತ್ಯಾದಿ ನಾಟಕಗಳನ್ನು ಬರೆದಿದ್ದರು.

ಹಲವು ಕನ್ನಡ ಮತ್ತು ಇಂಗ್ಲಿಷ್ ನಾಟಕಗಳನ್ನು ನಿರ್ದೇಶಿಸಿದ್ದರಲ್ಲದೆ, ಹಲವು ಕನ್ನಡ ಸಿನಿಮಾಗಳಲ್ಲೂ ನಟಿಸಿದ್ದ ಅವರಿಗೆ 'ರಿಷ್ಯ ಶೃಂಗ' ಚಲನಚಿತ್ರವು ಕರ್ನಾಟಕ ಸರ್ಕಾರದಿಂದ 'ಉತ್ತಮ ಪ್ರೋತ್ಸಾಹ ನಟ' ಪ್ರಶಸ್ತಿ ತಂದುಕೊಟ್ಟಿತು. ಡಾ.ರತ್ನ ಅವರು 'ಚೋರ್ ಚೋರ್ ಚುಪ್ಪಾ' ಮಕ್ಕಳ ಚಿತ್ರವನ್ನೂ ರಚಿಸಿದ್ದರು.

2005ರಲ್ಲಿ ನಾಟಕ ಅಕಾಡೆಮಿಯ ಪ್ರಶಸ್ತಿ, 2013ರಲ್ಲಿ ಕನ್ನಡ ರಾಜ್ಯೋತ್ಸವ ಪ್ರಶಸ್ತಿ, ಎಂಎನ್.ರಾಯ್ ಅವಾರ್ಡ್, ಬಿ.ಬಿ.ಕಾರಂತ ಅವಾಡ್ ಮತ್ತು ಹೆಲೆನ್ ಕೆಲ್ಲರ್ ಸೇರಿದಂತೆ ಡಾ.ರತ್ನ ಅವರಿಗೆ ಹಲವು ಪ್ರಶಸ್ತಿಗಳು ಸಂದಿದ್ದನ್ನು ಇಲ್ಲಿ ಸ್ಮರಿಸಬಹುದಾಗಿದೆ.

ಪ್ರೊ.ರಾಮೇಶ್ವರಿ ವರ್ಮ, ರತ್ನಮಿರ್ಲೆ, ಪ್ರೊ.ಎನ್‌ಎಸ್.ರಂಗರಾಜ್, ಪ್ರೊ.ಗೋಪಿನಾಥ್, ತುಕಾರಾಂ, ಎನ್.ಎಸ್.ಆನಂದ, ಜನಾರ್ಧನ(ಜನ್ನಿ), ಪ್ರೊ.ಜಾದವ್, ಪ್ರೊ.ಉಮೇಶ ಆಯಿಷ್, ಜೆಎಸ್‌ಎಸ್ ಸ್ಪೀಚ್ ಅಂಡ್ ಹಿಯರಿಂಗ್, ವಾರ್ತಾ ಮತ್ತು ಪ್ರಚಾರ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅಧಿಕಾರಿಗಳು, ಸಾಹಿತಿಗಳು, ಶಿಕ್ಷಣ ತಜ್ಞರು, ರಂಗಕಲಾವಿದರು ರಂಗಾಯಣದಲ್ಲಿ ಡಾ.ನ.ರತ್ನ ಅವರ ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದು ನಮನ ಸಲ್ಲಿಸಿದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com

ಇಂದಿನಿಂದ ದಕ್ಷಿಣ ಕರ್ನಾಟಕದ 22ನೇ ಸಕ್ಕರೆ ಸಂಶೋಧನೆ, ಅಭಿವೃದ್ಧಿ ಕಾರ್ಯಾಗಾರ

ಮೈಸೂರು,ಜೂ.19–ಕೋರಮಂಡಲ್ ಶುಗರ್ಸ್ ಲಿಮಿಟೆಡ್, ಬೆಳಗಾವಿ ಬಿ.ಎಸ್. ನಿಜಲಿಂಗಪ್ಪ ಶುಗರ್ ಇನ್‌ಸ್ಟಿಟ್ಯೂಟ್, ಐಸಿಎಆರ್–ಶುಗರ್‌ಕೇನ್ ಬ್ರೀಡಿಂಗ್ ಇನ್‌ಸ್ಟಿಟ್ಯೂಟ್, ಕೊಯಮತ್ತೂರು, ಬೆಂಗಳೂರು ಕೃಷಿ ವಿಜ್ಞಾನ ವಿಶ್ವವಿದ್ಯಾನಿಲಯ ಮತ್ತು ಮಂಡ್ಯದ ಸರ್ ಎಂ.ವಿಶ್ವೇಶ್ವರಯ್ಯ ಶುಗರ್‌ಕೇನ್ ಸಂಶೋಧನಾ ಇನ್‌ಸ್ಟಿಟ್ಯೂಟ್ ಸಂಯುಕ್ತಾಶ್ರಯದಲ್ಲಿ ಜೂ.20 ಮತ್ತು 21ರಂದು ಮೈಸೂರಿನ ಹುಣಸೂರು ರಸ್ತೆಯಲ್ಲಿರುವ ರಾಣಿ ಬಹದ್ದೂರ್ ಇನ್‌ಸ್ಟಿಟ್ಯೂಟ್ ಸಭಾಂಗಣದಲ್ಲಿ ದಕ್ಷಿಣ ಕರ್ನಾಟಕದ 22ನೇ ಸಕ್ಕರೆ ಸಂಶೋಧನೆ ಮತ್ತು ಅಭಿವೃದ್ಧಿ ಕಾರ್ಯಾಗಾರವನ್ನು ಏರ್ಪಡಿಸಲಾಗಿದೆ. ಜೂ.20ರಂದು ಬೆಳಗ್ಗೆ 10 ಗಂಟೆಗೆ ಆರಂಭವಾಗುವ ಕಾರ್ಯಾಗಾರದಲ್ಲಿ ಐಸಿಎಆರ್–ಶುಗರ್‌ಕೇನ್ ಬ್ರೀಡಿಂಗ್ ಇನ್‌ಸ್ಟಿಟ್ಯೂಟ್, ಕೊಯಮತ್ತೂರು ನಿರ್ದೇಶಕ ಡಾ.ಜಿ.ಹೇಮಪ್ರಭಾ ಮುಖ್ಯ ಭಾಷಣ ಮಾಡಲಿದ್ದಾರೆ. ಮಂಡ್ಯ ಜಿಲ್ಲಾಧಿಕಾರಿ ಡಾ. ಕುಮಾರ, ಕೃಷಿ ನಿರ್ದೇಶಕ ಡಾ.ಜಿ.ಟಿ.ಪುತ್ರ, ಯುಎಎಸ್–ಬೆಂಗಳೂರು ಸಂಶೋಧನಾ ನಿರ್ದೇಶಕ ಡಾ.ಹೆಚ್.ಎಸ್. ಶಿವರಾಂ, ಬಿ.ಎಸ್.ನಿಜಲಿಂಗಪ್ಪ ಶುಗರ್ ಇನ್‌ಸ್ಟಿಟ್ಯೂಟ್ ನಿರ್ದೇಶಕ ಸಿ.ಬಿ. ಪಾಟೀಲ್, ಕೋರಮಂಡಲ್ ಶುಗರ್ಸ್ ಲಿಮಿಟೆಡ್ ಹಿರಿಯ ಉಪಾಧ್ಯಕ್ಷ ವಿ.ಜೆ. ರವಿ ಉಪಸ್ಥಿತರಿರುವರು.

ಮಹಾರಾಜರ ಪ್ರತಿಮೆಗಳಿರುವ ವೃತ್ತಗಳಲ್ಲಿ, ನಾಮಫಲಕಗಳ ಅಳವಡಿಸಲು ಮನವಿ



ಮೈಸೂರು, ಜೂ. 19– ಸಾಂಸ್ಕೃತಿಕ ನಗರಿ, ಅರಮನೆಗಳ ನಗರಿ, ಮೈಸೂರು ಹಲವು ಮಹಾರಾಜರು ಆಳಿದ ನಾಡು. ಅವರ ಪ್ರತಿಮೆಗಳಿರುವ ಪ್ರಮುಖ ವೃತ್ತಗಳಲ್ಲಿ ಆಯಾ ಮಹಾರಾಜರ ಹೆಸರಿನ ನಾಮಫಲಕವನ್ನು ಅಳವಡಿಸುವಂತೆ ಮೈಸೂರು ನಗರಪಾಲಿಕೆ ಆಯುಕ್ತರಿಗೆ ಕರ್ನಾಟಕ ಸೇನಾಪಡೆ ಮನವಿ ಸಲ್ಲಿಸಿತು.

ಕೆ ಆರ್ ವೃತ್ತದಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಪ್ರತಿಮೆ ಇದೆ. ಅಲ್ಲಿ ಪ್ರತಿಮೆಯ ಸುತ್ತ ನಾಲ್ಕೂ ಕಡೆಗಳಲ್ಲಿ ಕನ್ನಡದಲ್ಲಿ ಪ್ರಧಾನವಾಗಿ, ದೊಡ್ಡದಾಗಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಹೆಸರಿನ ನಾಮಫಲಕ ಹಾಕಬೇಕು. ಹಾಗೆಯೇ ಅರಮನೆ ಮುಂಭಾಗದ ಕೋಟೆ ಆಂಜನೇಯ ವೃತ್ತದಲ್ಲಿ ನಾಲ್ವಡಿ ಅವರ ತಂದೆ ಹತ್ತನೇ ಚಾಮರಾಜ ಒಡೆಯರ್ ಪ್ರತಿಮೆ ಇದೆ. ಅಲ್ಲಿ ಅವರ ಹೆಸರಿನ ನಾಮಫಲಕವನ್ನು ಹಾಕಬೇಕು. ಅದೇ ರೀತಿ ಹಾರ್ಡಿಂಜ್ ವೃತ್ತದಲ್ಲಿ ಇತ್ತೀಚೆಗೆ ನಿರ್ಮಾಣವಾದ ಜಯಚಾಮರಾಜ ಒಡೆಯರ್ ಪ್ರತಿಮೆ ಇದೆ ಅಲ್ಲಿ ಅವರ ಹೆಸರಿನ ನಾಮಫಲಕಗಳನ್ನು ದೊಡ್ಡದಾಗಿ ಹಾಕಿ, ಪ್ರವಾಸಿಗರಿಗೆ ಪರಿಚಯಿಸಬೇಕು. ಇದರಿಂದ ಮೈಸೂರಿಗೆ ಬರುವ ಪ್ರವಾಸಿಗರಿಗೆ ಮೈಸೂರು ಮಹಾರಾಜರ ಹೆಸರು ಹಾಗೂ ವೃತ್ತಗಳ ಪರಿಚಯವಾಗುತ್ತದೆ ಎಂದು ಮನವಿಯಲ್ಲಿ ತಿಳಿಸಿದ್ದಾರೆ. ಈ ವೇಳೆ ಕರ್ನಾಟಕ ಸೇನಾಪಡೆಯ ಜಿಲ್ಲಾಧ್ಯಕ್ಷ ತೇಜೇಶ್ ಲೋಕೇಶ್ ಗೌಡ, ಶಿವಶಂಕರ್, ಸುರೇಶ್ ಗೋಲ್ಡ್, ಪ್ರಭುಶಂಕರ್, ರಾಧಾಕೃಷ್ಣ, ದೂರ ಸುರೇಶ್ ಇನ್ನಿತರರು ಉಪಸ್ಥಿತರಿದ್ದರು.

ಸಂಸದ ಸುನೀಲ್ ಬೋಸ್‌ಗೆ ಸನ್ಮಾನ



ಮೈಸೂರಿನ ಅಶೋಕಪುರಂನ ಆದಿ ಕರ್ನಾಟಕ ಮಹಾಸಂಸ್ಥೆ ವತಿಯಿಂದ ಚಾಮರಾಜನಗರ ಸಂಸದ ಸುನೀಲ್ ಬೋಸ್ ಅವರನ್ನು ಸನ್ಮಾನಿಸಲಾಯಿತು. ಈ ವೇಳೆ ಸಂಸ್ಥೆಯ ಅಧ್ಯಕ್ಷ ಪಿ.ಸಿದ್ದರಾಜು (ಸುನೀಲ್), ಉಪಾಧ್ಯಕ್ಷ ಶಿವಸ್ವಾಮಿ, ಮಾಜಿ ಉಪಾಧ್ಯಕ್ಷ ಮಹಾಲಿಂಗು, ಕಾರ್ಯದರ್ಶಿ ರಾಜಮೊಗ, ದೊಡ್ಡಗರಡಿ ಸಂಘದ ಅಧ್ಯಕ್ಷ ಗೋವಿಂದರಾಜು, ಉಪಾಧ್ಯಕ್ಷ ಮಹೇಶ್, ಕಾರ್ಯದರ್ಶಿ ದೊರೆಸ್ವಾಮಿ ಇದ್ದರು.

ಪೆಟ್ರೋಲ್, ಡೀಸೆಲ್ ದರ ಏರಿಕೆ ಖಂಡಿಸಿ ಜೆಡಿಎಸ್ ಪ್ರತಿಭಟನೆ

ಸರ್ಕಾರ ಬಡವರ ಪರ ಇದ್ದರೆ ಪೆಟ್ರೋಲ್, ಡೀಸೆಲ್ ದರ ಹಿಂಪಡೆಯಲಿ: ಜಿಟಿಡಿ

ಮೈಸೂರು, ಜೂ.19(ಜಿಎ)–ಪೆಟ್ರೋಲ್ ಮತ್ತು ಡೀಸೆಲ್ ದರ ಏರಿಕೆ ಖಂಡಿಸಿ ಮೈಸೂರಿನಲ್ಲಿ ಜೆಡಿಎಸ್ ವತಿಯಿಂದ ಪ್ರತಿಭಟನೆ ನಡೆಸಲಾಯಿತು.

ನಗರದ ಗಾಂಧಿಚೌಕದ ಮುಂಭಾಗ ಜಮಾಯಿಸಿದ ಜೆಡಿಎಸ್‌ನ ಮಾಜಿ ಕಾರ್ಪೋರೇಟರ್‌ಗಳು, ಮಾಜಿ ಮೇಯರ್, ಎಂಎಲ್‌ಸಿ, ಕಾರ್ಯಕರ್ತರು, ಮುಖಂಡರು 'ಭ್ರಷ್ಟ ಕಾಂಗ್ರೆಸ್ ಸರ್ಕಾರಕ್ಕೆ ಧಿಕ್ಕಾರ', 'ಜನ ವಿರೋಧಿ ಸರ್ಕಾರಕ್ಕೆ ಧಿಕ್ಕಾರ', 'ಇಳಿಸಿ ಇಳಿಸಿ ಪೆಟ್ರೋಲ್ ಡೀಸೆಲ್ ಬೆಲೆ ಇಳಿಸಿ' ಎಂದು ವಿವಿಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿ, ಜನರ ಜೇಬಿಗೆ ಕತ್ತರಿ ಹಾಕುತ್ತಿದ್ದಾರೆ ಎಂದು ಕತ್ತರಿ ಪ್ರದರ್ಶಿಸಿ ಅಣಕು ಪ್ರದರ್ಶನ ಮಾಡಿದರು.

ನಂತರ ಶಾಸಕ ಜಿ.ಟಿ.ದೇವೇಗೌಡ ಮಾತನಾಡಿ, ರಾಜ್ಯ ಸರ್ಕಾರ ಪೆಟ್ರೋಲ್ ಮತ್ತು ಡೀಸೆಲ್ ದರ ಏರಿಕೆ ಮಾಡಿ ಜನರ ತಲೆ ಮೇಲೆ ಹೊರೆ ಹೊರಿಸಿ, ಸಾಲಗಾರನ್ನಾಗಿ ಮಾಡುತ್ತಿದೆ. ಪೆಟ್ರೋಲ್, ಡೀಸೆಲ್ ದರ ಏರಿಕೆ ಮಾಡುವುದು ಸೂಕ್ಷ್ಮವಾದ ವಿಚಾರವಾಗಿದೆ. ಆದರೆ, ಮುಖ್ಯಮಂತ್ರಿಗಳು ಬೇರೆ ರಾಜ್ಯಗಳ ಬೆಲೆಗಳಿಗೆ ಹೋಲಿಕೆ ಮಾಡುತ್ತಿದ್ದಾರೆ. ಇದು ಖಂಡನೀಯ ಎಂದು ಹೇಳಿದರು.

ಆಟೋದಲ್ಲಿ ಓಡಾಡುವವರು, ದ್ವಿಚಕ್ರ ವಾಹನಗಳನ್ನು ಬಳಸುವವರು ಬಡವರು. ಅವರು 103 ರೂ. ನೀಡಿ ಪೆಟ್ರೋಲ್, ಡೀಸೆಲ್ ಹಾಕಿಸುವುದು ಕಷ್ಟದ ವಿಚಾರ. ರಾಜ್ಯ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಲಿಕ್ಕರ್, ರಿಜಿಸ್ಟ್ರೇಷನ್ ಶುಲ್ಕ ಸೇರಿದಂತೆ ಒಂದರ ಮೇಲೊಂದು ದರ ಏರಿಕೆ ಮಾಡುತ್ತಿದ್ದಾರೆ. ಮತ್ತೊಂದೆಡೆ ಈಗ ನೀರಿನ ಬಿಲ್ ಏರಿಕೆ ಮಾಡಲು ಚಿಂತಿಸುತ್ತಿರುವುದು ಎಷ್ಟು ಸರಿ ಎಂದು ಪ್ರಶ್ನಿಸಿದರು.



ಮೈಸೂರಿನ ಗಾಂಧಿಚೌಕದ ಮುಂಭಾಗ ಪೆಟ್ರೋಲ್ ಮತ್ತು ಡೀಸೆಲ್ ದರ ಏರಿಕೆ ಖಂಡಿಸಿ ಜೆಡಿಎಸ್ ವತಿಯಿಂದ ಪ್ರತಿಭಟನೆ ನಡೆಸಲಾಯಿತು.

ಲೋಕಸಭಾ ಚುನಾವಣೆಯಲ್ಲಿ 18ರಿಂದ 25 ಸೀಟ್‌ಗಳನ್ನು ಕಾಂಗ್ರೆಸ್ ಗೆಲ್ಲುತ್ತೇವೆಂದು ಹೇಳಿಕೊಂಡಿತ್ತು. ಆದರೆ, ಕೇವಲ 9 ಸೀಟ್ ಪಡೆದುಕೊಂಡಿದ್ದು, ಅದಲ್ಲಿಯೂ 25 ಸಾವಿರದಿಂದ 30 ಸಾವಿರ ಲೀಡ್ ಪಡೆದುಕೊಂಡಿದ್ದಾರೆ ಅಷ್ಟೇ. ಆದರೆ, ಮೈತ್ರಿ ಅಭ್ಯರ್ಥಿಗಳು 2ರಿಂದ 3 ಲಕ್ಷ ಲೀಡ್ ಪಡೆದು ಕೊಂಡಿದ್ದಾರೆ. ಈ ಸೇಡಿನಿಂದ ಕಾಂಗ್ರೆಸ್ ಈ ರೀತಿ ಬೆಲೆ ಏರಿಕೆ ಮಾಡುತ್ತಿದೆ. ಕಾಂಗ್ರೆಸ್ ನಿಜವಾಗಿಯೂ ಬಡವರ ಪರವಾಗಿದ್ದರೆ, ತಕ್ಷಣ ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆಯನ್ನು ಹಿಂಪಡೆಯಬೇಕು ಎಂದು ಆಗ್ರಹಿಸಿದರು.

ರಾಜ್ಯದ ವಿವಿಧ ನಿಗಮ ಮಂಡಳಿಗಳ ಅನುದಾನವನ್ನು ದುರುಪಯೋಗಪಡಿಸಿಕೊಂಡಿದ್ದು, ತೆಲಂಗಾಣದ ಚುನಾವಣೆಗೆ ನೀಡಿದ್ದಾರೆ. ಈ ಕುರಿತು ಸಿಬಿಐ ತನಿಖೆಯಾಗಬೇಕು. ಮುಂದಿನ ಅಧಿವೇಶನದಲ್ಲಿ ಈ ಎಲ್ಲಾ ಅಂಶಗಳ ಕುರಿತು ಹೋರಾಟ ಮಾಡುತ್ತೇವೆ ಎಂದರು. ಪ್ರತಿಭಟನೆಯಲ್ಲಿ ಎಂಎಲ್‌ಸಿ ಸಿ.ಎನ್. ಮಂಜೇಗೌಡ, ವಿವೇಕಾನಂದ, ಮಾಜಿ ಮೇಯರ್ ಆರ್.ಲಿಂಗಪ್ಪ ಮಾಜಿ ಕಾರ್ಪೋರೇಟರ್ ಕೆ.ವಿ.ಶ್ರೀಧರ್, ಎಸ್‌ಬಿಎಂ ಮಂಜು, ಪ್ರೇಮ ಶಂಕರೇಗೌಡ, ಶಿವಣ್ಣ, ಹೆಚ್.ಕೆ.ರಾಮು, ಸವಿತಾ ಸುರೇಶ್, ಭಾಗ್ಯ ಮಹದೇಶ್, ಎಂ.ಶಿವಣ್ಣ, ಅಶ್ವಿನಿ ಅನಂತ್, ರಮಣಿ, ಮುಖಂಡರಾದ ಹೆಚ್.ಕೆ.ರಮೇಶ್ ನಗರಾಧ್ಯಕ್ಷ ಕೆ.ಟಿ.ಚಲುವೇಗೌಡ, ಫಾಲ್ಕನ್ ಬೋರೇಗೌಡ ಪಾಲ್ಗೊಂಡಿದ್ದರು.

ಏನೇ ಇದ್ದರೂ ನಮಗೆ ಆರೋಗ್ಯವೇ ಭಾಗ್ಯ

ಮೈಸೂರು ಮಹಾನಗರಪಾಲಿಕೆ ವಲಯ ಆಯುಕ್ತ ಸತ್ಯಮೂರ್ತಿ

ಮೈಸೂರು, ಜೂ. 19– ಮೈಸೂರಿನ ಹಾರ್ಟ್ ಸಂಸ್ಥೆಯು ರೋಟರಿ ಕ್ಲಬ್ ಆಫ್ ಮೈಸೂರು ವೆಸ್ಟ್, ನಾರಾಯಣ ಹೃದಯಾಲಯ ಹಾಗೂ ಎಎಸ್‌ಜಿ ಕಣ್ಣಿನ ಆಸ್ಪತ್ರೆ ಮೈಸೂರು ಸಹಯೋಗದೊಂದಿಗೆ ಪೌರಕಾರ್ಮಿಕರಿಗಾಗಿ ಆರೋಗ್ಯ ಅಭಿಯಾನ ಆಯೋಜಿಸಲಾಗಿತ್ತು.

ಮೈಸೂರು ಮಹಾನಗರಪಾಲಿಕೆಯ ವಲಯ ಆಯುಕ್ತ ಸತ್ಯಮೂರ್ತಿ ಶಿಬಿರಕ್ಕೆ ಚಾಲನೆ ನೀಡಿ ಮಾತನಾಡಿ, ಪ್ರಸ್ತುತ ದಿನಗಳಲ್ಲಿ ಎಲ್ಲಾ ಭಾಗ್ಯಗಳಿಗಿಂತ ಆರೋಗ್ಯ ಭಾಗ್ಯ ಬಹು ಮುಖ್ಯವಾಗಿದ್ದು, ಇದರ ಬಗ್ಗೆ ಜಾಗೃತರಾಗುವುದು ಬಹಳ ಮುಖ್ಯವಾಗಿದೆ. ಹಾಗಾಗಿ ಹಾರ್ಟ್ ಸಂಸ್ಥೆಯು, ನಗರದ 65 ವಾರ್ಡಿನಲ್ಲಿರುವ ಸುಮಾರು 2000 ಪೌರಕಾರ್ಮಿಕರ ಆರೋಗ್ಯ ತಪಾಸಣೆ ಮಾಡುವ ಯೋಜನೆಯನ್ನು ಹೊಂದಿದ್ದು, ಅದರ ಮುಂದುವರೆದ ಭಾಗವಾಗಿ ಇಂದು ವಲಯ 3ರಲ್ಲಿ 8 ವಾರ್ಡ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರಿಗೆ ಆರೋಗ್ಯ ತಪಾಸಣೆ ಮತ್ತು ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಇದರ ಸದುಪಯೋಗ ಪಡೆದುಕೊಳ್ಳಿ ಎಂದು ಕರೆ ನೀಡಿದರು.



ಹಾರ್ಟ್ ಸಂಸ್ಥೆಯ ಸಂಸ್ಥಾಪಕ ಮತ್ತು ಅಧ್ಯಕ್ಷ ಶಿವಕುಮಾರ ಮಾತನಾಡಿ, ಹಾರ್ಟ್ ಸಂಸ್ಥೆಯು ಮಾನವೀಯತೆ ಮತ್ತು ಸಾಮರಸ್ಯಯುಕ್ತ ಸಮಾಜ ನಿರ್ಮಾಣದ ದೂರ ದೃಷ್ಟಿಯನ್ನು ಹೊಂದಿದ್ದು, ಇದನ್ನು ಸಾಕಾರಗೊಳಿಸುವಲ್ಲಿ ಇಂತಹ ಸಾಮಾಜಿಕ ಕಳಕಳಿಯುಳ್ಳ ಆರೋಗ್ಯ ಶಿಬಿರಗಳು ಬಹಳ ಮುಖ್ಯವಾಗುತ್ತದೆ ಎಂದರು.

ಈ ಶಿಬಿರದಲ್ಲಿ 131 ಪೌರಕಾರ್ಮಿಕರನ್ನು ಆರೋಗ್ಯ ತಪಾಸಣೆಗೆ ಒಳಪಡಿಸಲಾಯಿತು. ಇವರಲ್ಲಿ ಹೊಸದಾಗಿ ಏಳು ಮಂದಿಗೆ ರಕ್ತದೊತ್ತಡದಲ್ಲಿ ವ್ಯತ್ಯಾಸ ಕಂಡು ಬಂದಿದ್ದು, 8 ಮಂದಿಗೆ ಮಧುಮೇಹ ಅಂಶ ಕಾಣಿಸಿಕೊಂಡಿದ್ದು ಹೆಚ್ಚಿನ ಪರೀಕ್ಷೆಗಳಿಗೆ ಶಿಫಾರಸ್ಸು ಮಾಡಲಾಯಿತು. 4 ಮಂದಿಗೆ ಕಣ್ಣಿನ ಸಮಸ್ಯೆ ಇರುವುದು ಕಂಡು ಬಂದಿದ್ದು, 4 ಮಂದಿಗೆ ಇಸಿಜಿಯಲ್ಲಿ ವ್ಯತ್ಯಾಸ ಕಂಡು ಬಂದಿದ್ದು, ಖಾತರಿಪಡಿಸಲು ಹೆಚ್ಚಿನ ಪರೀಕ್ಷೆಗಳಿಗೆ ಶಿಫಾರಸ್ಸು ಮಾಡಲಾಯಿತು. ಹಾರ್ಟ್ ಸಂಸ್ಥೆಯ ಕಾರ್ಯದರ್ಶಿ ರಮೇಶ್, ವೈದ್ಯಾಧಿಕಾರಿ ಡಾ.ನಾರಾಯಣ್ ಹೆಗ್ಡೆ, ವಲಯ 3ರ ಪರಿಸರ ಅಭಿಯಂತರರಾದ ಶ್ರೀದೇವಿ ಮತ್ತು ಸಿಬ್ಬಂದಿ ವರ್ಗ ಹಾಗೂ ನಾರಾಯಣ ಹೃದಯಾಲಯ ಮತ್ತು ಎಎಸ್‌ಜಿ ಕಣ್ಣಿನ ಆಸ್ಪತ್ರೆಯ ಸಿಬ್ಬಂದಿ ಹಾಜರಿದ್ದರು.

ಜೂ.23, ಮೈಸೂರಲ್ಲಿ ಸ್ವಯಂ ರಕ್ಷಣಾ ಕರಾಟೆ ಕಾರ್ಯಕ್ರಮ

ಮೈಸೂರು,ಜೂ.19(ಜಿಎ)–ಮೈಸೂರು ಕರಾಟೆ ಅಸೋಷಿಯೇಷನ್ ವತಿಯಿಂದ ಜೂ.23ರಂದು ಸ್ವಯಂ ರಕ್ಷಣೆಗಾಗಿ ಕರಾಟೆ ಎಂಬ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಅಸೋಷಿಯೇಷನ್ ಅಧ್ಯಕ್ಷ ಶಿವದಾಸ್ ಈ ವಿಷಯ ತಿಳಿಸಿ, ನಗರದ ಮಹಾರಾಜ ಕಾಲೇಜು ಹಾಕಿ ಮೈದಾನದಲ್ಲಿ ಅಂದು ಬೆಳಗ್ಗೆ 8ಕ್ಕೆ ನಡೆಯಲಿರುವ ಕಾರ್ಯಕ್ರಮವನ್ನು ನಗರ ಪೊಲೀಸ್ ಆಯುಕ್ತ ಬಿ.ರಮೇಶ್ ಉದ್ಘಾಟಿಸುವರು. ಮುಖ್ಯ ಅತಿಥಿಯಾಗಿ ಅಂತರಾಷ್ಟ್ರೀಯ ಕ್ರೀಡಾಪಟು ಎಂ.ಯೋಗೇಂದ್ರ, ಮೈವಿವಿ ದೈಹಿಕ ಶಿಕ್ಷಣ ಇಲಾಖೆ ನಿರ್ದೇಶಕ ಡಾ.ವೆಂಕಟೇಶ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಭಾಸ್ಕರ್ ನಾಯಕ್ ಭಾಗವಹಿಸುವರು. ವಿಧಾನಪರಿಷತ್ ಮಾಜಿ ಸದಸ್ಯ ಸಿ.ಎಸ್.ಅರುಣ್ ಮಾಚಯ್ಯ ಅಧ್ಯಕ್ಷತೆ ವಹಿಸುವರು ಎಂದು ತಿಳಿಸಿದರು.

1500 ಕರಾಟೆ ಪಟುಗಳನ್ನು ಒಂದು ಕಡೆ ಸೇರಿಸಿ ಅವರ ಮೂಲಕ ಕರಾಟೆ ಪ್ರದರ್ಶನ ಹಾಗೂ ವಿಶ್ವ ಕರಾಟೆ ದಿನ ಆಚರಿಸಲಾಗುವುದು ಎಂದರು. ಸುದ್ದಿಗೋಷ್ಠಿಯಲ್ಲಿ ಮೈಸೂರು ಕರಾಟೆ ಅಸೋಷಿಯೇಷನ್‌ನ ಉಪಾಧ್ಯಕ್ಷ ಎನ್.ಶಂಕರ್, ಸೋಸಲೆ ಸಿದ್ದರಾಜು, ಕಾರ್ಯದರ್ಶಿ ದೀಪಕ್ ಕುಮಾರ್, ಸಹ ಕಾರ್ಯದರ್ಶಿ ಸುನೀಲ್ ಕುಮಾರ್, ಭಾರತಿ, ಉಪಸ್ಥಿತರಿದ್ದರು.

ಗೌತಮ್‌ಗೆ ಪಿಎಚ್.ಡಿ ಪದವಿ




ಮೈಸೂರು, ಜೂ. 19–ಡಾ.ವಿ.ಎಂ.ಮಹೇಶ್ ಅವರ ಮಾರ್ಗದರ್ಶನದಲ್ಲಿ ಎಂ.ಗೌತಮ್ ಅವರು ಮೆಕ್ಯಾನಿಕಲ್ ಇಂಜಿನಿಯರಿಂಗ್‌ನಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾ ಪ್ರಬಂಧವನ್ನು, ಜೆಎಸ್‌ಎಸ್ ವಿಜ್ಞಾನ ಮತ್ತು ತಂತ್ರಜ್ಞಾನ ವಿಶ್ವವಿದ್ಯಾನಿಲಯ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ ಎಂದು ಪತ್ರಿಕಾ ಪ್ರಕಟಣೆ ತಿಳಿಸಿದೆ.

ನಾಳೆ ಅರಮನೆ ಮೈದಾನದಲ್ಲಿ ಅಂತಾರಾಷ್ಟ್ರೀಯ ಯೋಗ ದಿನಾಚರಣೆ

ಮೈಸೂರು,ಜೂ.19– ಭಾರತ ಸರ್ಕಾರ, ಕರ್ನಾಟಕ ಸರ್ಕಾರ, ಮೈಸೂರು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಆಯುಷ್ ಇಲಾಖೆಯ ವತಿಯಿಂದ ಜೂ.21ರಂದು ಬೆಳಗ್ಗೆ 6 ಗಂಟೆಯಿಂದ 8 ಗಂಟೆಯವರೆಗೆ ಅರಮನೆಯ ಆವರಣದಲ್ಲಿ ಅಂತಾರಾಷ್ಟ್ರೀಯ ಯೋಗ ದಿನವನ್ನು ಆಚರಿಸಲಾಗುತ್ತಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವ ಹೆಚ್.ಡಿ.ಕುಮಾರಸ್ವಾಮಿ ಉಪಸ್ಥಿತಿ ಇರಲಿದ್ದು, ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ರೇಷ್ಮೆ ಇಲಾಖೆ ಸಚಿವ ಕೆ.ವೆಂಕಟೇಶ್, ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ಮೈಸೂರು ಜಂಗಲ್ ಲಾಡ್ಜಸ್ ಅಧ್ಯಕ್ಷ ಹಾಗೂ



ಹೆಚ್.ಡಿ.ಕೋಟೆ ಕ್ಷೇತ್ರದ ಶಾಸಕ ಅನಿಲ್‌ಕುಮಾರ್ ಸಿ, ಚಾಮುಂಡೇಶ್ವರಿ ವಿದ್ಯುತ್ ನಿಗಮ ನಿಯಮಿತದ ಅಧ್ಯಕ್ಷ ಎ.ಬಿ.ರಮೇಶ್ ಬಂಡಿಸಿದ್ದೇಗೌಡ ಹಾಗೂ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷೆ ಡಾ.ಪುಷ್ಪ ಉದ್ಘಾಟನಾ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕೃಷ್ಣರಾಜ ಕ್ಷೇತ್ರದ ಶಾಸಕ ಟಿ.ಎಸ್.ಶ್ರೀವತ್ಸ ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ಸಂಸದರಾದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಸುನಿಲ್ ಬೋಸ್ ಆಗಮಿಸಲಿದ್ದಾರೆ. ಶಾಸಕರಾದ ತನ್ವೀರ್ ಸೇಠ್, ಜಿ.ಟಿ.ದೇವೇಗೌಡ, ರವಿಶಂಕರ್ ಡಿ, ಹರೀಶ್‌ಗೌಡ, ದರ್ಶನ್ ಧ್ರುವನಾರಾಯಣ್, ಜಿ.ಡಿ.ಹರೀಶ್‌ಗೌಡ, ವಿಧಾನಪರಿಷತ್‌ನ ಸದಸ್ಯರಾದ ಹೆಚ್.ವಿಶ್ವನಾಥ್, ಡಾ.ಡಿ.ತಿಮ್ಮಯ್ಯ, ಸಿ.ಎನ್. ಮಂಜೇಗೌಡ, ಮಧು ಜಿ.ಮಾದೇಗೌಡ, ಡಾ.ಯತಿಂದ್ರ, ವಿವೇಕಾನಂದ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

ಫುಟ್‌ಪಾತ್ ಮೇಲೆ ಮಲಗಿದ್ದ ವ್ಯಕ್ತಿ ಮೇಲೆ ಕಾರು ಹರಿಸಿದ ಸಂಸದರ ಮಗಳಿಗೆ ಸ್ಟೇಷನ್ ಜಾಮೀನು!

ಚೆನ್ನೈ: ಫುಟ್‌ಪಾತ್ ಮೇಲೆ ಮಲಗಿದ್ದ ವ್ಯಕ್ತಿ ಮೇಲೆ ಸಂಸದರೊಬ್ಬರ ಮಗಳು ಕಾರು ಹರಿಸಿ ಕೊಂದು ಹಾಕಿದ್ದು, ಆಕೆ ಸ್ಟೇಷನ್ ಜಾಮೀನಿನ ಮೇಲೆ ಬಿಡುಗಡೆಯಾಗಿದ್ದಾರೆ. ಹಿಟ್ ಅಂಡ್ ರನ್ ಪ್ರಕರಣದಲ್ಲಿ ಆಂಧ್ರಪ್ರದೇಶದ ವೈಎಸ್‌ಆರ್ ಕಾಂಗ್ರೆಸ್ ಪಕ್ಷದ ರಾಜ್ಯಸಭಾ ಸಂಸದ ಬಿಡಾ ಮಸ್ತಾನ್ ರಾವ್ ಅವರ ಪುತ್ರಿ ಹೆಸರು ಕೇಳಿ ಬರುತ್ತಿದ್ದು, ಈ ಘಟನೆಯಲ್ಲಿ ಸೂರ್ಯ ಎನ್ನುವ 21 ವರ್ಷದ ಯುವಕ ಗಂಭೀರವಾಗಿ ಗಾಯಗೊಂಡಿದ್ದು, ಬಳಿಕ ಕೊನೆಯುಸಿರೆಳೆದಿದ್ದಾರೆ. ಆರೋಪಿ ಮಾಧುರಿಯನ್ನು ಚೆನ್ನೈನ ಪೊಲೀಸರು



ಮಾಧುರಿ



ಸೂರ್ಯ

ಬಂಧಿಸಿದ್ದರು. ಆದರೆ ಅದೇ ದಿನ ಅವರಿಗೆ ಜಾಮೀನು ಸಿಕ್ಕಿದ್ದು, ಸ್ಟೇಷನ್ ಜಾಮೀನಿನ ಮೇಲೆ ಬಿಡುಗಡೆ ಮಾಡಿದ್ದಾರೆ. ಪೊಲೀಸರ ಈ ಕ್ರಮ ಇದೀಗ ಜನರಲ್ಲಿ ವ್ಯಾಪಕ ಆಕ್ರೋಶಕ್ಕೆ ಕಾರಣವಾಗಿದೆ.

ವೇಗವಾಗಿ ಬಂದ ಬಿಎಂಡಬ್ಲ್ಯೂ ಕಾರು ಫುಟ್‌ಪಾತ್‌ನಲ್ಲಿ ಮಲಗಿದ್ದ ವ್ಯಕ್ತಿಯ ಮೇಲೆ ಹರಿದಿದ್ದು, ಘಟನೆಯ ನಂತರ ಮಾಧುರಿ ತಕ್ಷಣವೇ ಸ್ಥಳದಿಂದ ಓಡಿಹೋಗಿದ್ದಾರೆ. ಆದರೆ ಅವರ ಸ್ನೇಹಿತರೊಬ್ಬರು ಕಾರಿನಿಂದ ಇಳಿದು ಅಪಘಾತದ ನಂತರ ಜಮಾಯಿಸಿದ ಜನರೊಂದಿಗೆ ಜಗಳವಾಡಲು ಪ್ರಾರಂಭಿಸಿದರು. ನಂತರ ಆತನೂ ಸ್ವಲ್ಪ ಸಮಯದ ನಂತರ ಅಲ್ಲಿಂದ ಹೊರಟು ಹೋದ. ಗುಂಪಿನಲ್ಲಿದ್ದ ಕೆಲವರು ಸೂರ್ಯ ಅವರನ್ನು ಆಸ್ಪತ್ರೆಗೆ ಕರೆದೊಯ್ದರು, ಆದರೆ ಅವರು ಗಂಭೀರವಾಗಿ ಗಾಯಗೊಂಡು ಸಾವನ್ನಪ್ಪಿದರು.

ಸ್ವಯಂ ಉದ್ಯೋಗ ಮಾಡುತ್ತಲೇ ಶಿಕ್ಷಣ ಪಡೆಯುವುದು ಗಾಂಧೀಜಿ ಆಶಯವಾಗಿತ್ತು

● ಸ್ವಾತಂತ್ರ್ಯ ಹೋರಾಟಗಾರ ತಗಡೂರು ಸತ್ಯನಾರಾಯಣ ಅಭಿಮತ ● ಮೈಸೂರು ವಿವಿ ಗಾಂಧಿ ಭವನದಲ್ಲಿ ವಿದ್ಯಾರ್ಥಿಗಳೊಂದಿಗೆ ಮುಕ್ತ ಸಂವಾದ

ಮೈಸೂರು,ಜೂ.19(ಎಂಟಿವೈ)– ಉತ್ತಮ ಶಿಕ್ಷಣ ಪಡೆದು ಉದ್ಯೋಗಕ್ಕಾಗಿ ಅರ್ಜಿ ಹಿಡಿದು ಅಲೆಯುವ ಬದಲು ಸ್ವಯಂ ಉದ್ಯೋಗ ಮಾಡುತ್ತಲೇ ಶಿಕ್ಷಣ ಪಡೆಯುವುದು ಉತ್ತಮ ಎನ್ನುವುದು ಮಹಾತ್ಮ ಗಾಂಧೀಜಿ ಅವರ ಆಶಯವಾಗಿತ್ತು ಎಂದು ಸ್ವಾತಂತ್ರ್ಯ ಹೋರಾಟಗಾರ ತಗಡೂರು ಸತ್ಯನಾರಾಯಣ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರು ವಿಶ್ವವಿದ್ಯಾನಿಲಯದ ಗಾಂಧಿ ಅಧ್ಯಯನ ಕೇಂದ್ರದಲ್ಲಿ ಆಯೋಜಿಸಿದ್ದ ಮುಕ್ತ ಸಂವಾದದಲ್ಲಿ ವಿದ್ಯಾರ್ಥಿಗಳ ಪ್ರಶ್ನೆಗೆ ಉತ್ತರಿಸಿದ ಅವರು, ಆಧುನಿಕ ಶಿಕ್ಷಣ ಪದ್ಧತಿಯಿಂದಾಗಿ ಇಂದು ಮೌಲ್ಯಾಧಾರಿತ ಶಿಕ್ಷಣವೇ ಇಲ್ಲದಂತಾಗಿದೆ. ಇದರಿಂದ ವಿದ್ಯಾರ್ಥಿಗಳ ಮಾನಸಿಕ ಸ್ಥಿತಿ ಹಾಳಾಗುತ್ತಿದೆ ಯುವ ಮತ್ತು ವಿದ್ಯಾರ್ಥಿ ಸಮುದಾಯಕ್ಕೆ ದೇಶದ ಬಗ್ಗೆ ಚಿಂತನೆ ಇಲ್ಲದಂತಾಗಿದೆ. ಅಲ್ಲದೆ, ಸಂಪಾದನೆ ಹಾಗೂ ವೈಯಕ್ತಿಕ ಏಳಿಗೆಯೇ ಮುಖ್ಯ ಆಗಿದೆ ಎಂದು ವಿಷಾದಿಸಿದರು.

ಪ್ರಸ್ತುತ ಸಂದರ್ಭದಲ್ಲಿ ನೀಡುತ್ತಿರುವ ಶಿಕ್ಷಣ(ವಿದ್ಯೆ) ಪರಿಪೂರ್ಣವಾಗಿಲ್ಲ. ವಿಜ್ಞಾನ, ಉದ್ಯೋಗ, ವಿಕಾಸ ಶಿಕ್ಷಣದ ಧ್ಯೇಯವಾಗಬೇಕಾಗಿತ್ತು. ವಿಜ್ಞಾನದ ಮಿತಿ ಮೀರಿದ ಬೆಳವಣಿಗೆ ಅಪಾಯಕಾರಿ. ಆತ್ಮಜ್ಞಾನವಿಲ್ಲದ ವಿಜ್ಞಾನದಿಂದ ಅವನತಿಯೇ ಹೆಚ್ಚು. ಇದನ್ನು ಎಲ್ಲರೂ ಅರ್ಥ ಮಾಡಿಕೊಳ್ಳಬೇಕು. ಸ್ವದೇಶದಲ್ಲಿ ಶಿಕ್ಷಣ ಪಡೆದು ಪ್ರತಿಭಾವಂತರಾಗಿ ವಿದೇಶದಲ್ಲಿ ಪ್ರತಿಭೆಯನ್ನು ಧಾರೆ ಎರೆಯುತ್ತಿದ್ದಾರೆ. ಸ್ವಾರ್ಥವನ್ನು ಬಿಟ್ಟು ದೇಶದ ಉನ್ನತಿಗಾಗಿ ದುಡಿಯುವಂತಾದರೆ ಭಾರತಕ್ಕೆ ಸ್ವರ್ಣಯುಗ ಬರುತ್ತದೆ. ಇಂದಿನ ದೇಶದ ಸ್ಥಿತಿಯನ್ನು ಅವಲೋಕಿಸಿದರೆ ದೇಶ ಉಳಿಸಿಕೊಳ್ಳುವ ಭರವಸೆ ಇಂದಿನ ಪೀಳಿಗೆಯಲ್ಲಿ ಕಾಣುತ್ತಿಲ್ಲ. ದೇಶಕ್ಕಾಗಿ ಯೋಚಿಸಬೇಕಾದ ರಾಜಕಾರಣಿಗಳು ಕುರ್ಚಿಗಾಗಿ ಹೊಡೆದಾಟ ನಡೆಸುತ್ತಿದ್ದಾರೆ. ಅಧಿಕಾರ ದಾಹವೇ ಅವರಿಗೆ ಮುಖ್ಯವಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.



ಸಂವಾದದಲ್ಲಿ ಸ್ವಾತಂತ್ರ್ಯ ಹೋರಾಟಗಾರ ತಗಡೂರು ಸತ್ಯನಾರಾಯಣ ಮಾತನಾಡಿದರು. ಗಾಂಧಿ ಅಧ್ಯಯನ ಕೇಂದ್ರದ ನಿರ್ದೇಶಕ ಡಾ.ನರೇಂದ್ರ ಕುಮಾರ್ ಚಿತ್ರದಲ್ಲಿದ್ದಾರೆ.

ಹರಿಜನರ ಉದ್ಧಾರಕ್ಕೆ ಗಾಂಧಿಗೆ ಪ್ರೇರಣೆ ಏನು ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, ಜಾತಿ ಪದ್ಧತಿಯಿಂದ ದೇಶ ವಿಭಜನೆ ಆಗುವ ಪರಿಸ್ಥಿತಿ ಇದೆ. ಸಂಕೋಲೆಗಳನ್ನು ಮೀರಿ ದೇಶಕ್ಕಾಗಿ ಒಗ್ಗೂಡದವರಿಂದ ರಾಷ್ಟ್ರಕ್ಕಾಗಿ ಏನು ತಾನೇ ನಿರೀಕ್ಷಿಸಲು ಸಾಧ್ಯ. ಆಫ್ರಿಕಾದಿಂದ ಬಂದ ಗಾಂಧಿ ದೇಶವನ್ನು ಅರಿಯಲು ಪರ್ಯಟನೆ ಮಾಡಿದರು. ಜಾತಿ ಪದ್ಧತಿ ನಿರ್ಮೂಲನೆ ಮಾಡದೇ ದೇಶದ ವಿಕಾಸ ಅಸಾಧ್ಯ ಎಂಬುದು ಅರಿವಾಯಿತು.

ಗಾಂಧೀಜಿ ಹಾಗೂ ಅಂಬೇಡ್ಕರ್ ಹರಿಜನರ ಉದ್ಧಾರಕ್ಕಾಗಿ ಶ್ರಮಿಸಿದರು. ಗಾಂಧೀಜಿ ಅಸ್ಪೃಶ್ಯತೆ ಆಚರಣೆ ಮಹಾಪಾಪ ಎಂದರು. ಜಾತಿ ನಿರ್ಮೂಲನೆಗೆ ಅಂಬೇಡ್ಕರ್ ಪ್ರಯತ್ನಪಟ್ಟರೂ ಯಶಸ್ವಿಯಾಗದ ಹಿನ್ನೆಲೆಯಲ್ಲಿ ಬೌದ್ಧ ಧಮ್ಮ ಸೇರಿದರು. ಇಂದಿನ ರಾಜಕಾರಣಿಗಳು ಮತಕ್ಕಾಗಿ ಜಾತಿಗಳ ಮೂಲಕ ಜನರನ್ನು ವಿಭಜನೆ ಮಾಡುತ್ತ ಜಿಗುಪ್ಸೆ ಹುಟ್ಟಿಸುತ್ತಿದ್ದಾರೆ. ತಮ್ಮ ಸ್ವಾರ್ಥಕ್ಕಾಗಿ ದೇಶ ವಿಭಜನೆ ಮಾಡುತ್ತಿದ್ದಾರೆ. ಜಾತಿ ನಿರ್ಮೂಲನೆಗೆ ಯುವಕರು ಮುಂದಾಗಬೇಕು ಎಂದರು.

ಗಾಂಧೀಜಿ, ಅಂಬೇಡ್ಕರ್ ನಡುವೆ ವೈಚಾರಿಕ ಭಿನ್ನಾಭಿಪ್ರಾಯ ಇತ್ತು. ಆದರೆ ಅವರಿಬ್ಬರೂ ತಮ್ಮನ್ನು ಬೇರೆ ಬೇರೆ ಎಂದುಕೊಂಡಿರಲಿಲ್ಲ. ಸ್ವಾತಂತ್ರ್ಯ ಬಂದ ಮೇಲೆ ಸುಖವಿಲ್ಲ. ದೇಶ ವಿಭಜನೆ ಮಾಡುವುದು ಗಾಂಧೀಜಿಗೆ ಒಪ್ಪಿಗೆ ಇರಲಿಲ್ಲ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರಲ್ಲದೆ, ಜಾಗತೀಕರಣದ ಸವಾಲು ಎದುರಿಸುವುದನ್ನು ಕುರಿತ ವಿದ್ಯಾರ್ಥಿಯ ಪ್ರಶ್ನೆಗೆ, ಸುಲಭವಾದ ಮಾರ್ಗ ಎಂದರೆ ಗಾಂಧೀಜಿಯ ತತ್ವವನ್ನು ಚೆನ್ನಾಗಿ ಅರಿತುಕೊಳ್ಳುವುದು. ಇದಕ್ಕಿಂತ ಬೇರೆ ಯಾವುದೇ ಮಾರ್ಗದ ಅಗತ್ಯವಿಲ್ಲ ಎಂದರು. ಸಂವಾದ ಕಾರ್ಯಕ್ರಮದಲ್ಲಿ ಗಾಂಧಿ ಅಧ್ಯಯನ ಕೇಂದ್ರದ ನಿರ್ದೇಶಕ ಡಾ.ಎಸ್.ನರೇಂದ್ರಕುಮಾರ್ ಇದ್ದರು.

ಜಿಮ್ ಟ್ರೈನರ್ ಮೇಲಿನ ಮೋಹಕ್ಕೆ ಗಂಡನ ಹತ್ಯೆ

3 ವರ್ಷದ ಬಳಿಕ ವಾಟ್ಸಾಪ್ ಮೆಸೇಜ್‌ನಿಂದ ಪ್ರಕರಣಕ್ಕೆ ಟ್ವಿಸ್ಟ್

ಪಾಣಿಪತ್: ಮೂರು ವರ್ಷದ ಹಿಂದಿನ ಕೊಲೆ ಪ್ರಕರಣವೊಂದಕ್ಕೆ ವಾಟ್ಸಾಪ್ ಸಂದೇಶವೊಂದು ಟ್ವಿಸ್ಟ್ ನೀಡಿದೆ. ಪ್ರಕರಣದ ನಿಜವಾದ ಆರೋಪಿಯನ್ನು ಪತ್ತೆ ಮಾಡುವಲ್ಲಿ ಪೊಲೀಸರಿಗೆ ವಾಟ್ಸಾಪ್ ನೆರವಾಗಿದೆ.

2021ರಲ್ಲಿ ವ್ಯಕ್ತಿಯೊಬ್ಬರಿಗೆ ಅವರ ಮನೆ ಸಮೀಪದಲ್ಲಿಯೇ ಟ್ರಕ್ ಒಂದು ಡಿಕ್ಕಿ ಹೊಡೆದಿತ್ತು. ಅದರಲ್ಲಿ ಅವರು ಗಂಭೀರವಾಗಿ ಗಾಯಗೊಂಡಿದ್ದರು. ಎರಡೂ ಕಾಲುಗಳು ಮುರಿದಿದ್ದವು. ಈ ಬಗ್ಗೆ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿತ್ತು. ದೂರು ಹಿಂಪಡೆಯುವಂತೆ ಸಂತ್ರಸ್ತ ವಿನೋದ್ ಬರಾರಾ ಮೇಲೆ ಟ್ರಕ್ ಚಾಲಕ ದೇವ್ ಸುನಾರ್ ಒತ್ತಡ ಹೇರಿದ್ದ. ಆದರೆ ವಿನೋದ್ ಅದನ್ನು ತಿರಸ್ಕರಿಸಿದ್ದರು. ನಂತರ ಮನೆಯೊಳಗೇ ನುಗ್ಗಿದ ಟ್ರಕ್ ಚಾಲಕ ಗುಂಡು ಹಾರಿಸಿ ಕೊಲೆ ಮಾಡಿದ್ದ. ಇದು ಅಪಘಾತದ ಬಳಿಕದ ಜಗಳದಿಂದ ನಡೆದ ಹತ್ಯೆ ಎಂದು ಪೊಲೀಸರು ಭಾವಿಸಿದ್ದರು.

ಹರ್ಯಾಣದ ಪಾಣಿಪತ್‌ನಲ್ಲಿ ವಾಸವಿರುವ ವಿನೋದ್ ಬರೋರಾ, ಕಂಪ್ಯೂಟರ್ ಸಂಸ್ಥೆಯೊಂದನ್ನು ನಡೆಸುತ್ತಿದ್ದರು. ಅವರಿಗೆ ನಿಧಿ ಎಂಬಾಕೆ ಜತೆ ಮದುವೆಯಾಗಿತ್ತು. ಈ ಜೋಡಿಗೆ ಒಬ್ಬ ಮಗಳೂ ಇದ್ದಾಳೆ. ಆದರೆ ಜಿಮ್‌ಗೆ ಹೋಗಲು ಆರಂಭಿಸಿದ ನಿಧಿ, ಅಲ್ಲಿನ ಟ್ರೈನರ್ ಜತೆ ಪ್ರೀತಿಯ ಮೋಹದಲ್ಲಿ ಬಿದ್ದಿದ್ದಳು. ಸುಮಿತ್ ಮತ್ತು ಆಕೆ ನಡುವೆ ಅಫೇರ್ ಆರಂಭವಾಗಿತ್ತು. ಈ ವಿಚಾರವಾಗಿ ದಂಪತಿ ನಡುವೆ ವಾಗ್ವಾದಗಳು ಶುರುವಾಗಿದ್ದವು.



ಸಂಗ್ರಹ ಚಿತ್ರ

ಇದರಿಂದಾಗಿ ಇಬ್ಬರೂ ಸೇರಿ ಪಂಜಾಬ್‌ನ ದೇವ್ ಸುನಾರ್‌ಗೆ ಹತ್ಯೆ ಸುಪಾರಿ ನೀಡಿದರು. ವಿನೋದ್‌ಗೆ ಟ್ರಕ್ ಡಿಕ್ಕಿ ಹೊಡೆಸಿ, ಅಪಘಾತದಲ್ಲಿ ಸಾವು ಎಂಬಂತೆ ಬಿಂಬಿಸುವುದು ಅವರ ಉದ್ದೇಶವಾಗಿತ್ತು. ಈ ಕೆಲಸ ಮುಗಿಸಲು ದೇವ್‌ಗೆ 10 ಲಕ್ಷ ರೂ ನಗದು ನೀಡಿದ್ದರು. ಆದರೆ ಮೂರು ವರ್ಷಗಳ ಹಿಂದೆ ಪಾಣಿಪತ್ ಎಸ್‌ಪಿ ಅಜಿತ್ ಸಿಂಗ್ ಶೆಖಾವತ್ ಅವರ ಫೋನ್‌ಗೆ ವಾಟ್ಸಾಪ್ ಸಂದೇಶವೊಂದು ಬಂದಿತ್ತು. ವಿನೋದ್ ಹತ್ಯೆಯಲ್ಲಿ ದೇವ್ ಮಾತ್ರ ತಪ್ಪಿತಸ್ಥನಲ್ಲ. ಆತನ ಹತ್ಯೆ ಹಿಂದೆ ಕುಟುಂಬದವರೂ ಕೂಡ ಭಾಗಿಯಾಗಿದ್ದಾರೆ ಎಂದು ಅದರಲ್ಲಿ ಹೇಳಲಾಗಿತ್ತು. ಈ ಸಂದೇಶ ಕಳುಹಿಸಿದ್ದು, ಆಸ್ಟ್ರೇಲಿಯಾದಲ್ಲಿ ನೆಲೆಸಿರುವ ವಿನೋದ್‌ನ ಸಹೋದರ ಪ್ರಮೋದ್. ಬಳಿಕ ತಂಡವೊಂದನ್ನು ರಚಿಸಿದ ಪೊಲೀಸರು, ದೇವ್ ಸುನಾರ್‌ನ ಫೋನ್ ಕರೆಗಳ ವಿವರಗಳನ್ನು ಶೋಧಿಸತೊಡಗಿದರು. ಅದರಲ್ಲಿ ಸುಮಿತ್ ಜತೆಗೆ ದೇವ್ ನಿರಂತರ ಸಂಪರ್ಕದಲ್ಲಿ ಇರುವುದು ಬೆಳಕಿಗೆ ಬಂದಿತ್ತು.

ಇದರಿಂದ ಅನುಮಾನಗೊಂಡ ಪೊಲೀಸರು, ಮತ್ತಷ್ಟು ತನಿಖಾ ಆಳಕ್ಕಿಳಿದರು. ಸುಮಿತ್‌ನಿಂದ ನಿಧಿಗೆ ಅನೇಕ ಕರೆಗಳು ಹೋಗಿರುವುದು ಪತ್ತೆಯಾಯಿತು. ಅದರಲ್ಲಿ ಕೆಲವು ಸುದೀರ್ಘ ಸಮಯದ ಕರೆಗಳಾಗಿದ್ದವು. ಸುಮಿತ್‌ನನ್ನು ವಶಕ್ಕೆ ಪಡೆದುಕೊಂಡು ವಿಚಾರಣೆಗೆ ಒಳಪಡಿಸಿದಾಗ, ನಿಧಿ ಸೂಚನೆಯಂತೆ ವಿನೋದ್ ಹತ್ಯೆಗೆ ಸಂಚು ನಡೆಸಿದ್ದಾಗಿ ಬಾಯ್ಬಿಟ್ಟಿದ್ದಾನೆ.

ತ್ವರಿತಗತಿಯಲ್ಲಿ ವಿ.ಸಿ.ನಾಲೆ ಆಧುನೀಕರಣ ಕಾಮಗಾರಿ ಪೂರ್ಣಗೊಳಿಸಿ

ಮಂಡ್ಯ ಜಿಲ್ಲೆಯ ವಿವಿಧೆಡೆ ನಾಲೆ ಕಾಮಗಾರಿ ವೀಕ್ಷಿಸಿದ ಸಚಿವ ಚಲುವರಾಯಸ್ವಾಮಿ ಅಧಿಕಾರಿಗಳಿಗೆ ಸೂಚನೆ

ಪಾಂಡವಪುರ,ಜೂ.19– ಕೃಷ್ಣರಾಜ ಸಾಗರ ಅಣೆಕಟ್ಟೆಯಿಂದ ನೀರು ಸಂಪರ್ಕಿಸುವ ವಿಶ್ವೇಶ್ವರಯ್ಯ ನಾಲಾ ಆಧುನೀಕರಣ ಕಾಮಗಾರಿ ಜಿಲ್ಲೆಯ ವಿವಿಧೆಡೆ ನಡೆಯುತ್ತಿದ್ದು, ಈ ಬಗ್ಗೆ ಸ್ಥಳ ಪರಿಶೀಲನೆ ನಡೆಸಿದ ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ, ತ್ವರಿತಗತಿಯಲ್ಲಿ ನಾಲಾ ಆಧುನೀಕರಣ ಕಾಮಗಾರಿ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಬುಧವಾರ ಮಂಡ್ಯ ಜಿಲ್ಲೆಯ ವಿವಿಧೆಡೆ ಕಾಮಗಾರಿ ಪರಿವೀಕ್ಷಿಸಿದ ಚಲುವರಾಯಸ್ವಾಮಿ ಅದಕ್ಕೂ ಮುನ್ನ ಕೆಆರ್‌ಎಸ್‌ನ ಖಾಸಗಿ ಹೋಟೆಲ್‌ನಲ್ಲಿ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳ ಸಭೆ ನಡೆಸಿದರು. ಸಭೆಯಲ್ಲಿ 300 ಕೋಟಿ ರೂ. ವೆಚ್ಚದಲ್ಲಿ ಕೈಗೊಂಡಿರುವ ವಿ.ಸಿ. ಮುಖ್ಯ ನಾಲೆ ಆಧುನೀಕರಣ ಕಾಮಗಾರಿಯ ಪ್ರಗತಿ ಪರಿಶೀಲನಾ ಸಭೆ ನಡೆಸಿ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು.

ವಿಶ್ವೇಶ್ವರಯ್ಯ ನಾಲೆಯು ಕೃಷ್ಣರಾಜ ಜಲಾಶಯದ ಎಡದಂಡೆಯಿಂದ ಪ್ರಾರಂಭಗೊಳ್ಳುತ್ತದೆ. ಸದರಿ ನಾಲೆಯ ಕಾಮಗಾರಿಯು ಸುಮಾರು, 1931 ರಲ್ಲಿ ಪೂರ್ಣಗೊಂಡಿರುತ್ತದೆ. ಇದೀಗ ಆಧುನೀಕರಣ ಕಾಮಗಾರಿ ಕೈಗೊಂಡಿದ್ದು, 40 ಕಿ.ಮೀ ನಲ್ಲಿ 24 ಕಿ.ಮೀ ಪೂರ್ಣಗೊಂಡಿದೆ, 4 ಕಿ.ಮೀ ಪ್ರಗತಿಯಲ್ಲಿದೆ ಎಂದು ಅಧಿಕಾರಿಗಳು ಸಭೆಯ ಗಮನಕ್ಕೆ ತಂದರು.

ಕೆ.ಆರ್.ಎಸ್‌ನಿಂದ ನೀರು ಬಿಡುಗಡೆ ಮಾಡಲು ಹಾಗೂ ರೈತರಿಗೆ ಯಾವುದೇ ತೊಂದರೆಯಾಗದಂತೆ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸಿ ಎಂದು ಅಧಿಕಾರಿಗಳಿಗೆ ಚಲುವರಾಯಸ್ವಾಮಿ ಸೂಚನೆ ನೀಡಿದರು.

ಕಾಮಗಾರಿ ವೀಕ್ಷಣೆ: ಸಭೆ ಬಳಿಕ



ವಿಸಿ ನಾಲೆ ಆಧುನೀಕರಣ ಕಾಮಗಾರಿ ಸೇರಿದಂತೆ ವಿವಿಧ ಕಾಮಗಾರಿ ವೀಕ್ಷಿಸುತ್ತಿರುವ ಉಸ್ತುವಾರಿ ಸಚಿವ ಚಲುವರಾಯಸ್ವಾಮಿ

ಕೆಆರ್‌ಎಸ್‌ನಿಂದ ಕಟ್ಟೇರಿವರೆಗೆ ನಾಲಾ ಏರಿಯ ಮೂಲಕ ಕಾಮಗಾರಿಯ ಪರಿಶೀಲನೆ, ಅರಳಕುಪ್ಪೆಯಿಂದ ಚಾಕಶೆಟ್ಟಿಹಳ್ಳಿವರೆಗೆ ನಾಲಾ ಏರಿಯ ಮೂಲಕ, ಎಲೆಕೆರೆ ಹ್ಯಾಂಡ್‌ಪೋಸ್ಟ್ ಸೇತುವೆ, ಹುಲಿಕೆರೆ ಸುರಂಗದಲ್ಲಿ ನಡೆಯುತ್ತಿರುವ ಕಾಮಗಾರಿ ಪರಿಶೀಲಿಸಿದರು.

ನಿಗದಿತ ಅವಧಿಯೊಳಗೆ ನಾಲೆ ಅಭಿವೃದ್ಧಿ ಕಾಮಗಾರಿಗಳು ಪೂರ್ಣಗೊಳಿಸಬೇಕು. ಕಳಪೆ ಕೆಲಸ ಕಂಡು ಬಂದರೆ ಗುತ್ತಿಗೆದಾರರು ಹಾಗೂ ಅಧಿಕಾರಿಗಳನ್ನು ಹೊಣೆ ಮಾಡಲಾಗುವುದು. ಇದೇ ವೇಳೆ ಸ್ಥಳೀಯ ರೈತರ ಅಭಿಪ್ರಾಯ ಆಲಿಸಿದ ಸಚಿವರು, ಕೃಷಿಕರ ಹಿತಕ್ಕಾಗಿ ಹೆಚ್ಚಿನ ಅನುದಾನ ತಂದು ಕಾಮಗಾರಿ ನಡೆಸಲಾಗುತ್ತಿದೆ. ಜಿಲ್ಲೆಯ ಸಮಗ್ರ ಅಭಿವೃದ್ಧಿ ತಮ್ಮ ಆಶಯವಾಗಿದ್ದು ಅದಕ್ಕೆ ಜನರ ಸಹಕಾರವೂ ಅಗತ್ಯವಾಗುತ್ತದೆ ಎಂದು ಮನವರಿಕೆ ಮಾಡಿಕೊಟ್ಟರು.

ಆಧುನೀಕರಣ ಕಾಮಗಾರಿಯಿಂದ ವಿವಿಧ ತಾಲೂಕುಗಳ ಕೊನೆಯ ಭಾಗಕ್ಕೂ ನೀರನ್ನು ಸುಲಭವಾಗಿ ತಲುಪಿಸಬಹುದು ಹಾಗೂ ಇದು ಶಾಶ್ವತ ಪರಿಹಾರವಾಗಿರುತ್ತದೆ. ಈ ನಾಲಾ ಭಾಗದಲ್ಲಿ ಬರುವ 18 ಕೆರೆಗಳಿಗೆ ನೀರು ತುಂಬಿಸಬಹುದು. ಕೆಆರ್‌ಎಸ್‌ನಿಂದ ನೀರು ಬಿಡುಗಡೆ ಮಾಡಲು ಹಾಗೂ ರೈತರಿಗೆ ಯಾವುದೇ ತೊಂದರೆಯಾಗದಂತೆ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸಲಾಗುವುದು. ರೈತರ ಅವಶ್ಯಕತೆಗೆ ಯಾವುದೇ ರೀತಿಯ ತೊಂದರೆ ಆಗುವುದಿಲ್ಲ ಎಂದು ಹೇಳಿದರು.

ಸಭೆಯಲ್ಲಿ ಶಾಸಕರಾದ ರಮೇಶ್ ಬಾಬು ಬಂಡಿಸಿದ್ದೇಗೌಡ, ದರ್ಶನ್ ಪುಟ್ಟಣ್ಣಯ್ಯ, ಪಿ.ರವಿಕುಮಾರ್ ಗಣಿಗ, ವಿಧಾನಪರಿಷತ್ ಸದಸ್ಯ ಮಧು ಜಿ.ಮಾದೇಗೌಡ, ದಿನೇಶ್‌ಗೂಳಿಗೌಡ, ಜಿಲ್ಲಾಧಿಕಾರಿ ಡಾ.ಕುಮಾರ, ಕಾ.ನೀ.ನಿ.ನಿ ಅಧೀಕ್ಷಕ ಇಂಜಿನಿಯರ್ ರಘುರಾಂ, ಸೇರಿದಂತೆ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ಅಣೆಕಟ್ಟೆಯಿಂದ ರೈತರಿಗೆ ನೀರು ಕೊಡಲು ಸಿದ್ಧತೆ

ಪಾಂಡವಪುರ, ಜೂ.19– ಕೆಆರ್‌ಎಸ್ ಅಣೆಕಟ್ಟೆಯಿಂದ ರೈತರಿಗೆ ನೀರು ಕೊಡಲು ನಾವು ಸಿದ್ಧತೆ ಮಾಡಿಕೊಳ್ಳಬೇಕಿದೆ. ಹೀಗಾಗಿ ಇಂದು ಸಭೆ ನಡೆಸಿದ್ದೇವೆ. ಇನ್ನೊಂದು ವಾರದಲ್ಲೆ ನೀರು ಬಿಡಬೇಕಾದ ಪರಿಸ್ಥಿತಿ ಎದುರಾಗಬಹುದು. ಯಾವುದೇ ಕಾರಣಕ್ಕೂ ಕಾಮಗಾರಿಯಿಂದ ನೀರು ನಿಲ್ಲಿಸಲಾಯ್ತು ಅನ್ನುವಂತಾಗಬಾರದು. ನಾಲೆ ವಿಚಾರದಲ್ಲಿ ನಮ್ಮ ದುರದೃಷ್ಟವೋ ಏನೋ ಜನರಿಗೆ ಮಾಹಿತಿ ಕೊಡುವುದರಲ್ಲಿ ವಿಫಲವಾಗಿದ್ದೇವೆ. ವಿರೋಧ ಪಕ್ಷದವರು ಟೀಕೆ ಮಾಡುವುದರಲ್ಲಿ ಯಶಸ್ವಿಯಾಗಿದ್ದಾರೆ. ಯಾರೇ ನಮ್ಮನ್ನ ಬಯ್ಯಲಿ, ಟೀಕೆ ಮಾಡಲಿ ನಾವು ಯಾವುದಕ್ಕೂ ತಲೆಕೆಡಿಸಿಕೊಳ್ಳಲ್ಲ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ಸ್ಪಷ್ಟಪಡಿಸಿದರು.

> ಅತ್ಯಂತ ಬಹುಮತದಿಂದ ಕುಮಾರಸ್ವಾಮಿ ಗೆದ್ದಿದ್ದಾರೆ. ಕೇಂದ್ರದಲ್ಲಿ ಉತ್ತಮವಾದ ಖಾತೆಯನ್ನು ಪಡೆದುಕೊಂಡಿದ್ದಾರೆ. ಜಿಲ್ಲೆಯ ಯುವಕರಿಗೆ ಉದ್ಯೋಗ ಕೊಡಿಸೋದಾದರೆ ಸಂತೋಷ, ಸ್ವಾಗತ ಮಾಡುತ್ತೇನೆ. ಅಭಿವೃದ್ಧಿ ಬಗ್ಗೆ ಸಹಕಾರ ಬೇಕಿದ್ದರೆ ನೀಡೋದಕ್ಕೆ ನಾವು ಸಿದ್ಧ ಚುನಾವಣೆ ಮುಗಿದಿದೆ ಟೀಕೆ, ಟಿಪ್ಪಣಿ ಬೇಡ ನಮಗೆ ಅಭಿವೃದ್ಧಿ ಅಷ್ಟೇ ಬೇಕು. –ಚಲುವರಾಯಸ್ವಾಮಿ

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಿರೋಧ ಪಕ್ಷದವರಿಗೆ ನಮ್ಮ ಮೇಲೆ ಟೀಕೆ ಮಾಡಿಕೊಂಡು ರಾಜಕಾರಣ ಮಾಡೋದೆ ಮುಖ್ಯ ಅಂದರೆ ಟೀಕೆ ಮಾಡಲಿ. ನಮಗೆ ನಮ್ಮ ಜನರ ಹಿತ ಅಷ್ಟೇ ಮುಖ್ಯ. ನಾಳೆಯೇ ವಿ.ಸಿ. ನಾಲೆಗೆ ನೀರು ಬಿಡಬೇಕು ಅನ್ನೋದಾದರೆ ಬಿಡುತ್ತೇವೆ ಬಿಡಲ್ಲ ಅನ್ನೋ ಮಾತೇ ಇಲ್ಲಾ. ಕಾಮಗಾರಿ ಉತ್ತಮ ಗುಣಮಟ್ಟದಾಗಿದೆ. ಅನುಮಾನ ಇದ್ದರೆ ವಿಪಕ್ಷಗಳು ಕಾಮಗಾರಿ ಪರಿಶೀಲಿಸಲಿ ಎಂದು ಹೇಳಿದರು.

ಡಿಕೆಶಿ ಸ್ಪರ್ಧಿಸುವ ಅವಶ್ಯಕತೆ ಇಲ್ಲ: ಚನ್ನಪಟ್ಟಣದಲ್ಲಿ ಡಿ.ಕೆ.ಶಿವಕುಮಾರ್ ಸ್ಪರ್ಧೆ ಮಾಡುವ ಅವಶ್ಯಕತೆ ಇಲ್ಲ. ಶಿವಕುಮಾರ್ ಶಾಸಕರಾಗಿ ಉಪಮುಖ್ಯಮಂತ್ರಿ ಆಗಿದ್ದಾರೆ. ಅವರು ಚನ್ನಪಟ್ಟಣದಲ್ಲಿ ಸ್ಪರ್ಧೆ ಮಾಡುವ ಅವಶ್ಯಕತೆ ಇಲ್ಲ. ಸ್ಪರ್ಧೆ ಮಾಡುತ್ತಾರೆ ಅನ್ನೋದೆಲ್ಲಾ ಊಹಾಪೋಹಾ. ಡಿ.ಕೆ.ಸುರೇಶ್ ಎಂಪಿ ಚುನಾವಣೆಯಲ್ಲಿ ಸೋತಿರುವುದರಿಂದ ಅವರು ಸ್ಪರ್ಧೆ ಮಾಡುವ ಮಾತಿದೆ. ಅವರ ಸ್ಪರ್ಧೆ ಬಗ್ಗೆ ಪಕ್ಷ ತೀರ್ಮಾನಿಸುತ್ತದೆ ಎಂದರು.

ದರ್ಶನ್ ವಿಚಾರದಲ್ಲಿ ಸಚಿವರ ಒತ್ತಡವಿಲ್ಲ: ನಟ ದರ್ಶನ್ ಬಿಡುಗಡೆಗೆ ಸಚಿವರ ಒತ್ತಡದ ವಿಚಾರಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿ, ಯಾವ ಸಚಿವರು ದರ್ಶನ್ ಬಿಡುಗಡೆಗೆ ಒತ್ತಡ ಹಾಕಿಲ್ಲ, ನಮ್ಮ ಸಿಎಂ ಒತ್ತಡಕ್ಕೆ ಮಣಿಯುವವರು ಅಲ್ಲ. ದರ್ಶನ್ ಪ್ರಕರಣ ಲೀಗಲ್ ಆಕ್ಷನ್ ಆಗಿದೆ. ಆತ್ಮೀಯತೆ ಇರಬಹುದು. ಆದರೆ ಆತ್ಮೀಯತೆ ಬೇರೆ, ವಿಶ್ವಾಸವೇ ಬೇರೆ. ತನಿಖೆ ಆಗುತ್ತಿದೆ. ನ್ಯಾಯಾಲಯದಲ್ಲಿ ತೀರ್ಮಾನ ಆಗುತ್ತದೆ. ಕಲಾವಿದ ಆದ್ದರಿಂದ ಎಲ್ಲರಿಗೂ ಪರಿಚಯ ಇರ್ತಾರೆ ಹಾಗಂತ ತನಿಖೆ ಹಳ್ಳ ಹಿಡಿಯತ್ತೆ ಅಂತ ಅಲ್ಲ. ನಮ್ಮ ಸರ್ಕಾರ ನೂರಕ್ಕೆ ನೂರು ನಿಷ್ಪಕ್ಷಪಾತ ತನಿಖೆಗೆ ಬದ್ಧವಾಗಿದೆ ಎಂದು ಸ್ಪಷ್ಟಪಡಿಸಿದರು.

ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಎಸ್‌ಪಿಪಿ ಬದಲಾವಣೆ ಮಾಡಿದರೆ ತಪ್ಪೇನು ಎಂಬ ಗೃಹ ಸಚಿವರ ಹೇಳಿಕೆ ವಿಚಾರದ ಬಗ್ಗೆ ಮಾತನಾಡಿ, ಸಚಿವಾಲಯ, ಸಿಎಂ ರಿವ್ಯೂ ಮಾಡಿ ಡಿಸಿಷನ್ ತೆಗೆದುಕೊಳ್ಳಬೇಕಾಗುತ್ತದೆ. ಬದಲಾವಣೆ ಮಾಡಿದರೆ ಸಿಎಂ ಅಥವಾ ಗೃಹ ಸಚಿವರಿಗೆ ವರದಿ ಸಿಗುತ್ತದೆ. ಮಾಹಿತಿ ಇಲ್ಲದೇ ನಾನು ರಿಯಾಕ್ಟ್ ಮಾಡೋದು ಸೂಕ್ತವಲ್ಲ. ಬದಲಾವಣೆ ಎಂಬುದು ಬಹುಶಃ ಇದು ಚರ್ಚೆಯಲ್ಲಿರುವ ವಿಷಯ. ಬದಲಾವಣೆ ಮಾಡಿದರೆ ತಪ್ಪೇನು ಎಂದು ಹೇಳಿದ್ದಾರೆ. ಆದರೆ ಬದಲಾವಣೆ ಮಾಡುತ್ತೇವೆ ಎಂದಿಲ್ಲ. ಪ್ರಕರಣದ ತನಿಖೆ ದಾರಿ ತಪ್ಪುವ ಕೆಲಸವನ್ನ ಯಾವುದೇ ಸರ್ಕಾರ ಮಾಡಲ್ಲ ಎಂದು ಹೇಳಿದರು.

ಬಿಜೆಪಿಗೆ ನೈತಿಕತೆ ಇಲ್ಲ: ಡೀಸೆಲ್, ಪೆಟ್ರೋಲ್ ಬೆಲೆ ಏರಿಕೆ ಖಂಡಿಸಿ ಬಿಜೆಪಿ ಪ್ರತಿಭಟನೆಗೆ ಕಿಡಿಕಾರಿದ ಚಲುವರಾಯಸ್ವಾಮಿ, ಬಿಜೆಪಿಯವರಿಗೆ ಯಾವ ನೈತಿಕತೆ ಹಕ್ಕಿದೆ. ರಾಜಕೀಯ ಮಾಡೋದು ಅವಶ್ಯಕತೆ ಇದೆಯೇ? ಪೆಟ್ರೋಲ್ 70 ರಿಂದ 100 ಹೋದಾಗ ಏನ್ ಮಾಡುತ್ತಿದ್ದರು. ಮನಮೋಹನ್ ಸಿಂಗ್ 1 ಲಕ್ಷ ಕೋಟಿ ಕೊಟ್ಟು ಸಬ್ಸಿಡಿ ನೀಡಿ ತೈಲ ಬೆಲೆ ಕಡಿಮೆ ಮಾಡಿದ್ದರು. ಪೆಟ್ರೋಲ್ ಬೆಲೆ ಮಹಾರಾಷ್ಟ್ರ, ಮಧ್ಯಪ್ರದೇಶ, ಕೇರಳದಲ್ಲಿ ಬೆಲೆ ಎಷ್ಟಿದೆ. ರೈತರಿಗೆ ಅನುಕೂಲ ಮಾಡಬೇಕು, ಅಭಿವೃದ್ಧಿ ಮಾಡಬೇಕು ಅಂದಾಗ ಬೆಲೆ ಏರಿಕೆಯಾಗುತ್ತದೆ. ಟ್ಯಾಕ್ಸ್ ಇಲ್ಲದೆ ಸರ್ಕಾರ ನಡೆಸೋಕೆ ಆಗುತ್ತಾ ಎಂದು ಪ್ರಶ್ನಿಸಿದರು.

ಆಗ ಎರಡು ಲಕ್ಷ ಕೋಟಿ ಬಜೆಟ್ ಆಗುತ್ತಿತ್ತು. ಬಿಜೆಪಿಯವರ ರೀತಿ ಅಬ್ನಾರ್ಮಲ್ ಆಗಿ ನಾವು ಬೆಲೆ ಏರಿಕೆ ಮಾಡಿಲ್ಲ. ಇತಿಮಿತಿಯಲ್ಲಿ ಬೆಲೆ ಏರಿಕೆ ಮಾಡಿದ್ದೇವೆ. ಪ್ರತಿಭಟನೆ ಮಾಡಲಿ ಬನ್ನಿ, ಎಷ್ಟು ದಿನ ಮಾಡುತ್ತಾರೆ. ರಾಜ್ಯ ಸರ್ಕಾರ ದಿವಾಳಿಯಾಗಿದೆ ಎಂದು ಅಶೋಕ್ ಹೇಳಿದ್ದಾರೆ. ಸರ್ಕಾರವನ್ನು ಟೀಕಿಸಲು ಅವರಿಗೆ ಯಾವ ನೈತಿಕತೆ ಇದೆ ಎಂದು ಪ್ರಶ್ನಿಸಿದರು.

ನಕಲಿ ಕ್ಲಿನಿಕ್‌ಗೆ ಬೀಗ, ವೈದ್ಯರ ಬಂಧನ

ಹಲಗೂರು: ತಾಲೂಕು ಆರೋಗ್ಯಾಧಿಕಾರಿಗಳು ಪೊಲೀಸರ ನೇತೃತ್ವದಲ್ಲಿ ದಾಳಿ ನಡೆಸಿ ನಕಲಿ ಕ್ಲಿನಿಕ್‌ಗೆ ಬೀಗ ಜಡಿದು ನಕಲಿ ವೈದ್ಯನನ್ನು ಬಂಧಿಸಿದ ಘಟನೆ ಸಮೀಪದ ತೊರೆಕಾಡನಹಳ್ಳಿಯಲ್ಲಿ ಸಂಭವಿಸಿದೆ. ಸೀತಾ ಗಣೇಶ್ ಚಿಕಿತ್ಸಾಲಯ ಬಂದಾಗಿದ್ದು ನಕಲಿ ವೈದ್ಯ ಕೃಷ್ಣಮೂರ್ತಿ ಹೆಗಡೆಯವರನ್ನು ಬಂಧಿಸಲಾಗಿದೆ.

ಈ ವೇಳೆ ಮಾತನಾಡಿದ ತಾಲೂಕು ಆರೋಗ್ಯ ಅಧಿಕಾರಿ ಡಾ.ವೀರಭದ್ರಪ್ಪ ಸಮೀಪದ ತೊರೆಕಾಡನಹಳ್ಳಿಯ ಸೀತಾ ಗಣೇಶ್ ಕ್ಲಿನಿಕ್ ಮಾಲೀಕ ಕೃಷ್ಣ ಮೂರ್ತಿ ಹೆಗಡೆಯವರು 2019 ನವೆಂಬರ್ 19ರಂದು ದಡಮಹಳ್ಳಿ ಗ್ರಾಮದ ಶಿವಲಿಂಗೇಗೌಡರಿಗೆ ಇಂಜೆಕ್ಷನ್ ನೀಡಿದ್ದು, ಇಂಜೆಕ್ಷನ್ ರಿಯಾಕ್ಷನ್ ಆಗಿ ಮಂಡ್ಯ ಜಿಲ್ಲೆ ಆಸ್ಪತ್ರೆ ಮತ್ತು ವಿಕ್ಟೋರಿಯಾ ಆಸ್ಪತ್ರೆಗೆ ಚಿಕಿತ್ಸೆಗೆ ದಾಖಲಾಗಿ 2019 ನವೆಂಬರ್ 20ರಂದು ಸಾವನ್ನಪ್ಪಿದ್ದರು.

ಮರಣೋತ್ತರ ಪರೀಕ್ಷೆಯಲ್ಲಿ ಸೆಪ್ಟಿಸೀಮಿಯ ಡ್ಯೂ ಟೂ ಬ್ಯೂಟೆಲ್ ಆಕ್ಸಿಸ್ ಕಾರಣದಿಂದ ಮರಣ ಹೊಂದಿದ್ದಾರೆ ಎಂದು ಶವ ಪರೀಕ್ಷೆಯಲ್ಲಿ ದೃಢಪಟ್ಟಿತ್ತು. ಇದು ಬಹಳ ಹಳೆಯ ಪ್ರಕರಣವಾಗಿದ್ದು ರೋಗಿಯು ಸಾವನ್ನಪ್ಪಿರುವುದಕ್ಕೆ ಇವರೇ ಪ್ರಮುಖ ಕಾರಣವಾಗಿದ್ದಾರೆ ಎಂದರು. ತಜ್ಞ ವೈದ್ಯರ ತಂಡ ಭೇಟಿ ನೀಡಿ ಪರಿಶೀಲಿಸಿದಾಗ ಸೀತಾ ಗಣೇಶ್ ಕ್ಲಿನಿಕ್‌ನ ಮಾಲೀಕ ಅಲೋಪತಿಕ್ ಇಂಜೆಕ್ಷನ್ ಮತ್ತು ಮಾತ್ರೆಗಳನ್ನು ನೀಡುತ್ತ ಕ್ಲಿನಿಕ್ ನಡೆಸಿಕೊಂಡು ಬಂದಿರುವುದು ಕಂಡು ಬಂದಿದ್ದು, ಈ ಸಂಬಂಧ ಸಿಪಿಐ ಶ್ರೀಧರ್ ಹಾಗೂ ತಾಲೂಕು ಆರೋಗ್ಯ ಅಧಿಕಾರಿ ನೇತೃತ್ವದಲ್ಲಿ ಇಂದು ದಾಳಿ ಮಾಡಿ ನಕಲಿ ವೈದ್ಯ ಕೃಷ್ಣಮೂರ್ತಿಹೆಗಡೆ ಅವರನ್ನು ಬಂಧಿಸಲಾಗಿದೆ ಹಾಗೂ ನಕಲಿ ಕ್ಲಿನಿಕ್ ಬಂದ್ ಮಾಡಲಾಗಿದೆ ಎಂದು ತಿಳಿಸಿದರು.

ಹಲಗೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ದಾಳಿ ವೇಳೆ ಸಿಪಿಐ ಶ್ರೀಧರ್, ಟಿಹೆಚ್‌ಓ ಡಾ.ವೀರಭದ್ರಪ್ಪ ಆರ್‌ಐ ಮಧುಸೂದನ್, ಗ್ರಾಮ ಆಡಳಿತ ಅಧಿಕಾರಿ, ಸೋಮಣ್ಣ, ಲತಾ ಇತರರು ದಾಳಿಯಲ್ಲಿ ಭಾಗವಹಿಸಿದ್ದರು.

ಪ್ರೇಕ್ಷಕರೊಂದಿಗೆ ಚೆಫ್ ಚಿದಂಬರ ಸಿನಿಮಾ ವೀಕ್ಷಿಸಿದ ನಟ ಅನಿರುದ್ಧ್

ಕೆ.ಆರ್.ಪೇಟೆ: ಬಹು ನಿರೀಕ್ಷಿತ ಚಿತ್ರವಾದ ಚೆಫ್ ಚಿದಂಬರ ಚಿತ್ರದ ನಾಯಕ ನಟರಾದ ಅನಿರುದ್ಧ್ ಪಟ್ಟಣದಲ್ಲಿರುವ ಬಸವೇಶ್ವರ ಚಿತ್ರಮಂದಿರದಲ್ಲಿ ಪ್ರೇಕ್ಷಕರೊಂದಿಗೆ ಕುಳಿತು ತಾವೂ ನಟಿಸಿರುವ ಚೆಫ್ ಚಿದಂಬರ ಚಿತ್ರವನ್ನು ವೀಕ್ಷಿಸಿದರು.

ನಂತರ ಕಿಕ್ಕಿರಿದು ತುಂಬಿದ್ದ ಪ್ರೇಕ್ಷಕರ ಕುರಿತು ಮಾತನಾಡಿದ ಅನಿರುದ್ಧ್ ನಾನು ನಟಿಸಿದ ಚಿತ್ರವನ್ನು ನಿಮ್ಮೊಂದಿಗೆ ಕುಳಿತು ನೋಡುತ್ತಿರುವುದು ತುಂಬಾ ಸಂತಸ ತಂದಿದೆ. ನಿಮ್ಮ ಪ್ರೋತ್ಸಾಹ ನಮ್ಮ ಚಿತ್ರಕ್ಕೆ ಹೀಗೆ ಇರಲಿ. ಕನ್ನಡಿಗರು ತಪ್ಪದೆ ಚಿತ್ರಮಂದಿರಕ್ಕೆ ಕುಟುಂಬಸಮೇತವಾಗಿ ಬಂದು ನಮ್ಮ ಚಿತ್ರವನ್ನು ವೀಕ್ಷಿಸಿ ಪ್ರೋತ್ಸಾಹಿಸಬೇಕೆಂದು ಮನವಿ ಮಾಡಿದರು

ಪಟ್ಟಣದ ಟಿ.ಬಿ ವೃತ್ತದಲ್ಲಿರುವ ದಿವಂಗತ ಡಾ.ಪುನೀತ್ ರಾಜಕುಮಾರ್ ಪುತ್ತಳಿಗೆ ಪುಷ್ಪನಮನಗಳನ್ನು ಸಲ್ಲಿಸಿದರು. ನಂತರ ಬಿಜಿಎಸ್ ವಿದ್ಯಾಸಂಸ್ಥೆಯ ಬೈರವೈಕ್ಯ ಶ್ರೀ ಬಾಲಗಂಗಾಧರನಾಥ ಮಹಾಸ್ವಾಮಿ ಜೀಯವರ ಪುತ್ತಳಿಗೂ ಪುಷ್ಪನಮನ ಸಲ್ಲಿಸಿ ಅಲ್ಲಿನ ವಿದ್ಯಾರ್ಥಿಗಳೊಂದಿಗೆ ಭಾವನಾತ್ಮಕ ವಿಷಯಗಳನ್ನು ಹಂಚಿಕೊಂಡು ವಿದ್ಯಾರ್ಥಿಗಳಿಗೂ ಶುಭಹಾರೈಸಿದರು ಶಾಸಕರಾದ ಹೆಚ್.ಟಿ.ಮಂಜುರವರು ಭಾಗವಹಿಸಿ ನಾಯಕನಟ ಅನಿರುದ್ಧ್ ಅವರನ್ನು ಸನ್ಮಾನಿಸಿ ಚಿದಂಬರ ಚಿತ್ರವು ಶತದಿನೋತ್ಸವ ಆಚರಿಸಲೆಂದು ಶುಭಹಾರೈಸಿದರು



ಮೈಸೂರು ಸುತ್ತಬೇಕೆ! ರೆಡಿ ಇವೆ ಬ್ಯಾಟರಿ ಚಾಲಿತ ಪವರ್ ಪೆಡಲ್ ಮೈಬೈಕ್!

ಪರಿಸರ ಸ್ನೇಹಿ ಈ ಯೋಜನೆಗೆ ಇನ್ನೂ 500 ಸೈಕಲ್ ಸೇರ್ಪಡೆ



ಮೈಸೂರು, ಜೂ.19(ಎಂಕೆ)– ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ಪರಿಸರ ಸ್ನೇಹಿ, ಆರಾಮ ಮತ್ತು ಆರೋಗ್ಯದಾಯಕ ಪಯಣಕ್ಕೆ ಸಾರ್ವಜನಿಕರಿಂದ ಮೆಚ್ಚುಗೆ ಪಡೆದಿರುವ ಬ್ಯಾಟರಿ ಚಾಲಿತ ಪವರ್ ಪೆಡಲ್ ಟ್ರಿಣ್ ಟ್ರಿಣ್ ಸೈಕಲ್(ಮೈಬೈಕ್) ವ್ಯವಸ್ಥೆಗೆ ಹೆಚ್ಚುವರಿಯಾಗಿ ಹೊಸ 500 ಸೈಕಲ್‌ಗಳು ಸೇರ್ಪಡೆಗೊಳ್ಳಲಿವೆ.

ದೇಶದಲ್ಲಿಯೇ ಮೊದಲ ಬಾರಿಗೆ ಟ್ರಿಣ್ ಟ್ರಿಣ್ ಪಬ್ಲಿಕ್ ಸೈಕಲ್ ಷೇರಿಂಗ್ ಯೋಜನೆಯಡಿ ಆರಂಭವಾದ ಪರಿಸರ ಸ್ನೇಹಿ ಸೈಕಲ್ ಯೋಜನೆಗೆ 8 ತಿಂಗಳ ಹಿಂದೆ ಹಳದಿ ಬಣ್ಣದ ಮಾಮೂಲಿ ಸೈಕಲ್‌ಗಳಿಂದ ಬ್ಯಾಟರಿ ಚಾಲಿತ ಟ್ರಿಣ್ ಟ್ರಿಣ್ ಸೈಕಲ್‌ಗಳ ಬಳಕೆಗೆ ಬದಲಾವಣೆ ಮಾಡಲಾಯಿತು. ಇದೀಗ ಬ್ಯಾಟರಿ ಚಾಲಿತ ಪವರ್ ಪೆಡಲ್ ಸೈಕಲ್‌ಗಳಿಗೆ ಮೈಸೂರಿಗರು, ಪ್ರವಾಸಿಗರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾದ ಹಿನ್ನೆಲೆಯಲ್ಲಿ ಹೆಚ್ಚುವರಿಯಾಗಿ 500 ಹೊಸ ಸೈಕಲ್‌ಗಳನ್ನು ಪೂರೈಕೆ ಮಾಡಲು ನಿರ್ಧರಿಸಲಾಗಿದೆ.

ಹಳೇ ಜಿಲ್ಲಾಧಿಕಾರಿಗಳ ಕಚೇರಿ, ರೈಲ್ವೆ ನಿಲ್ದಾಣ, ಮೆಟ್ರೋಪೋಲ್ ವೃತ್ತ ಸೇರಿದಂತೆ ನಗರದ 48 ಸ್ಥಳಗಳಲ್ಲಿ ಸೈಕಲ್ ಸ್ಟ್ಯಾಂಡ್‌ಗಳಿದ್ದು, 458 ಬ್ಯಾಟರಿ ಚಾಲಿತ ಪವರ್ ಪೆಡಲ್ ಸೈಕಲ್‌ಗಳ ನಿತ್ಯ ಬಳಕೆಯಾಗುತ್ತಿವೆ. ಸದ್ಯದಲ್ಲಿಯೇ ಸೇರ್ಪಡೆಯಾಗುವ ಸೈಕಲ್‌ಗಳು ಸೇರಿ ಸಾವಿರ ಸೈಕಲ್‌ಗಳು ನಗರದೆಲ್ಲೆಡೆ ಟ್ರಿಣ್ ಟ್ರಿಣ್ ಶಬ್ದ ಮಾಡಲಿವೆ.

ತಿಂಗಳಿಗೆ 659 ಹೊಸಬರು: ಮೈಸೂರು ನಗರದಲ್ಲಿ 7779 ಮಂದಿ ಈ ಸೈಕಲ್‌ಗಳನ್ನು ಬಳಕೆ ಮಾಡುತ್ತಿದ್ದು, ಪ್ರತಿ ತಿಂಗಳು ಸರಾಸರಿ 659 ಮಂದಿ ಸೈಕಲ್ ಬಳಕೆಯತ್ತ ಗಮನ ಹರಿಸುತ್ತಿದ್ದಾರೆ. ದಿಬ್ಬದ ರಸ್ತೆಯಲ್ಲೂ ಸರಾಗ ಹಾಗೂ ವೇಗವಾಗಿ ಚಲಿಸುವ ಬ್ಯಾಟರಿ ಚಾಲಿತ ಸೈಕಲ್‌ಗಳು ಎಲ್ಲರ ಆಕರ್ಷಣೆಯಾಗಿವೆ. ಅದರಲ್ಲೂ ಶಾಲಾ–ಕಾಲೇಜು ಯುವಕರು, ವಾಯುವಿಹಾರಿಗಳು, ನಗರದಲ್ಲಿ ಸುತ್ತಾಡುವ ಕೆಲಸ ಮಾಡುವವರು ಹೆಚ್ಚಿನ ಸಂಖ್ಯೆಯಲ್ಲಿ ಈ ಸೈಕಲ್‌ಗಳನ್ನು ಬಳಸುತ್ತಿದ್ದಾರೆ.

> **ಬ್ಲೂಟೂತ್ ಸಮಸ್ಯೆ...**
>
> ಬ್ಯಾಟರಿ ಚಾಲಿತ ಪವರ್ ಪೆಡಲ್ ಸೈಕಲ್‌ಗಳು ಉಪಯುಕ್ತವಾಗಿವೆ. ಸಾಕಷ್ಟು ಆರಾಮ ಮತ್ತು ವೇಗವಾಗಿ ಕ್ರಮಿಸಬಹುದು. ಆದರೆ ಕೆಲವೊಮ್ಮೆ ಬ್ಲೂಟೂತ್ ಕನೆಕ್ಟಿವಿಟಿ ತಪ್ಪಿದರೆ ಬ್ಯಾಟರಿ ಕೆಲಸ ಮಾಡುವುದಿಲ್ಲ ಅಲ್ಲದೆ ಸ್ಟ್ಯಾಂಡ್‌ಗಳಲ್ಲಿ ನಿಲ್ಲಿಸಿರುವ ಕೆಲವೊಂದು ಸೈಕಲ್‌ಗಳು ಅನ್‌ಲಾಕ್ ಆಗುವುದಿಲ್ಲ. ಉಳಿದಂತೆ ಬಹುತೇಕ ಸೈಕಲ್‌ಗಳು ಚೆನ್ನಾಗಿದ್ದು, ಪರಸರ ಸ್ನೇಹಿ ಸಂಚಾರಕ್ಕೆ ಅನುಕೂಲವಾಗಿವೆ. ಹಣ ಪಾವತಿಯೂ ಕೂಡ ಸೆಕ್ಯೂರಿಟಿಯಿಂದ ಕೂಡಿದ್ದು, ನಿರಂತರ ಬಳಕೆ ಮಾಡಿದರೆ ಶೇ.60 ರಷ್ಟು ರಿಯಾಯ್ತಿ ನೀಡಲಾಗುತ್ತದೆ. ಕಡಿಮೆ ಖರ್ಚಿನಲ್ಲಿ ನಗರವನ್ನು ಸುತ್ತಾಡಲು ಸೈಕಲ್ ಬಳಕೆ ಸೊಗಸಾಗಿದೆ. –ಬಳಕೆದಾರರು

ಎಲ್ಲವೂ ಆ್ಯಪ್‌ನಲ್ಲೇ: ಹಸಿರು ಬಣ್ಣದ ಬ್ಯಾಟರಿ ಚಾಲಿತ ಪವರ್ ಪೆಡಲ್ ಸೈಕಲ್ ಸವಾರಿ ಮಾಡಲು ಗೂಗಲ್ ಪ್ಲೆ ಸ್ಟೋರ್‌ನಲ್ಲಿ 'ಮೈಬೈಕ್ ಅಪ್ಲಿಕೇಶನ್ ಡೌನ್‌ಲೋಡ್' ಮಾಡಿಕೊಳ್ಳಬೇಕು. ಈ ಆ್ಯಪ್‌ನಲ್ಲಿ ಸೈಕಲ್ ಸ್ಟಾಂಡ್‌ಗಳು ಎಲ್ಲೆಲ್ಲಿವೆ, ಯಾವ ಸ್ಟ್ಯಾಂಡ್‌ನಲ್ಲಿ ಎಷ್ಟಿವೆ, ಆಕ್ಟಿವ್ ಮತ್ತು ಇನ್‌ಆಕ್ಟಿವ್ ಆಗಿವೆಯೇ, ಬ್ಯಾಟರಿ ಪ್ರಮಾಣ ಎಷ್ಟಿದೆ, ಎಂಬ ಮಾಹಿತಿ ಲಭ್ಯವಾಗಲಿದೆ. ಆ್ಯಪ್ ಡೌನ್‌ಲೋಡ್ ಮಾಡಿಕೊಂಡು ಹೆಸರು ನೋಂದಾಯಿಸಿಕೊಂಡು, ಆಧಾರ್ ಕಾರ್ಡ್ ನಂಬರ್ ಅನ್ನು ನಮೂದಿಸಬೇಕು. ನಂತರ ಸೈಕಲ್ ಬಳಸುವುದಾದರೆ ದಿನವೊಂದಕ್ಕೆ, ಮೂರು ದಿನಕ್ಕೆ ಹಾಗೂ ಒಂದು ತಿಂಗಳ ಅವಧಿಗೆ ಆನ್‌ಲೈನ್‌ನಲ್ಲೇ ಹಣ ಪಾವತಿ ಮಾಡಿ, ಸೈಕಲ್ ಅನ್ನು ಅನ್‌ಲಾಕ್ ಮಾಡಿಕೊಂಡು ಸವಾರಿ ನಡೆಸಬಹುದು.

ನಂತರ ಆ್ಯಪ್‌ನಲ್ಲಿ ಸೈಕಲ್ ಸಂಚರಿಸುವ ಮಾರ್ಗ, ಕಡೆಯಲ್ಲಿ ಯಾವ ಸ್ಟ್ಯಾಂಡ್‌ನಲ್ಲಿ ನಿಲ್ಲಿಸುತ್ತೇವೆ ಲಾಕ್ ಮತ್ತು ಅನ್‌ಲಾಕ್, ಪವರ್ ಮೋಡ್ ಆನ್ ಮಾಡಿಕೊಳ್ಳಬಹುದು. ಸೈಕಲ್ ವಾಪಸ್ ಮಾಡಿದಾಗ ಏನಾದರೂ ಸೈಕಲ್‌ನಲ್ಲಿ ತೊಂದರೆ ಇದ್ದರೆ ಆ್ಯಪ್‌ನಲ್ಲಿಯೇ ಫಿಡ್‌ಬ್ಯಾಕ್ ನೀಡಬಹುದು.

ಕಳ್ಳತನವಾಗಿಲ್ಲ: ಬ್ಯಾಟರಿ ಚಾಲಿತ ಸೈಕಲ್ ಬಳಕೆ ಅಳಡಿಸಿಕೊಂಡು 8 ತಿಂಗಳಾಗಿದ್ದು, ಸಾರ್ವಜನಿಕರು, ಪ್ರವಾಸಿಗರಿಂದ ಒಳ್ಳೆಯ ಅಭಿಪ್ರಾಯ ಕೇಳಿಬಂದಿದೆ. ಇದುವರೆಗೆ ಒಂದೇ ಒಂದು ಸೈಕಲ್ ಕಳ್ಳತನವಾಗಿಲ್ಲ. ಅಲ್ಲದೆ ಕಳವು ಮಾಡಿದರೂ ಜಿಪಿಎಸ್ ಮೂಲಕ ಸೈಕಲ್ ಎಲ್ಲಿದೆ ಎಂಬುದನ್ನು ಕೂಡಲೆ ಪತ್ತೆ ಮಾಡಬಹುದು. ಬ್ಯಾಟರಿ ಖಾಲಿಯಾದರೆ ಬ್ಲೂಟೂತ್ ಸಿಸ್ಟಂ ಕೆಲಸ ಮಾಡುವುದಿಲ್ಲ. ಆಗ ಹತ್ತಿರದಲ್ಲಿರುವ ಸ್ಟ್ಯಾಂಡ್ ಬೇರೆ ಸೈಕಲ್ ಬದಲು ಮಾಡಿಕೊಳ್ಳಬಹುದು ಎಂದು ಸಂಬಂಧಪಟ್ಟ ಅಧಿಕಾರಿಯೊಬ್ಬರು 'ಮೈಸೂರು ಮಿತ್ರ'ನಿಗೆ ಮಾಹಿತಿ ನೀಡಿದರು.

ಮೈಸೂರಲ್ಲೇ ನಿರ್ವಹಣೆ: ಮೈಬೈಕ್ ಕಾಲ್ ಸೆಂಟರ್ ಬೆಂಗಳೂರಿನಲ್ಲಿದ್ದು, ಸೈಕಲ್‌ಗಳ ನಿರ್ವಹಣೆಯನ್ನು ಮೈಸೂರಿನ ಅರವಿಂದ ನಗರದಲ್ಲಿರುವ ಸ್ಥಳೀಯ ತಂಡ ನಿರ್ವಹಿಸಲಿದೆ. ಚಾರ್ಜಿಂಗ್, ರಿಪೇರಿ ಸೇರಿದಂತೆ ಇನ್ನಿತರೆ ತೊಂದರೆಗಳಿದ್ದರೂ ಸ್ಥಳೀಯ ತಂಡ ಪರಿಹಾರ ನೀಡಲಿದೆ ಎಂದರು.

ನಾಳೆ ಅಂತಾರಾಷ್ಟ್ರೀಯ ಯೋಗ ದಿನ ಆಚರಣೆ

ಮಂಡ್ಯ, ಜೂ.19– ಜಿಲ್ಲಾಡಳಿತ, ಆಯುಷ್ ಇಲಾಖೆ ಹಾಗೂ ವಿವಿಧ ಸಂಘಟನೆಗಳ ಸಹಯೋಗದೊಂದಿಗೆ 10ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಯನ್ನು ಜೂ.21 ರಂದು ಬೆಳಿಗ್ಗೆ 6 ಗಂಟೆಯಿಂದ 8 ಗಂಟೆವರೆಗೆ ಮಂಡ್ಯ ಪಿಇಟಿ ಕ್ರಿಕೆಟ್ ಕ್ರೀಡಾಂಗಣದಲ್ಲಿ ಅರ್ಥಪೂರ್ಣವಾಗಿ ಆಚರಿಸಲು ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಡಾ.ಎಚ್.ಎಲ್. ನಾಗರಾಜ್ ಅವರು ಹೇಳಿದರು.

ಮಂಗಳವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ಕುರಿತು ಪೂರ್ವಭಾವಿ ಸಭೆ ನಡೆಸಿ ಮಾತನಾಡಿದರು.

ಎಲ್ಲಾ ಇಲಾಖೆಯ ಅಧಿಕಾರಿಗಳು ಹಾಗೂ ಶಾಲಾ ಕಾಲೇಜು ವಿದ್ಯಾರ್ಥಿಗಳು ಸಮಯಕ್ಕೆ ಸರಿಯಾಗಿ ಹಾಜರಾಗಿ ಯಾವುದೇ ಅಡಚಣೆ ಆಗದಂತೆ ಯೋಗಾಭ್ಯಾಸದಲ್ಲಿ ಪಾಲ್ಗೊಳ್ಳಬೇಕು ಎಂದರು.

ಅಂತರಾಷ್ಟ್ರೀಯ ಯೋಗ ದಿನಾಚರಣೆಯ ಪ್ರಯುಕ್ತ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಯುಷ್ ಇಲಾಖೆ, ಎಸ್.ಪಿ.ಎಸ್.ಎಸ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಎಎಫ್‌ಐ, ಮಂಡ್ಯ ಶಾಲಾ ಶಿಕ್ಷಣ ಇಲಾಖೆ, ನೆಹರು ಯುವ ಕೇಂದ್ರ, ರೆಡ್ ಕ್ರಾಸ್ ಸಂಸ್ಥೆ ಹಾಗೂ ಜಿಲ್ಲೆಯ ವಿವಿಧ ಯೋಗ ನಿರತ ಸಂಘ ಸಂಸ್ಥೆಗಳ ವತಿ ಯಿಂದ ಅಂತಾರಾಷ್ಟ್ರೀಯ ಯೋಗ ದಿನದಂದು ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಭಾಗ ವಹಿಸಬೇಕು ಎಂದು ಹೇಳಿದರು.



ಅಂತಾರಾಷ್ಟ್ರೀಯ ಯೋಗ ದಿನ ಆಚರಣೆಯ ಕುರಿತು ನಡೆದ ಪೂರ್ವಭಾವಿ ಸಭೆ

ರಕ್ತದಾನ ಶಿಬಿರ ಮತ್ತು ಆರೋಗ್ಯ ತಪಾಸಣೆ: ಮಂಡ್ಯ ಮಿಮ್ಸ್ ವತಿಯಿಂದ ಯೋಗ ದಿನಾಚರಣೆಯ ದಿನದಂದು ಆರೋಗ್ಯ ತಪಾಸಣೆ ಮತ್ತು ರಕ್ತದಾನ ಶಿಬಿರವನ್ನು ಏರ್ಪಡಿಸಲಾಗಿದ್ದು ಯೋಗ ಮಾಡಿ ಬಂದಂತಹ ಯೋಗಪಟುಗಳು ಹಾಗೂ ರಕ್ತದಾನ ಮಾಡಲು ಆಸಕ್ತಿ ಇರುವವರು ರಕ್ತದಾನ ಮಾಡಬಹುದು ಎಂದು ಹೇಳಿದರು.

ಸಸಿ ವಿತರಣೆ: ಆಯುಷ್ ಇಲಾಖೆ ಹಾಗೂ ತೋಟಗಾರಿಕೆ ಇಲಾಖೆ ವತಿಯಿಂದ ಯೋಗ ದಿನಾಚರಣೆಯ ಅಂಗವಾಗಿ ಹಲವು ಬಗೆಯ ಸಸಿಗಳಾದ ಕರಿಬೇವಿನ ಗಿಡ, ನೆಲ್ಲಿ ಗಿಡ, ಸೀಬೆ ಗಿಡ, ಪರಂಗಿ ಗಿಡ, ನಿಂಬೆಗಿಡ ಸೇರಿದಂತೆ ವಿವಿಧ ಬಗೆಯ ಸಸಿಗಳನ್ನು ರಕ್ತದಾನ ಮಾಡಿ ಬಂದಂತಹ ರಕ್ತದಾನಿಗಳಿಗೆ ನೀಡಲಾಗುವುದು ಎಂದು ಹೇಳಿದರು.

ಸಭೆಯಲ್ಲಿ ಆಯುಷ್ ವೈದ್ಯಾಧಿಕಾರಿ ಡಾ.ಸೀತಾಲಕ್ಷ್ಮಿ, ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಸಭಾಧ್ಯಕ್ಷೆ ಮೀರಾಶಿವಲಿಂಗಯ್ಯ, ಡಿ.ವೈ.ಎಸ್.ಪಿ.ಡಿ.ಆರ್ ರಾಚಯ್ಯ, ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಚ್ ಶಿವರಾಮೇಗೌಡ, ಜಿಲ್ಲಾ ಸಮಾಜ ಇಲಾಖೆ ಕಲ್ಯಾಣಾಧಿಕಾರಿ ಡಾ.ಸಿದ್ದಲಿಂಗೇಶ್, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಸಿ.ಚೆಲುವಯ್ಯ, ಭಾರತ ಸ್ಕೌಟ್ಸ್ ಅಂಡ್ ಗೈಡ್‌ನ ಭಕ್ತವತ್ಸಲ, ಯೋಗ ಶಿಕ್ಷಕರುಗಳಾದ ಶಂಕರನಾರಾಯಣ ಶಾಸ್ತ್ರೀ, ರವಿ, ಹೆಚ್.ವಿ. ಶಿವರುದ್ರ ಸ್ವಾಮಿ, ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಗುಂಡಿ ಬಿದ್ದಿದ್ದ ರಸ್ತೆ ದುರಸ್ತಿಗೆ ಭೂಮಿ ಪೂಜೆ



ಗುಂಡಿ ಬಿದ್ದಿದ್ದ ರಸ್ತೆ ದುರಸ್ತಿಗೆ ಶಾಸಕ ಎಚ್.ಟಿ. ಮಂಜು ಗುದ್ದಲಿ ಪೂಜೆ ನೆರವೇರಿಸಿದರು.

ಕಿಕ್ಕೇರಿ, ಜೂ.19– ತಾಲೂಕಿನ ಪ್ರಮುಖ ರಸ್ತೆ ಸೇರಿದಂತೆ ಕ್ಷೇತ್ರದ ಅಭಿವೃದ್ಧಿಗೆ ಮೊದಲ ಆದ್ಯತೆ ನೀಡಲಾಗುವುದು ಎಂದು ಶಾಸಕ ಎಚ್.ಟಿ.ಮಂಜು ತಿಳಿಸಿದರು.

ಪಟ್ಟಣದಲ್ಲಿ ಗುಂಡಿಬಿದ್ದು ಹಾಳಾಗಿರುವ ಕಿಕ್ಕೇರಿ–ಮಂದಗೆರೆ ರಸ್ತೆ ಡಾಂಬರೀಕರಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡುತ್ತಿದ್ದ ಅವರು, ಜನತೆ ನನ್ನನ್ನು ನಂಬಿ ಆಶೀರ್ವದಿಸಿದ್ದಾರೆ. ಜನರ ಮೂಲಭೂತ ಸಮಸ್ಯೆಗಳಿಗೆ ಒತ್ತು ನೀಡುವೆ. ನಿತ್ಯ ಓಡಾಡುವ ರಸ್ತೆಗಳು ಹಾಳಾಗಿದ್ದಲ್ಲಿ ಮೊದಲು ತಾತ್ಕಾಲಿಕವಾಗಿಯಾದರೂ ಸರಿಪಡಿಸಿ ಸಾರ್ವಜನಿಕರು ಸುಗಮವಾಗಿ ಓಡಾಡಲು ಕನಿಷ್ಠ ಪ್ರಮಾಣದಲ್ಲಿಯಾದರೂ ಕಾಳಜಿವಹಿಸಲು ಅಧಿಕಾರಿಗಳು ಮುಂದಾಗಿ. ರಸ್ತೆ ನಿರ್ವಹಣೆಗೆ ವಾರ್ಷಿಕವಾಗಿ ನೀಡುವ ಅನುದಾನವನ್ನು ಬಳಸಿಕೊಳ್ಳಿ ಎಂದು ತಾಕೀತು ಮಾಡಿದರು.

ಬಹಳ ವರ್ಷದಿಂದ ಕಿಕ್ಕೇರಿಯಿಂದ ಮಂದಗೆರೆಗೆ ತೆರಳಲು ಪ್ರಯಾಣಿಕರು, ವಾಹನ ಸವಾರರು, ವಿದ್ಯಾರ್ಥಿಗಳು ಪರದಾಡುವಂತಾಗಿತ್ತು ಗುಂಡಿ ಬಿದ್ದು ಹಾಳಾಗಿದ್ದ ರಸ್ತೆ ಅಭಿವೃದ್ಧಿಗೆ ರಾಜ್ಯ ಹೆದ್ದಾರಿ ಅಭಿವೃದ್ಧಿ ನಿಗಮದಿಂದ ಪ್ಯಾಕೇಜ್ ರೀತಿಯಲ್ಲಿ 2 ಕೋಟಿ. ರೂ. ಅನುದಾನದಲ್ಲಿ ಡಾಂಬರೀಕರಣ ಕಾಮಗಾರಿ ಆರಂಭಿಸಲಾಗಿದೆ ಎಂದು ಮಾಹಿತಿ ನೀಡಿದರು.

ಮುಖಂಡ ಕೆ.ವಿ. ಅರುಣಕುಮಾರ್, ಐಕನಹಳ್ಳಿ ಕೃಷ್ಣೇಗೌಡ, ಕಾಯಿ ಮಂಜೇಗೌಡ, ಶೇಖರ್, ಮೊಟ್ಟೆ ಮಂಜು, ಮಂಜೇಗೌಡ, ಡೈರಿ ಕುಮಾರ್, ಅರಳಕುಪ್ಪೆ ಪ್ರತಾಪ್, ಅನಿಲ್, ರಾಕೇಶ್, ಲೋಕೋಪಯೋಗಿ ಇಲಾಖೆ ಅಭಿಯಂತರರಾದ ರಾಜು, ಮಂಜುನಾಥ್, ಕೃಷ್ಣಮೂರ್ತಿ ಉಪಸ್ಥಿತರಿದ್ದರು.

ಉದ್ಯೋಗಕ್ಕಾಗಿ ಸಂದರ್ಶನ

ಮಂಡ್ಯ,ಜೂ.19– ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ ಹಾಗೂ ಮೆ॥ ರಿಲಯನ್ಸ್ ಜಿಯೋ ಇನ್ಫೋಕಾಂ ಲಿಮಿಟೆಡ್, ಮೆ॥ ಫ್ಯೂಷನ್ ಮೈಕ್ರೋ ಫೈನಾನ್ಸ್ ಲಿಮಿಟೆಡ್, ಮೆ॥ ಸ್ಪೆಕ್ಟ್ರಂ ಟೂಲ್ಸ್ ಇಂಜಿನಿಯರಿಂಗ್ ಪ್ರೈ, ಲಿಮಿಟೆಡ್, ಮೆ॥ ಇಂಡಸ್ ಟಿ.ಎಂ.ಟಿ ಇಂಡಸ್ಟ್ರೀಸ್ ಲಿಮಿಟೆಡ್ ಮತ್ತು ಮೆ॥ ನಿವರಾ ಹೋಂ ಫೈನಾನ್ಸ್ ಲಿಮಿಟೆಡ್ ಸಹಯೋಗದಲ್ಲಿ ನೇರ ಸಂದರ್ಶನ ನಡೆಯಲಿದೆ.

ಹೆಚ್ಚಿನ ಮಾಹಿತಿಗಾಗಿ ದೂ.ಸಂ: 08232–295124, 8660061488, 9164642684 ಅನ್ನು ಸಂಪರ್ಕಿಸಬಹುದು ಎಂದು ಮಂಡ್ಯ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಉದ್ಯೋಗಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವೆಂಕಟೇಗೌಡ ನಿಧನ

ಕೆ.ಆರ್.ಪೇಟೆ: ತಾಲೂಕಿನ ಶೀಳನೆರೆ ಹೋಬಳಿಯ ರಾಜಘಟ್ಟ ಗ್ರಾಮದ ಹಿರಿಯ ಮುಖಂಡರು ಹಾಗೂ ಪ್ರಗತಿಪರ ರೈತರಾದ ವೆಂಕಟೇಗೌಡ (ದೊಳ್ಳೇಗೌಡ) ಇಂದು ನಿಧನ ಹೊಂದಿದ್ದಾರೆ.



ಅವರಿಗೆ 95ವರ್ಷ ವಯಸ್ಸಾಗಿತ್ತು. ಮೃತರು ಪುತ್ರ ಶಿಕ್ಷಕರಾದ ಆರ್.ವಿ.ಧರ್ಮರತ್ನಾಕರ್, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ.

ಮೃತರ ಅಂತ್ಯಕ್ರಿಯೆಯು ಜೂ.20ರಂದು ಬೆಳಿಗ್ಗೆ 12 ಗಂಟೆಗೆ ಸ್ವಗ್ರಾಮ ರಾಜಘಟ್ಟ ಗ್ರಾಮದಲ್ಲಿ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ. ಮೃತರ ನಿಧನಕ್ಕೆ ತಾಲೂಕಿನ ವಿವಿಧ ಗಣ್ಯರು ಸಂತಾಪ ಸೂಚಿಸಿದ್ದಾರೆ.

ದೇಶ - ವಿದೇಶ

ಮೆಕ್ಕಾದಲ್ಲಿ ಅಧಿಕ ತಾಪಮಾನಕ್ಕೆ 550ಕ್ಕೂ ಹೆಚ್ಚು ಮಂದಿ ಸಾವು

ಹಜ್: ಹಜ್ ಯಾತ್ರೆಗೆ ತೆರಳಿದವರಲ್ಲಿ 550ಕ್ಕೂ ಹೆಚ್ಚು ಮಂದಿ ಮೃತಪಟ್ಟಿದ್ದು, ಅವರಲ್ಲಿ ಕನಿಷ್ಠ 323 ಮಂದಿ ಈಜಿಪ್ಟಿನವರಾಗಿದ್ದಾರೆ. ಯಾತ್ರಿಕರು ಶಾಖ-ಸಂಬಂಧಿತ ಕಾಯಿಲೆಗಳಿಗೆ ಬಲಿಯಾಗುತ್ತಿದ್ದಾರೆ ಎಂದು ಇಬ್ಬರು ಅರಬ್ ರಾಜತಾಂತ್ರಿಕರು ಎಎಫ್‌ಪಿ ಸುದ್ದಿಸಂಸ್ಥೆಗೆ ತಿಳಿಸಿದ್ದಾರೆ.



ಬಿಸಿಲಿನ ತಾಪದಿಂದ ರಕ್ಷಿಸಿಕೊಳ್ಳಲು ಹಜ್ ಯಾತ್ರಿಕರು ಛತ್ರಿ ಹಿಡಿದು ಸಾಗಿದರು.

ಒಬ್ಬರು ಯಾತ್ರೆ ವೇಳೆ ಬಿದ್ದು ಗಾಯಗೊಂಡು ಪ್ರಾಣ ಕಳೆದುಕೊಂಡಿದ್ದನ್ನು ಹೊರತುಪಡಿಸಿ ಮೃತಪಟ್ಟ ಈಜಿಪ್ಟ್ ಯಾತ್ರಿಕರೆಲ್ಲರೂ ಶಾಖ ಸಂಬಂಧಿತ ಸಮಸ್ಯೆಯಿಂದ ಅಸುನೀಗಿದ್ದಾರೆ ಎಂದು ರಾಜತಾಂತ್ರಿಕರೊಬ್ಬರು ತಿಳಿಸಿದ್ದಾರೆ. ಮೆಕ್ಕಾದ ಅಲ್-ಮುಯಿಸೆಮ್ ನೆರೆಹೊರೆಯಲ್ಲಿರುವ ಆಸ್ಪತ್ರೆಯ ಶವಾಗಾರದಿಂದ ಈ ಮಾಹಿತಿ ಸಿಕ್ಕಿದೆ ಎಂದರು. ಕನಿಷ್ಠ 60 ಜೋರ್ಡಾನಿಯನ್ ಪ್ರಜೆಗಳು ಮೃತಪಟ್ಟಿದ್ದಾರೆ. ಈ ಹಿಂದೆ 41 ಮಂದಿ ಜೋರ್ಡಾನ್ ಪ್ರಜೆಗಳು ಮೃತರಾಗಿದ್ದರು ಎಂದು ಹೇಳಲಾಗುತ್ತಿತ್ತು. ಎಎಫ್‌ಪಿ ಲೆಕ್ಕಾಚಾರದ ಪ್ರಕಾರ, ಮೃತಪಟ್ಟವರ ಸಂಖ್ಯೆ 577ಕ್ಕೇರಿದೆ. ಮೆಕ್ಕಾದಲ್ಲಿನ ದೊಡ್ಡದಾದ ಅಲ್-ಮುಯಿಸೆಮ್‌ನಲ್ಲಿರುವ ಶವಾಗಾರದಲ್ಲಿ ಒಟ್ಟು 550 ಮೃತಶರೀರಗಳು ಸಿಕ್ಕಿವೆ ಎಂದು ರಾಜತಾಂತ್ರಿಕರು ಹೇಳಿದ್ದಾರೆ.

ರೀಲ್ಸ್ ಹುಚ್ಚಾಟ; ಕಾರು ರಿವರ್ಸ್ ವೇಳೆ ಪ್ರಪಾತಕ್ಕೆ ಬಿದ್ದು ಯುವತಿ ಸಾವು

ಮುಂಬೈ: ರೀಲ್ಸ್ ಮಾಡುವ ಹುಚ್ಚು ಸಾಹಸಕ್ಕೆ ಮತ್ತೊಂದು ಬಲಿಯಾಗಿದ್ದು,





ಬೆಟ್ಟದ ತುದಿಯಲ್ಲಿ ರಿವರ್ಸ್ ಮಾಡುವ ರೀಲ್ಸ್ ಮಾಡುತ್ತಿದ್ದ ವೇಳೆ ಕಾರು ಪ್ರಪಾತಕ್ಕೆ ಉರುಳಿ 23 ವರ್ಷದ ಯುವತಿ ಸಾವನ್ನಪ್ಪಿದ್ದಾಳೆ.

ಮಹಾರಾಷ್ಟ್ರದ ಛತ್ರಪತಿ ಸಾಂಭಾಜಿ ನಗರದ ಸುಲಿಭಂಜನ್ ಬೆಟ್ಟದಲ್ಲಿ ಈ ದುರ್ಘಟನೆ ನಡೆದಿದ್ದು, ಕಾರಲ್ಲಿ ಕೂತು ರೀಲ್ಸ್ ಮಾಡುವ ದುಸ್ಸಾಹಸಕ್ಕೆ ಮುಂದಾದ ಯುವತಿ, ಬೃಹತ್ ಪ್ರಪಾತಕ್ಕೆ ಬಿದ್ದು ಮೃತಪಟ್ಟಿರುವ ಘಟನೆ ಜರುಗಿದೆ. ಮೃತ ಯುವತಿಯನ್ನು ಶ್ವೇತಾ ದೀಪಕ್ ಸುರ್ವಾಸೆ (23) ಎಂದು ಗುರುತಿಸಲಾಗಿದ್ದು, ಆಕೆ ಸಂಭಾಜಿನಗರದ ಹನುಮಾನ್‌ನಗರ ನಿವಾಸಿ ಎನ್ನಲಾಗಿದೆ.

ಮೂಲಗಳ ಪ್ರಕಾರ ಸ್ನೇಹಿತರ ಜತೆಗೆ ಸುಲಿಭಂಜನ್ ಗ್ರಾಮದ ದತ್ತ ಮಂದಿರಕ್ಕೆ ಶ್ವೇತಾ ತೆರಳಿದ್ದರು. ಈ ವೇಳೆ ಬೆಟ್ಟದ ಮೇಲೆ ಕಾರು ನಿಲ್ಲಿಸಿ ರೀಲ್ಸ್ ಮಾಡಲು ಮುಂದಾಗಿದ್ದರು. ಕಾರು ಚಾಲನೆ ಬಗ್ಗೆ ಅರಿವಿರದಿದ್ದರೂ ಶ್ವೇತಾ ಕಾರಿನ ಚಾಲಕನ ಸೀಟಿನಲ್ಲಿ ಕೂತು ಡ್ರೈವ್ ಮಾಡುವ ಸಾಹಸ ನಡೆಸಿದ್ದಾರೆ. ಟೊಯೊಟಾ ಇಟಿಯೋಸ್ ಕಾರನ್ನು ನಿಧಾನವಾಗಿ ರಿವರ್ಸ್ ಗೇರ್‌ನಲ್ಲಿ ಶ್ವೇತಾ ಚಲಾಯಿಸುತ್ತಿದ್ದರು. ಬ್ರೇಕ್ ಅಥವಾ ಎಕ್ಸಲೇಟರ್ ಬಗ್ಗೆ ತಿಳುವಳಿಕೆ ಇಲ್ಲದೆ ಏಕಾಏಕಿ ಎಕ್ಸಲೇಟರ್ ಒತ್ತಿದ್ದಾರೆ. ನೋಡ ನೋಡುತ್ತಿದ್ದಂತೆ, ಸ್ನೇಹಿತರ ಕಣ್ಣ ಮುಂದೆಯೇ ಕಾರು ಸಮೇತ ಆಕೆ ಸುಮಾರು 300 ಅಡಿ ಆಳದ ಪ್ರಪಾತಕ್ಕೆ ಬಿದ್ದಿದ್ದಾರೆ.

ವಿಡಿಯೋ ಗೇಮ್ ಸಾಧನ ಆರ್ಡರ್ ಮಾಡಿದ ಗ್ರಾಹಕರ ಮನೆಗೆ ಬಂತು ಜೀವಂತ ಹಾವು!

ಬೆಂಗಳೂರು: ಆನ್‌ಲೈನ್ ಶಾಪಿಂಗ್ ವೆಬ್‌ಸೈಟ್ ಅಮೆಜಾನ್‌ನಲ್ಲಿ ವಿಡಿಯೋ ಗೇಮ್ ಸಾಧನ ಆರ್ಡರ್ ಮಾಡಿದ್ದ ಗ್ರಾಹಕರಿಗೆ ಕೊರಿಯರ್ ಬಾಕ್ಸ್‌ನ ಜತೆಗೆ ವಿಷಕಾರಿ ಹಾವು ಬಂದ ಘಟನೆ ಬೆಂಗಳೂರಿನಲ್ಲಿ ನಡೆದಿದೆ.



ಈ ಬಗ್ಗೆ ಸರ್ಜಾಪುರ ನಿವಾಸಿ ತನ್ವಿ ಎನ್ನುವವರ ಟ್ವೀಟ್ ಮಾಡಿ ಅಮೆಜಾನ್ ವಿರುದ್ಧ ಆಕ್ರೋಶ ಹೊರ ಹಾಕಿದ್ದಾರೆ. ಕಳೆದ ವಾರ ತನ್ವಿ ಅವರು ವಿಡಿಯೋ ಗೇಮ್ ಆಡುವುದಕ್ಕೆ ಅವಶ್ಯಕವಿರುವ ಎಕ್ಸ್‌ಬಾಕ್ಸ್ ಕಂಟ್ರೋಲರ್ ಸಾಧನವನ್ನು ಅಮೆಜಾನ್‌ನಲ್ಲಿ ಆರ್ಡರ್ ಮಾಡಿದ್ದರು. ಬುಧವಾರ ಬೆಳಗ್ಗೆ ಅಮೆಜಾನ್ ಕೊರಿಯರ್ ಬಾಕ್ಸ್ ಬಂದಿದ್ದು, ಅದರ ಒಳಗೆ ಜೀವಂತ ಹಾವು ಇದೆ.

ಬಾಕ್ಸ್ ತೆರೆಯುತ್ತಿದ್ದಂತೆ ಹಾವನ್ನು ಕಂಡ ತನ್ವಿಯವರು ಸೀದಾ ಅದನ್ನು ಕಸದ ಬುಟ್ಟಿಗೆ ಹಾಕಿದ್ದಾರೆ. ಬಳಿಕ ವಿಡಿಯೋ ಮಾಡಿ ಟ್ವೀಟ್ ಮಾಡಿದ್ದಾರೆ. ಅಮೆಜಾನ್‌ನಲ್ಲಿ ವಿಡಿಯೋ ಕಂಟ್ರೋಲರ್ ಆರ್ಡರ್ ಮಾಡಿದ್ದೆ. ಅದರೊಂದಿಗೆ ಹಾವನ್ನು ಉಚಿತವಾಗಿ ಪಡೆದುಕೊಂಡಿದ್ದೇನೆ ಎಂದು ಬರೆದುಕೊಂಡಿದ್ದಾರೆ.

ಸದ್ಯ ಈ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ. ಹಲವರು ಈ ಬಗ್ಗೆ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿ ಎಂದು ಸಲಹೆ ನೀಡಿದ್ದಾರೆ. ಜತೆಗೆ ಅಮೆಜಾನ್ ಸೇವೆಯ ಬಗ್ಗೆಯೂ ಕಿಡಿಕಾರಿದ್ದಾರೆ. ಕೊರಿಯರ್ ಬಾಕ್ಸ್ ಒಳಗೆ ಇದ್ದ ಗಮ್ ಟೇಪ್‌ಗೆ ಈ ಹಾವು ಸಿಕ್ಕಿಕೊಂಡಿತ್ತು ಹೀಗಾಗಿ, ಅದು ಹೊರಗೆ ಬರುವುದಕ್ಕೆ ಸಾಧ್ಯವಾಗಿಲ್ಲ ಇದು ವಿಷಕಾರಿ ಹಾವಾಗಿದ್ದು, ಗಮನವಿಟ್ಟು ನೋಡಿದ ಕಾರಣ ಅಪಾಯದಿಂದ ಪಾರಾದೆ ಎಂದು ಗ್ರಾಹಕರು ಹೇಳಿಕೊಂಡಿದ್ದಾರೆ.

ಅಮೆಜಾನ್‌ನಿಂದ ಪ್ರತಿಕ್ರಿಯೆ: ತನ್ವಿ ಅವರ ಟ್ವೀಟ್‌ಗೆ ಅಮೆಜಾನ್ ಸಹಾಯ ಕೇಂದ್ರ ಪ್ರತಿಕ್ರಿಯೆ ನೀಡಿದ್ದು, ಕ್ಷಮೆ ಕೋರಿದೆ. ಜತೆಗೆ ಶೀಘ್ರದಲ್ಲಿಯೇ ನಿಮ್ಮನ್ನು ಸಂಪರ್ಕ ಮಾಡುವುದಾಗಿ ತಿಳಿಸಿದೆ.

ದೇಶದ 41 ವಿಮಾನ ನಿಲ್ದಾಣ, ಮುಂಬೈನ 50ಕ್ಕೂ ಹೆಚ್ಚು ಆಸ್ಪತ್ರೆಗೆ ಹುಸಿಬಾಂಬ್ ಬೆದರಿಕೆ

ನವದೆಹಲಿ: ದೇಶದ 41 ವಿಮಾನ ನಿಲ್ದಾಣಗಳಿಗೆ ಬಾಂಬ್ ಬೆದರಿಕೆ ಇ-ಮೇಲ್ ಬಂದಿದೆ. ಭದ್ರತಾ ಏಜೆನ್ಸಿಗಳು ಗಂಟೆಗಳ ಕಾಲ ನಡೆಸಿದ ತಪಾಸಣೆಯ ನಂತರ ಅದು ಹುಸಿ ಬೆದರಿಕೆ ಎಂದು ದೃಢಪಟ್ಟಿರುವುದಾಗಿ ಅಧಿಕೃತ ಮೂಲಗಳು ತಿಳಿಸಿವೆ

ವಿಮಾನ ನಿಲ್ದಾಣಗಳಲ್ಲಿ ಮಧ್ಯಾಹ್ನ 12.40ರ ಸುಮಾರಿಗೆ ಇ-ಮೇಲ್ ಐಡಿ exhumedyou888@gmail.comನಿಂದ ಇ-ಮೇಲ್ ಸ್ವೀಕರಿಸಲಾಗಿದೆ. "KNR" ಎಂದು ಕರೆಯಲಾಗುವ ಆನ್‌ಲೈನ್ ಗುಂಪು ಈ ಸುಳ್ಳು ಬೆದರಿಕೆ ಇಮೇಲ್‌ಗಳ ಹಿಂದೆ ಇದೆ ಎಂದು ಶಂಕಿಸಲಾಗಿದೆ. ಹಲೋ, ವಿಮಾನ ನಿಲ್ದಾಣದಲ್ಲಿ ಸ್ಫೋಟಕಗಳನ್ನು ಇಡಲಾಗಿದೆ. ಬಾಂಬ್‌ಗಳು ಶೀಘ್ರದಲ್ಲೇ ಸ್ಫೋಟಗೊಳ್ಳಲಿದ್ದು, ನೀವೆಲ್ಲರೂ ಸಾಯುತ್ತೀರಿ ಎಂದು ಸಂದೇಶ ರವಾನಿಸಿ ಆತಂಕ ಹುಟ್ಟಿಸಲಾಗಿದೆ. ಎಲ್ಲಾ ವಿಮಾನ ನಿಲ್ದಾಣಗಳು ಇದು ಹುಸಿ ಬೆದರಿಕೆ ಎಂದು ವರದಿ ಮಾಡಿದೆ ಎಂದು ಮೂಲಗಳು ತಿಳಿಸಿವೆ. ಮತ್ತೊಂದೆಡೆ ಮುಂಬೈನ ಜಸ್ಲೋಕ್, ರಹೇಜಾ, ಸೆವೆನ್ ಹಿಲ್, ಕೊಹಿನೂರ್ ಆಸ್ಪತ್ರೆ ಸೇರಿದಂತೆ 50ಕ್ಕೂ ಹೆಚ್ಚು ಆಸ್ಪತ್ರೆಗಳಿಗೆ ಬಾಂಬ್ ಬೆದರಿಕೆಗಳು ಬಂದಿವೆ. VPN ನೆಟ್‌ವರ್ಕ್ ಬಳಸಿ ಈ ಇ-ಮೇಲ್ ಕಳುಹಿಸಲಾಗಿದೆ. ಕಳುಹಿಸುವವರ ಗುರುತು ಮತ್ತು ಬೆದರಿಕೆಯ ಉದ್ದೇಶ ಇನ್ನೂ ಪತ್ತೆಯಾಗಿಲ್ಲ ಎಂದು ಮುಂಬೈ ಪೊಲೀಸರು ತಿಳಿಸಿದ್ದಾರೆ.

ಅಯೋಧ್ಯೆ ರಾಮಮಂದಿರ ಆವರಣದಲ್ಲಿ ಸಿಡಿದ ಗುಂಡಿಗೆ ಪ್ಯಾರಾ ಮಿಲಿಟರಿ ಯೋಧ ಬಲಿ

ಅಯೋಧ್ಯೆ: ಪವಿತ್ರ ಅಯೋಧ್ಯೆ ರಾಮಮಂದಿರಕ್ಕೆ ಇದೀಗ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ದರ್ಶನ ಪಡೆಯುತ್ತಿದ್ದಾರೆ. ಭಾರಿ ಬೆದರಿಕೆಗಳ ಕಾರಣ ಅಯೋಧ್ಯೆಯಲ್ಲಿ ಭದ್ರತೆಯನ್ನೂ ಬಿಗಿಗೊಳಿಸಲಾಗಿದೆ. ಹೀಗೆ ಭದ್ರತೆಗಾಗಿ ನಿಯೋಜನೆಗೊಂಡ ಪ್ಯಾರಾ ಮಿಲಿಟರಿ ಯೋಧ ತನ್ನದೇ ಗುಂಡಿಗೆ ಬಲಿಯಾಗಿದ್ದಾನೆ. ಅಚಾನಕ್ಕಾಗಿ ಸಿಡಿದ ಗುಂಡಿನಿಂದ ಯೋಧ ಮೃತಪಟ್ಟಿದ್ದಾನೆ.

ಅಂಬೇಡ್ಕರ್‌ನಗರ ನಿವಾಸಿಯಾಗಿರುವ ಪ್ಯಾರಾ ಮಿಲಿಟರಿ ಯೋಧ ಶತ್ರುಘ್ನ ವಿಶ್ವಕರ್ಮ, ರಾಮ ಜನ್ಮಭೂಮಿಯಲ್ಲಿ ಭದ್ರತಾ ಕಾರ್ಯದಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ಸಶಸ್ತ್ರ ಸೀಮಾ ಬಲ್(SSF) ಎಂಬ ರಾಮಮಂದಿರ ಭದ್ರತಾ ಪಡೆಯ ಸಿಬ್ಬಂದಿ ಶತ್ರುಘ್ನ ಜೂ.19ರಂದು ರಾಮಮಂದಿರ ಆವರಣದಲ್ಲಿ ಕರ್ತವ್ಯದಲ್ಲಿ ನಿರತರಾಗಿದ್ದರು. ಈ ವೇಳೆ ತನ್ನಲ್ಲಿದ್ದ ಶಸ್ತ್ರಾಸ್ತ್ರ ಪರಿಶೀಲಿಸುತ್ತಿದ್ದ ವೇಳೆ ಅಚಾನಕ್ಕಾಗಿ ಗುಂಡು ಸಿಡಿದಿದೆ. ಯೋಧ ತೀವ್ರವಾಗಿ ಗಾಯಗೊಂಡಿದ್ದಾನೆ. ತಕ್ಷಣವೇ ಆಂಬುಲೆನ್ಸ್ ಮೂಲಕ ಸ್ಥಳೀಯ ಆಸ್ಪತ್ರೆಗೆ ಸಾಗಿಸುವ ದಾರಿ ಮಧ್ಯೆ ಅಸುನೀಗಿದ್ದಾರೆ.

ಮೈಸೂರಿನ ಎಸ್‌ಎಂಟಿ ತಾಯಿ, ಮಕ್ಕಳ ಆಸ್ಪತ್ರೆಯಲ್ಲಿ ಉತ್ತಮ ಸೇವಾ ಸೌಕರ್ಯ: ಆರೋಗ್ಯ ಸಚಿವರ ಪ್ರಶಂಸೆ

● ಅಗತ್ಯವಿರುವ ಸಿಬ್ಬಂದಿ ನೇಮಕಕ್ಕೆ ಸೂಚನೆ ● ಸೌಕರ್ಯ ಹೆಚ್ಚಳಕ್ಕೆ ಸಲಹೆ

ಮೈಸೂರು,ಜೂ.19(ಎಂಟಿವೈ)- ಮೈಸೂರಿನ ಜೆಎಲ್‌ಬಿ ರಸ್ತೆಯಲ್ಲಿರುವ ಎಸ್‌ಎಂಟಿ ತಾಯಿ ಮತ್ತು ಮಕ್ಕಳ ಆಸ್ಪತ್ರೆಗೆ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಭೇಟಿ ನೀಡಿ ಪರಿಶೀಲಿಸಿ, ಗರ್ಭಿಣಿಯರಿಗೆ ಇಲ್ಲಿ ಸಿಗುತ್ತಿರುವ ಸೇವೆಗೆ ಪ್ರಶಂಸೆ ವ್ಯಕ್ತಪಡಿಸಿದರು.

ಮೈಸೂರಿನ ಜಿ.ಪಂ ಸಭಾಂಗಣದಲ್ಲಿ ಆಯೋಜಿಸಿದ್ದ ರಾಷ್ಟ್ರೀಯ ಸಿಕಲ್ ಸೆಲ್ ಅನೀಮಿಯಾ ನಿರ್ಮೂಲನಾ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಬುಧವಾರ ಮೈಸೂರಿಗೆ ಆಗಮಿಸಿದ್ದ ಸಚಿವ ದಿನೇಶ್ ಗುಂಡೂರಾವ್ ಎಸ್‌ಎಂಟಿ ಹೆರಿಗೆ ಆಸ್ಪತ್ರೆಗೆ ಭೇಟಿ ನೀಡಿ, ಪರಿಶೀಲಿಸಿದರು. ಈ ವೇಳೆ ಆಸ್ಪತ್ರೆಗೆ ಬಂದಿದ್ದ ಗರ್ಭಿಣಿಯರು, ಆಸ್ಪತ್ರೆಯಲ್ಲಿ ದಾಖಲಾಗಿರುವ ತಾಯಂದಿರು, ಬಾಣಂತಿಯರು ಹಾಗೂ ಪೋಷಕರನ್ನು ಮಾತನಾಡಿಸಿ, ಇಲ್ಲಿನ ಸೇವೆಯ ಬಗ್ಗೆ ಮಾಹಿತಿ ಪಡೆದರು. ಬಳಿಕ ಆಸ್ಪತ್ರೆಯ ಕಚೇರಿ, ವಾರ್ಡ್, ಪ್ರಯೋಗಾಲಯ, ಶಸ್ತ್ರಚಿಕಿತ್ಸಾ ಕೊಠಡಿಗೆ ಭೇಟಿ ನೀಡಿ ಪರಿಶೀಲಿಸಿದರು.



ಮೈಸೂರಿನ ಜೆಎಲ್‌ಬಿ ರಸ್ತೆಯಲ್ಲಿರುವ ಎಸ್‌ಎಂಟಿ ತಾಯಿ ಮತ್ತು ಮಕ್ಕಳ ಆಸ್ಪತ್ರೆಗೆ ಬುಧವಾರ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಭೇಟಿ ನೀಡಿ, ಪರಿಶೀಲಿಸಿದರು.

ಜಿಲ್ಲೆಯ ವಿವಿಧೆಡೆಯಿಂದ ಎಸ್‌ಎಂಟಿ ಹೆರಿಗೆ ಆಸ್ಪತ್ರೆಗೆ ಬರುವ ತಾಯಂದಿರ ಸಂಖ್ಯೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ರೋಗಿಗಳ ಸಂಖ್ಯೆಗೆ ಅನುಗುಣವಾಗಿ ಕಾರ್ಯನಿರ್ವಹಿಸಲು ಸಿಬ್ಬಂದಿ ಕೊರತೆ ಇರುವುದನ್ನು ಗಮನಿಸಿದರಲ್ಲದೆ, ಅಗತ್ಯ ಸಿಬ್ಬಂದಿ ನೇಮಕ ಮಾಡಿಕೊಳ್ಳಲು ಮೌಖಿಕ ಅನುಮತಿ ನೀಡಿದರು. ಆಸ್ಪತ್ರೆಯ ವೈದ್ಯಾಧಿಕಾರಿಗಳು, ಸಿಬ್ಬಂದಿ ಉತ್ತಮ ಸೇವೆ ಒದಗಿಸಬೇಕೆಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿ, ಎಸ್‌ಎಂಟಿ ಹೆರಿಗೆ ಆಸ್ಪತ್ರೆ ಮೈಸೂರು ಭಾಗದ ಜನರಿಗೆ ಉತ್ತಮ ಸೇವೆ ನೀಡುತ್ತಿದೆ. ಸಿಬ್ಬಂದಿ ಕೊರತೆ ಇರುವುದಾಗಿ ತಿಳಿಸಿದ ಹಿನ್ನೆಲೆಯಲ್ಲಿ ಐದು ಮಂದಿ ಶುಶ್ರೂಷಕಿಯರನ್ನು ಹೆಚ್ಚುವರಿಯಾಗಿ ನೇಮಕ ಮಾಡಿಕೊಳ್ಳುವಂತೆ ಸೂಚಿಸಲಾಗಿದೆ. ಪ್ರಸ್ತುತ ಆಸ್ಪತ್ರೆಯಲ್ಲಿ 120 ಹೆರಿಗೆ ಮಾಡಿಸಿ, ಆರೈಕೆ ಮಾಡಲಾಗುತ್ತಿದ್ದು, ಅದನ್ನು 250ಕ್ಕೆ ಹೆಚ್ಚಿಸಿದರೆ ಹೆಚ್ಚುವರಿಯಾಗಿ ಒಬ್ಬರು ಮಕ್ಕಳ ತಜ್ಞರು, ಸ್ತ್ರೀರೋಗ ತಜ್ಞರು, ಅರಿವಳಿಕೆ ತಜ್ಞರನ್ನು ನೇಮಕ ಮಾಡಿಕೊಳ್ಳಲು ಅವಕಾಶ ನೀಡುವುದಾಗಿ ಸಚಿವರು ಭರವಸೆ ನೀಡಿದರು.

ಸರ್ಕಾರಿ ಆಸ್ಪತ್ರೆಯಲ್ಲಿ ಹೆರಿಗೆಯಾಗುವ ಪ್ರಮಾಣ ಹೆಚ್ಚಾಗಿದೆ. ತಾಯಿ, ಮಕ್ಕಳ ಸುರಕ್ಷತೆ ದೃಷ್ಟಿಯಿಂದ ಹೆಚ್ಚಾಗಬೇಕು. ಈ ನಿಟ್ಟಿನಲ್ಲಿ ಕೆಲ ತಿಂಗಳ ಹಿಂದೆ ಜಿಲ್ಲೆಯ ಸರ್ಕಾರಿ ಆಸ್ಪತ್ರೆಗಳಲ್ಲಿ ತಿಂಗಳಿಗೆ 800ರಿಂದ 900 ಹೆರಿಗೆಯಾಗುತ್ತಿತ್ತು. ಇದೀಗ ಈ ಸಂಖ್ಯೆ 1800ರಿಂದ 2000ಕ್ಕೆ ಏರಿಕೆಯಾಗಿದೆ. ಇದು ಉತ್ತಮ ಬೆಳವಣಿಗೆ. ಹೆಚ್ಚುವರಿ ಸೇವೆ ಕಾರಣಕ್ಕೆ ಬೇಕಾದ ಸೌಲಭ್ಯಗಳನ್ನು ಇಲಾಖೆಯಿಂದ ಒದಗಿಸಲಾಗುವುದು ಎಂದರು. ಈ ವೇಳೆ ಡಿಹೆಚ್‌ಓ ಡಾ.ಪಿ.ಸಿ.ಕುಮಾರಸ್ವಾಮಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಉಪನಿರ್ದೇಶಕರಾದ ಡಾ.ಕೆ.ಹೆಚ್.ಪ್ರಸಾದ್, ಡಾ.ಮಲ್ಲಿಕಾ, ಎಸ್‌ಎಂಟಿ ಆಸ್ಪತ್ರೆ ಮುಖ್ಯಸ್ಥೆ ಡಾ.ಅನುರಾಧ, ಕಾಂಗ್ರೆಸ್ ಮುಖಂಡ ಹೆಚ್.ವಿ.ರಾಜೀವ್ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ಸರ್ಕಾರಿ ಆಸ್ಪತ್ರೆಗಳಲ್ಲೂ ಮೂಲಸೌಕರ್ಯ

"ಖಾಸಗಿ ಆಸ್ಪತ್ರೆಗಳಲ್ಲಿ ಸಿಗುವಂತೆ ಸರ್ಕಾರಿ ಆಸ್ಪತ್ರೆಗಳಲ್ಲೂ ಉಚಿತ ಗುಣಮಟ್ಟದ ಚಿಕಿತ್ಸೆ ದೊರೆಯುವಂತೆ ಮೂಲಸೌಕರ್ಯ, ಅತ್ಯಾಧುನಿಕ ವ್ಯವಸ್ಥೆ ಮಾಡಲಾಗುತ್ತಿದೆ. ಆರೋಗ್ಯ ಕ್ಷೇತ್ರಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೆಚ್ಚಿನ ಒತ್ತು ನೀಡಿದ್ದಾರೆ. ವೈದ್ಯರು, ವಿಶೇಷ ತಜ್ಞರು, ಸಿಬ್ಬಂದಿ ಮತ್ತು ಪ್ರಯೋಗಾಲಯದಲ್ಲಿ ಪರೀಕ್ಷೆಗಳನ್ನು ಹೆಚ್ಚಿಸಲು ಅಗತ್ಯ ಸೌಲಭ್ಯ ಒದಗಿಸಲಾಗಿದೆ. ಮೈಸೂರು ನೂತನ ಜಿಲ್ಲಾ ಆಸ್ಪತ್ರೆಗೆ ಮೂಲ ಸೌಲಭ್ಯ ಒದಗಿಸಿದ್ದರಿಂದ ಇದೀಗ ಜಿಲ್ಲಾಸ್ಪತ್ರೆಯಲ್ಲಿಯೂ ಹೆರಿಗೆ ಪ್ರಕರಣಗಳ ಸಂಖ್ಯೆ ಹೆಚ್ಚಾಗುತ್ತಿದೆ. ತಿಂಗಳಿಗೆ 350 ರಿಂದ 400 ಹೆರಿಗೆ ಆಗುತ್ತಿದೆ. ಉತ್ತಮ ದರ್ಜೆಯ ಚಿಕಿತ್ಸೆ ನೀಡಬೇಕಾದರೆ ಮೂಲಸೌಕರ್ಯವನ್ನು ಕಲ್ಪಿಸುವುದು ಸರ್ಕಾರದ ಆದ್ಯ ಕರ್ತವ್ಯವಾಗಿದೆ.


-ದಿನೇಶ್ ಗುಂಡೂರಾವ್, ಆರೋಗ್ಯ ಸಚಿವ

ಕಲಾವಿದರ ಗುರುತಿನ ಚೀಟಿಗೆ ನೋಂದಣಿ ಆರಂಭ

ಮೈಸೂರು,ಜೂ.19-ಜಿಲ್ಲೆಯಲ್ಲಿರುವ ವಿವಿಧ ಜಾನಪದ ಕಲಾ ತಂಡಗಳ ಕಲಾವಿದರ ವಿವರಗಳನ್ನು ಕ್ರೋಢೀಕರಿಸುವ ದೃಷ್ಟಿಯಿಂದ ಕಲಾವಿದರು ಅಥವಾ ಕಲಾತಂಡಗಳ ಪಟ್ಟಿಯನ್ನು ತಯಾರಿಸಿ ಅವರಿಗೆ ಗುರುತಿನ ಚೀಟಿಯನ್ನು ನೀಡಲಾಗುತ್ತದೆ. ಮೈಸೂರು ಜಿಲ್ಲೆಯಲ್ಲಿರುವ ವಿವಿಧ ಜಾನಪದ ಕಲಾತಂಡಗಳ ಕಲಾವಿದರು ತಮ್ಮ ಸ್ವ-ವಿವರದೊಂದಿಗೆ ಯಾವ ಕಲೆಯಲ್ಲಿ ಕಲಾವಿದರು, ಕಲಾತಂಡಗಳು ಎಂಬುದರ ಬಗ್ಗೆ ಕಲಾಪ್ರದರ್ಶನದ ದಾಖಲೆಗಳನ್ನು ಮತ್ತು ಛಾಯಾಚಿತ್ರಗಳೊಂದಿಗೆ ಕನ್ನಡ-ಸಂಸ್ಕೃತಿ ಇಲಾಖೆಯಲ್ಲಿ ಅರ್ಜಿ ನಮೂನೆಯನ್ನು ಪಡೆದು ಜೂ.26ರೊಳಗಾಗಿ ನೋಂದಣಿ ಮಾಡಿಕೊಳ್ಳಬೇಕು. ಹಿಂದೆ ದತ್ತಾಂಶ ಸಂಗ್ರಹದಲ್ಲಿ ನೋಂದಣಿಯಾದ ಕಲಾವಿದರನ್ನು ಹೊರತುಪಡಿಸಿ ಉಳಿದ ಕಲಾವಿದರನ್ನು ನೋಂದಣಿ ಮಾಡಿಕೊಳ್ಳಲು ಸೂಚಿಸಿದೆ. ಮಾಹಿತಿಗೆ ಕನ್ನಡ-ಸಂಸ್ಕೃತಿ ಇಲಾಖೆ ದೂ.ಸಂ: 0821-2513225 ಅನ್ನು ಸಂಪರ್ಕಿಸಬಹುದು.

ನಾಳೆ ಅಂತಾರಾಷ್ಟ್ರೀಯ ಯೋಗ ದಿನಾಚರಣೆ

ಮೈಸೂರು,ಜೂ.19-ಜೂ.21ರಂದು 10ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯನ್ನು ಅರಮನೆ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ. ಯೋಗ ದಿನಾಚರಣೆಯಲ್ಲಿ ಭಾಗವಹಿಸುವವರು ಯೋಗ ಮ್ಯಾಟ್ ತರಬೇಕು. ಯೋಗ ಮಾಡಲು ಅನುಕೂಲವಾದ ವಸ್ತ್ರಗಳನ್ನು ಧರಿಸಿ, ಬೆಳಗ್ಗೆ 5.30 ಗಂಟೆಯೊಳಗೆ ಆಸೀನರಾಗಿರಬೇಕು. ಯೋಗದಲ್ಲಿ ಭಾಗವಹಿಸುವವರು ಅರಮನೆಯ ದಕ್ಷಿಣ ದ್ವಾರವಾದ ಬಲರಾಮ ಗೇಟ್, ಉತ್ತರ ದ್ವಾರವಾದ ಜಯರಾಮ ಗೇಟ್ ಹಾಗೂ ಪಶ್ಚಿಮ ದ್ವಾರವಾದ ವರಾಹ ಗೇಟ್ ಮೂಲಕ ಬರಬಹುದು ಎಂದು ಜಿಲ್ಲಾ ಆಯುಷ್ ಅಧಿಕಾರಿ ತಿಳಿಸಿದ್ದಾರೆ.



ತಮಿಳುನಾಡಿನಲ್ಲಿ ನಕಲಿ ಮದ್ಯ ಸೇವಿಸಿ 12 ಮಂದಿ ಸಾವು

ಜಿಲ್ಲಾಧಿಕಾರಿ ವರ್ಗಾವಣೆ; ಎಸ್‌ಪಿ ಅಮಾನತು

ಕಳ್ಳಕುರಿಚಿ, ಜೂ.19- ನಕಲಿ ಮದ್ಯ ಸೇವಿಸಿದ 12 ಮಂದಿ ಸಾವನ್ನಪ್ಪಿರುವುದಾಗಿ ವರದಿಯಾಗಿದೆ. ಇಂದು ತಮಿಳುನಾಡಿನ ಕಳ್ಳಕುರಿಚಿಯಲ್ಲಿ ನಕಲಿ ಮದ್ಯ ಸೇವಿಸಿ 20ಕ್ಕೂ ಹೆಚ್ಚು ಮಂದಿ ಅಸ್ವಸ್ಥರಾಗಿದ್ದರು. ಈ ಪೈಕಿ ಆರಂಭದಲ್ಲಿ ನಾಲ್ವರು ಮೃತಪಟ್ಟಿದ್ದರು. ಈ ಘಟನೆ ಸಂಬಂಧ ಕಳ್ಳಕುರಿಚಿ ಜಿಲ್ಲಾಧಿಕಾರಿಗೆ ವರ್ಗಾವಣೆ ಶಿಕ್ಷೆ ನೀಡಲಾಗಿದೆ. ಎಸ್‌ಪಿಯನ್ನು ತಾತ್ಕಾಲಿಕವಾಗಿ ಅಮಾನತು ಮಾಡಲಾಗಿದೆ.

ಕರುಣಾಪುರಂ ಪಟ್ಟಣ ವ್ಯಾಪ್ತಿಯಲ್ಲಿ ಈ ನಕಲಿ ಮದ್ಯವನ್ನು ಮಾರಾಟ ಮಾಡಲಾಗಿದೆ. ದಿನಗೂಲಿ ನೌಕರರು ಇಂದು ಸಂಜೆ ಕಡಿಮೆ ಬೆಲೆಗೆ ಲಭ್ಯವಿದ್ದ ನಕಲಿ ಮದ್ಯವನ್ನು ಸೇವಿಸಿದ್ದಾರೆ. ಮದ್ಯ ಸೇವಿಸಿದ ಕೆಲ ಹೊತ್ತಲ್ಲೇ ಕಾರ್ಮಿಕರು ಅಸ್ವಸ್ಥಗೊಂಡಿದ್ದಾರೆ. ಹಲವರನ್ನು ಆಸ್ಪತ್ರೆ ದಾಖಲಿಸಲಾಗಿದೆ. ಕೆಲವರು ಮನೆ ಸೇರಿಕೊಳ್ಳುವ ಹೊತ್ತಿಗೆ ಮೃತಪಟ್ಟಿದ್ದಾರೆ.

ಘಟನೆ ಬೆನ್ನಲ್ಲೇ ಜಿಲ್ಲಾಧಿಕಾರಿ ಶ್ರವಣ್ ಕುಮಾರ್ ಜಟಾವತ್ ಅವರು, ಸಾವಿನ ಸಂಖ್ಯೆ ಕುರಿತು ನಿಖರ ಮಾಹಿತಿ ತಿಳಿದಿಲ್ಲ. 20ಕ್ಕೂ ಹೆಚ್ಚು ಮಂದಿಯನ್ನು ಆಸ್ಪತ್ರೆಯಲ್ಲಿ ದಾಖಲಿಸಲಾಗಿದೆ ಎಂದಿದ್ದರು. ಆದರೆ ಜಿಲ್ಲಾಧಿಕಾರಿ ವ್ಯಾಪ್ತಿಯಲ್ಲಿ ಈ ರೀತಿ ಘಟನೆ ನಡೆದಿರುವ ಕಾರಣ ಜೊತೆಗೆ ಇದೇ ರೀತಿ ಪ್ರಕರಣ ಮರುಕಳಿಸಿದ ಕಾರಣ ಇದೀಗ ಶ್ರವಣ್ ಕುಮಾರ್ ವರ್ಗಾವಣೆ ಮಾಡಲಾಗಿದೆ ಎಂದು ವರದಿಯಾಗಿದೆ.

ಕೆಲಸ ಮುಗಿಸಿ ಮನೆಗೆ ಮರಳುವಾಗ ಅಗ್ಗದ ಬೆಲೆಯಲ್ಲಿ ಲಭ್ಯವಾದ ಕಾರಣ ಬಹುತೇಕ ಕೂಲಿ ಕಾರ್ಮಿಕರು ಈ ನಕಲಿ ಮದ್ಯ ಸೇವಿಸಿದ್ದಾರೆ. ಮದ್ಯ ಸೇವಿಸಿ ಮನೆಗೆ ಮರಳಿದ ಹಲವರಿಗೆ ವಾಂತಿ ಭೇದಿ, ಹೊಟ್ಟೆ ನೋವು, ಅಸ್ವಸ್ಥತೆ ಕಾಣಿಸಿಕೊಂಡಿದೆ. ಆತಂಕಗೊಂಡ ಕುಟುಂಬಸ್ಥರು ಆಸ್ಪತ್ರೆಗೆ ದಾಖಲಿಸುವ ಪ್ರಯತ್ನ ಮಾಡಿದ್ದಾರೆ. ಆದರೆ ಗಂಭೀರವಾಗಿ ಅಸ್ವಸ್ಥಗೊಂಡ ಕೂಲಿ ಕಾರ್ಮಿಕರು ಮೃತಪಟ್ಟಿದ್ದಾರೆ. ಇದೀಗ ಹಲವು ಕಾರ್ಮಿಕರ ಪರಿಸ್ಥಿತಿ ಗಂಭೀರವಾಗಿದೆ.

ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿದೆ. ಕುಟುಂಬಕ್ಕೆ ಆಧಾರವಾಗಿದ್ದವರೇ ನಕಲಿ ಮದ್ಯ ಸೇವಿಸಿ ಮೃತಪಟ್ಟಿದ್ದಾರೆ. ಇದೀಗ ಸರ್ಕಾರ ಹಾಗೂ ಜಿಲ್ಲಾಡಳಿತ ವಿರುದ್ಧ ಆಕ್ರೋಶ ಹೆಚ್ಚಾಗುತ್ತಿದೆ. ನಕಲಿ ಮದ್ಯ ಹಾವಳಿಯನ್ನು ನಿಯಂತ್ರಿಸಲು ಸರ್ಕಾರ ವಿಫಲವಾಗಿದೆ. ಇದರ ಪರಿಣಾಮ ಅಮಾಯಕರು ಬಲಿಯಾಗಿದ್ದಾರೆ ಎಂದು ಆಕ್ರೋಶ ಹೊರಹಾಕುತ್ತಿದ್ದಾರೆ. ಇತ್ತ ನಕಲಿ ಮದ್ಯ ಮಾರಾಟ ಮಾಡಿದವರು ನಾಪತ್ತೆಯಾಗಿದ್ದಾರೆ.

ಜೂ.22ರಿಂದ ಮೈಸೂರಿನ ಕುದೇರು ಮಠದಲ್ಲಿ ಗುರುಮಲ್ಲೇಶ್ವರರ 125ನೇ ಪ್ರಮಥ ಗಣಾರಾಧನೆ

ಗುರುಲಿಂಗ ಶ್ರೀಗಳ ವಾರ್ಷಿಕ ಗಣಾರಾಧನೆ, ಪ್ರಾರ್ಥನಾ ಮಂದಿರ ಉದ್ಘಾಟನೆ

ಮೈಸೂರು, ಜೂ.19(ಜಿಎ)-ಆಲನಹಳ್ಳಿ ಬಡಾವಣೆಯಲ್ಲಿರುವ ಕುದೇರು ಮಠದಲ್ಲಿ ಗುರುಮಲ್ಲೇಶ್ವರರ 125ನೇ ಪ್ರಮಥ ಗಣಾರಾಧನೆ, ಗುರುಲಿಂಗ ಸ್ವಾಮಿಗಳ 33ನೇ ವಾರ್ಷಿಕ ಗಣಾರಾಧನೆ, ತೋಂಟದಾರ್ಯ ಸ್ವಾಮಿಗಳ ಪ್ರಾರ್ಥನಾ ಮಂದಿರ ಉದ್ಘಾಟನೆ, ಗುರುಶಾಂತ ಸ್ವಾಮಿಗಳ ಗುರುವಂದನಾ ಕಾರ್ಯಕ್ರಮವನ್ನು ಜೂ.22 ಹಾಗೂ 23ರಂದು ಆಯೋಜಿಸಲಾಗಿದೆ ಎಂದು ಮಠದ ಕಿರಿಯ ಶ್ರೀ ಇಮ್ಮಡಿ ಗುರುಲಿಂಗ ಸ್ವಾಮೀಜಿ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜೂ.22ರಂದು ಸಂಜೆ 6ಕ್ಕೆ ಆಲನಹಳ್ಳಿ ಬಡಾವಣೆಯ ವಿವಿಧ ರಸ್ತೆಗಳಲ್ಲಿ ಶ್ರೀ ಗುರುಮಲ್ಲೇಶ್ವರರ ಉತ್ಸವಮೂರ್ತಿ ಮೆರವಣಿಗೆ ನಡೆಯಲಿದೆ. ಗ್ರಾಮಾಂತರ ಭಜನಾ ತಂಡಗಳಿಂದ ಭಜನೆ, ರಾತ್ರಿ 7.30ಕ್ಕೆ ವಿದ್ವಾನ್ ಬಿ.ಶಿವಕುಮಾರ ಶಾಸ್ತ್ರೀ ಅವರಿಂದ ಶಿವಕಥಾ ಕಾಲಕ್ಷೇಪ, ರಾತ್ರಿ 9.30ಕ್ಕೆ ಡಾ.ಶಿವಕುಮಾರ ಸ್ವಾಮೀಜಿಯವರ ಭಕ್ತವೃಂದ, ನುರಿತ ಕಲಾವಿದರಿಂದ ದಕ್ಷಯಜ್ಞ ನಾಟಕ ಪ್ರದರ್ಶನ ಇರಲಿದೆ ಎಂದರು.

23ರಂದು ಬೆಳಗ್ಗೆ 10ಕ್ಕೆ ಧಾರ್ಮಿಕ ಸಭೆ ನಡೆಯಲಿದ್ದು, ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಕೃಪಾಶೀರ್ವಾದ ನೀಡುವರು. ಸಿದ್ಧಗಂಗಾ ಮಠದ ಸಿದ್ಧಲಿಂಗ ಸ್ವಾಮೀಜಿ ತೋಂಟದಾರ್ಯ ಸ್ವಾಮಿಗಳ ಪ್ರಾರ್ಥನಾ ಮಂದಿರ ಉದ್ಘಾಟಿಸುವರು. ದೇವನೂರು ಮಠದ ಮಹಾಂತ ಸ್ವಾಮೀಜಿ ಅಧ್ಯಕ್ಷತೆ ವಹಿಸಲಿದ್ದು, ಮಲ್ಲನಮೂಲೆ ಮಠದ ಚನ್ನಬಸವ ಸ್ವಾಮೀಜಿ ಕಾರ್ಯಕ್ರಮ ಉದ್ಘಾಟಿಸುವರು. ಕುದೇರು ಮಠದ ಕುರಿತು ಸದಾಶಿವಮೂರ್ತಿ ಅವರು ರಚಿಸಿರುವ ಕೃತಿಯನ್ನು ಕುಂದೂರು ಮಠದ ಡಾ.ಶರತ್ ಚಂದ್ರ ಸ್ವಾಮೀಜಿ ಬಿಡುಗಡೆಗೊಳಿಸುವರು. ಕನಕಪುರ ದೇಗುಲ ಮಠದ ಮುಮ್ಮಡಿ ನಿರ್ವಾಣ ಸ್ವಾಮೀಜಿ, ಕುದೇರು ಮಠದ ಗುರುಶಾಂತ ಸ್ವಾಮೀಜಿ, ಮಹದೇಶ್ವರ ಬೆಟ್ಟದಲ್ಲಿರುವ ಸಾಲೂರು ಮಠದ ಶಾಂತ ಮಲ್ಲಿಕಾರ್ಜುನ ಸ್ವಾಮೀಜಿ, ಮಾದಾಪಟ್ಟಣ ಮಠದ ತೋಂಟದಾರ್ಯ ಸ್ವಾಮೀಜಿ ಉಪಸ್ಥಿತರಿದ್ದು ಆಶೀರ್ವಚನ ನೀಡಲಿದ್ದಾರೆ ಎಂದರು.

ಮುಖ್ಯ ಅತಿಥಿಗಳಾಗಿ ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಶಾಸಕರಾದ ಜಿ.ಟಿ.ದೇವೇಗೌಡ, ಬಿ.ವೈ ವಿಜಯೇಂದ್ರ ಟಿ.ಎಸ್.ಶ್ರೀವತ್ಸ ಹೆಚ್.ಎಂ. ಗಣೇಶ್ ಪ್ರಸಾದ್, ಎಂಎಲ್‌ಸಿ ಯತೀಂದ್ರ ಸಿದ್ದರಾಮಯ್ಯ, ವಿಶೇಷ ಅತಿಥಿಗಳಾಗಿ ಮಾಜಿ ಸಂಸದ ಪ್ರತಾಪ ಸಿಂಹ, ಮಾಜಿ ಶಾಸಕರಾದ ಎಸ್.ಎ.ರಾಮದಾಸ್, ಎಂ.ಕೆ. ಸೋಮಶೇಖರ್ ಸೇರಿದಂತೆ ಹಲವಾರು ಗಣ್ಯರು ಭಾಗವಹಿಸುವರು ಎಂದರು.

ಸುದ್ದಿಗೋಷ್ಠಿಯಲ್ಲಿ ವೀರಶೈವ ಮಹಾಸಭಾ ಜಿಲ್ಲಾಧ್ಯಕ್ಷ ಕಾನ್ಯ ಶಿವಮೂರ್ತಿ, ಪ್ರೊ.ಡಿ.ಎಸ್.ಸದಾಶಿವಮೂರ್ತಿ, ಪ್ರೊ.ಬಸವರಾಜು, ಗುರುಪ್ರಸಾದ್, ಕೀಳನಪುರ ಮಾದಪ್ಪ, ಶಿವರಾಜು ಉಪಸ್ಥಿತರಿದ್ದರು.

ಅಮೆರಿಕದ ಹಲವೆಡೆ ಕಾಡ್ಗಿಚ್ಚಿನ ಆರ್ಭಟ: ಸಾವಿರಾರು ಜನರ ಸ್ಥಳಾಂತರ



ಲಾಸ್ ಏಂಜಲೀಸ್ (ಅಮೆರಿಕ): ಕಾಡ್ಗಿಚ್ಚಿನ ಆರ್ಭಟಕ್ಕೆ ಅಮೆರಿಕ ದೇಶದ ಹಲವು ರಾಜ್ಯಗಳು ನಲುಗಿ ಹೋಗಿವೆ. ಈ ವರ್ಷದ ಕಾಡ್ಗಿಚ್ಚಿನ ಸೀಸನ್ ಆರಂಭವಾಗಿದ್ದು, ಕ್ಯಾಲಿಫೋರ್ನಿಯಾ ಹಾಗೂ ನ್ಯೂ ಮೆಕ್ಸಿಕೋ ರಾಜ್ಯಗಳಲ್ಲಿ ಕಾಡ್ಗಿಚ್ಚಿನ ಹೊಡೆತ ಜೋರಾಗಿದೆ. ಕ್ಯಾಲಿಫೋರ್ನಿಯಾ ರಾಜ್ಯದಲ್ಲಿ ಸಾವಿರಾರು ಮಂದಿಯನ್ನು ಸ್ಥಳಾಂತರ ಮಾಡಲಾಗಿದ್ದು, ನ್ಯೂ ಮೆಕ್ಸಿಕೋ ರಾಜ್ಯದಲ್ಲಿ ತುರ್ತು ಪರಿಸ್ಥಿತಿ ಘೋಷಣೆ ಮಾಡಲಾಗಿದೆ.

ನ್ಯೂ ಮೆಕ್ಸಿಕೋ ರಾಜ್ಯದ ದಕ್ಷಿಣ ಭಾಗದಲ್ಲಿ ಕಾಡ್ಗಿಚ್ಚಿನ ಆರ್ಭಟ ವಿಪರೀತವಾಗಿದೆ. ಹೀಗಾಗಿ, ಸಾವಿರಾರು ಜನರು ತಮ್ಮ ಮನೆಗಳನ್ನು ತೊರೆದು ಸುರಕ್ಷಿತ ಸ್ಥಳಗಳಿಗೆ ಓಡಿ ಹೋಗಿದ್ದಾರೆ. ಸಾಕಷ್ಟು ಮನೆಗಳು ಅಗ್ನಿಗಾಹುತಿಯಾಗಿದ್ದು, ಕನಿಷ್ಠ ಓರ್ವ ವ್ಯಕ್ತಿ ಸಾವನ್ನಪ್ಪಿರುವ ಶಂಕೆ ಇದೆ. ಈ ಭಾಗದ ಗುಡ್ಡಗಾಡು ಪ್ರದೇಶದ ಜನರನ್ನು ಸುರಕ್ಷಿತ ಸ್ಥಳಗಳಿಗೆ ಸರ್ಕಾರ ರವಾನೆ ಮಾಡಿದ್ದು, ನ್ಯೂ ಮೆಕ್ಸಿಕೋ ರಾಜ್ಯದ ಮಟ್ಟಿಗೆ ತುರ್ತು ಪರಿಸ್ಥಿತಿ ಘೋಷಿಸಲಾಗಿದೆ. ರಾಷ್ಟ್ರೀಯ ಸುರಕ್ಷತಾ ಪಡೆಗಳು, ಅತ್ಯುನ್ನತ ಮಟ್ಟದ ಅಗ್ನಿಶಾಮಕ ಪಡೆ ಕೂಡಾ ನ್ಯೂ ಮೆಕ್ಸಿಕೋ ರಾಜ್ಯಕ್ಕೆ ಧಾವಿಸಿವೆ. ಬೆಂಕಿಯ ಜೊತೆಗೆ ಬಿರುಗಾಳಿ ಆರ್ಭಟ ಹೆಚ್ಚಾಗಿರುವ ಹಿನ್ನೆಲೆಯಲ್ಲಿ ಕಾಡ್ಗಿಚ್ಚು ಮತ್ತಷ್ಟು ಪ್ರದೇಶಗಳಿಗೆ ವ್ಯಾಪಿಸುವ ಭೀತಿ ಎದುರಾಗಿದೆ.

ಪೆಟ್ರೋಲ್, ಡೀಸೆಲ್ ದರ ಏರಿಕೆ ಖಂಡಿಸಿ ಮೈಸೂರಲ್ಲಿ ಸೋಷಲಿಸ್ಟ್ ಯೂನಿಟಿ ಆಫ್ ಇಂಡಿಯಾ ಪ್ರತಿಭಟನೆ

ಮೈಸೂರು, ಜೂ.19(ಜಿಎ)-ರಾಜ್ಯದಲ್ಲಿ ಪೆಟ್ರೋಲ್, ಡೀಸೆಲ್ ದರ ಏರಿಕೆ ಖಂಡಿಸಿ ಸೋಷಲಿಸ್ಟ್ ಯೂನಿಟಿ ಸೆಂಟರ್ ಆಫ್ ಇಂಡಿಯಾ (ಕಮ್ಯುನಿಸ್ಟ್) ವತಿಯಿಂದ ಪ್ರತಿಭಟನೆ ನಡೆಸಲಾಯಿತು.



ಮೈಸೂರಿನ ಪುರಭವನದ ಆವರಣದಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಪ್ರತಿಮೆ ಎದುರು ಪೆಟ್ರೋಲ್, ಡೀಸೆಲ್ ದರ ಏರಿಕೆ ಖಂಡಿಸಿ ಸೋಷಲಿಸ್ಟ್ ಯೂನಿಟಿ ಸೆಂಟರ್ ಆಫ್ ಇಂಡಿಯಾ (ಕಮ್ಯುನಿಸ್ಟ್) ವತಿಯಿಂದ ಪ್ರತಿಭಟನೆ ನಡೆಸಲಾಯಿತು.

ನಗರದ ಪುರಭವನದ ಆವರಣದಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಪ್ರತಿಮೆ ಎದುರು ಜಮಾವಣೆಗೊಂಡ ಪ್ರತಿಭಟನಾಕಾರರು ವಿವಿಧ ಘೋಷಣೆಗಳನ್ನು ಕೂಗಿ ರಾಜ್ಯ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿ, ರಾಜ್ಯದಲ್ಲಿ ಆಳ್ವಿಕೆ ನಡೆಸಿದ ಬಿಜೆಪಿ ಸರ್ಕಾರದ ಭ್ರಷ್ಟಾಚಾರ, ದುರಾಡಳಿತ, ಬೆಲೆ ಏರಿಕೆ ತಡೆಗಟ್ಟುವುದಾಗಿ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಸರ್ಕಾರವೂ ಅದೇ ಹಾದಿಯಲ್ಲೇ ಅಧಿಕಾರ ನಡೆಸುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಬೆಲೆ ಏರಿಕೆಯ ಸಮರ್ಥನೆಗಾಗಿ ಗ್ಯಾರಂಟಿ ಯೋಜನೆಗಳ ಹೆಸರನ್ನು ಮುಂದೆ ತರಲಾಗುತ್ತಿದೆ. ಆದರೆ, ವಾಸ್ತವವಾಗಿ ಸರ್ಕಾರದಲ್ಲಿಯೂ ಭ್ರಷ್ಟಾಚಾರ, ದುಂದುವೆಚ್ಚ ಮುಂದುವರಿದಿದೆ. ವಾಲ್ಮೀಕಿ ನಿಗಮದ ಭ್ರಷ್ಟಾಚಾರ, ಗುತ್ತಿಗೆದಾರರ ಸಂಘದ ಅಧ್ಯಕ್ಷರ ಆರೋಪ ಇದಕ್ಕೆ ಸಾಕ್ಷಿಯಾಗಿವೆ ಎಂದು ಕಿಡಿ ಕಾರಿದರು.

ಮತ್ತೊಂದೆಡೆ ಕೇಂದ್ರ ಸರ್ಕಾರ ಬೆಲೆ ಏರಿಕೆಗೆ ಕಾರಣವಾಗಿದ್ದು, ಪೆಟ್ರೋಲಿಯಂ ಉತ್ಪನ್ನಗಳ ಮೇಲೆ ಹೆಚ್ಚಿನ ತೆರಿಗೆ ವಿಧಿಸಿ ಲಕ್ಷಾಂತರ ಕೋಟಿ ರೂ. ಆದಾಯವನ್ನಾಗಿ ಸಂಗ್ರಹಿಸುತ್ತಿದೆ. ರಷ್ಯಾ-ಉಕ್ರೇನ್ ಯುದ್ಧದ ಸಮಯದಲ್ಲಿಯೂ ಅಗ್ಗವಾಗಿ ದೊರೆತ ಪೆಟ್ರೋಲಿಯಂ ಉತ್ಪನ್ನಗಳ ಲಾಭ ಗ್ರಾಹಕರಿಗೆ ಸಿಗುವ ಬದಲು, ಬಂಡವಾಳಶಾಹಿಗಳ ಜೇಬು ತುಂಬುವಂತಾಯಿತು. ಇವೆರಡು ಪಕ್ಷಗಳು ಪರಸ್ಪರ ಕೆಸರೆರಚಾಟ ಮಾಡುತ್ತಿವೆಯೇ ಹೊರತು ಜನಗಳ ಪರವಾದ ನಿಲುವು ತೆಗೆದುಕೊಂಡು ಬೆಲೆ ನಿಯಂತ್ರಿಸಲು ವಿಫಲವಾಗಿವೆ. ಇಂತಹ ಜನವಿರೋಧಿ ನೀತಿಗಳನ್ನು ಕೈಬಿಡಬೇಕು ಎಂದು ಆಗ್ರಹಿಸಿದರು. ಪ್ರತಿಭಟನೆಯಲ್ಲಿ ಜಿಲ್ಲಾ ಸಮಿತಿಯ ಕಾರ್ಯದರ್ಶಿ ಬಿ.ರವಿ, ಸದಸ್ಯರಾದ ಎಂ.ಉಮಾದೇವಿ, ಚಂದ್ರಶೇಖರ ಮೇಟಿ, ವಿ.ಯಶೋಧರ, ಪಿ.ಎಸ್.ಸಂಧ್ಯಾ, ಸೀಮಾ, ಹರೀಶ್, ಸುನೀಲ್, ಬಸವರಾಜು ಸೇರಿದಂತೆ ಹಲವರು ಭಾಗವಹಿಸಿದ್ದರು.

ಜೆಎಸ್‌ಎಸ್ ಮಹಿಳಾ ಪಾಲಿಟೆಕ್ನಿಕ್ ಡಿಪ್ಲೊಮಾ ಪ್ರವೇಶಕ್ಕೆ ಕೊನೆಯ ದಿನಾಂಕ ವಿಸ್ತರಣೆ

ಮೈಸೂರು, ಜೂ. 19- ಜೆಎಸ್‌ಎಸ್ ಮಹಿಳಾ ಪಾಲಿಟೆಕ್ನಿಕ್‌ನಲ್ಲಿ 2024-25ನೇ ಸಾಲಿನಲ್ಲಿ ಸರ್ಕಾರಿ ಕೋಟಾದಡಿ ಖಾಲಿ ಉಳಿದಿರುವ ಪ್ರಥಮ ಸೆಮಿಸ್ಟರ್ ಡಿಪ್ಲೊಮಾ ಕೋರ್ಸ್‌ಗಳಿಗೆ ಪ್ರವೇಶ ಪ್ರಕ್ರಿಯೆಯನ್ನು 29.06.2024ರವರೆಗೆ ವಿಸ್ತರಿಸಲಾಗಿದೆ. ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಶೇ.35 ಅಂಕಗಳೊಂದಿಗೆ ಪಾಸಾದ ಅರ್ಹ ವಿದ್ಯಾರ್ಥಿನಿಯರು ಮೊದಲನೆ ವರ್ಷಕ್ಕೆ ಪ್ರವೇಶ ಪಡೆಯಬಹುದು.

ಐಟಿಐ/ಪಿಯುಸಿ(ಸೈನ್ಸ್)ನಲ್ಲಿ ಪಾಸಾದ ವಿದ್ಯಾರ್ಥಿನಿಯರು ಡಿಪ್ಲೊಮಾ 3ನೇ ಸೆಮಿಸ್ಟರ್ ಕೋರ್ಸ್‌ಗಳಿಗೆ ನೇರವಾಗಿ ಪ್ರವೇಶವನ್ನು ಪಡೆಯಲು ಅರ್ಜಿ ಆಹ್ವಾನಿಸಿದ್ದು, ಆಸಕ್ತ ವಿದ್ಯಾರ್ಥಿನಿಯರು ಕಾಲೇಜಿನ ಕಚೇರಿಯಲ್ಲಿ ಅರ್ಜಿ ಪಡೆದು ಭರ್ತಿ ಮಾಡಿ ಅರ್ಜಿಯನ್ನು ಜೂ.25 ರೊಳಗೆ ಮೂಲ ದಾಖಲಾತಿಗಳೊಂದಿಗೆ ಸಲ್ಲಿಸಬಹುದು. ಹೆಚ್ಚಿನ ವಿವರಗಳಿಗೆ ಸವಿತ ಎಂ.(9591650765), ವಿ.ಬಿ. ಲೋಕೇಶ, ಪ್ರಾಂಶುಪಾಲರು (8050216873) ಇವರನ್ನು ಸಂಪರ್ಕಿಸಬಹುದು.

ಎಲ್ಲಾ ಗ್ರಾಮಗಳಲ್ಲಿ ಜನಸ್ಪಂದನ ಸಭೆ

• ಸ್ಥಳೀಯ ಸಮಸ್ಯೆಗಳ ಬಗೆಹರಿಸಲು ಶ್ರಮ • ವಿರಾಜಪೇಟೆಯಲ್ಲಿ ಶಾಸಕ ಪೊನ್ನಣ್ಣ ಭರವಸೆ



ವಿರಾಜಪೇಟೆ ಕಾವೇರಿ ಕಲ್ಯಾಣ ಮಂಟಪದಲ್ಲಿ ನಡೆದ ಜನಸ್ಪಂದನ ಸಭೆಯಲ್ಲಿ ಶಾಸಕ ಎ.ಎಸ್.ಪೊನ್ನಣ್ಣ ಅವರಿಗೆ ವೃದ್ಧರು ಅರ್ಜಿ ಸಲ್ಲಿಸಿದರು.

ವಿರಾಜಪೇಟೆ, ಜೂ.19–ವಿರಾಜಪೇಟೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಎಲ್ಲಾ ಗ್ರಾಮಗಳಲ್ಲಿ ಜನಸ್ಪಂದನ ಸಭೆ ಆಯೋಜಿಸಲು ಚಿಂತಿಸಲಾಗಿದ್ದು, ಆ ನಿಟ್ಟಿನಲ್ಲಿ ಸ್ಥಳೀಯ ಸಮಸ್ಯೆಗಳ ಬಗೆಹರಿಸಲು ಶ್ರಮಿಸಲಾಗುವುದು ಎಂದು ಶಾಸಕ ಎ.ಎಸ್.ಪೊನ್ನಣ್ಣ ತಿಳಿಸಿದರು.

ಪಟ್ಟಣದ ಕಾವೇರಿ ಕಲ್ಯಾಣ ಮಂಟಪದಲ್ಲಿ ಬುಧವಾರ ನಡೆದ ಜನಸ್ಪಂದನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಜನರ ಸಮಸ್ಯೆ ಪರಿಹರಿಸುವುದು ಜನಸ್ಪಂದನದ ಉದ್ದೇಶವಾಗಿದೆ. ಆ ದಿಸೆಯಲ್ಲಿ ಸರ್ಕಾರದ ಗ್ಯಾರಂಟಿ ಸೇರಿದಂತೆ ಹಲವು ಯೋಜನೆಗಳನ್ನು ಜನರಿಗೆ ತಲುಪಿಸುವುದು ಪ್ರಮುಖವಾಗಿದೆ. ಅಧಿಕಾರಿಗಳು ಸಾರ್ವಜನಿಕರಿಗೆ ಸ್ಪಂದಿಸುವುದು ಅತಿಮುಖ್ಯ. ಸಾಧ್ಯವಾದಷ್ಟು ಸರ್ಕಾರದ ಯೋಜನೆಗಳನ್ನು ತಲುಪಿದಲ್ಲಿ ಜನಸ್ಪಂದನ ಸಭೆ ಸಾರ್ಥಕವಾಗಲಿದೆ ಎಂದು ಹೇಳಿದರು.

ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ ಬಡವರ ಶ್ರೇಯೋಭಿವೃದ್ಧಿಗೆ ಗ್ಯಾರಂಟಿ ಜೊತೆಗೆ ಹಲವು ಯೋಜನೆಗಳನ್ನು ಹಮ್ಮಿಕೊಂಡಿದೆ. ಬಡವರು ಅವುಗಳನ್ನು ಬಳಸಿಕೊಂಡು ಮುಖ್ಯವಾಹಿನಿಗೆ ಬರಬೇಕು. ಸರ್ಕಾರ ಎಲ್ಲಾ ಜನರ ಏಳಿಗೆಗೆ ಒಂದಲ್ಲ ಒಂದು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. ಅವುಗಳನ್ನು ಸರಿಯಾಗಿ ಸದ್ಬಳಕೆ ಮಾಡಿಕೊಳ್ಳಬೇಕು. ಜನರ ಸಮಸ್ಯೆಗಳನ್ನು ಪರಿಹರಿಸಲು ಪ್ರಾಮಾಣಿಕವಾಗಿ ಪ್ರಯತ್ನಿಸಲಾಗುವುದು ಎಂದು ತಿಳಿಸಿದ ಶಾಸಕರು, ಕೆಲ ಅರ್ಜಿಗಳಿಗೆ ಸ್ಥಳದಲ್ಲೇ ಕುಂದುಕೊರತೆ ಪರಿಹರಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಕಾರ್ಯಕ್ರಮದಲ್ಲಿ ಜಿಪಂ ಸಿಇಓ ವರ್ಣಿತ್ ನೇಗಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್, ಹೆಚ್ಚುವರಿ ಜಿಲ್ಲಾಧಿಕಾರಿ ಬಿ.ಎನ್.ವೀಣಾ, ಉಪವಿಭಾಗಾಧಿಕಾರಿ ವಿನಾಯಕ ನರ್ವಾಡೆ, ಗ್ಯಾರಂಟಿ ಯೋಜನೆಗಳ ಜಿಲ್ಲಾ ಅನುಷ್ಠಾನ ಅಧ್ಯಕ್ಷ ಧರ್ಮಜ ಉತ್ತಪ್ಪ, ಪುರಸಭೆ ಮುಖ್ಯಾಧಿಕಾರಿ ಚಂದ್ರಕುಮಾರ್, ಸದಸ್ಯರು, ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು, ಸಾರ್ವಜನಿಕರು ಇದ್ದರು.

126ಕ್ಕೂ ಹೆಚ್ಚು ಅರ್ಜಿ ಸಲ್ಲಿಕೆ

ಜನಸ್ಪಂದನ ಸಭೆಯಲ್ಲಿ ಸಾರ್ವಜನಿಕರಿಂದ ಸುಮಾರು 126ಕ್ಕೂ ಹೆಚ್ಚು ಅರ್ಜಿಗಳು ಸಲ್ಲಿಕೆಯಾದವು. ವಿರಾಜಪೇಟೆ ಪುರಸಭೆ ಸಂಬಂಧಿಸಿದಂತೆ 55 ಅರ್ಜಿ, ಕಂದಾಯ ಇಲಾಖೆ ಸಂಬಂಧ 25, ಗ್ರಾಮ ಪಂಚಾಯಿತಿ ಸಂಬಂಧ 10, ಲೋಕೋಪಯೋಗಿ ಇಲಾಖೆ 8, ಭೂ ದಾಖಲೆಗಳ ಇಲಾಖೆ 7 ಅರ್ಜಿ, ಅರಣ್ಯ ಇಲಾಖೆ ಹಾಗೂ ಸೆಸ್ಕ್ ಸಂಬಂಧ ತಲಾ 3, ಜಿಪಂ, ಕೆಎಸ್‌ಆರ್‌ಟಿಸಿ ಪೊಲೀಸ್ ಹಾಗೂ ಪಂಚಾಯತ್ ರಾಜ್ ಇಲಾಖೆ ಸಂಬಂಧ ತಲಾ 2, ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ಲೀಡ್ ಬ್ಯಾಂಕ್, ಕಂದಾಯ ಮತ್ತು ಅರಣ್ಯ, ಪ್ರಾದೇಶಿಕ ಸಾರಿಗೆ, ಪ್ರವಾಸೋದ್ಯಮ ತಲಾ 1 ಅರ್ಜಿ ಸೇರಿದಂತೆ ಒಟ್ಟು 126 ಅರ್ಜಿಗಳು ಸಲ್ಲಿಕೆಯಾದವು.

ಇದೇ ವೇಳೆ ಶಾಲಾ ಶಿಕ್ಷಣ ಮತ್ತು ಸಾಕ್ಷರತೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ಐಟಿಡಿಪಿ, ಲೀಡ್ ಬ್ಯಾಂಕ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಪಂಚಾಯತ್ ರಾಜ್, ಪಶುಪಾಲನೆ ಸೇರಿದಂತೆ ವಿವಿಧ ಇಲಾಖೆಗಳ ಮಾಹಿತಿ ನೀಡಲಾಯಿತು.

ಯಾವುದೇ ಕುಂದುಕೊರತೆ ಇದ್ದಲ್ಲಿ ತಿಳಿಸಬೇಕು. ಕೆಲ ಸಮಸ್ಯೆಗಳನ್ನು ಸ್ಥಳದಲ್ಲೇ ಪರಿಹರಿಸಲಾಗುವುದು. ಇಲ್ಲದಿದ್ದಲ್ಲಿ 15 ದಿನದೊಳಗೆ ಬಗೆಹರಿಸಲಾಗುವುದು. ಸಾರ್ವಜನಿಕರ ಮನೆ ಬಾಗಿಲಿಗೆ ಬಂದು ಸಮಸ್ಯೆಗಳನ್ನು ಪರಿಹರಿಸಲು ಪ್ರಯತ್ನಿಸಲಾಗುತ್ತಿದೆ. ಈ ನಿಟ್ಟಿನಲ್ಲಿ ಸಾರ್ವಜನಿಕರು ಜನಸ್ಪಂದನ ಸಭೆಯಲ್ಲಿ ಸಮಸ್ಯೆಗಳನ್ನು ತಿಳಿಸಿ, ಬಗೆಹರಿಸಿಕೊಳ್ಳಬೇಕು.

–ವೆಂಕಟ್ ರಾಜಾ, ಜಿಲ್ಲಾಧಿಕಾರಿ

ಇಂದು ಸರ್ಕಾರದ ವಿರುದ್ಧ ಬಿಜೆಪಿ ಪ್ರತಿಭಟನೆ



ಮಡಿಕೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಬಿಜೆಪಿ ಅಧ್ಯಕ್ಷ ನಾಪಂಡ ರವಿ ಕಾಳಪ್ಪ ಮಾತನಾಡಿದರು.

ಮಡಿಕೇರಿ, ಜೂ.19–ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಇಳಿಸುವಂತೆ ಒತ್ತಾಯಿಸಿ ವಿರಾಜಪೇಟೆ ಮತ್ತು ಸೋಮವಾರಪೇಟೆಯಲ್ಲಿ ಜೂ.20ರಂದು ಪ್ರತಿಭಟನೆ ನಡೆಸಲಾಗುವುದು ಎಂದು ಜಿಲ್ಲಾ ಬಿಜೆಪಿ ಅಧ್ಯಕ್ಷ ನಾಪಂಡ ರವಿ ಕಾಳಪ್ಪ ತಿಳಿಸಿದರು.

ನಗರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರತಿಭಟನೆಗೆ ಸಾರ್ವಜನಿಕರು, ಆಟೋ, ಟ್ಯಾಕ್ಸಿ ಮತ್ತಿತರ ವಾಹನ ಚಾಲಕರು ಕೂಡ ಬೆಂಬಲ ನೀಡಬೇಕೆಂದು ಮನವಿ ಮಾಡಿದರು. ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಏರಿಕೆ ವಿರೋಧಿಸಿ ಬಿಜೆಪಿ ವತಿಯಿಂದ ರಾಜ್ಯಾದ್ಯಂತ ಹೋರಾಟ ನಡೆಸಲಾಗಿದೆ. ಕಾಂಗ್ರೆಸ್ ಸರ್ಕಾರದ ತಪ್ಪು ನಿರ್ಧಾರದಿಂದ ಎಲ್ಲಾ ಅಗತ್ಯ ವಸ್ತುಗಳ ಬೆಲೆ ಏರಿಕೆಯಾಗಿದೆ. ಆಟೋ, ಟ್ಯಾಕ್ಸಿ ಪ್ರಯಾಣ ದರವೂ ದುಬಾರಿಯಾಗಲಿದೆ. ಜನಸಾಮಾನ್ಯರಿಗೆ ಇದು ದೊಡ್ಡ ಹೊರೆಯಾಗಲಿದೆ ಎಂದರು.

ಅಧಿಕಾರದಿಂದ ಕೆಳಗಿಳಿಯಿರಿ: ಜನವಿರೋಧಿ ರಾಜ್ಯ ಸರ್ಕಾರ ಎಲ್ಲಾ ಹಂತದಲ್ಲೂ ಆಡಳಿತ ನಡೆಸುವಲ್ಲಿ ವಿಫಲವಾಗಿದೆ. ರಾಜ್ಯದಲ್ಲಿ ಸರಣಿ ಆತ್ಮಹತ್ಯೆ, ಕೊಲೆಗಳು, ದೌರ್ಜನ್ಯ ಪ್ರಕರಣಗಳು ನಡೆಯುತ್ತಿವೆ. ವಾಲ್ಮೀಕಿ ಅಭಿವೃದ್ಧಿ ನಿಗಮದ ಅಧಿಕಾರಿಯ ಸಾವಿಗೆ ಭ್ರಷ್ಟ ವ್ಯವಸ್ಥೆಯೇ ಕಾರಣವಾಗಿದೆ. ಸರ್ಕಾರ ಜನರ ನೆಮ್ಮದಿ ಕೆಡಿಸಿದೆ. ಆದ್ದರಿಂದ ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿ ರಾಜೀನಾಮೆ ನೀಡಿ ಅಧಿಕಾರದಿಂದ ಕೆಳಗಿಳಿಯಬೇಕು ಎಂದು ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ವಿರಾಜಪೇಟೆ ಬಿಜೆಪಿ ಮಂಡಲದ ಅಧ್ಯಕ್ಷ ಸುವಿನ್ ಗಣಪತಿ, ಸೋಮವಾರಪೇಟೆ ಮಂಡಲ ಅಧ್ಯಕ್ಷ ಗೌತಮ್ ಗೌಡ, ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಹೇಶ್ ಜೈನಿ, ಮಡಿಕೇರಿ ಮಂಡಲ ಅಧ್ಯಕ್ಷ ನಾಗೇಶ್ ಕುಂದಲ್ಪಾಡಿ, ನಗರ ಮಂಡಲ ಅಧ್ಯಕ್ಷ ಉಮೇಶ್ ಸುಬ್ರಮಣಿ ಉಪಸ್ಥಿತರಿದ್ದರು.

ಗೋಣಿಕೊಪ್ಪ-ಪೊನ್ನಂಪೇಟೆ ರಸ್ತೆಯಲ್ಲಿ ಪಿಕ್‌ಅಪ್ ವಾಹನ ಸ್ಕೂಟರ್‌ಗೆ ಡಿಕ್ಕಿ

ಗ್ರಾಪಂ ಮಾಜಿ ಸದಸ್ಯೆ, ವಿದ್ಯಾರ್ಥಿನಿ ಸಾವು



ಪ್ರಭಾವತಿ ಅನು

ಗೋಣಿಕೊಪ್ಪ: ಪಿಕ್‌ಅಪ್ ವಾಹನ ಸ್ಕೂಟರ್‌ಗೆ ಡಿಕ್ಕಿ ಹೊಡೆದ ಪರಿಣಾಮ ಗ್ರಾಮ ಪಂಚಾಯಿತಿ ಮಾಜಿ ಸದಸ್ಯೆ ಹಾಗೂ 10ನೇ ತರಗತಿ ವಿದ್ಯಾರ್ಥಿನಿ ಮೃತಪಟ್ಟಿರುವ ಘಟನೆ ಗೋಣಿಕೊಪ್ಪ–ಪೊನ್ನಂಪೇಟೆ ಮುಖ್ಯ ರಸ್ತೆಯಲ್ಲಿ ಮಂಗಳವಾರ ರಾತ್ರಿ ನಡೆದಿದೆ.

ಗೋಣಿಕೊಪ್ಪ ಗ್ರಾಪಂ ಮಾಜಿ ಸದಸ್ಯೆ ಪ್ರಭಾವತಿ (52) ಹಾಗೂ ಖಾಸಗಿ ಕಂಪನಿಯ ಉದ್ಯೋಗಿ ಶ್ರೀಜಾ ಅವರ ಪುತ್ರಿ, ಗೋಣಿಕೊಪ್ಪ ಸಂತ ಥಾಮಸ್ ಶಾಲೆಯ 10ನೇ ತರಗತಿ ವಿದ್ಯಾರ್ಥಿನಿ ಅನು (16) ಮೃತಪಟ್ಟಿದ್ದಾರೆ.

ಮೃತ ಪ್ರಭಾವತಿ ಅವರ ಮನೆಯಲ್ಲಿ ಟ್ಯೂಷನ್‌ಗಾಗಿ ವಿದ್ಯಾರ್ಥಿನಿ ಅನು ತಂಗಿದ್ದಳು. ಆದರೆ, ಮಂಗಳವಾರ ರಾತ್ರಿ ಪ್ರಭಾವತಿ ಹಾಗೂ ಅನು ಸ್ಕೂಟರ್‌ನಲ್ಲಿ ಪೊನ್ನಂಪೇಟೆಗೆ ಹೋಗಿ ವಾಪಸ್ ಬರುತಿರುವಾಗ ಗೋಣಿಕೊಪ್ಪ ಸಮೀಪದ ಅರುವತೊಕ್ಕು ಗ್ರಾಮ ಪಂಚಾಯಿತಿ ಕಚೇರಿ ಬಳಿ ಪಿಕ್‌ಅಪ್ ವಾಹನ ಸ್ಕೂಟರ್‌ಗೆ ಡಿಕ್ಕಿ ಹೊಡೆದಿದೆ. ಪರಿಣಾಮ ಪ್ರಭಾವತಿ ಸ್ಥಳದಲ್ಲೇ ಮೃತಪಟ್ಟಿದ್ದು, ತೀವ್ರವಾಗಿ ಗಾಯಗೊಂಡಿದ್ದ ಅನುನನ್ನು ಮೈಸೂರಿನ ಆಸ್ಪತ್ರೆವೊಂದಕ್ಕೆ ದಾಖಲಿಸಲಾಗಿತ್ತು. ಆದರೆ, ಚಿಕಿತ್ಸೆ ಫಲಕಾರಿಯಾಗದೆ ಬುಧವಾರ ಬೆಳಗ್ಗೆ ಮೃಪಟ್ಟಿದ್ದಾಳೆ.

ಪ್ರಭಾವತಿ ಪತಿ ಹಾಗೂ ಇಬ್ಬರು ಪುತ್ರನನ್ನು ಅಗಲಿದ್ದಾರೆ. ಪಿಕ್‌ಅಪ್ ವಾಹನ ಸಹಿತ ಚಾಲಕನನ್ನು ವಶಕ್ಕೆ ಪಡೆದಿರುವ ಗೋಣಿಕೊಪ್ಪ ಠಾಣೆ ಪೊಲೀಸರು ಈ ಸಂಬಂಧ ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಜೆಡಿಎಸ್‌ನಿಂದ ಸಂಸದ ಯದುವೀರ್‌ಗೆ ಅಭಿನಂದನೆ



ದಕ್ಷಿಣ ಕೊಡಗಿನ ಜೆಡಿಎಸ್ ಪ್ರಮುಖರು ಮೈಸೂರಿನಲ್ಲಿ ನೂತನ ಸಂಸದ ಯದುವೀರ್ ಅವರನ್ನು ಅಭಿನಂದಿಸಿದರು.

ಪೊನ್ನಂಪೇಟೆ, ಜೂ.19–ನೂತನ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರನ್ನು ದಕ್ಷಿಣ ಕೊಡಗಿನ ಜೆಡಿಎಸ್ ಪ್ರಮುಖರು ಮೈಸೂರಿನಲ್ಲಿ ಬುಧವಾರ ಭೇಟಿ ಮಾಡಿ, ಅಭಿನಂದಿಸಿದರು.

ನಂತರ ಸಂಸದರೊಂದಿಗೆ ಪ್ರತ್ಯೇಕ ಚರ್ಚಿಸಿ, ಕೊಡಗಿನಲ್ಲಿ ಬಿಜೆಪಿ–ಜೆಡಿಎಸ್ ಒಟ್ಟಾಗಿ ಪಕ್ಷ ಸಂಘಟಿಸುವುದಾಗಿ ಸಮಾಲೋಚಿಸಿದರು. ಸಂಸದರ ನಿಧಿಯಿಂದ ಕೊಡಗಿನಲ್ಲಿ ಕೈಗೊಳ್ಳಬೇಕಿರುವ ವಿವಿಧ ಕಾಮಗಾರಿ ಬಗ್ಗೆ ತಿಳಿಸಲಾಯಿತು.

ಈ ವೇಳೆ ಮಾತನಾಡಿದ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಆಪ್ತ ಕೋತೂರಿನ ಕೆ.ಆರ್.ಸುರೇಶ್, ಮುಂಬರುವ ಜಿಪಂ ಮತ್ತು ತಾಪಂ ಚುನಾವಣೆಯನ್ನು ಜಿಲ್ಲೆಯಲ್ಲಿ ಬಿಜೆಪಿ–ಜೆಡಿಎಸ್ ಒಟ್ಟಾಗಿ ನಡೆಸಲಿದೆ. ಇದರಿಂದ ಮೈತ್ರಿ ಪಕ್ಷಗಳು ಹೆಚ್ಚು ಸ್ಥಾನ ಗೆಲ್ಲಲು ಸಹಕಾರಿಯಾಗಲಿದೆ ಎಂದು ಸಂಸದರಿಗೆ ತಿಳಿಸಿದರು.

ಸಂಸದ ಯದುವೀರ್ ಮಾತನಾಡಿ, ಮೈಸೂರು–ಕೊಡಗ ಜಿಲ್ಲೆಯನ್ನು ಸಮಾನವಾಗಿ ಕಾಣಲಾಗುವುದು. ಅಭಿವೃದ್ಧಿ ವಿಚಾರದಲ್ಲಿ ಯಾವುದೇ ತಾರತಮ್ಯ ಮಾಡುವುದಿಲ್ಲ. ಇದರೊಂದಿಗೆ ಮೈತ್ರಿ ಪಕ್ಷಗಳ ಸಂಘಟನೆಗೂ ಹೆಚ್ಚಿನ ಒತ್ತು ನೀಡಲಾಗುವುದು. ಕೊಡಗಿನೊಂದಿಗೆ ನಿಕಟ ಸಂಪರ್ಕದೊಂದಿಗೆ ಶೀಘ್ರ ಕೊಡಗಿನಲ್ಲೂ ಸಂಸದರ ಕಚೇರಿ ಆರಂಭಿಸುವುದಾಗಿ ಭರವಸೆ ನೀಡಿದರು.

ಇದೇ ವೇಳೆ ಬಿಜೆಪಿ ಮುಖಂಡ ಎಸ್.ಎಂ.ಬಸಪ್ಪ, ಜೆಡಿಎಸ್ ಮುಖಂಡರಾದ ಕೆ.ಆರ್.ಸತೀಶ್, ವಿ.ಆರ್.ಪರಮೇಶ್, ಕೆ.ಬಿ.ಸುನಿಲ್, ವಿ.ಎಸ್.ಈಶ್ವರ, ವಿ.ಎಸ್.ಬಸವರಾಜು ಇತರರು ಹಾಜರಿದ್ದರು.

ನಾಳೆ 10ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ



ಮಡಿಕೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಆಯುಷ್ ಇಲಾಖಾಧಿಕಾರಿ ಡಾ.ರೇಣುಕಾ ದೇವಿ ಮಾತನಾಡಿದರು.

ಮಡಿಕೇರಿ: ಸ್ವಂತ ಹಾಗೂ ಸಮಾಜಕ್ಕಾಗಿ ಯೋಗ ಎಂಬಾ ಧ್ಯೇಯ ವಾಕ್ಯದೊಂದಿಗೆ ಜೂ.21ರಂದು ಬೆಳಗ್ಗೆ 6.30 ಗಂಟೆಗೆ ನಗರದ ಗೌಡ ಸಮಾಜದಲ್ಲಿ 10ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಆಯೋಜಿಸಲಾಗಿದೆ ಎಂದು ಆಯುಷ್ ಇಲಾಖಾಧಿಕಾರಿ ಡಾ.ರೇಣುಕಾದೇವಿ ತಿಳಿಸಿದರು.

ನಗರದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 2015ರಲ್ಲಿ ಆರಂಭಗೊಂಡ ಯೋಗ ದಿನಾಚರಣೆ ದಶಕದ ಆಚರಣೆಯ ಹಂತದಲ್ಲಿದೆ. ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಆಯುಷ್ ಇಲಾಖೆ ಸಂಯುಕ್ತಾಶ್ರಯದಲ್ಲಿ ಯೋಗ ದಿನಾಚರಣೆ ನಡೆಯಲಿದೆ. ಕೊಡಗು ಜಿಲ್ಲಾ ಉಸ್ತುವಾರಿ ಸಚಿವ ಎನ್.ಎಸ್.ಭೋಸರಾಜು ಯೋಗ ದಿನಾಚರಣೆಗೆ ಚಾಲನೆ ನೀಡಲಿದ್ದು, ಡಾ.ಮಂತರ್‌ಗೌಡ ಅಧ್ಯಕ್ಷತೆ ವಹಿಸಲಿದ್ದಾರೆ. ನೂತನ ಸಂಸದ ಯದುವೀರ್, ಶಾಸಕ ಎ.ಎಸ್.ಪೊನ್ನಣ್ಣ ಹಾಗೂ ಮತ್ತಿತರರು ಪಾಲ್ಗೊಳ್ಳಲಿದ್ದಾರೆ ಎಂದರು.

19 ಆಸನ: ನಗರದ ಯೋಗ ಸಂಘಟನೆಯ ಸಂಚಾಲಕ ಕೆ.ಕೆ.ಮಹೇಶ್ ಕುಮಾರ್ ಮಾತನಾಡಿ, ಯೋಗ ದಿನದಂದು ಸರಳವಾದ 19 ಆಸನಗಳ ಮತ್ತು 4 ಪ್ರಾಣಾಯಾಮಗಳನ್ನು ಏಕಕಾಲಕ್ಕೆ ಬೆಳಗ್ಗೆ 7 ರಿಂದ 7.45 ಗಂಟೆವರೆಗೆ ಹೇಳಿಕೊಡಲಾಗುವುದು ಎಂದು ತಿಳಿಸಿದರು. ಯೋಗ ದಿನಾಚರಣೆಯಲ್ಲಿ ಸುಮಾರು 1 ಸಾವಿರ ಮಂದಿ ಯೋಗಭ್ಯಾಸದಲ್ಲಿ ಪಾಲ್ಗೊಳ್ಳುವ ನಿರೀಕ್ಷೆ ಎಂದು ಮಾಹಿತಿ ನೀಡಿದರು.

ಇಂದು ಜಾಥಾ: ಯೋಗ ದಿನಾಚರಣೆ ಪೂರ್ವಭಾವಿಯಾಗಿ ಜನರಲ್ಲಿ ಯೋಗ ಬಗ್ಗೆ ಹೆಚ್ಚಿನ ಅರಿವು ಮೂಡಿಸುವ ಉದ್ದೇಶದಿಂದ ಜೂ.20ರಂದು ಬೆಳಗ್ಗೆ 8.30ಕ್ಕೆ ನಗರದ ಗಾಂಧಿ ಮೈದಾನದಿಂದ ಕಾವೇರಿ ಕಲಾಕ್ಷೇತ್ರದವರೆಗೆ ಯೋಗ ಜಾಥಾ ಆಯೋಜಿಸಲಾಗಿದೆ ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಆಯುಷ್ ವೈದ್ಯರ ಸಂಘಟನೆಯ ನೀಮಾದ ಅಧ್ಯಕ್ಷ ಡಾ.ರಾಜಾರಾಂ, ಆಯುಷ್ ಇಲಾಖೆ ಯೋಗ ಮತ್ತು ಪ್ರಕೃತಿ ಚಿಕಿತ್ಸಾ ವೈದ್ಯಾಧಿಕಾರಿ ಡಾ.ಅರುಣ್, ಪತಂಜಲಿ ಯೋಗ ಶಿಕ್ಷಣ ಕೇಂದ್ರದ ಶಿಕ್ಷಕ ಸುಧಾಕರ್ ಉಪಸ್ಥಿತರಿದ್ದರು.

ರೈತರಿಗೆ ಬೆಳೆನಷ್ಟ ಪರಿಹಾರ ಒದಗಿಸಿ



ಗುಂಡ್ಲುಪೇಟೆ ತಾಲೂಕು ಕಚೇರಿ ಸಭಾಂಗಣದಲ್ಲಿ ನಡೆದ ಅಧಿಕಾರಿಗಳ ಸಭೆಯಲ್ಲಿ ಸಚಿವ ಕೆ.ವೆಂಕಟೇಶ್ ಮಾತನಾಡಿದರು. ಶಾಸಕ ಹೆಚ್.ಎಂ. ಗಣೇಶ್ ಪ್ರಸಾದ್ ಇದ್ದರು.

ಗುಂಡ್ಲುಪೇಟೆ: ರೈತರಿಗೆ ಬೆಳೆನಷ್ಟ ಪರಿಹಾರ ಒದಗಿಸುವುದು ಹಾಗೂ ಜನ ಜಾನುವಾರುಗಳಿಗೆ ಕುಡಿಯುವ ನೀರಿನ ಕೊರತೆಯಾಗದಂತೆ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್ ಸೂಚಿಸಿದರು.

ಪಟ್ಟಣದ ತಾಲೂಕು ಕಚೇರಿ ಸಭಾಂಗಣದಲ್ಲಿ ಬುಧವಾರ ಕಂದಾಯ ಇಲಾಖೆ ಹಾಗೂ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿದ ಅವರು, ಬರ ಹಾಗೂ ಮಳೆ ಗಾಳಿಯಿಂದ ರೈತರು ತುಂಬಾ ನಷ್ಟ ಅನುಭವಿಸುತ್ತಿದ್ದಾರೆ. ಆದ್ದರಿಂದ ಅಧಿಕಾರಿಗಳು ಸಂತ್ರಸ್ತರಿಗೆ ಶೀಘ್ರ ಪರಿಹಾರ ನೀಡಬೇಕು ಎಂದರು.

ಯಾವುದೇ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಕಾಡದಂತೆ ಸಂಬಂಧಪಟ್ಟ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಮುನ್ನೆಚ್ಚರಿಕೆ ವಹಿಸಬೇಕು. ಜಿಲ್ಲೆಯಲ್ಲಿ ಸಾಕಷ್ಟು ಮಳೆ ಬಿದ್ದಿದ್ದು, ಎಲ್ಲಾ ಕಡೆಗಳಲ್ಲಿ ಜಾನುವಾರುಗಳಿಗೆ ಮೇವಿನ ಕೊರತೆಯಾಗದಂತೆ ನೋಡಿಕೊಳ್ಳಬೇಕು ಎಂದು ಸೂಚಿಸಿದರು.

ಸಭೆಯಲ್ಲಿ ಶಾಸಕ ಹೆಚ್.ಎಂ.ಗಣೇಶ್ ಪ್ರಸಾದ್, ಕಾಡಾ ಅಧ್ಯಕ್ಷ ಮರಿಸ್ವಾಮಿ, ಕೊಳ್ಳೇಗಾಲ ಉಪವಿಭಾಗಾಧಿಕಾರಿ ಮಹೇಶ್, ತಹಸೀಲ್ದಾರ್ ರಮೇಶ್ ಬಾಬು, ತಾಪಂ ಇಓ ರಾಮಲಿಂಗಯ್ಯ ಮತ್ತಿತರ ಅಧಿಕಾರಿಗಳು ಹಾಜರಿದ್ದರು.

ಇಂದು ಸೆಸ್ಕ್ ಕಚೇರಿಯಲ್ಲಿ ಜನಸಂಪರ್ಕ ಸಭೆ

ಚಾಮರಾಜನಗರ: ವಿದ್ಯುತ್ ಸಮಸ್ಯೆ ಆಲಿಸಿ ಇತ್ಯರ್ಥ ಪಡಿಸುವ ಸಲುವಾಗಿ ಜೂ.20ರಂದು ಮಧ್ಯಾಹ್ನ 1 ಗಂಟೆಗೆ ಜನಸಂಪರ್ಕ ಸಭೆ ನಗರದ ಸೆಸ್ಕ್ ಉಪವಿಭಾಗ ಕಚೇರಿ ಸಭಾಂಗಣದಲ್ಲಿ ನಡೆಯಲಿದೆ. ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದ ಕಾರ್ಯನಿರ್ವಾಹಕ ಇಂಜಿನಿಯರ್ ಅಧ್ಯಕ್ಷತೆಯಲ್ಲಿ ನಡೆಯುವ ಸಭೆಯಲ್ಲಿ ಗ್ರಾಹಕರು ವಿದ್ಯುತ್ ಸಮಸ್ಯೆಗಳಿದ್ದಲ್ಲಿ ತಿಳಿಸಬಹುದು ಎಂದು ಸೆಸ್ಕ್ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ದರ್ಶನ್ ಆಸ್ತಿಯಲ್ಲಿ ರೇಣುಕಾಸ್ವಾಮಿ ಕುಟುಂಬಕ್ಕೆ ಪಾಲು ನೀಡಿ

ಪ್ರತಿಭಟನೆಯಲ್ಲಿ ಜಾಗತಿಕ ಮಹಾಸಭಾ, ವಿವಿಧ ಸಂಘಟನೆಗಳ ಒತ್ತಾಯ



ರೇಣುಕಾಸ್ವಾಮಿ ಹತ್ಯೆ ಆರೋಪಿಗಳಿಗೆ ಉಗ್ರ ಶಿಕ್ಷೆ ನೀಡಬೇಕು ಎಂದು ಆಗ್ರಹಿಸಿ ವಿವಿಧ ಸಂಘಟನೆಗಳ ಕಾರ್ಯಕರ್ತರು ಕೊಳ್ಳೇಗಾಲದಲ್ಲಿ ಪ್ರತಿಭಟನೆ ನಡೆಸಿದರು.

ಕೊಳ್ಳೇಗಾಲ, ಜೂ.19–ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಆರೋಪಿಗಳಾದ ನಟ ದರ್ಶನ್ ಮತ್ತು ಗ್ಯಾಂಗ್‌ಗೆ ಜೀವಾವಧಿ ಶಿಕ್ಷೆ ನೀಡಿ, ದರ್ಶನ್ ಆಸ್ತಿಯಲ್ಲಿ ರೇಣುಕಾಸ್ವಾಮಿ ಕುಟುಂಬಕ್ಕೆ ಪಾಲು ನೀಡಬೇಕು ಎಂದು ಒತ್ತಾಯಿಸಿ ಜಾಗತಿಕ ಲಿಂಗಾಯತ ಮಹಾಸಭಾ ತಾಲೂಕು ಘಟಕ ಹಾಗೂ ವಿವಿಧ ಸಂಘಟನೆಗಳ ಕಾರ್ಯಕರ್ತರು ಬುಧವಾರ ಪಟ್ಟಣದಲ್ಲಿ ಪ್ರತಿಭಟನೆ ನಡೆಸಿದರು.

ಬಸ್ ನಿಲ್ದಾಣ ಸಮೀಪದ ಗಣೇಶ ದೇಗುಲ ಮುಂಭಾಗ ಸಮಾವೇಶಗೊಂಡ ಜಾಗತಿಕ ಲಿಂಗಾಯತ ಮಹಾಸಭಾ ಹಾಗೂ ವಿವಿಧ ಸಂಘಸಂಸ್ಥೆಗಳ ನೂರಾರು ಪದಾಧಿಕಾರಿಗಳು, ಡಾ.ವಿಷ್ಣುವರ್ಧನ್, ಡಾ.ರಾಜ್‌ಕುಮಾರ್, ಅಂಬೇಡ್ಕರ್ ರಸ್ತೆ ಮಾರ್ಗವಾಗಿ ತಾಲೂಕು ಕಚೇರಿವರೆಗೆ ಮೆರವಣಿಗೆ ನಡೆಸಿದರು. ಇದೇ ವೇಳೆ ಎಡಿಬಿ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿ ಪ್ರತಿಭಟನೆ ನಡೆಸಿದರು.

ಅಖಿಲ ಭಾರತ ವೀರಶೈವ–ಲಿಂಗಾಯತ ಮಹಾಸಭಾ ಜಿಲ್ಲಾಧ್ಯಕ್ಷ ಮೂಡ್ಲಪುರ ನಂದೀಶ್ ಮಾತನಾಡಿ, ದರ್ಶನ್ ದೌರ್ಜನ್ಯ, ದರ್ಪಗಳು ಒಂದೊಂದಾಗಿ ಈಗ ಬಯಲಾಗುತ್ತಿವೆ. ರಾಜ್ಯದಲ್ಲಿ ಎಲ್ಲಾ ಸಮಾಜಗಳು ಹೋರಾಟ ನಡೆಸುವ ಪರಿಸ್ಥಿತಿಯನ್ನು ದರ್ಶನ್ ಮತ್ತು ಗ್ಯಾಂಗ್ ತಂದೆ. ರೇಣುಕಾಸ್ವಾಮಿ ಕುಟುಂಬಕ್ಕೆ ನ್ಯಾಯ ದೊರಕಬೇಕಾದರೆ ನಟ ದರ್ಶನ್‌ಗೆ ಉಗ್ರ ಶಿಕ್ಷೆಯಾಗಬೇಕು. ಸರ್ಕಾರ ದರ್ಶನ್ ಆಸ್ತಿಯನ್ನು ಮುಟ್ಟುಗೋಲು ಹಾಕಿಕೊಂಡು ರೇಣುಕಾಸ್ವಾಮಿ ಕುಟುಂಬಕ್ಕೆ ಪಾಲು ನೀಡಬೇಕು ಎಂದು ಆಗ್ರಹಿಸಿದರು.

ಜಾಗತಿಕ ಲಿಂಗಾಯತ ಮಹಾಸಭಾ ತಾಲೂಕು ಅಧ್ಯಕ್ಷ ಬಿಂದು ಲೋಕೇಶ್ ಮಾತನಾಡಿ, ರಾಜ್ಯದಲ್ಲಿ ಲಿಂಗಾಯತ ಸಮಾಜದ ಮೇಲೆ ನಿರಂತರವಾಗಿ ದೌರ್ಜನ್ಯಗಳು ನಡೆಯುತ್ತಿವೆ. ಇನ್ನೂ ಹಲ್ಲೆ, ಕೊಲೆ, ದಬ್ಬಾಳಿಕೆ ಎಲ್ಲೇಮೀರಿ ನಡೆಯುತ್ತಿದ್ದು, ಸಮುದಾಯದ ರೇಣುಕಾಸ್ವಾಮಿ ಹಾಗೂ ವಿದ್ಯಾರ್ಥಿನಿ ನೇಹಾ ಬರ್ಬರ ಹತ್ಯೆಯೇ ಉದಾಹರಣೆಯಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆಯಲ್ಲಿ ಜಾಗತಿಕ ಲಿಂಗಾಯತ ಮಹಾಸಭಾ ತಾಲೂಕು ನಿರ್ದೇಶಕರಾದ ಮಲ್ಲಿಕಾರ್ಜುನಸ್ವಾಮಿ ಜಿನಕನಹಳ್ಳಿ, ಮಹೇಶ್ ಉಗನಿಯ, ಶಿವಸ್ವಾಮಿ ಕಾಮಗೆರೆ, ಪಾಳ್ಯ ರಘು, ಸುಂದರಪ್ಪ, ಟಗರಪುರ ಮಹದೇವಸ್ವಾಮಿ, ಆಲಹಳ್ಳಿ ಪುಟ್ಟಪ್ಪ, ಕುಂತೂರು ನಂಜುಂಡಸ್ವಾಮಿ, ವೀರಶೈವ ಸಮಾಜದ ಹಿರಿಯ ಮುಖಂಡ ತಿಮ್ಮರಾಜೀಪುರ ಪುಟ್ಟಣ್ಣ, ಚೆಲುವನಹಳ್ಳಿ ಬಸವಣ್ಣ, ಯುಪಿಎಸ್ ಮಹದೇವಸ್ವಾಮಿ, ಅಚ್ಗಾಲ್ ಮಹದೇವಸ್ವಾಮಿ, ಚಿಲಕವಾಡಿ ಷಣ್ಮುಗಸ್ವಾಮಿ, ಕಾಮಗೆರೆ ಮಧು, ಮಾರ್ಕೆಟ್ ನಂಜಪ್ಪ, ದೊಡ್ಡಿಂದುವಾಡಿ ವೀರಭದ್ರಸ್ವಾಮಿ, ಬಸಪ್ಪನದೊಡ್ಡಿ ಬಸವರಾಜು, ಛಲವಾದಿ ಮಹಾಸಭಾ ರಾಜ್ಯ ಉಪಾಧ್ಯಕ್ಷ ಅಣಗಳ್ಳಿ ಬಸವರಾಜು, ಮಧುವನಹಳ್ಳಿ ಸಿದ್ದೇಶ್, ಯುವ ಮುಖಂಡರಾದ ಸೋಮಣ್ಣ ಉಪ್ಪಾರ್, ನರಸಿಂಹನ್, ರಮೇಶ್, ಲಿಂಗಣಾಪುರ ಬಸವರಾಜು, ತೇರಂಬಳ್ಳಿ ಮಹದೇವಪ್ಪ, ಮೋಳೆ ರಾಮಣ್ಣ ಭಾಗವಹಿಸಿದ್ದರು.

ಚುಂಗಡಿಪುರದಲ್ಲಿ ಸಿರಿ ಧಾನ್ಯಗಳ ಬಳಕೆ ಪ್ರಾತ್ಯಕ್ಷಿಕೆ



ಚುಂಗಡಿಪುರ ಗ್ರಾಮದ ಶ್ರದ್ಧಾ ಜ್ಞಾನವಿಕಾಸ ಕೇಂದ್ರದಲ್ಲಿ ನಡೆದ ಪೌಷ್ಟಿಕ ಆಹಾರ ಮೇಳವನ್ನು ಉದ್ಘಾಟಿಸಲಾಯಿತು.

ಯಳಂದೂರು, ಜೂ.19–ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಬಿಸಿ ಟ್ರಸ್ಟ್ ವತಿಯಿಂದ ತಾಲೂಕಿನ ಚುಂಗಡಿಪುರ ಗ್ರಾಮದ ಶ್ರದ್ಧಾ ಜ್ಞಾನವಿಕಾಸ ಕೇಂದ್ರದಲ್ಲಿ ನಡೆದ ಪೌಷ್ಟಿಕ ಆಹಾರ ಮೇಳದಲ್ಲಿ ಸಿರಿ ಧಾನ್ಯಗಳ ಬಳಕೆ ಪ್ರಾತ್ಯಕ್ಷಿಕೆ ಹಾಗೂ ಮಾಹಿತಿ ನೀಡಲಾಯಿತು.

ಮೇಳಕ್ಕೆ ಚಾಲನೆ ನೀಡಿ ಮಾತನಾಡಿದ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ವಲಯ ಮೇಲ್ವಿಚಾರಕ ಧನಪಾಲ್, ಪ್ರಗತಿಪರ ಕೃಷಿಕರು ಹೆಚ್ಚು ಸಿರಿ ಧಾನ್ಯಗಳನ್ನು ಬೆಳೆಯಬೇಕು. ಆರೋಗ್ಯದ ದೃಷ್ಟಿಯಿಂದ ಪೌಷ್ಟಿಕ ಆಹಾರ ಸಿರಿಧಾನ್ಯಗಳ ಅನುಕೂಲ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಸಿರಿಧಾನ್ಯಗಳ ಪ್ರಾಮುಖ್ಯತೆ ಕುರಿತು ತಿಳಿಸಿದರು. ತಾಲೂಕಿನ ಕೃಷಿ ಮೇಲ್ವಿಚಾರಕ ಶಿವಕುಮಾರ್, ಮೊಳಕೆ ಕಾಳು ಬಳಕೆ, ಸೊಪ್ಪು ಹಾಗೂ ತರಕಾರಿಗಳ ಕುರಿತು ಮಾಹಿತಿ ನೀಡಿದರು.

ಇದೇ ವೇಳೆ ರಂಗೋಲಿ ಹಾಗೂ ತಿಂಡಿ ತಿನಿಸು, ಜ್ಯೂಸ್‌ಗಳ ಪ್ರದರ್ಶನ ಹಾಗೂ ಸ್ಪರ್ಧೆ ಏರ್ಪಡಿಸಲಾಗಿತ್ತು. ಮುಖ್ಯ ಶಿಕ್ಷಕಿ ಮಣಿ, ಜ್ಞಾನವಿಕಾಸ ಕೇಂದ್ರದ ಸಮನ್ವಯಾಧಿಕಾರಿ ವಿನುತಾ ಶೆಟ್ಟಿ, ಸೇವಾ ಪ್ರತಿನಿಧಿ ಮಮತಾ, ಕೇಂದ್ರದ ಸದಸ್ಯರು ಉಪಸ್ಥಿತರಿದ್ದರು.

ನಾಳೆ ನಗರದಲ್ಲಿ ಯೋಗ ದಿನಾಚರಣೆ

ಚಾಮರಾಜನಗರ, ಜೂ.19–ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಆಯುಷ್ ಇಲಾಖೆ, ಭಾರತ್ ಸ್ಕೌಟ್ ಅಂಡ್ ಗೈಡ್ಸ್, ಪತಂಜಲಿ ಯೋಗ ಶಿಕ್ಷಣ ಸಮಿತಿ, ವಿವಿಧ ಯೋಗ ಸಂಘ–ಸಂಸ್ಥೆಗಳ ಸಹಯೋಗದಲ್ಲಿ 10ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯನ್ನು ಜೂ.21ರಂದು ಬೆಳಗ್ಗೆ 6 ಗಂಟೆಗೆ ನಗರದ ಪೊಲೀಸ್ ಪೆರೇಡ್ ಮೈದಾನದಲ್ಲಿ ಆಯೋಜಿಸಲಾಗಿದೆ.

ಯೋಗ ದಿನಾಚರಣೆಗೆ ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್ ಚಾಲನೆ ನೀಡಲಿದ್ದು, ಶಾಸಕ ಸಿ.ಪುಟ್ಟರಂಗಶೆಟ್ಟಿ ಅಧ್ಯಕ್ಷತೆ ವಹಿಸಲಿದ್ದಾರೆ. ಸಂಸದ ಸುನೀಲ್ ಬೋಸ್ ಶಾಸಕರಾದ ಎ.ಆರ್.ಕೃಷ್ಣಮೂರ್ತಿ, ಎಂ.ಆರ್.ಮಂಜುನಾಥ್, ಹೆಚ್.ಎಂ.ಗಣೇಶ್ ಪ್ರಸಾದ್, ವಿಧಾನ ಪರಿಷತ್ ಸದಸ್ಯರಾದ ಮಧು ಜಿ.ಮಾದೇಗೌಡ, ಡಾ.ಡಿ.ತಿಮ್ಮಯ್ಯ, ಸಿ.ಎನ್.ಮಂಜೇಗೌಡ, ಕೆ.ವಿವೇಕಾನಂದ, ಕಾವೇರಿ ಜಲಾನಯನ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪಿ.ಮರಿಸ್ವಾಮಿ, ರಾಜ್ಯ ಉಗ್ರಾಣ ನಿಗಮದ ಅಧ್ಯಕ್ಷ ಜಯಣ್ಣ, ಚುಡಾ ಅಧ್ಯಕ್ಷ ಮಹಮ್ಮದ್ ಅಸ್ಗರ್, ನಗರಸಭಾ ಸದಸ್ಯ ಆರ್.ಪಿ.ನಂಜುಂಡಸ್ವಾಮಿ, ಆಯುಷ್ ಇಲಾಖೆ ಆಯುಕ್ತ ಶ್ರೀನಿವಾಸಲು, ಪತಾಂಜಲಿ ಯೋಗ ಶಿಕ್ಷಣ ಸಮಿತಿ ಅಧ್ಯಕ್ಷ ಹೆಚ್.ಜಿ.ಕುಮಾರಸ್ವಾಮಿ ವಿಶೇಷ ಆಹ್ವಾನಿತರಾಗಿ ಭಾಗವಹಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

ಇಂಧನ ಬೆಲೆ ಏರಿಕೆ ಖಂಡಿಸಿ ತಮಟೆ ಚಳವಳಿ




ಚಾಮರಾಜನಗರದಲ್ಲಿ ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆ ಖಂಡಿಸಿ ಕರ್ನಾಟಕ ಸೇನಾಪಡೆ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಚಾಮರಾಜನಗರ, ಜೂ.19–ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆ ಖಂಡಿಸಿ ಕರ್ನಾಟಕ ಸೇನಾಪಡೆ ಕಾರ್ಯಕರ್ತರು ಬುಧವಾರ ನಗರದಲ್ಲಿ ತಮಟೆ ಚಳವಳಿ ನಡೆಸಿದರು.

ನಗರದ ಭುವನೇಶ್ವರಿ ವೃತ್ತದ ರಾಷ್ಟ್ರೀಯ ಹೆದ್ದಾರಿಯಲ್ಲಿ ಸೇನಾಪಡೆ ಅಧ್ಯಕ್ಷ ಚಾ.ರಂ.ಶ್ರೀನಿವಾಸಗೌಡ ನೇತೃತ್ವದಲ್ಲಿ ಜಮಾಯಿಸಿದ ಪ್ರತಿಭಟನಾಕಾರು, ರಸ್ತೆ ತಡೆದು ಪ್ರತಿಭಟನೆ ನಡೆಸಿ ರಾಜ್ಯ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ರಾಜ್ಯ ಸರ್ಕಾರ ಏಕಾಏಕಿ ಇಂಧನ ದರ ಏರಿಕೆ ಮಾಡಿರುವುದು ಖಂಡನೀಯ. ರಾಜ್ಯ ಸರ್ಕಾರ ಒಂದು ಕಡೆ ಉಚಿತ ಯೋಜನೆಗಳನ್ನು ನೀಡಿ, ಮತ್ತೊಂದೆಡೆ ಪೆಟ್ರೋಲ್, ಡೀಸೆಲ್ ಬೆಲೆ ಏರಿಸಿ ಕಿತ್ತುಕೊಳ್ಳುವ ಕೆಲಸ ಮಾಡುತ್ತಿದೆ. ಇದು ನಿಜಕ್ಕೂ ನಾಚಿಕೇಡಿನ ಸಂಗಾತಿ. ರಾಜ್ಯ ಸರ್ಕಾರ ಕೂಡಲೇ ಪೆಟ್ರೋಲ್, ಡೀಸೆಲ್ ಬೆಲೆ ಇಳಿಸಬೇಕು. ಇಲ್ಲದಿದ್ದರೆ ರಾಜ್ಯಾದ್ಯಂತ ಉಗ್ರ ಹೋರಾಟ ಮಾಡುವುದಾಗಿ ಪ್ರತಿಭಟನಾಕಾರರು ಎಚ್ಚರಿಕೆ ನೀಡಿದರು. ಪ್ರತಿಭಟನೆಯಲ್ಲಿ ನಿಜಧ್ವನಿ ಗೋವಿಂದರಾಜು, ಪಣ್ಯದಹುಂಡಿ ರಾಜ್, ಮಹೇಶಗೌಡ, ಗು.ಪುರುಷೋತ್ತಮ್, ಚಾ.ವೆಂ.ರಾಜ್ ಗೋಪಾಲ್, ನಾಗೇಂದ್ರಗೌಡ, ಅರುಣ್ ಕುಮಾರ್‌ಗೌಡ, ಮಂಜು, ಲೋಕೇಶ್, ಭೂಪತಿ, ತಾಂಡವ ಮೂರ್ತಿ, ಆಟೋ ಲಿಂಗರಾಜು, ವೀರಭದ್ರ, ಪ್ರಕಾಶ್ ಸಾಗರ್ ರಾವತ್ ಇತರರು ಭಾಗವಹಿಸಿದ್ದರು.

ಎರಡು ಬೈಕ್ ನಡುವೆ ಡಿಕ್ಕಿ: ಯುವಕ ಸಾವು



ಸಿ.ಕೆ.ಮೋಹನ್

ಚಾಮರಾಜನಗರ, ಜೂ.19–ಎರಡು ಬೈಕ್‌ಗಳ ನಡುವೆ ಡಿಕ್ಕಿ ಸಂಭವಿಸಿ ಯುವಕನೋರ್ವ ಮೃತಪಟ್ಟಿದ್ದು, ಇಬ್ಬರು ಗಾಯಗೊಂಡಿರುವ ಘಟನೆ ನಗರದ ಹೊರವಲಯದ ಜಾಲಹಳ್ಳಿಹುಂಡಿ ಬಳಿ ಮಂಗಳವಾರ ರಾತ್ರಿ ನಡೆದಿದೆ.

ಮೂಲತಃ ನಗರದ 17ನೇ ವಾರ್ಡ್‌ನ ಉಪ್ಪಾರ ಬೀದಿಯ ಜಾಲಹಳ್ಳಿಹುಂಡಿ ನಿವಾಸಿ ಕೃಷ್ಣ ಅವರ ಪುತ್ರ ಸಿ.ಕೆ.ಮೋಹನ್(27) ಮೃತಪಟ್ಟ ಯುವಕ.

ಮೋಹನ್ ತನ್ನ ಸ್ನೇಹಿತ ಮನೋಹರ್‌ನೊಂದಿಗೆ ರಾತ್ರಿ 9 ಗಂಟೆಯಲ್ಲಿ ನಗರದ ಜಿಮ್‌ವೊಂದರಲ್ಲಿ ವರ್ಕೌಟ್ ಮುಗಿಸಿ, ಬೈಕ್‌ನಲ್ಲಿ ಜಾಲಹಳ್ಳಿಹುಂಡಿ ಗ್ರಾಮಕ್ಕೆ ತೆರಳುತ್ತಿದ್ದ. ಇದೇ ವೇಳೆ ಗ್ರಾಮದ ತಿರುವಿನಲ್ಲಿ ಎದುರಿಗೆ ಮತ್ತೊಂದು ಬೈಕ್‌ನಲ್ಲಿ ಬಂದ ರಾಮಸಮುದ್ರದ ಮಹೇಶ್ ಡಿಕ್ಕಿ ಹೊಡೆದಿದ್ದಾರೆ. ಪರಿಣಾಮ ಮೋಹನ್ ತಲೆಗೆ ತೀವ್ರ ಪೆಟ್ಟಾಗಿ ಸ್ಥಳದಲ್ಲೇ ಮೃತಪಟ್ಟಿದ್ದಾನೆ. ಮನೋಹರ್ ಹಾಗೂ ಮಹೇಶ್‌ಗೆ ಗಾಯಗಳಾಗಿದ್ದು, ನಗರದ ಆಸ್ಪತ್ರೆವೊಂದಕ್ಕೆ ದಾಖಲಿಸಲಾಗಿದೆ.

ಈ ಸಂಬಂಧ ನಗರ ಸಂಚಾರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮೈಸೂರು ಪಾಲಿಕೆಯಲ್ಲಿ 252 ಪೌರಕಾರ್ಮಿಕ ಹುದ್ದೆ ಭರ್ತಿಗೆ ಅಧಿಸೂಚನೆ

ಅರ್ಜಿ ಸಲ್ಲಿಸಲು ಜು.18 ಕೊನೆ ದಿನ

ಮೈಸೂರು,ಜೂ.19(ಪಿಎಂ)– ಕರ್ನಾಟಕ ಮಹಾನಗರ ಪಾಲಿಕೆಗಳ ನಿಯಮದಂತೆ ಮೈಸೂರು ಮಹಾನಗರ ಪಾಲಿಕೆಗೆ ಮಂಜೂರಾಗಿರುವ ಪೌರಕಾರ್ಮಿಕರ ಹುದ್ದೆಗಳ ಪೈಕಿ ನೇರ ನೇಮಕಾತಿಯಡಿ ಖಾಲಿ ಇರುವ 252 ಪೌರಕಾರ್ಮಿಕರ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಿ ಮೈಸೂರು ಮಹಾನಗರ ಪಾಲಿಕೆ ಅಧಿಸೂಚನೆ ಹೊರಡಿಸಿದೆ.

ಮೈಸೂರು ಮಹಾನಗರ ಪಾಲಿಕೆಯಲ್ಲಿ ಹಾಲಿ ನೇರಪಾವತಿ, ದಿನಗೂಲಿ, ಕ್ಷೇಮಾಭಿವೃದ್ಧಿ ಅಧಿನಿಯಮ, ಸಮಾನ ಕೆಲಸಕ್ಕೆ ಸಮಾನ ವೇತನದಡಿ ಪೌರಕಾರ್ಮಿಕ ಹುದ್ದೆಯಲ್ಲಿ ಕನಿಷ್ಠ ಎರಡು ವರ್ಷಗಳಿಗಿಂತ ಕಡಿಮೆ ಇಲ್ಲದಂತೆ ನಿರಂತರವಾಗಿ ಕೆಲಸ ನಿರ್ವಹಿಸುತ್ತಿರುವ ಹಾಗೂ ಈ ನಿಯಮಗಳು ಜಾರಿಗೆ ಬಂದ ದಿನಾಂಕದಲ್ಲಿಯೂ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರು ಮಾತ್ರ ಅರ್ಹರು.


ವಿದ್ಯಾರ್ಹತೆ ಅನ್ವಯಿಸುವುದಿಲ್ಲ. ಅರ್ಜಿ ಸಲ್ಲಿಸಲು ಸರ್ಕಾರ ಅಧಿಸೂಚನೆ ಹೊರಡಿಸಿದ ದಿನಾಂಕಕ್ಕೆ 18 ವರ್ಷ ಪೂರ್ಣಗೊಂಡಿರಬೇಕು ಹಾಗೂ ಗರಿಷ್ಠ ವಯೋಮಿತಿ 55 ವರ್ಷ. 17 ಸಾವಿರ ರೂ.ನಿಂದ 28,950 ರೂ. ವೇತನ ಶ್ರೇಣಿ ನಿಗದಿಪಡಿಸಲಾಗಿದೆ. ಜೂ.18ರಿಂದ ಅರ್ಜಿ ಸಲ್ಲಿಸಲು ಅವಕಾಶವಿದ್ದು, ಜು.18 ಅರ್ಜಿ ಸಲ್ಲಿಸಲು ಕೊನೆ ದಿನ.

ಮೈಸೂರಿನ ಸಯ್ಯಾಜಿರಾವ್ ರಸ್ತೆಯಲ್ಲಿರುವ ಮೈಸೂರು ಮಹಾನಗರ ಪಾಲಿಕೆಯ ಕೇಂದ್ರ ಕಚೇರಿಯಲ್ಲಿ ಅರ್ಜಿ ನಮೂನೆ ಪಡೆಯಬಹುದು. ಹುದ್ದೆಗೆ ಸಂಬಂಧಿಸಿದ ವಿದ್ಯಾರ್ಹತೆ, ವಯಸ್ಸು ಮತ್ತು ಕೋರಿರುವ ಮೀಸಲಾತಿಗೆ ಸಂಬಂಧಿಸಿದಂತೆ ಪ್ರಮಾಣ ಪತ್ರಗಳನ್ನು, ಸಕ್ಷಮ ಪ್ರಾಧಿಕಾರಗಳಿಂದ ಪಡೆದು, ಅವುಗಳ ನಕಲು ಪ್ರತಿಗಳನ್ನು ಸಂಬಂಧಪಟ್ಟ ಶಾಖಾ ಮುಖ್ಯಸ್ಥರಿಂದ ದೃಢೀಕರಿಸಿ ಅರ್ಜಿಯೊಂದಿಗೆ ಲಗತ್ತಿಸಿ ಅಧ್ಯಕ್ಷರು, ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ ಹಾಗೂ ಆಯುಕ್ತರು ಮೈಸೂರು ಮಹಾನಗರ ಪಾಲಿಕೆ ಮೈಸೂರು ಇವರಿಗೆ ಜು.18ರ ಸಂಜೆ 5.30ರೊಳಗೆ ನೇರವಾಗಿ ಸಲ್ಲಿಸಿ ಸ್ವೀಕೃತಿ ಪಡೆಯಬೇಕು.

ಅಂಚೆ ಮೂಲಕ ಸಲ್ಲಿಸಲು ಅವಕಾಶವಿರುವುದಿಲ್ಲ. ಅವಧಿ/ಸಮಯ ಮೀರಿ ಬಂದ ಅರ್ಜಿಗಳನ್ನು ಪರಿಗಣಿಸುವುದಿಲ್ಲ. ಹೆಚ್ಚಿನ ಮಾಹಿತಿಯನ್ನು ಪಾಲಿಕೆ ವೆಬ್‌ಸೈಟ್ (http://mysurucity.mrc.gov.in) ಅಥವಾ ಮೈಸೂರು ಮಹಾನಗರ ಪಾಲಿಕೆಯ ಕೇಂದ್ರ ಕಚೇರಿಯಲ್ಲಿ ಪಡೆಯಬಹುದು ಎಂದು ಅಧಿಸೂಚನೆಯಲ್ಲಿ ತಿಳಿಸಲಾಗಿದೆ.

ಆಂಧ್ರ ಪ್ರದೇಶದ ಉಪ ಮುಖ್ಯಮಂತ್ರಿಯಾಗಿ ಪವನ್ ಕಲ್ಯಾಣ್ ಅಧಿಕಾರ ಸ್ವೀಕಾರ

ವಿಜಯವಾಡ, ಜೂ.19– ಜನಸೇನಾ ಮುಖ್ಯಸ್ಥ ಪವನ್ ಕಲ್ಯಾಣ್ ಅವರು ಆಂಧ್ರ ಪ್ರದೇಶದ ಉಪ ಮುಖ್ಯಮಂತ್ರಿಯಾಗಿ ಬುಧವಾರ ಇಲ್ಲಿ ವೇದಘೋಷಗಳ ನಡುವೆ ಅಧಿಕಾರ ಸ್ವೀಕರಿಸಿದರು.




ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಅವರು ಸಂಪುಟ ಸಚಿವರಿಗೆ ಖಾತೆ ಹಂಚಿಕೆ ಮಾಡಿದ್ದಾರೆ. ಪವನ್ ಕಲ್ಯಾಣ್ ಅವರಿಗೆ ಪಂಚಾಯತ್ ರಾಜ್ ಮತ್ತು ಗ್ರಾಮೀಣಾಭಿವೃದ್ಧಿ, ಪರಿಸರ, ಅರಣ್ಯ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಗ್ರಾಮೀಣ ನೀರು ಸರಬರಾಜು ಇಲಾಖೆಯನ್ನು ಪವನ್ ಕಲ್ಯಾಣ್ ಅವರಿಗೆ ನೀಡಲಾಗಿದೆ. ಹಲವಾರು ಜನಸೇನಾ ಮುಖಂಡರು ಮತ್ತು ಇತರರು ಅಧಿಕಾರ ಸ್ವೀಕರಿಸಿದ ಪವನ್ ಕಲ್ಯಾಣ್ ಅವರನ್ನು ಅಭಿನಂದಿಸಿದರು. ಪವನ್ ಕಲ್ಯಾಣ್ ಅವರು ಆಂಧ್ರ ಪ್ರದೇಶದ ಪೀಠಾಪುರಂ ವಿಧಾನಸಭಾ ಕ್ಷೇತ್ರವನ್ನು ಪ್ರತಿನಿಧಿಸುತ್ತಾರೆ ಮತ್ತು ಮೊದಲ ಬಾರಿಗೆ ಸಚಿವರಾಗಿದ್ದಾರೆ.

ವರ್ಗೀಕೃತ ಜಾಹೀರಾತು

ಪ್ರತಿ ಸೋಮವಾರ, ಗುರುವಾರ ಮತ್ತು ಶನಿವಾರ ರೂ. 600 + 30 ಮಾತ್ರ

ಜಾಹೀರಾತಿಗೆ ಸಂಪರ್ಕಿಸಿ 0821–2496522/23

ಶ್ರೀಹರಿ ಡಯಾಬೆಟಿಕ್ ಫೌಂಡೇಷನ್ ಕುವೆಂಪುನಗರ, ಮೈಸೂರು



ಡಾ.ವಿ.ಲಕ್ಷ್ಮೀನಾರಾಯಣ್ ಅವರು ವೈದ್ಯಕೀಯ ಕ್ಷೇತ್ರದ ಹಲವು ಕಾರ್ಯಕ್ರಮಗಳಲ್ಲಿ ಭಾಗವಹಿಸಲು ಅಮೇರಿಕಾಗೆ ಹೋಗುತ್ತಿರುವುದರಿಂದ ದಿನಾಂಕ: ಜೂನ್ 26, 2024 ರಿಂದ ಆಗಸ್ಟ್ 20, 2024ರವರೆಗೆ ವೈದ್ಯಕೀಯ ಸೇವೆಗೆ ಕ್ಲಿನಿಕ್‌ನಲ್ಲಿ ಇರುವುದಿಲ್ಲ. ಲ್ಯಾಬೋರೇಟರಿನಲ್ಲಿ ಸೇವೆ ಎಂದಿನಂತೆ ನಡೆಯುತ್ತಿರುತ್ತದೆ.

Al-Kabir English School

S.S. Nagar, Bannimantap 'B' Layout, Mysore-570 015
TEACHERS REQUIRED
1) BA, B.Ed. (English & Social)
2) B.Sc., B.Ed. (PCM & CBZ)
Mob: 9972166786
(Timings: 10 am to 1 pm)

2 SITES FOR SALE

(30X40) @ OLIVE ENCLAVE ON MYSORE - BANGALORE HIGHWAY 5 KM from Columbia Hospital Mysore
Each 26 Lakhs
93421-25252

ಸೈಟು ಮಾರುವವರು ಮಾಲೀಕರು ಸಂಪರ್ಕಿಸಿ

ಲಾಲ್ ಬಹದ್ದೂರ್ ಶಾಸ್ತ್ರಿ ನಗರ ಶಾಂತವೇರಿ ಗೋಪಾಲಗೌಡ ನಗರ ಸುಪ್ತಮಾತ್ರಕ್ಕೆ ಬಡಾವಣೆ ಯಾವುದಾದರೂ ಅಳತೆ
9620203339
9945845302

ಹೊಸ ಮನೆ ಮಾರಾಟಕ್ಕಿದೆ

30x40, 3BHK, ಪೂರ್ವದಿಕ್ಕು Italian Kitchen TV Cabinet, Wardrobe, Fallceiling
ಕಲ್ಪವೃಕ್ಷ ನಗರ, ಕೆಸರೆ 3ನೇ ಹಂತ, ಮೈಸೂರು
8095673991

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್‌ಗಾಗಿ ಸಂಪರ್ಕಿಸಿ

Mob: 8861401315

WANTED

Duty Doctor,
Radiographer
Accountant,
OT Scrub Staff
Receptionist
Electrician/Maintanance
Bhavani Hospital
9972982665

EAST FACE MUDA APPROVED 40X60 SITE FOR SALE

NITYANANDASAGARA HUILALU MYSORE
8217851695

ADMISSION OPEN

Govt.of Karnataka Dept. of Tourism
FOOD CRAFT INSTITUTE-MYSURU
EXHIBITION GROUND. ITTEGEGUDU
HOTEL MANAGEMENT
100% Job Placements | Govt. College | 80% Practical Classes
www.fcimysuru.com
6362018821

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್‌ಗಾಗಿ ಸಂಪರ್ಕಿಸಿ

Mob: 8618373596

ಹೆಲ್ತ್ ಕೇರ್ ತರಬೇತಿ

SSLC/PUC ಆದವರಿಗೆ ಡಿಪ್ಲಮೋ ಇನ್ ಹೆಲ್ತ್ ಕೇರ್ ತರಬೇತಿ ಕೊಡಲಾಗುತ್ತದೆ. ತರಬೇತಿ ಪಡೆದವರು ಉತ್ತಮ ಆಸ್ಪತ್ರೆಯಲ್ಲಿ ಕೆಲಸ ಮಾಡುತ್ತಿದ್ದಾರೆ.
ಸೆಂಟ್ ಮೇರೀಸ್ ಆಸ್ಪತ್ರೆ ಸಿಲ್ಕ್ ಫ್ಯಾಕ್ಟರಿ ಸರ್ಕಲ್ NIE ಕಾಲೇಜ್ ಪಕ್ಕ, ಮೈಸೂರು
9916908454

ಸುವರ್ಣಯಾತ್ರ

1.ಕೇರಳ ಪ್ರವಾಸ ಗುರುವಾಯೂರ್ ಆಲಪ್ಪಿ ಮುನ್ನಾರ್ ತೇಕಡಿ ತ್ರಿವೇಂಡ್ರಂ 7 ದಿನಗಳು 3/7/24.
2.ಶಿರಡಿ ಪ್ರವಾಸ ಭೀಮಶಂಕರ ತ್ರಯಂಬಕೇಶ್ವರ ಗೃಷ್ಣೇಶ್ವರ ಜ್ಯೋತಿರ್ಲಿಂಗ3 ದಿನಗಳು 12/7/24.
3.ಕಾಶಿ, ಗಯಾ ,ಬಾಬಾ ಬೈದ್ಯನಾಥ್ ,ಅಯೋಧ್ಯ 7 ದಿನಗಳು 23/7/24.
4.ಗುಜರಾತ್ ಪ್ರವಾಸ 8 ದಿನಗಳು 18/7/24
ಸಂಪರ್ಕಿಸಿ:
6360146483/8660233673

ವಿಶೇಷತೆ ಆರ್ಥೋಪೆಡಿಕ್ ಕ್ಲಿನಿಕ್

ಪಾದ ಮತು ಪಾದದ ಕೀಲಿನ ಸಮಸ್ಯೆಗಳಿಗೆ
ಭೇಟಿ ಕೊಡಿ : ಮಹಾವೀರ್ ಪಾದ ಮತ್ತು ಪಾದದ ಕೀಲಿನ ಸೆಂಟರ್ ನಂ. 926, ವಿಶ್ವಧಾತ್ರಿ ರಸ್ತೆ, ವಿವೇಕಾನಂದನಗರ, ವಿವೇಕಾನಂದ ವೃತ್ತ, ಮೈಸೂರು–23
ಪ್ರತಿ ಮಂಗಳವಾರ ಬೆ. 9 ರಿಂದ ಮ.12
ಫಿಸಿಯೋಥೆರಪಿ ಪ್ರತಿ ದಿನ ಸಂಜೆ 5.30PM-8PM
ಸಂದರ್ಶನಕ್ಕೆ ಕರೆ ಮಾಡಿ
7204080539,0821-4000961
Main Clinic ಬೆಂಗಳೂರಿನಲ್ಲಿ

ಬೋಳು ತಲೆಯ ಸಮಸ್ಯೆಯೇ?



ಔಷಧ ಚಿಕಿತ್ಸೆಗೆ ಒಳಪಡುತ್ತಿರುವ ರೋಗಿಗಳಿಗೆ ಸ್ಪರ್ಧಾತ್ಮಕ ಬೆಲೆಯಲ್ಲಿ ಹೇರ್ ವಿಗ್‌ಗಳು ದೊರೆಯುತ್ತವೆ.
SMART HAIR FIXING
574, 9th Cross, Anikethara Road, kuvempunagar, Mysuru
MYSURU 9611028523 MANGALORE 9343142258

WANTED

FOR A FURNITURE SHOP in Mysore
SALES EXECUTIVE
(Male/ Female)
Age: 18-30 years.
Contact: 9916001377

100% TEAK WOOD FACTORY FINISH DOORS & FRAMES @ FACTORY DEPOT RATES



10 YEARS WARRANTY
9901291267
9731591267

FOR RENT

3 BHK 1st Floor Duplex house for rent, Vijayanagar 2nd Stage, near Anantha Geetha School, Mysore.
9206380489, 8762577289

ಉದ್ಯೋಗ ಅವಕಾಶ

ಬಂದ ದಿನವೇ ಕೆಲಸ (ಮಾರ್ಕೆಟಿಂಗ್ ಅಲ್ಲ) ಮೈಸೂರಿನ ಪ್ರತಿಷ್ಠಿತ MNC ಹಾಗೂ IT ಕಂಪನಿಗಳಿಗೆ 4th, SSLC, PUC, ITI, Any Degree ಪಾಸ್ / ಫೇಲ್ ಆದ ಯುವಕ / ಯುವತಿಯರು ಇಂದೇ ಬೇಕಾಗಿದ್ದಾರೆ. ESI / PF ನೊಂದಿಗೆ ಊಟ, ವಸತಿಯಿರುತ್ತದೆ. ಸಂಬಳ + ಓಟಿ, 15200 – 86,000.
8147560344, 7892046990

2BHK FLAT SALE

In Trands Apartment Bogadhi
11 Years Old, North Facing
Both Room Attached Bathroom
877 Sq Ft is Just 43 Lakhs
3Km From Bogadhi Ring Road
☎-9620349543

ಕಳೆದಿದೆ

ಪಿ.ಆರ್.ಸರೋಜಮ್ಮ ಮನೆ ನಂ. 318, 1/2ನೇ ಕ್ರಾಸ್, 2ನೇ ಮುಖ್ಯ ರಸ್ತೆ, ನಿವೇದಿತ ನಗರ, ಮೈಸೂರು ಈ ಮನೆಯ ನಿವೇಶನದ ಮಂಜೂರಾತಿ ಪತ್ರ ಕಳೆದಿದೆ ಸಿಕ್ಕಿದವರು ಸಂಪರ್ಕಿಸಿ:
8884973930

SITE REQUIRED

30x40 site required in Vijayanagar 4th Stage. Only direct owners, please contact at
9008679023
8660763228

NYPUNYA SCHOOL OF EXCELLENCE DATTAGALLI, MYSORE

REQUIRED URGENTLY
1. ART TEACHERS (BVA)
2. HINDI TEACHER (MA, B Ed)
3. PRIMARY TEACHER
4. KINDERGARTEN TEACHER (NTT trained)
5. TRANSPORT MANAGER
Candidates with relevant experience and qualifications can send their CVs to the E-mail ID:hmypschool@gmail.com
9110851597, 9632873737
No constraints in salary for experienced candidates.

COMMERCIAL SPACE FOR RENT

25x40 Corner, 1st Floor, showroom or office / godown. Behind Louis Philippe Showroom, D.D. Urs Road, Mysore.
9738460420, 9972837832

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್‌ಗಾಗಿ ಸಂಪರ್ಕಿಸಿ

Mob: 7204494854

A IT Hardware Sales and Services company requires male Trainees / experienced people.

Qualification no bar.
Contact:
Mob: 9880302902

ಬೇಕಾಗಿದ್ದಾರೆ

ಮಸಾಲ ಪ್ರಾಡಕ್ಟ್ Export ಕಂಪನಿಯ ಕೆಲಸಕ್ಕೆ 20 ರಿಂದ 25 ವಯಸ್ಸಿನ SSLC ವಿದ್ಯಾರ್ಹತೆಯಿರುವ 8 ಜನ ಮಹಿಳೆಯರು ಬೇಕಾಗಿದ್ದಾರೆ.
ಸಂಪರ್ಕಿಸಿ
7019012485

OLD AGE HOME

ಹಾಸಿಗೆ ಹಿಡಿದ ಮತ್ತು ಯಾವುದೇ ವಯಸ್ಸಾದ ಹಿರಿಯರನ್ನು ನಿಮ್ಮ ಮನೆಯವರಂತೆಯೇ ಸುಸಜ್ಜಿತವಾದ ವಾತಾವರಣದಲ್ಲಿ ಶುಚಿಯಾದ ಆಹಾರ ಮತ್ತು ವೈದ್ಯಕೀಯ ಸೌಲಭ್ಯದೊಂದಿಗೆ ನೋಡಿಕೊಳ್ಳಲಾಗುವುದು.
9916905188

SITES FOR SALE

Ready for Construction
Muda Approved
Khata Obtained
Ready for Registration
20x33, 3 Sities all W/F
Keragalli, Dattagalli, Mysore
9886311754

ನೈಪುಣ್ಯ ಸ್ಕೂಲ್ ಆಫ್ ಎಕ್ಸೆಲೆನ್ಸ್

ದಟ್ಟಗಳ್ಳಿ, ಮೈಸೂರು
ಬೇಕಾಗಿದ್ದಾರೆ
ನಜರ್‌ಬಾದ್ ಸುತ್ತ ಮುತ್ತ ವ್ಯಾಪ್ತಿಯ ECO, WINGER ಸ್ವಂತ ವಾಹನವುಳ್ಳ ಚಾಲಕರು, ಶಾಲೆಯ ಮಕ್ಕಳನ್ನು ಕರೆದುಕೊಂಡು ಹೋಗಲು ಬೇಕಾಗಿದ್ದಾರೆ.
ಆಸಕ್ತರು ಈ ಕೆಳಕಂಡ ಸಂಖ್ಯೆಗೆ ಬೆಳಿಗ್ಗೆ 9 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ಸಂಪರ್ಕಿಸಿ.
7022849856

40x40 ಸೈಟು @ Rs. 45 ಲಕ್ಷ

ಪೂರ್ವ – ದಕ್ಷಿಣ ಕಾರ್ನರ್
MUDA Approved Layout
ಲಾಲ್ ಬಹದ್ದೂರ್ ಶಾಸ್ತ್ರಿ ನಗರದ ನಂತರ ಚಾಮುಂಡಿ ಬೆಟ್ಟದ ಹಿಂಭಾಗ
Call: 9538583377

Sudarshan Saur SOLAR WATER HEATER



ATTRACTIVE OFFER
ಸೇಲ್ಸ್ & ಸರ್ವೀಸ್
10 year Guarantee
Bajaj Finserv Available
SUNZONE SOLAR SYSTEM
Vishwamanava Double Road, Kuvempunagar, Mysuru
9845175443

ಸೈಟ್ ಮಾರಾಟಕ್ಕಿದೆ ಮೂಡಾ ಅಪ್ರೂವ್ಡ್ 40X60

ಪೂರ್ವ ದಿಕ್ಕು, ನಿತ್ಯಾನಂದಸಾಗರ ಹುಯಿಲಾಳು ಮೈಸೂರು
8217851695

ಮೊಬೈಲ್‌ನಲ್ಲಿ ಕೆಲಸ ವಾರದ ಸಂಬಳ

NO TARGET, TYPING WORK
ತಿಂಗಳಿಗೆ ರೂ.10,000 ರಿಂದ ರೂ.25,000 ಗಳಿಸಬಹುದು.
8884439666

SITES FOR SALE

Brahmananda Sagara Phase-I
30x50 S/F
8050821108, 8792207164

ಕಳೆದಿದೆ

ಎಸ್.ಎ.ಕಮಲ ಮೈಸೂರು ತಾಲ್ಲೂಕು, ವಿಜಯನಗರ ಬಿ ಬ್ಲಾಕ್ 3ನೇ ಹಂತ, 15ನೇ ಮೇನ್, 16ನೇ ಕ್ರಾಸ್, ಮನೆ ನಂ.422ರ ಸದರಿ ನಿವೇಶನದ/ಸ್ವತ್ತಿನ ಹಕ್ಕು ಪತ್ರ ಹಾಗೂ ಇನ್ನಿತರ ದಾಖಲೆಗಳು ಕಳೆದು ಹೋಗಿರುತ್ತದೆ ಸಿಕ್ಕಿದವರು ಸಂಪರ್ಕಿಸಿ:
9731363024

New House for sale

Fully Furnished 20×40 duplex Vani Vilas layout (MUDA) Bannur road, opp. Vidya vikas college
Direct owner
Contact vijay :
9309833881

ಕೇರಳ ಕೊಳ್ಳೇಗಾಲದ ಶ್ರೀ ಜ್ಯೋತಿಷ್ಯರು

ಪಂ॥ ರಾಜು ಗುರೂಜಿ
Mob: 99022 39655
ಸತತವಾಗಿ 12 ವರ್ಷ ಕೇರಳ ಕೊಳ್ಳೇಗಾಲದ ವಿದ್ಯೆಯನ್ನು ಸಿದ್ಧಿ ಮಾಡಿಕೊಂಡಿರುವ ದಿವ್ಯ ಜ್ಞಾನಿ ರಾಜು ಗುರೂಜಿಯವರು ಸ್ತ್ರೀ–ಪುರುಷ ಪ್ರೇಮ, ದಾಂಪತ್ಯ ಸಮಸ್ಯೆ, ಶತ್ರು ಬಾಧೆ, ನಿಮ್ಮ ಯಾವುದೇ ಜಟಿಲವಾದ ಸಮಸ್ಯೆಗಳಿಗೆ 2 ದಿನದಲ್ಲಿ ಪರಿಹಾರ ಮಾಡಿಕೊಡುತ್ತಾರೆ. ಭೇಟಿಯಾಗಿ ಖಾಯಂ ವಿಳಾಸ ರೂಂ ನಂ. 9, 2ನೇ ಮಹಡಿ, ಸಿಟಿ ಬಸ್ ಸ್ಟ್ಯಾಂಡ್ ಬಿಲ್ಡಿಂಗ್, ಕೆ.ಆರ್. ಸರ್ಕಲ್, ಮೈಸೂರು–1

ಬೇಕಾಗಿದ್ದಾರೆ

JP Nagaradalli ನೂತನವಾಗಿ ಶುಭಾರಂಭಗೊಳ್ಳುತ್ತಿರುವ ಹೋಟೆಲ್‌ಗೆ ಕೆಲಸಗಾರರು ಬೇಕಾಗಿದ್ದಾರೆ.
* ದೋಸೆ ಮಾಸ್ಟರ್
* ಕಾಫಿ, ಟೀ ಮಾಸ್ಟರ್
Mob: 9382619322

ವಧು–ವರರ ಮಾಹಿತಿ ಕೇಂದ್ರ

ಒಕ್ಕಲಿಗ/ಲಿಂಗಾಯತ/ಬ್ರಾಹ್ಮಣ ಮತ್ತು ಎಲ್ಲಾ ಜಾತಿಯ BE/B.Tech/MBA/MS/MBBS, MS,MD ಹಾಗೂ ಎಲ್ಲಾ ಡಿಗ್ರಿ/ಮಾಸ್ಟರ್ಸ್ ಡಿಗ್ರಿ ದೇಶಿಯ / ವಿದೇಶಿಯ ವಧು–ವರರ ಮಾಹಿತಿಗಾಗಿ ಸಂಪರ್ಕಿಸಿ: ಅಂಚೆ ಪೇದೆ ಮ್ಯಾಟ್ರಿಮೋನಿ ವಿಜಯ ಬ್ಯಾಂಕ್ ಸರ್ಕಲ್, ಕುವೆಂಪುನಗರ, ಮೈಸೂರು
7259395800
7349224222

ಬೇಕಾಗಿದ್ದಾರೆ

ಪ್ರಗತಿ ವಿದ್ಯಾ ಸಂಸ್ಥೆ, ಸರಗೂರು
ಮೈಸೂರು ಜಿಲ್ಲೆ–571121
ಮುಖ್ಯ ಶಿಕ್ಷಕರು: MA, B,.Ed/MSC, B.Ed-1 Post
ಸಮಾಜ ಶಿಕ್ಷಕರು: MA, B,.Ed -1 Post
ಇಂಗ್ಲಿಷ್ ಶಿಕ್ಷಕರು: PUC, D.Ed -1 Post
ದೈಹಿಕ ಶಿಕ್ಷಕರು: BP.Ed -1 Post
9448761464
email:pragathi.edu.in@gmail.com

HOUSE FOR RENT

3BHK 60x40 Vijayanagar I Stage, Mysore
NO Brokers
9845306504

ಬೇಕಾಗಿದ್ದಾರೆ

ಶಾಲಾ ಬಸ್ ಚಾಲಕರು 2 ವರ್ಷ ಅನುಭವದ ಜೊತೆಗೆ ಹೆವಿ ಡಿಎಲ್ ಹೊಂದಿರಬೇಕು
ಸಂಪರ್ಕಿಸಿ:
0821-2402929
9481123959

ಮನೆಗೆ ಅಡುಗೆಯವರು ಬೇಕಾಗಿದ್ದಾರೆ

ಅನುಭವವುಳ್ಳ ಹಾಗೂ ರುಚಿಯಾಗಿ ಅಡುಗೆ ಮಾಡುವ ಮಹಿಳೆ ಬೇಕಾಗಿದ್ದಾರೆ.
ದಟ್ಟಗಳ್ಳಿ, 3ನೇ ಸ್ಟೇಜ್, ಮಹಾಮನೆ ಸರ್ಕಲ್ ಹತ್ತಿರ
9731053082

ಬೇಕಾಗಿದ್ದಾರೆ

19 ವರ್ಷದ ಯುವಕನಿಗೆ ಕನ್ನಡ,ಇಂಗ್ಲಿಷ್ ಮತ್ತು ಗಣಿತವನ್ನು ಓದುವುದು ಮತ್ತು ಬರೆಯುವುದನ್ನು ಕಲಿಸುವ ಒಬ್ಬ ಪುರುಷ ಶಿಕ್ಷಕ ಬೇಕಾಗಿದ್ದಾರೆ.
8971183090
7618766600

ಬೇಕಾಗಿದ್ದಾರೆ

ಹೋಟೆಲ್ ಅಮರಾವತಿ
ಹಿರಿಕಾಟಿಗೇಟ್ ಊಟಿ ರಸ್ತೆ, ಬೇಗೂರು ಹೋಬಳಿ, ಗುಂಡ್ಲುಪೇಟೆ ತಾಲ್ಲೂಕು
1) ಸೌತ್ ಇಂಡಿಯನ್ ಕುಕ್–1ಹುದ್ದೆ
2) ಬಿಲ್ಲಿಂಗ್ ಕೌಂಟರ್‌ಗೆ ಕಂಪ್ಯೂಟರ್ ಬಲ್ಲ ಮಹಿಳೆ–2 ಹುದ್ದೆ
3) ಸರ್ವಿಸ್ ಬಾಯ್ ವೈಟರ್ ಹುದ್ದೆ–3
ಆಕರ್ಷಕ ವೇತನ ಇರುತ್ತದೆ.
9448601899

ಶ್ರೀರಾಂಪುರ ರಿಂಗ್ ರಸ್ತೆ ಹತ್ತಿರ (ಯುನಿವರ್ಸಿಟಿ ಲೇಔಟ್ ಎದುರು)

ಗಾಯಿತ್ರಿ ಬಡಾವಣೆಯಲ್ಲಿ I Floor 2BHK , IInd Floor 1 ಬೆಡ್ ರೂಂ ಮನೆ ಲಭ್ಯವಿದೆ.
9108946647
9448092818

WANTED SITES

AT Bogadi, Dattagalli Vijayanagara, Yelwala Mysore-Bannur-T.N.Pura Road & Mysore Surroundings
Quick Rege.
95388-39926

ತಕ್ಷಣ ಬೇಕಾಗಿದ್ದಾರೆ/WANTED

Sri Sapthagiri Builder & Developers
Driver Post -2 & Marketing Executives-2
Office Boy - 2
9606977963
9591828444
8197395284

ಬೇಕಾಗಿದ್ದಾರೆ

ಬೇಕರಿಯಲ್ಲಿ ಕೆಲಸ ಮಾಡಲು ಹುಡುಗರು ಮತ್ತು ಡ್ರೈವರ್ ಬೇಕಾಗಿದ್ದಾರೆ
9483405262

HOUSE FOR RENT

4 BHK, All attached Bath, 1700 Sq. ft. Suitable for residential or any commercial or office use in Siddhartha Layout, Mysuru.
8073412866

ಸೈಟು ಮಾರಾಟಕ್ಕಿದೆ

BMICAPA ಅನುಮೋದಿತ 30x40 ಅಳತೆಯ ಸೈಟುಗಳು ಹಳೆಕೆಸರೆಗೆ ಹೊಂದಿಕೊಂಡಂತೆ ಮಾರಾಟಕ್ಕಿದೆ
ಆಸಕ್ತರು ಸಂಪರ್ಕಿಸಿ
6363798472
7892183401

ಬೇಕಾಗಿದ್ದಾರೆ

ಫ್ಯಾಕ್ಟರಿಯಲ್ಲಿ ಹೆಲ್ಪರ್ ಕೆಲಸಕ್ಕೆ ಪುರುಷರು ಬೇಕಾಗಿದ್ದಾರೆ. ವಯಸ್ಸು : 18 ರಿಂದ 45, ಸಂಬಳ : 17000+ESI+PF=22000 ಒಳಗೊಂಡು, week off ಹಾಗೂ 3 Shift ಗಳು ಇರುತ್ತದೆ.
ಹೆಚ್ಚಿನ ಮಾಹಿತಿಗಾಗಿ ಬೆಳಿಗ್ಗೆ 9 ಗಂಟೆಗೆ ಬಂದು ಸಂಪರ್ಕಿಸಿ: ಸ್ಥಳ: CIPET ಕಾಲೇಜ್ ಹತ್ತಿರ, ಮೇಟಗಳ್ಳಿ ರಿಂಗ್ ರೋಡ್, ಮೈಸೂರು
9986874574

ಭದ್ರತಾ ಸೂಪರ್‌ವೈಸರ್

ಗಾರ್ಡ್‌ಡ್ಯೂಟಿ–6 ಹುದ್ದೆ, ಸೂಪರ್‌ವೈಸರ್–1 ಮಾಜಿ ಸೈನಿಕರು, ಪೊಲೀಸ್‌ನವರಿಗೆ ಆದ್ಯತೆ ವಯಸ್ಸು 25 ರಿಂದ 45 ವರ್ಷದವರಿಗೆ 12 ಗಂಟೆ 15000/– ಸಂಬಳ.
8th/9th/SSLC ನಂಜನಗೂಡು, ಚಾಮರಾಜನಗರ, ತಗಡೂರು ಸುತ್ತಮುತ್ತ ವಾರ್ಡನ್ PT ಟೀಚರ್) ಹಳ್ಳಿಮೈಸೂರು–ಹಾಸನ
9900749104
9036745292

WANTED

1. Business Development Executive (MBA in Marketing)
2. Office Assistant (Minimum 2 Years Experience)
SWISS PVT LTD,
SARASWATHIPURAM, MYSORE
(Attractive Salary with ESI and EPF)
9164608888
9844299888
Contact Timing 9:00 AM TO 6:30 PM

ಬೇಕಾಗಿದ್ದಾರೆ

ಮೈಸೂರಿನ ಪೆಟ್ರೋಲ್ ಬಂಕ್‌ನಲ್ಲಿ ಕೆಲಸಕ್ಕಾಗಿ ಪುರುಷರು/ಮಹಿಳೆಯರು ಬೇಕಾಗಿದ್ದಾರೆ.
ಸಂಬಳ: 15,000/–
8892258814

ಬೇಕಾಗಿದ್ದಾರೆ

ಡ್ರೈವರ್– 4 ಮತ್ತು 6 ಚಕ್ರದ ಗೂಡ್ಸ್ ವಾಹನ ಚಲಾಯಿಸಲು ಹೆಲ್ಪರ್ಸ್–ಫರ್ನಿಚರ್ಸ್ ಶೋರಂನಲ್ಲಿ ಕೆಲಸ ಮಾಡಲು ವಯೋಮಿತಿ 18 ರಿಂದ 40 ವರ್ಷ
9611417014

ಸೈಟು ಮಾರಾಟಕ್ಕಿದೆ

80x80 ದಕ್ಷಿಣ ದಿಕ್ಕು ಬೆಳಿಕೆರೆ.
ಸಂಪರ್ಕಿಸಿ
9901228279

ಪುನಮ್ ಪ್ಯಾಕೇಜ್ ಟೂರ್ಸ್

SRA Package Tour
ತಮಿಳುನಾಡು ಪ್ರವಾಸ – ದಿನಾಂಕ: 13ನೇ ಜುಲೈ 2024–06 ದಿನಗಳು
ತಿರುಪತಿ ಪ್ರವಾಸ – ದಿನಾಂಕ: 27 ಜುಲೈ 2024–03 ದಿನಗಳು
ಕೇರಳ ಪ್ರವಾಸ ದಿನಾಂಕ: 22 ಆಗಸ್ಟ್ 2024–04 ದಿನಗಳು
ಹೆಚ್ಚಿನ ಮಾಹಿತಿಗಾಗಿ ಕರೆ ಮಾಡಿ
7022271023

ಅನುಬಂಧ ವೃದ್ಧಾಶ್ರಮ

(ಸಸ್ಯಾಹಾರಿಗಳಿಗೆ ಮಾತ್ರ)
ವಯಸ್ಸಾದ ಹಾಸಿಗೆ ಹಿಡಿದ ಮತ್ತು ಪಾರ್ಶ್ವವಾಯು ಪೀಡಿತ ವಯೋವೃದ್ಧರನ್ನು ಸುಸಜ್ಜಿತವಾದ ಸಸ್ಯಹಾರಿ ಊಟ, ವಸತಿ ಮತ್ತು ವೈದ್ಯಕೀಯ ಸೌಲಭ್ಯಗಳೊಂದಿಗೆ ನಮ್ಮ ಆಶ್ರಮದಲ್ಲಿ ನೋಡಿಕೊಳ್ಳಲಾಗುವುದು.
9880793910
8050999438

ಪ್ರಸಿದ್ಧ ಕೇರಳ ಶ್ರೀ ಭಗವತಿ ಜ್ಯೋತಿಷ್ಯರು

ಪಂ॥ ಕುಮಾರ್ ಪ್ರಸಾದ್ ಗುರೂಜಿ
Mob: 9731839596
ಸ್ತ್ರೀ–ಪುರುಷಪ್ರೇಮ, ಸಂತಾನ, ದಾಂಪತ್ಯ, ಸಮಸ್ಯೆ, ನಿಮ್ಮ ಯಾವುದೇ ಗುಪ್ತ ಸಮಸ್ಯೆಗಳಿಗೆ, ಅಷ್ಟಮಂಗಳ, ಪ್ರಶ್ನೆಯಿಂದ, ನೇರ ಉತ್ತರ ಹಾಗೂ ಶಾಶ್ವತ, ಪರಿಹಾರಕ್ಕಾಗಿ, ಚೋಟಾನಿಕರ, ಭಗವತಿ ತಾಯಿ, ರಾಜರಾಜೇಶ್ವರಿ, ಕುಟ್ಟಿಚೇತನ್, ಕೇರಳದ, ಮಾಂತ್ರಿಕ ಶಕ್ತಿಯಿಂದ, 2 ದಿನದಲ್ಲಿ ಪರಿಹಾರ ಮಾಡಿಕೊಡುತ್ತಾರೆ.
ಖಾಯಂ ಮನೆ ವಿಳಾಸ: ಲಕ್ಷ್ಮಿ ನಿವಾಸ ನಂ.19/D2, ಬುದ್ಧ ಮಾರ್ಗ, ಹೋಟೆಲ್ ದೋಸೆ ಕಾರ್ನರ್ ಪಕ್ಕ, ಹೊಸ DC ಆಫೀಸ್ ಎದುರು, ಸಿದ್ಧಾರ್ಥ ಲೇಔಟ್, ಮೈಸೂರು

ಅನುಬಂಧ ಮ್ಯಾರೇಜಸ್

ವಧುವರರನ್ನು ಹುಡುಕಲು ಸಹಾಯಬೇಕೇ? ನಮಗೆ ಕರೆ ಮಾಡಿ
6361740552

ತಕ್ಷಣ ಬೇಕಾಗಿದ್ದಾರೆ

ಹಿನಕಲ್ ಮತ್ತು ಹೆಬ್ಬಾಳ ಏರಿಯಾದಲ್ಲಿ ಕೆಲಸ ಮಾಡಲು ಸೆಕ್ಯೂರಿಟಿ ಗಾರ್ಡ್‌ಗಳು ಬೇಕಾಗಿದ್ದಾರೆ.
ವಿದ್ಯಾರ್ಹತೆ : SSLC ಮತ್ತು ಮೇಲ್ಪಟ್ಟು
ಸಂಬಳ: 17000/–
9880727819
9620667819

ಬೇಕಾಗಿದ್ದಾರೆ

ಶಾಲೆಯಲ್ಲಿ ಕಸಗುಡಿಸಲು ಮತ್ತು ಸಣ್ಣ ಪ್ರಮಾಣದ ಅಡುಗೆ ಮತ್ತಿತರ ಸಹಾಯಕ ಕೆಲಸಗಳಿಗೆ ದೃಢಕಾಯ ಮಹಿಳೆಯರು ಕೆಲಸದ ಸಮಯ ಬೆಳಿಗ್ಗೆ 9 ರಿಂದ ಸಂಜೆ 6 ರವರೆಗೆ ಸಂಬಳ ಪ್ರತಿದಿನಕ್ಕೆ 300/–
ಜ್ಞಾನಗಂಗೋತ್ರಿ ಕಾನ್ವೆಂಟ್ ರಾಜೇಂದ್ರ ನಗರ, ಮೈಸೂರು
9243580672
8762205021

We are Hearing

Accountant (M/F)
Experience - 2 to 3 Years
Well nown tally ERP-9
Salary - 18000 above
Century Mattress Distributor
Near Preeti Granite, Hebbal, Mysore
0821-4286890
8217411158

ಕುಕ್ ಬೇಕಾಗಿದ್ದಾರೆ

ಬೆಂಗಳೂರಿನ ಇಂಜಿನಿಯರಿಂಗ್ ಹಾಸ್ಟೆಲ್‌ಗೆ ಕುಕ್ ಬೇಕಾಗಿದ್ದಾರೆ ಊಟ ವಸತಿ ಸೌಲಭ್ಯ ವಿರುತ್ತದೆ
8088419322

ಸೈಟು ಮಾರಾಟಕ್ಕಿದೆ

DTCP ಅಪ್ರೂಡ್ ಸೈಟು ಬೋಗಾದಿ –ಗದ್ದಿಗೆ ರಸ್ತೆಗೆ ಹೊಂದಿಕೊಂಡಂತೆ ಮಾರಾಟಕ್ಕಿದೆ
6360633036
7090299031

ತಕ್ಷಣ ಬೇಕಾಗಿದ್ದಾರೆ

RBI ಮೇಟಗಳ್ಳಿ GRS Fantasy ಪಾರ್ಕ್ ಸುತ್ತಮುತ್ತ ಕೆಲಸ ಮಾಡಲು ಸೆಕ್ಯೂರಿಟಿ ಗಾರ್ಡ್‌ಗಳು ಬೇಕಾಗಿದ್ದಾರೆ.
ವಿದ್ಯಾರ್ಹತೆ: SSLC ಮೇಲ್ಪಟ್ಟು
ವಯೋಮಿತಿ 50 ವರ್ಷದೊಳಗೆ
ಸಂಬಳ: 17500/-26 days, 8 hours ESI, PF ಸೌಲಭ್ಯವಿರುತ್ತದೆ.
9620777819
9620667819

ಮೈಸೂರು ಮಿತ್ರ ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

ಸೋಮವಾರ ಗುರುವಾರ ಶನಿವಾರ

ಪ್ರತಿ ಜಾಹೀರಾತಿಗೆ
ರೂ. 630 ಮಾತ್ರ

ಹೆಚ್.ಡಿ.ಕೋಟೆ: ಕಾಡಾನೆ ಸಾವು



ಹೆಚ್.ಡಿ.ಕೋಟೆ, ಜೂ.19– ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶ ವ್ಯಾಪ್ತಿಯ ಅಂತರಸಂತೆ ವನ್ಯಜೀವಿ ವಲಯದ, ತಾರಕ ಶಾಖೆಯ, ಹೊಸಕೆರೆ ಗಸ್ತಿನ, ಗೋಪಾಲ ದೇವರ ಗುಡಿ ಬೆಂಕಿರೇಖೆ ಹತ್ತಿರದ ಅರಣ್ಯ ಪ್ರದೇಶದಲ್ಲಿ ಕಾಡಾನೆಯೊಂದು ಮೃತಪಟ್ಟಿದೆ.

ಅರಣ್ಯ ಪಾಲಕರು ಮತ್ತು ಸಿಬ್ಬಂದಿಗಳು ಅರಣ್ಯದಲ್ಲಿ ಗಸ್ತು ತಿರುಗುತ್ತಿದ್ದಾಗ ಸುಮಾರು 30 ವರ್ಷ ಪ್ರಾಯದ ಆನೆ ಸತ್ತು ಬಿದ್ದಿರುವುದು ಪತ್ತೆಯಾಗಿದೆ. ತಕ್ಷಣ ವಲಯ ಅರಣ್ಯಾಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲಿಸಿ, ಆನೆ ಮೃತಪಟ್ಟಿರುವುದನ್ನು ಖಚಿತಪಡಿಸಿಕೊಂಡು ಈ ಸಂಬಂಧ ಮೇಲಾಧಿಕಾರಿಗಳಿಗೆ ಮಾಹಿತಿ ನೀಡಿದರು. ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು, ಮೇಟಿಕುಪ್ಪೆ ವನ್ಯಜೀವಿ ಉಪ ವಿಭಾಗ, ಅಂತರಸಂತೆ ವಲಯ ಅರಣ್ಯಾಧಿಕಾರಿ, ವನ್ಯಜೀವಿ ವಲಯ, ಭರತ್ ಡಿ. ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲನೆ ನಡೆಸಿದರು.

ಮುಖ್ಯ ಪಶು ವೈದ್ಯಾಧಿಕಾರಿ ಡಾ.ಪ್ರಸನ್ನ ಅವರು ಮರಣೋತ್ತರ ಪರೀಕ್ಷೆ ನಡೆಸಿ ಸ್ವಾಭಾವಿಕವಾಗಿ ಮೃತಪಟ್ಟಿರುತ್ತದೆ ಎಂದು ತಿಳಿಸಿರುತ್ತಾರೆ. ನಂತರ ಸ್ಥಳದಲ್ಲೇ ಅಂತ್ಯಕ್ರಿಯೆ ನೆರವೇರಿಸಲಾಯಿತು.

ಡಿಎಫ್‌ಓ ಹರ್ಷಕುಮಾರ್ ಚಿಕ್ಕನರಗುಂದ ಅವರ ನಿರ್ದೇಶನದಂತೆ ಅಂತರಸಂತೆ ವಲಯ ಅರಣ್ಯಾಧಿಕಾರಿ, ವನ್ಯಜೀವಿ ವಲಯ, ಡಿ ಭರತ್ ಮತ್ತು ಸಿಬ್ಬಂದಿಗಳು ಈ ಕಾರ್ಯ ನೆರವೇರಿಸಿದರು.

ವಿದ್ಯುತ್ ಸ್ಪರ್ಶ: ವ್ಯಕ್ತಿ ಸಾವು



ಮಲ್ಲುಂಡಿ, ಜೂ.19– ವಿದ್ಯುತ್ ಸ್ಪರ್ಶಿಸಿ ವ್ಯಕ್ತಿಯೊಬ್ಬರು ಸಾವನ್ನಪ್ಪಿರುವ ಘಟನೆ ನಂಜನಗೂಡು ತಾಲೂಕಿನ ಕಣ್ಣೆನೂರು ಗ್ರಾಮದ ಬಳಿ ಸಂಭವಿಸಿದೆ. ಗ್ರಾಮದ ಚಿಕ್ಕಪುಟ್ಟನಾಯಕ(52) ಮೃತ ದುರ್ದೈವಿ. ಮಂಗಳವಾರ ಬೆಳಗ್ಗೆ ಮೇಕೆಗಳನ್ನು ಮೇಯಿಸಿ ಮನೆಗೆ ಬಂದು ಅವುಗಳನ್ನು ಕಟ್ಟಿಹಾಕಿ ತಂದು ಸೊಪ್ಪು ತರಲು ಹೋಗಿದ್ದಾರೆ. ಸೊಪ್ಪು ಕತ್ತರಿಸುವ ವೇಳೆ ಮರದ ಪಕ್ಕದಲ್ಲಿದ್ದ ವಿದ್ಯುತ್ ತಂತಿಗೆ ಕುಡುಗೋಲು ತಾಗಿ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ವಿಷಯ ತಿಳಿದು ಸ್ಥಳಕ್ಕೆ ಹುಲ್ಲಹಳ್ಳಿ ಪೊಲೀಸ್ ಠಾಣೆಯ ಪಿಎಸ್‌ಐ ಚೇತನ್ ಕುಮಾರ್ ಭೇಟಿ ನೀಡಿ, ಪರಿಶೀಲಿಸಿ ಪ್ರಕರಣ ದಾಖಲಿಸಿಕೊಂಡು ಶವವನ್ನು ನಂಜನಗೂಡಿನ ಸಾರ್ವಜನಿಕ ಆಸ್ಪತ್ರೆಗೆ ರವಾನಿಸಲಾಗಿದೆ. ಇದೇ ವೇಳೆ ಶಾಸಕ ದರ್ಶನ್ ಧ್ರುವನಾರಾಯಣ್, ಮಾಜಿ ಶಾಸಕ ಕಳಲೆ ಕೇಶವಮೂರ್ತಿ ಭೇಟಿ ನೀಡಿ, ಕುಟುಂಬಕ್ಕೆ ಸಾಂತ್ವನ ಹೇಳಿದರು.

ಕೆ.ಆರ್.ನಗರದಲ್ಲಿ 31 ಹೊರಗುತ್ತಿಗೆ ನೌಕರರಿಗೆ ಅನ್ಯಾಯ

ಜೆಡಿಎಸ್‌ನಿಂದ ಬೃಹತ್ ಪ್ರತಿಭಟನೆ

ಕೆ.ಆರ್.ನಗರ, ಜೂ.19– ಒಂದು ಹೊತ್ತಿನ ಕೂಳಿಗಾಗಿ ಹೊರಗುತ್ತಿಗೆ ನೌಕರರಾಗಿ ಕೆಲಸ ನಿರ್ವಹಿಸುತ್ತಿರುವ 31 ಜನರನ್ನು ತೆಗೆದುಹಾಕಿ ತಮ್ಮ ಸಮುದಾಯದವರನ್ನು ನೇಮಕ ಮಾಡಿಕೊಂಡಿರುವುದು ಖಂಡನೀಯ. ಈ ಎಲ್ಲಾ 31 ಜನರನ್ನು ಮತ್ತೆ ಕೆಲಸಕ್ಕೆ ಸೇರಿಸಿಕೊಳ್ಳದಿದ್ದರೆ ತಾಲೂಕು ಮತ್ತು ಜಿಲ್ಲಾಮಟ್ಟದಲ್ಲಿ ಉಗ್ರ ಪ್ರತಿಭಟನೆ ನಡೆಸಲಾಗುವುದು ಎಂದು ಮಾಜಿ ಸಚಿವ ಸಾರಾ ಮಹೇಶ್ ಶಾಸಕ ಡಿ. ರವಿಶಂಕರ್ ಮತ್ತು ತಾಲೂಕು ಆಡಳಿತಕ್ಕೆ ಎಚ್ಚರಿಕೆ ನೀಡಿದರು.

ಪಟ್ಟಣದ ಮಿನಿ ಆಡಳಿತ ಸೌಧದ ಮುಂಭಾಗ ಜೆಡಿಎಸ್ ವತಿಯಿಂದ ಬೃಹತ್ ಪ್ರತಿಭಟನೆ ನಡೆಸಿ ಮನವಿ ಪತ್ರವನ್ನು ಅಪರ ಜಿಲ್ಲಾಧಿಕಾರಿ ಶಿವರಾಜ್ ಅವರಿಗೆ ಸಲ್ಲಿಸಿ ಮಾತನಾಡಿದ ಮಾಜಿ ಸಚಿವರು ಈ ಹಿಂದೆ ಮಾಜಿ ಸಚಿವ ಎಸ್.ನಂಜಪ್ಪನವರು, ಎಚ್.ವಿಶ್ವನಾಥ್ ಅವರು, ಮಂಚನಹಳ್ಳಿ ಮಹದೇವ್ ಅವರ ಅವಧಿಯಲ್ಲಿ ನೇಮಕಗೊಂಡಿದ್ದ ಯಾವುದೇ ಹೊರಗುತ್ತಿಗೆ ನೌಕರರನ್ನು ನನ್ನ ಆಡಳಿತ ಅವಧಿಯಲ್ಲಿ ತೆಗೆದು ಹಾಕಿರಲಿಲ್ಲ ಆದರೆ ತನಗೆ ಚುನಾವಣೆಯಲ್ಲಿ ಸಹಾಯ ಮಾಡಲಿಲ್ಲ ಎಂಬ ದುರುದ್ದೇಶದಿಂದ 31 ಜನ ಹೊರಗುತ್ತಿಗೆ ನೌಕರರನ್ನು ತೆಗೆದುಹಾಕಿ, ಇನ್ನೂ 30 ಜನರನ್ನು ತೆಗೆದುಹಾಕಲು ಪಟ್ಟಿ ಮಾಡಿಕೊಂಡಿರುವುದು ಎಷ್ಟು ಸರಿ. ಇಂತಹ ನೀಚ ರಾಜಕಾರಣವನ್ನು ರಾಜ್ಯದ ಯಾವುದೇ ತಾಲೂಕಿನಲ್ಲಿಯೂ ಮಾಡಿಲ್ಲವೆಂದು ಶಾಸಕರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಇಂತಹ ನೀಚ ರಾಜಕಾರಣವನ್ನು ಯಾರೂ ಮಾಡಿಲ್ಲ: ಸಾರಾ ಮಹೇಶ್



ಮಾಜಿ ಸಚಿವ ಸಾರಾ ಮಹೇಶ್, ವಿಧಾನಪರಿಷತ್ ಸದಸ್ಯ ಮಂಜೇಗೌಡ ಶಾಸಕ ಡಿ ರವಿಶಂಕರ್ ಮತ್ತು ತಾಲೂಕು ಆಡಳಿತದ ವಿರುದ್ಧ ಬೃಹತ್ ಪ್ರತಿಭಟನೆ ನಡೆಸುತ್ತಿರುವುದು.

ಚುನಾವಣೆ ಸಂದರ್ಭದಲ್ಲಿ ಮಾತ್ರ ರಾಜಕೀಯ: ನಾನು ಚುನಾವಣಾ ಸಮಯದಲ್ಲಿ ಮಾತ್ರ ರಾಜಕೀಯ ಮಾಡುತ್ತೇನೆ ನಂತರ ವಿಧಾನಸಭಾ ಕ್ಷೇತ್ರದ ಸಮಗ್ರ ಅಭಿವೃದ್ಧಿ ಹಾಗೂ ಜನರ ಸೇವೆಯೇ ಮುಖ್ಯವಾಗಿದ್ದು, ಬೇರೇನು ಅಲ್ಲ ಎಂದು ಹೇಳಿದ ಮಾಜಿ ಸಚಿವರು, ಜಾತಿ ರಾಜಕಾರಣ, ದ್ವೇಷ ರಾಜಕಾರಣ ನನಗೆ ಗೊತ್ತಿಲ್ಲ ಎಂದರು. ಅವರು ಸರಿಯಾದ ರೀತಿ ಯಲ್ಲಿ ಅಭಿವೃದ್ಧಿ ಪೂರಕವಾಗಿ ಕೆಲಸ ಮಾಡದಿದ್ದರೆ ಕೈಕಟ್ಟಿ ಕೂರುವ ಜಾಯಮಾನ ನನ್ನದಲ್ಲ ಎಂದು ಎಚ್ಚರಿಕೆ ನೀಡಿದರು.

ವಿಧಾನಪರಿಷತ್ ಸದಸ್ಯ ಮಂಜೇಗೌಡ ಮಾತನಾಡಿ, ಈಗ ತೆಗೆದಿರುವ ನೌಕರರನ್ನು ಪುನರ್ ನೇಮಕ ಮಾಡಿಕೊಳ್ಳದಿದ್ದರೆ 26ರಂದು ನಡೆಯುವ ಕೆಡಿಪಿ ಸಭೆಯಲ್ಲಿ ಬಾವಿಗಿಳಿದು ಹೋರಾಟ ಮಾಡುವ ಮೂಲಕ ನೊಂದವರ, ನೌಕರಿ ಕಳೆದುಕೊಂಡರುವವರ ಪರವಾಗಿ ಬೀದಿಗಿಳಿದು ಹೋರಾಟ ಮಾಡುತ್ತೇನೆ. ಇದಕ್ಕೆ ಕಾರಣರಾದ ತಾಲೂಕು ಆಡಳಿತದ ಅಧಿಕಾರಿಗಳು ವಿವಿಧ ಇಲಾಖೆಯ ಮುಖ್ಯಸ್ಥರ ವಿರುದ್ಧ ಕ್ರಮ ಕೈಗೊಳ್ಳುವವರೆಗೂ ಪ್ರತಿಭಟನೆ ನಿಲ್ಲಿಸುವುದಿಲ್ಲ ಎಂದು ಎಚ್ಚರಿಕೆ ನೀಡಿದರು.

ಕಾರ್ಯಕ್ರಮದಲ್ಲಿ ಮನವಿಯನ್ನು ಸ್ವೀಕರಿಸಿ ಮಾತನಾಡಿದ ಅಪರ ಜಿಲ್ಲಾಧಿಕಾರಿ ಶಿವರಾಜ್, ನೀವು ನೀಡಿದ ಮನವಿ ಪತ್ರವನ್ನು ಜಿಲ್ಲಾಧಿಕಾರಿಯವರಿಗೆ ನೀಡುವ ಮೂಲಕ ನಿಮ್ಮ ಅಹವಾಲುಗಳನ್ನು ತಿಳಿಸಿ ಸಮಸ್ಯೆ ಬಗೆಹರಿಸಿಕೊಡುತ್ತೇನೆ ಎಂದು ಭರವಸೆ ನೀಡಿದರು.

ಈ ಪ್ರತಿಭಟನೆಯಲ್ಲಿ ಜೆಡಿಎಸ್ ಅಧ್ಯಕ್ಷರುಗಳಾದ ಹೆಚ್.ಸಿ.ಕುಮಾರ್, ಮೆಡಿಕಲ್ ರಾಜಣ್ಣ, ಪ್ರಧಾನ ಕಾರ್ಯದರ್ಶಿ ಬೆಣಗನಹಳ್ಳಿ ಪ್ರಸನ್ನ, ಯುವ ಜೆಡಿಎಸ್ ಅಧ್ಯಕ್ಷ ಮಧು, ಜೆಡಿಎಸ್ ವಕ್ತಾರ ಕೆ.ಎಲ್. ರಮೇಶ್, ಪುರಸಭಾ ಸದಸ್ಯರಾದ ಉಮೇಶ್, ಸಂತೋಷ್ ಗೌಡ, ಜಗದೀಶ್, ಜಿಲ್ಲಾ ಪಂಚಾಯತ್ ಮಾಜಿ ಸದಸ್ಯ ಎಂ.ಟಿ. ಕುಮಾರ್, ರಾಜ್ಯ ಜೆಡಿಎಸ್ ಕಾರ್ಯದರ್ಶಿ ಚಂದ್ರಶೇಖರ್, ದಲಿತ ಮುಖಂಡರುಗಳಾದ ಹನಸೋಗೆ ನಾಗರಾಜ್, ಸಿದ್ದಾಪುರದ ಕಾಳಯ್ಯ, ರುದ್ರೇಶ, ಗ್ರಾಮ ಪಂಚಾಯತಿ ಮಾಜಿ ಅಧ್ಯಕ್ಷೆ ನಂದಿನಿ, ರಮೇಶ್, ಕೀರ್ತಿ ಬಂಡಳ್ಳಿ, ಕುಚೇಲ ಸೇರಿದಂತೆ ನೂರಾರು ಕಾರ್ಯಕರ್ತರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ಬೆಳೆ ಮೇಯಿಸಿದ ದಲಿತ ಕುಟುಂಬದ ಮೇಲೆ ಹಲ್ಲೆ

ಗಾಯಾಳುಗಳನ್ನು ಭೇಟಿ ಮಾಡಿ ಧೈರ್ಯ ತುಂಬಿದ ಶಾಸಕ ಜಿ.ಡಿ. ಹರೀಶ್‌ಗೌಡ



ಹುಣಸೂರು, ಜೂ.19– ತಾಲೂಕು ಹನಗೋಡು ಹೋಬಳಿ ಶೆಟ್ಟಹಳ್ಳಿ ಗ್ರಾಮದ ದಲಿತ ಕುಟುಂಬದ ವೆಂಕಟೇಶ ಮತ್ತು ಆತನ ಪತ್ನಿ ಪಲ್ಲವಿ ಅವರುಗಳು ದನಕರುಗಳನ್ನು ಬಿಟ್ಟು ಬೆಳೆಯನ್ನು ಮೇಯಿಸಿ ಹಾನಿ ಮಾಡಿದ ವಿಚಾರವಾಗಿ ಗುಂಪೊಂದು ದಾಳಿ ಮಾಡಿ ಹಲ್ಲೆ ನಡೆಸಿದ ಘಟನೆಯನ್ನು ಶಾಸಕ ಜಿ.ಡಿ. ಹರೀಶ್‌ಗೌಡ ಖಂಡಿಸಿದ್ದಾರೆ.

ಘಟನೆ ಸಂಬಂಧ ಹುಣಸೂರು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಶಾಸಕ ಜಿ.ಡಿ. ಹರೀಶ್‌ಗೌಡರು ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ವೆಂಕಟೇಶನನ್ನು ಭೇಟಿ ಮಾಡಿ ಆತನಿಗೆ ಮಾನಸಿಕ ಧೈರ್ಯ ತುಂಬಿ ಚಿಕಿತ್ಸಾ ವೆಚ್ಚವನ್ನು ಭರಿಸಿ ಶಸ್ತ್ರಚಿಕಿತ್ಸೆ ಮಾಡುವಂತೆ ಆಸ್ಪತ್ರೆಯ ಆಡಳಿತ ವೈದ್ಯಾಧಿಕಾರಿ ಡಾ. ಮಹದೇವ ಸ್ವಾಮಿ, ಶಸ್ತ್ರಚಿಕಿತ್ಸಾ ವೈದ್ಯಾಧಿಕಾರಿಗಳಾದ ಡಾ. ಸತೀಶ್ ಅವರಿಗೆ ಸ್ಥಳದಲ್ಲೇ ಸೂಚನೆ ನೀಡಿದರು. ಇವರ ಇತರೆ ಖರ್ಚಿಗಾಗಿ ಧನ ಸಹಾಯ ಮಾಡಿದರು.

ಘಟನೆಯನ್ನು ನಾನು ತೀವ್ರವಾಗಿ ಖಂಡಿಸುತ್ತೇನೆ. ಸಣ್ಣಪುಟ್ಟ ದನಮೇಯಿಸುವ ವಿಚಾರಗಳಿಗೂ ಈ ರೀತಿ ಮನೆಗೆ ನುಗ್ಗಿ ಮನಬಂದಂತೆ ಹಲ್ಲೆ ಮಾಡಿರುವುದು ಖಂಡನೀಯ. ಅವರ ಮೇಲೆ ಕಠಿಣ ಕಾನೂನು ಕ್ರಮ ತೆಗೆದುಕೊಳ್ಳಲಾಗುವುದು ಎಂದು ಹೇಳಿ ನೊಂದ ವೆಂಕಟೇಶ, ಆತನ ಹೆಂಡತಿ ಪಲ್ಲವಿಗೆ ನೀವು ಹೆದರುವ ಅಗತ್ಯವಿಲ್ಲ. ನಿಮ್ಮ ಜೊತೆ ನಾವಿದ್ದೇವೆ ಎಂದು ಧೈರ್ಯ ತುಂಬಿದರು.

ತಕ್ಷಣವೇ ಡಿವೈಎಸ್‌ಪಿ ಗೋಪಾಲಕೃಷ್ಣ ಅವರಿಗೆ ಫೋನ್ ಮೂಲಕ ಸಂಪರ್ಕಿಸಿ, ಹಲ್ಲೆ ಮಾಡಿರುವ ಆರೋಪಿಗಳನ್ನು ಕೂಡಲೇ ಬಂಧಿಸಿ, ಇಂತಹ ಘಟನೆಗಳು ಮರುಕಳಿಸದಂತೆ ಮುಂಜಾಗ್ರತೆ ಕ್ರಮವಹಿಸಿ, ನೊಂದವರಿಗೆ ರಕ್ಷಣೆ ನೀಡಬೇಕು ಎಂದರು.

ಈ ಸಂದರ್ಭದಲ್ಲಿ ಆಸ್ಪತ್ರೆಯ ಆಡಳಿತ ವೈದ್ಯಾಧಿಕಾರಿ ಡಾ. ಮಹದೇವಸ್ವಾಮಿ, ಡಾ. ಸತೀಶ್, ಡಾ. ವೆಂಕಟರಾವ್, ಬೆಳಕು ಸಂಸ್ಥೆಯ ನಿಂಗರಾಜ್ ಮಲ್ಲಾಡಿ, ಟಿಎಪಿಸಿಎಂಎಸ್ ಅಧ್ಯಕ್ಷ ಬಸವಲಿಂಗಯ್ಯ, ದಸಂಸದ ಬಲ್ಲೇನಹಳ್ಳಿ ಕೆಂಪರಾಜು, ಸ್ವಾಮಿ, ಸಮತಾ ಸೈನಿಕ ದಳದ ಡಿ.ಶಿವಮಾದು, ಬಸವರಾಜು, ದೇವರಾಜು ಮುಂತಾದವರು ಹಾಜರಿದ್ದರು.

ನಂಜನಗೂಡು, ಹುಲ್ಲಹಳ್ಳಿ ಗ್ರಾಮದಲ್ಲಿ 2 ಕೋಟಿ ವೆಚ್ಚದ ಸೋಪಾನಕಟ್ಟೆ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜೆ

ನಂಜನಗೂಡು, ಜೂ.19– ಸಣ್ಣ ನೀರಾವರಿ ಇಲಾಖೆಯ ಅನುದಾನದಡಿಯಲ್ಲಿ ನಗರದ ಅಯ್ಯಪ್ಪಸ್ವಾಮಿ ದೇವಾಲಯದ ಬಳಿಯ ಸ್ನಾನ ಘಟ್ಟದ ಬಳಿ 1 ಕೋಟಿ ವೆಚ್ಚದಲ್ಲಿ ಹಾಗೂ ತಾಲೂಕಿನ ಹುಲ್ಲಹಳ್ಳಿ ಗ್ರಾಮದಲ್ಲಿ 1 ಕೋಟಿ ವೆಚ್ಚದಲ್ಲಿ ಸೋಪಾನ ಕಟ್ಟೆ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಲಾಗಿದೆ.

ಶಾಸಕ ದರ್ಶನ್‌ಧ್ರುವನಾರಾಯಣ್ ಮಾತನಾಡಿ, ನಗರದ ಅಯ್ಯಪ್ಪಸ್ವಾಮಿ ದೇವಾಲಯ ಮತ್ತು ಹುಲ್ಲಹಳ್ಳಿ ಗ್ರಾಮದಲ್ಲಿ 2 ಕೋಟಿ ವೆಚ್ಚದ ಸೋಪಾನಕಟ್ಟೆ ನಿರ್ಮಾಣ ಕಾಮ ಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದರು. ಹುಲ್ಲಹಳ್ಳಿ ಗ್ರಾಮದಲ್ಲಿ ಜನಸಂಪರ್ಕ ಸಭೆ ನಡೆಸುತ್ತಿದ್ದ ವೇಳೆ ಸಾರ್ವಜನಿಕರು ಕಪಿಲಾ ನದಿಗೆ ಸೋಪಾನ ಕಟ್ಟೆ ನಿರ್ಮಿಸಿ ಕೊಡುವಂತೆ ಬೇಡಿಕೆ ಇಟ್ಟಿದ್ದರು. ಅದರಂತೆ ಸಣ್ಣ ನಿರಾವರಿ ಇಲಾಖೆ ಸಚಿವ ಬೋಸರಾಜು ಅವರಲ್ಲಿ ಮನವಿ ಮಾಡಿದ ಮೇರೆಗೆ 5 ಕೋಟಿ ಅನುದಾನವನ್ನು ಕ್ಷೇತ್ರಕ್ಕೆ ಬಿಡುಗಡೆ ಮಾಡಿಕೊಟ್ಟಿದ್ದಾರೆ. ಆ ಅನುದಾನದಲ್ಲಿ ತಲಾ 1 ಕೋಟಿ ವೆಚ್ಚದಲ್ಲಿ ನಂಜನಗೂಡು, ಹುಲ್ಲಹಳ್ಳಿ ಗ್ರಾಮದಲ್ಲಿ ಸೋಪಾನ ಕಟ್ಟೆ ನಿರ್ಮಾಣಕ್ಕೆ ಗುದ್ದಲಿಪೂಜೆ ನೆರವೇರಿಸಲಾಗಿದೆ. ತಾಲೂಕಿನ ಸಂಗಮ ಕ್ಷೇತ್ರದಲ್ಲಿ 1 ಕೋಟಿ ವೆಚ್ಚದಲ್ಲಿ ತಡೆಗೋಡೆ ನಿರ್ಮಾಣ, ಅಂಚಿಪುರ ಮತ್ತು ಹೊಸವೀಡು ಗ್ರಾಮದಲ್ಲಿ ತಲಾ 50 ಲಕ್ಷ ವೆಚ್ಚದಲ್ಲಿ ಸೋಪಾನಕಟ್ಟೆ ನಿರ್ಮಿಸಲಾಗುವುದು ಎಂದರು.



ನಂಜನಗೂಡಿನ ಅಯ್ಯಪ್ಪಸ್ವಾಮಿ ದೇವಾಲಯದ ಬಳಿ 1 ಕೋಟಿ ವೆಚ್ಚದ ಸೋಪಾನಕಟ್ಟೆ ನಿರ್ಮಾಣ ಕಾಮಗಾರಿಗೆ ಶಾಸಕ ದರ್ಶನ್‌ಧ್ರುವನಾರಾಯಣ್ ಭೂಮಿಪೂಜೆ ನೆರವೇರಿಸಿದರು.

ಹುಲ್ಲಹಳ್ಳಿ ಗ್ರಾಮದಲ್ಲಿ ನಾಯಕ, ಪರಿಶಿಷ್ಟ ಜಾತಿ ಸಮುದಾಯಗಳ ಸ್ಮಶಾನ ಗಳನ್ನು ಅಭಿವೃದ್ಧಿ ಮಾಡಿಕೊಡುವಂತೆ ಹಾಗೂ ಸ್ಮಶಾನಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಗಳನ್ನು ಅಭಿವೃದ್ಧಿ ಮಾಡಿಕೊಡುವಂತೆ ಮನವಿ ಮಾಡಿದ್ದು ಮುಂದಿನ ದಿನಗಳಲ್ಲಿ ಹಂತ ಹಂತವಾಗಿ ಅನುದಾನ ಬಿಡುಗಡೆಗೊಳಿಸಿ ಕಾಮಗಾರಿ ಪೂರ್ಣಗೊಳಿಸಲಾಗುವುದು ಎಂದರು.

ಕ್ಷೇತ್ರಕ್ಕೆ ಮುಖ್ಯಮಂತ್ರಿ ನಿಧಿಯಿಂದ 25 ಕೋಟಿ ವಿಶೇಷ ಅನುದಾನ ಬಿಡುಗಡೆ: ನಂಜನಗೂಡು ಕ್ಷೇತ್ರಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯರವರು 25 ಕೋಟಿ ರೂಗಳ ವಿಶೇಷ ಅನುದಾನವನ್ನು ಬಿಡುಗಡೆಗೊಳಿಸಿದ್ದಾರೆ. ಈ ಅನುದಾನದಲ್ಲಿ ರಸ್ತೆ ನಿರ್ಮಾಣ ಕಾಮಗಾರಿಗಳನ್ನು ನಡೆಸಲಾಗುವುದು. ಜೊತೆಗೆ ಎಸ್‌ಇಪಿ, ಟಿಎಸ್‌ಪಿ ಅನುದಾನಗಳನ್ನು ಹೊರತುಪಡಿಸಿ 37 ಗ್ರಾಮಗಳಲ್ಲಿ ಸಾಮಾನ್ಯ ವರ್ಗದ ಬೀದಿಗಳಲ್ಲೂ ಕೂಡ ಕಾಂಕ್ರೀಟ್ ರಸ್ತೆ ನಿರ್ಮಿಸಲು ಶೀಘ್ರದಲ್ಲೇ ಭೂಮಿಪೂಜೆಗಳನ್ನು ನೆರವೇರಿಸಲಾಗುವುದು ಎಂದರು.

ಇದೇ ಸಂದರ್ಭದಲ್ಲಿ ಮಾಜಿ ಶಾಸಕ ಕಳಲೆ ಕೇಶವಮೂರ್ತಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕುರಹಟ್ಟಿ ಮಹೇಶ್, ಹುಲ್ಲಹಳ್ಳಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶ್ರೀಕಂಠನಾಯಕ, ಸಿ.ಎಂ.ಶಂಕರ್, ಜಿಪಂ ಮಾಜಿ ಸದಸ್ಯ ಕೆ.ಮಾರುತಿ, ತಾಪಂ ಮಾಜಿ ಅಧ್ಯಕ್ಷ ನಾಗೇಶ್ ರಾಜ್, ಚಾಮರಾಜು, ಮುಖಂಡರಾದ ಅನ್ಸರ್‌ಅಹಮದ್, ಶಿವನಂಜನಾಯಕ, ಎಂ.ಮಾದಪ್ಪ, ಪಾಪಣ್ಣ, ಎಲಚಗೆರೆ ಗೋವಿಂದರಾಜು, ನಾಗರಾಜಯ್ಯ, ಕಳಲೆ ರಾಜೇಶ್, ಎಂ.ಎನ್.ಮಂಜುನಾಥ್, ನಗರಸಭಾ ಸದಸ್ಯರಾದ ಶ್ರೀಕಂಠಸ್ವಾಮಿ, ಗಾಯತ್ರಿ, ಪ್ರದೀಪ್, ಕೆ.ಎಂ.ಬಸವರಾಜು, ರವಿ, ಅಯ್ಯಪ್ಪಸ್ವಾಮಿ ದೇವಾಲಯದ ಗುರುಸ್ವಾಮಿ ಪಿ.ದೇವರಾಜು ಸೇರಿದಂತೆ ಹಲವಾರು ಪ್ರಮುಖರು ಇದ್ದರು.

ಬೆಳೆ ವಿಮೆ ಯೋಜನೆ ಸದುಪಯೋಗಪಡಿಸಿಕೊಳ್ಳಿ

ಹೆಚ್.ಡಿ.ಕೋಟೆ, ಜೂ.19– ರೈತರಿಗೆ ಸರ್ಕಾರ ಬೆಳೆ ವಿಮೆ ಯೋಜನೆಯನ್ನು ಜಾರಿಗೆ ತಂದಿದ್ದು, ಈ ಯೋಜನೆಯನ್ನು ರೈತರುಗಳು ಸದುಪಯೋಗ ಪಡೆದುಕೊಳ್ಳಬೇಕು ಎಂದು ಶಾಸಕ ಅನಿಲ್ ಚಿಕ್ಕಮಾದು ತಿಳಿಸಿದರು.

ಪಟ್ಟಣದ ತಾಲೂಕು ಪಂಚಾಯಿತಿ ಆವರಣದಲ್ಲಿ 2024–25ನೇ ಸಾಲಿನ ಮುಂಗಾರು ಹಂಗಾಮಿನ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬಿಮಾ (ವಿಮಾ) ಯೋಜನೆಯ ಮಾಹಿತಿ ರಥಕ್ಕೆ ಹಸಿರು ನಿಶಾನೆ ತೋರಿಸುವುದರ ಮೂಲಕ ಚಾಲನೆ ನೀಡಿ ಮಾತನಾಡಿದ ಅವರು, ಐದು ದಿನಗಳ ಕಾಲ ಹೆಚ್.ಡಿ. ಕೋಟೆ ತಾಲೂಕಿನಾದ್ಯಂತ ಪ್ರತಿ ಗ್ರಾಮ ಪಂಚಾಯಿತಿ ವ್ಯಾಪ್ತಿಗಳಲ್ಲಿ ಪ್ರಚಾರ ಮಾಡಲು ಮಾಹಿತಿ ರಥಕ್ಕೆ ಚಾಲನೆ ನೀಡಲಾಗಿದ್ದು, ಪ್ರತಿಯೊಬ್ಬ ರೈತರು ಬೆಳೆ ವಿಮೆ ಮಾಡಿಸಲು ಮುಂದಾಗಬೇಕು ಎಂದು ತಿಳಿಸಿದರು.

ಇದೆ ವೇಳೆ ಸಹಾಯಕ ಕೃಷಿ ನಿರ್ದೇಶಕ ಜಯರಾಮಯ್ಯ ಮಾತನಾಡಿ, ರೈತರಿಗೆ ಮಾಹಿತಿ ನೀಡುವ ದೃಷ್ಟಿಯಿಂದ ತಾಲೂಕಿನಾದ್ಯಂತ ಪಂಚಾಯತಿ ವ್ಯಾಪ್ತಿಗಳಲ್ಲಿ ಪ್ರಚಾರ ಮಾಹಿತಿ ರಥ ಐದು ದಿನಗಳ ಕಾಲ ಪ್ರಚಾರ ಕೈಗೊಳ್ಳಲಾಗುತ್ತದೆ. ಆದುದರಿಂದ ರೈತರುಗಳು, ಹೆಸರುಕಾಳು, ಉದ್ದು, ಎಳ್ಳು, ಬತ್ತ, ಮುಸುಕಿನ ಜೋಳ, ಹತ್ತಿ, ಇನ್ನಿತರೆ ಬೆಳೆಗಳಿಗೆ ಬೆಳೆಯ ವಿಮೆ ಮಾಡಿಸಿಕೊಳ್ಳಬೇಕು ಎಂದು ಮನವಿ ಮಾಡಿದ್ದಾರೆ. ಇದೇ ಸಂದರ್ಭದಲ್ಲಿ ತಹಶೀಲ್ದಾರ್ ಶ್ರೀನಿವಾಸ್, ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಧರಣೇಶ್, ಜಂಟಿ ಕೃಷಿ ನಿರ್ದೇಶಕರು ಡಾ.ಚಂದ್ರಶೇಖರ್, ತಾಲೂಕು ಆರೋಗ್ಯ ಅಧಿಕಾರಿ ಡಾ. ರವಿಕುಮಾರ್, ಕೃಷಿ ಅಧಿಕಾರಿಗಳಾದ ಸತೀಶ್, ವೆಂಕಟೇಶ್ ಇನ್ನು ಮುಂತಾದವರು ಇದ್ದರು.



ಹೆಚ್.ಡಿ.ಕೋಟೆ ತಾಲೂಕು ಪಂಚಾಯಿತಿ ಆವರಣದಲ್ಲಿ 2024–25 ರ ಮುಂಗಾರು ಹಂಗಾಮಿನ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ (ವಿಮಾ) ಯೋಜನೆಯ ಮಾಹಿತಿ ರಥಕ್ಕೆ ಹಸಿರು ನಿಶಾನೆ ತೋರಿಸುವುದರ ಮೂಲಕ ಚಾಲನೆ ನೀಡಿದ ಶಾಸಕ ಅನಿಲ್ ಚಿಕ್ಕಮಾದು.

ಅಕ್ರಮ ಮದ್ಯ, ಗಾಂಜಾ ಹಾವಳಿ ತಡೆಗೆ ಗ್ರಾಮಕ್ಕೆ ಪೊಲೀಸರ ಭೇಟಿ

ಹುಣಸೂರು, ಜೂ.19– ತಾಲೂಕು ಕಟ್ಟೆಮಳಲವಾಡಿ ಗ್ರಾಮದಲ್ಲಿ ನಡೆಯುತ್ತಿರುವ ಅಕ್ರಮ ಮದ್ಯ ಮಾರಾಟ, ಗಾಂಜಾ ಮಾರಾಟ ತಡೆಗಟ್ಟಲು ಪೊಲೀಸರು ಗ್ರಾಮಕ್ಕೆ ಭೇಟಿ ನೀಡಿ, ಪರಿಶೀಲಿಸುವ ಮೂಲಕ ಕಾರ್ಯಾಚರಣೆ ನಡೆಸಿದರು.

ಈ ಕಾರ್ಯಾಚರಣೆಯ ನೇತೃತ್ವವನ್ನು ಪೊಲೀಸ್ ಉಪ ಅಧೀಕ್ಷಕ ಗೋಪಾಲಕೃಷ್ಣ ವಹಿಸಿದ್ದರು. ಸುಮಾರು 20 ಪೊಲೀಸರು ಗ್ರಾಮದ ಪ್ರಮುಖ ವೃತ್ತ, ಸ್ಕೂಲ್ ಆವರಣ, ಜನನಿಬಿಡ ಪ್ರದೇಶಗಳು, ಗ್ರಾಮದ ರಸ್ತೆಯ ಬದಿಗಳಲ್ಲಿ ಕಾರ್ಯಾಚರಣೆ ನಡೆಸಿ ಸಾರ್ವಜನಿಕರಿಗೆ ಎಚ್ಚರಿಕೆ ನೀಡಿದರು.

ಗ್ರಾಮದಲ್ಲಿ ಅಕ್ರಮ ಮದ್ಯ ಮತ್ತು ಗಾಂಜಾ ಹಾವಳಿ ಕುರಿತು ಬೆಳಕು ಸೇವಾ ಸಂಸ್ಥೆಯ ಮುಖ್ಯಸ್ಥ ನಿಂಗರಾಜ್ ಮಲ್ಲಾಡಿ ಅವರು ಮೈಸೂರು ಜಿಲ್ಲಾಧಿಕಾರಿಗಳಿಗೆ ಮತ್ತು ಜಿಲ್ಲಾ ಮಟ್ಟದ ಅಬಕಾರಿ ಅಧಿಕಾರಿಗಳಿಗೆ ಹಾಗೂ ಹುಣಸೂರು ಶಾಸಕರಾದ ಜಿ.ಡಿ.ಹರೀಶ್‌ಗೌಡ ಅವರಿಗೆ ಮನವಿ ನೀಡಿದ್ದರು. ಈ ಹಿನ್ನೆಲೆಯಲ್ಲಿ ಕಾರ್ಯಾಚರಣೆ ನಡೆಸಲಾಯಿತು. ಡಿವೈಎಸ್‌ಪಿ ಗೋಪಾಲಕೃಷ್ಣ ಅವರು ಮಾತನಾಡಿ, ಮನೆಗಳಲ್ಲಿ ಮದ್ಯ ಮಾರಾಟ ನಿಲ್ಲಿಸದಿದ್ದರೆ ಮುಲಾಜಿಲ್ಲದೆ ಕಾನೂನು ಕ್ರಮ ಕೈಗೊಳ್ಳುತ್ತೇವೆಂದು ಎಚ್ಚರಿಸಿದರು. ಅಪರಿಚಿತ ವ್ಯಕ್ತಿಗಳಿಂದ ಗಾಂಜಾ ಮಾರಾಟವಾಗಿ ಯುವ ಸಮೂಹ ಜೀವನ ಹಾಳಾಗುತ್ತಿರುವ ಯುವಕರಲ್ಲಿ ಜಾಗೃತಿ ಮೂಡಿಸಿದರು. ಗಾಂಜಾ ಮಾರಾಟ ಮಾಡುವ ಯಾವುದೇ ವ್ಯಕ್ತಿಗಳ ಬಗ್ಗೆ ತಕ್ಷಣವೇ ನಮಗೆ ಸುಳಿವು ನೀಡುವಂತೆ ತಿಳಿಸಿದರು. ಕಾರ್ಯಾಚರಣೆಯಲ್ಲಿ ಗ್ರಾಮಾಂತರ ಪೊಲೀಸ್ ಠಾಣೆಯ ಮುನಿಯಪ್ಪ, ಸಬ್ ಇನ್ಸ್‌ಪೆಕ್ಟರ್‌ಗಳಾದ ರಾಮು, ಸಿದ್ದರಾಜು, ಎಎಸ್‌ಐ ನಾಗೇಗೌಡ, ಎಸ್.ಬಿ ಡ್ಯೂಟಿಯ ಮಂಜು ಇತರೆ ಪೊಲೀಸ್ ಸಿಬ್ಬಂದಿಗಳು ಹಾಜರಿದ್ದರು.

ಪೆಟ್ರೋಲ್, ಡೀಸೆಲ್ ದರ ಏರಿಕೆ ಖಂಡಿಸಿ

ಇಂದು ಬಿಜೆಪಿಯಿಂದ ಹೆದ್ದಾರಿ ತಡೆದು ಪ್ರತಿಭಟನೆ

ತಿ.ನರಸೀಪುರ, ಜೂ.19– ರಾಜ್ಯ ಸರ್ಕಾರ ಪೆಟ್ರೋಲ್ ಮತ್ತು ಡೀಸೆಲ್ ದರ ಏರಿಕೆ ಮಾಡಿರುವುದನ್ನು ಖಂಡಿಸಿ ರಾಜ್ಯಾದ್ಯಂತ ರಸ್ತೆ ತಡೆಗೆ ರಾಜ್ಯ ಬಿಜೆಪಿ ಕರೆಕೊಟ್ಟಿರುವ ಹಿನ್ನೆಲೆಯಲ್ಲಿ ವರುಣಾ ಬಿಜೆಪಿ ಘಟಕದ ವತಿಯಿಂದ ಗುರುವಾರ(ಜೂ.20) ಬೆಳಗ್ಗೆ 11 ಗಂಟೆಗೆ ಪಟ್ಟಣದ ತಿರುಮಕೂಡಲು ಬಳಿಯ ಬಿಂದಿಗೆ ಫ್ಯಾಕ್ಟರಿ ಮುಂಭಾಗ ರಾಷ್ಟ್ರೀಯ ಹೆದ್ದಾರಿ ತಡೆದು ಪ್ರತಿಭಟಿಸಲಾಗುವುದು ಎಂದು ಮೈಸೂರು ಜಿಲ್ಲಾ ಬಿಜೆಪಿ ಗ್ರಾಮಾಂತರ ಅಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ ಹೇಳಿದರು.

ಪಟ್ಟಣದಲ್ಲಿ ಕರೆಯಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರವು ಏಕಾಏಕಿ ಪೆಟ್ರೋಲ್ ಮತ್ತು ಡೀಸೆಲ್ ದರವನ್ನು ಹೆಚ್ಚಳ ಮಾಡಿ ಸಾರ್ವಜನಿಕರನ್ನು ತೊಂದರೆಗೆ ಸಿಲುಕಿಸಿದೆ.ಸಿದ್ದರಾಮಯ್ಯ ವಿರೋಧ ಪಕ್ಷದ ನಾಯಕರಾಗಿದ್ದ ವೇಳೆ ಬಿಜೆಪಿ ಸರ್ಕಾರ ಪೆಟ್ರೋಲ್ ಬೆಲೆಯನ್ನು ಕೇವಲ 1 ರೂ. ಹೆಚ್ಚಳ ಮಾಡಿದ್ದನ್ನು ವಿರೋಧಿಸಿ ಸಾಗಾಣಿಕೆ ವೆಚ್ಚ ಸೇರಿದಂತೆ ಸಾರ್ವಜನಿಕರಿಗೆ ತೀವ್ರ ತೊಂದರೆಯಾಗಿದೆ ಎಂದು ಬೊಬ್ಬೆ ಹೊಡೆದಿದ್ದರು. ಆದರೆ ಈಗ ಅವರೇ ಮುಖ್ಯಮಂತ್ರಿಯಾಗಿದ್ದಾರೆ. ಪೆಟ್ರೋಲ್‌ಗೆ 3 ರೂ. ಡೀಸೆಲ್‌ಗೆ 3.50 ರೂ. ಹೆಚ್ಚಳ ಮಾಡಿದ್ದಾರೆ. ಈಗ ಅವರಿಗೆ ಸಾರ್ವಜನಿಕರಿಗೆ ತೊಂದರೆಯಾಗುತ್ತದೆ ಎಂಬುದು ಅರಿವಿಗೆ ಬಂದಿಲ್ಲವೇ ಎಂದು ಪ್ರಶ್ನಿಸಿದರು.



ತಿ.ನರಸೀಪುರ ಪಟ್ಟಣದಲ್ಲಿ ಕರೆಯಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಬಿಜೆಪಿ ಜಿಲ್ಲಾ ಗ್ರಾಮಾಂತರ ಅಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ ಮಾತನಾಡಿದರು.

ಪೆಟ್ರೋಲ್, ಡೀಸೆಲ್ ದರ ಹೆಚ್ಚಾಗಿದೆ. ಮತ್ತೊಂದೆಡೆ ಬೆಂಗಳೂರಿನಲ್ಲಿ ನೀರಿನ ಕರ ಹೆಚ್ಚಳ ಮಾಡಲಾಗುತ್ತಿದೆ. ಸಾರ್ವಜನಿಕರು ದಿನನಿತ್ಯ ಬಳಸುವ ತರಕಾರಿ, ದಿನಸಿ ಪದಾರ್ಥಗಳ ಬೆಲೆ ಗಗನಕ್ಕೇರುತ್ತಿದೆ. ಇಷ್ಟೆಲ್ಲಾ ದರ ಏರಿಕೆ ಮಾಡಿದ್ದರೂ ಸಿದ್ದರಾಮಯ್ಯರವರು ಸರಣಿ ಟ್ವೀಟ್ ಮಾಡುವ ಮೂಲಕ ಪೆಟ್ರೋಲ್, ಡೀಸೆಲ್ ಹೆಚ್ಚಳದಿಂದ ಬರುವ ಮೂರು ಸಾವಿರ ಕೋಟಿ ರೂ.ಗಳಿಂದ ಅಭಿವೃದ್ಧಿ ಮಾಡಲು ಸಾಧ್ಯವಿಲ್ಲ ಎಂದು ಉಡಾಫೆಯಾಗಿ ಮಾತನಾಡುತ್ತಾರೆ. ಹಾಗಾಗಿ ರಾಜ್ಯ ಸರ್ಕಾರದ ಜನ ವಿರೋಧಿ ಆಡಳಿತ ಹಾಗೂ ಬೆಲೆ ಹೆಚ್ಚಳವನ್ನು ವಿರೋಧಿಸಿ ರಸ್ತೆ ತಡೆ ಮೂಲಕ ಸರ್ಕಾರಕ್ಕೆ ಎಚ್ಚರಿಕೆ ಕೊಡುವ ಕೆಲಸ ಪಕ್ಷದಿಂದ ಮಾಡಲಾಗುತ್ತಿದೆ. ಎಲ್ಲಿಯವರೆಗೆ ದರ ಇಳಿಕೆ ಮಾಡುವುದಿಲ್ಲವೋ ಅಲ್ಲಿಯವರೆಗೂ ನಿರಂತರವಾಗಿ ಪ್ರತಿಭಟನೆ ನಡೆಸಲಿದ್ದೇವೆ ಎಂದು ಎಚ್ಚರಿಕೆ ನೀಡಿದರು. ವರುಣ ವಿಧಾನಸಭಾ ಕ್ಷೇತ್ರದ ಉಸ್ತುವಾರಿ ಚಿಕ್ಕರಂಗನಾಯಕ ಮಾತನಾಡಿ, ರಾಜ್ಯದಲ್ಲಿ ಆಡಳಿತ ಯಂತ್ರದ ದುರುಪಯೋಗವಾಗಿದೆ. ಸರ್ಕಾರ ಆರ್ಥಿಕ ದಿವಾಳಿಯಾಗಿದೆ. ಭ್ರಷ್ಟಾಚಾರ ತಾಂಡವವಾಡುತ್ತಿದ್ದು, ಅಪರಾಧ ಅಟ್ಟಹಾಸ ಮೆರೆದಿದೆ. ದಲಿತರು ಹಿಂದುಳಿದವರ ಪರವಾಗಿದ್ದೇವೆ ಎಂದು ಹೇಳುವ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಪ.ಜಾತಿ.ಪಂಗಡಕ್ಕೆ ಮೀಸಲಿಟ್ಟ 187 ಕೋಟಿ ರೂ.ಗಳ ಅವ್ಯವಹಾರ ಮಾಡಿದ್ದಾರೆ ಎಂದರು.

ಮೈಸೂರು ಜಿಲ್ಲಾ ಕಾರ್ಯದರ್ಶಿ ಕೆ.ವಾಸುದೇವ್, ಮಾತನಾಡಿ, ಸೆಸ್ ಮೂಲಕ ಪೆಟ್ರೋಲ್ ಮತ್ತು ಡೀಸೆಲ್ ದರ ಹೆಚ್ಚಳ ಮಾಡಿರುವುದರಿಂದ ಹೆಚ್ಚಳವಾದ ಹಣ ನೇರವಾಗಿ ಸರ್ಕಾರದ ಖಜಾನೆ ಸೇರಲಿದೆ. ಆದರೆ ನೇರವಾಗಿ ಬೆಲೆ ಏರಿಕೆ ಮಾಡಿದ್ದಲ್ಲಿ ಬ್ಯಾರಲ್‌ಗೆ ಇಷ್ಟು ಪ್ರಮಾಣದ ಹಣ ಸಂಗ್ರಹವಾಗುತ್ತೆ ಹಾಗಾಗಿ ಸರ್ಕಾರ ಸೆಸ್ ಮೂಲಕ ಹಣ ಸಂಗ್ರಹ ಮಾಡಿ ಗ್ಯಾರಂಟಿ ಯೋಜನೆಗೆ ಉಪಯೋಗ ಮಾಡಿಕೊಳ್ಳಲು ಹೊರಟಿದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ಎಸ್‌ಟಿ ಮೋರ್ಚಾ ಅಧ್ಯಕ್ಷ ಮುದ್ದುಕೃಷ್ಣ, ಪ್ರಧಾನ ಕಾರ್ಯದರ್ಶಿ ವೆಂಕಟರಮಣ ಶೆಟ್ಟಿ, ಡೈರಿ ಅಧ್ಯಕ್ಷ ಡಿ.ಎಲ್. ಮಹದೇವಪ್ಪ ಗ್ರಾಪಂ ಸದಸ್ಯ ಕಿರಗಸೂರು ಮಹದೇವಸ್ವಾಮಿ, ಶಿವರಾಜ್, ಎಸ್‌ಟಿ ಕಾರ್ಯಕಾರಿ ಸಮಿತಿ ಸದಸ್ಯ ಪ್ರಶಾಂತ್ ಹಾಜರಿದ್ದರು.

ಶ್ರೀ ಗುಂಜಾ ನರಸಿಂಹಸ್ವಾಮಿ ದೇವಾಲಯದ ಬಳಿಯೂ ಪ್ರತಿಭಟನೆ

ತಿ.ನರಸೀಪುರ, ಜೂ.19– ಪೆಟ್ರೋಲ್ ಹಾಗೂ ಡೀಸೆಲ್ ಬೆಲೆ ಏರಿಕೆ ಮಾಡಿರುವ ರಾಜ್ಯ ಸರ್ಕಾರದ ಜನವಿರೋಧಿ ನಡೆಯನ್ನು ಖಂಡಿಸಿ ತಿ.ನರಸೀಪುರ ಬಿಜೆಪಿ ಮಂಡಲದ ವತಿಯಿಂದ ಗುರುವಾರ ಪಟ್ಟಣದ ಶ್ರೀ ಗುಂಜಾ ನರಸಿಂಹಸ್ವಾಮಿ ದೇವಸ್ಥಾನದ ಬಳಿ ರಸ್ತೆ ತಡೆ ಹಮ್ಮಿಕೊಳ್ಳಲಾಗಿದೆ ಎಂದು ಬಿಜೆಪಿ ಮುಖಂಡ ಡಾ.ರೇವಣ್ಣ ಹೇಳಿದರು.



ತಿ.ನರಸೀಪುರ ಪಟ್ಟಣದ ಬಿಜೆಪಿ ಕಚೇರಿಯಲ್ಲಿ ಕರೆಯಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಬಿಜೆಪಿ ಪರಾಜಿತ ಅಭ್ಯರ್ಥಿ ಡಾ.ರೇವಣ್ಣ ಮಾತನಾಡಿದರು.

ಪಟ್ಟಣದ ಬಿಜೆಪಿ ಕಚೇರಿಯಲ್ಲಿ ಕರೆಯಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಕಾನೂನು ವ್ಯವಸ್ಥೆ ಸಂಪೂರ್ಣವಾಗಿ ಹದಗೆಟ್ಟಿದೆ.ಸರ್ಕಾರ ಸಮರ್ಥವಾಗಿ ಆಡಳಿತ ನಡೆಸುತ್ತಿದೆಯೋ ಇಲ್ಲವೋ ಎಂಬ ಪ್ರಶ್ನೆ ಎದುರಾಗಿದೆ ಸರ್ಕಾರ ಜನರಿಗೆ ಚುನಾವಣಾ ಪೂರ್ವದಲ್ಲಿ ಕೊಟ್ಟ ಯಾವುದೇ ಭರವಸೆಗಳನ್ನು ಈಡೇರಿಸಿಲ್ಲ ಹಾಗಾಗಿ ಸರ್ಕಾರದ ಆಡಳಿತ ವೈಖರಿ ಹಾಗೂ ಜನವಿರೋಧಿ ನೀತಿಯನ್ನು ಖಂಡಿಸಿ ಬಿಜೆಪಿ ಪಕ್ಷದ ವತಿಯಿಂದ ರಸ್ತೆ ಚಳುವಳಿ ನಡೆಸಿ ಸರ್ಕಾರವನ್ನು ಎಚ್ಚರಿಸುವ ಕೆಲಸ ಮಾಡಲಿದ್ದೇವೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಬಿಜೆಪಿ ಕ್ಷೇತ್ರಾಧ್ಯಕ್ಷ ಶಿವಕುಮಾರ್(ಸತ್ಯಪ್ಪ), ಕಾರ್ಯದರ್ಶಿ ರಾಮಚಂದ್ರ, ಎಸ್ ಸಿ ಮೋರ್ಚಾ ಅಧ್ಯಕ್ಷ ಅನಿಲ್, ಪುರಸಭೆ ಸದಸ್ಯ ಎಸ್.ಕೆ. ಕಿರಣ್, ಎನ್.ಲೋಕೇಶ್, ಮಾಜಿ ಯುವ ಮೋರ್ಚಾ ಅಧ್ಯಕ್ಷ ಶಿವಕುಮಾರ್, ಬಿಜೆಪಿ ಮುಖಂಡ ರಾಜಶೇಖರ್, ಕುರುಬೂರು ಶಿವಶಂಕರ್, ಸೋಸಲೆ ಶಕ್ತಿ ಕೇಂದ್ರದ ಅಧ್ಯಕ್ಷ ಲಕ್ಷ್ಮಣ, ಪೂಜಿತ್ ಮೆಡಿಕಲ್ ಕುಮಾರ್, ಹೋಟೆಲ್ ನಾಗರಾಜು, ಹೊಸೂರುಂಡಿ ತೊಂಟೇಶ್, ತಲಕಾಡು ಶಕ್ತಿ ಕೇಂದ್ರದ ಅಧ್ಯಕ್ಷ ಮರಿಸ್ವಾಮಿ, ಸೋಮಶೇಖರ್ ಹಾಜರಿದ್ದರು.

ಪಿರಿಯಾಪಟ್ಟಣದಲ್ಲೂ ಬಿಜೆಪಿ ಪ್ರತಿಭಟನೆ

ಪಿರಿಯಾಪಟ್ಟಣ, ಜೂ.19– ಕೋತಿ ಮೊಸರನ್ನ ತಿಂದು ಮೇಕೆ ಬಾಯಿಗೆ ಒರೆಸಿದಂತೆ, ರಾಜ್ಯ ಸರ್ಕಾರ ಮೊದಲಿನಿಂದಲೂ ಪೆಟ್ರೋಲ್, ಡೀಸೆಲ್ ಸೇರಿದಂತೆ ದಿನನಿತ್ಯ ಬಳಕೆಯ ಪದಾರ್ಥಗಳ ದರ ಹೆಚ್ಚಳ ಮಾಡಿ ಜನತೆಗೆ ಕೇಂದ್ರದತ್ತ ಬೆಟ್ಟು ಮಾಡಿ ತೋರಿಸುತ್ತಾ ಜನತೆಯನ್ನು ದಿಕ್ಕು ತಪ್ಪಿಸುವ ಕೆಲಸ ಮಾಡುತ್ತಿದೆ ಎಂದು ತಾಲೂಕು ಬಿಜೆಪಿ ಅಧ್ಯಕ್ಷ ರಾಜೇಂದ್ರ ವಾಗ್ದಾಳಿ ನಡೆಸಿ, ಈ ಸಂಬಂಧ ನಾಳೆ (ಗುರುವಾರ) ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದರು.

ರಾಜ್ಯ ಸರ್ಕಾರ ಪೆಟ್ರೋಲ್ ಮತ್ತು ಡೀಸೆಲ್ ದರವನ್ನು ಏರಿಕೆ ಮಾಡಿದ್ದು ಜನಸಾಮಾನ್ಯರ ದುಸ್ಥಿತಿ ಹೇಳತಿರದ್ದಾಗಿದೆ. ಇದರಿಂದ ಮತ್ತೆ ದಿನಬಳಕೆಯ ವಸ್ತುಗಳು ಏರಲಿದ್ದು, ಸರ್ಕಾರ ಬಿಟ್ಟಿಭಾಗ್ಯ ಯೋಜನೆಯನ್ನು ನೀಡಿ ಸರ್ಕಾರದ ಖಜಾನೆ ಬರಿದಾಗಿದೆ. ಇದನ್ನು ತುಂಬಿಸಿ ಮತ್ತೆ ತನ್ನ ವರ್ಚಸ್ಸು ಹೆಚ್ಚಿಸಿಕೊಳ್ಳಲು ಈ ರೀತಿ ಜನಸಾಮಾನ್ಯರ ಜೇಬಿಗೆ ಕತ್ತರಿ ಹಾಕುತ್ತಿರುವುದನ್ನು ಬಿಜೆಪಿ ಪಕ್ಷ ಖಂಡಿಸುತ್ತದೆ ಎಂದು ಅವರು ತಿಳಿಸಿದರು. ಇದನ್ನು ಖಂಡಿಸಿ ಗುರುವಾರ ಮಧ್ಯಾಹ್ನ 11 ಗಂಟೆಗೆ ಪಟ್ಟಣದ ಬಸವೇಶ್ವರ ಸರ್ಕಲ್‌ನಲ್ಲಿ ಮಾನವ ಸರಪಳಿ ಮೂಲಕ ರಸ್ತೆ ತಡೆ ಮಾಡಿ ರಾಜ್ಯ ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸಲಾಗುವುದು. ತಾಲೂಕಿನ ಎಲ್ಲೆಡೆಯಿಂದ ಬಿಜೆಪಿ ಹಾಗೂ ಜೆಡಿಎಸ್ ಕಾರ್ಯಕರ್ತರು ಆಗಮಿಸಿ ಪ್ರತಿಭಟನೆಯನ್ನು ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದ್ದಾರೆ.

ಮೈಸೂರು ಮಿತ್ರ ಗುರುವಾರ 20 ಜೂನ್ 2024

ಅನೀಮಿಯಾ ಮುಕ್ತ ಕರ್ನಾಟಕ ನಮ್ಮೆಲ್ಲರ ಗುರಿಯಾಗಬೇಕು

●ರಾಜ್ಯ ಮಟ್ಟದ ರಾಷ್ಟ್ರೀಯ ಸಿಕಲ್ ಸೆಲ್ ಅನೀಮಿಯಾ ನಿರ್ಮೂಲನಾ ಕಾರ್ಯಕ್ರಮದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಸಲಹೆ ●ಹೆಚ್ಚಾಗಿ ಬುಡಕಟ್ಟು ಸಮುದಾಯ ಬಾಧಿಸುವ ಜಾಡ್ಯ ; 2047ರ ವೇಳೆಗೆ ಭಾರತ ಇದರಿಂದ ಮುಕ್ತವಾಗಲು ರಾಷ್ಟ್ರೀಯ ಅಭಿಯಾನ

ಮೈಸೂರು,ಜೂ.19(ಎಂಟಿವೈ)– ರಾಜ್ಯದ ವಿವಿಧ ಜಿಲ್ಲೆಗಳ ಹಾಡಿಗಳಲ್ಲಿ ವಾಸಿಸುತ್ತಿರುವ ಬುಡಕಟ್ಟು ಸಮುದಾಯದ ಜನರಲ್ಲಿ ಕಾಣಿಸಿಕೊಳ್ಳುತ್ತಿರುವ ಅನುವಂಶೀಯ ಖಾಯಿಲೆ 'ಸಿಕಲ್ ಸೆಲ್ ಅನೀಮಿಯಾ' ತೊಡೆದುಹಾಕಲು 'ಪ್ರಾಜೆಕ್ಟ್ ಚಂದನ' ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದ್ದು, ಮುಂದಿನ ಎರಡು ವರ್ಷದಲ್ಲಿ 2.56 ಲಕ್ಷ ಬುಡಕಟ್ಟು ಜನರನ್ನು ತಪಾಸಣೆ(ಸ್ಕ್ರೀನಿಂಗ್) ನಡೆಸುವ ಗುರಿ ಹೊಂದಲಾಗಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ.

ಮೈಸೂರಿನ ಜಿಪಂ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಆಯೋಜಿಸಿದ್ದ ರಾಜ್ಯ ಮಟ್ಟದ ರಾಷ್ಟ್ರೀಯ ಸಿಕಲ್ ಸೆಲ್ ಅನೀಮಿಯಾ ನಿರ್ಮೂಲನಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಅನುವಂಶೀಯ ಖಾಯಿಲೆಯಾಗಿರುವ ಸಿಕಲ್ ಸೆಲ್ ಅನೀಮಿಯಾ ಖಾಯಿಲೆ ಕರ್ನಾಟಕ ಸೇರಿದಂತೆ ದೇಶದ 17 ರಾಜ್ಯಗಳಲ್ಲಿ ಕಂಡು ಬರುತ್ತಿದೆ. ಈ ಖಾಯಿಲೆ ಕಾಡು ಹಾಗೂ ಕಾಡಂಚಿನ ಹಾಡಿಗಳಲ್ಲಿ ವಾಸಿಸುವ ಬುಡಕಟ್ಟು ಸಮುದಾಯ ಜನರಲ್ಲೇ ಹೆಚ್ಚಾಗಿ ಕಂಡುಬರುತ್ತಿದ್ದು, 2047ರ ವೇಳೆಗೆ ಭಾರತವನ್ನು ಸಿಕಲ್ ಸೆಲ್ ಅನೀಮಿಯಾ ಮುಕ್ತದೇಶವಾಗಿಸಲು ರಾಷ್ಟ್ರೀಯ ಅಭಿಯಾನ ನಡೆಸಲಾಗುತ್ತಿದೆ.

ಸಿಕಲ್ ಸೆಲ್ ಮುಕ್ತ ಕರ್ನಾಟಕ ಮಾಡುವ ನಿಟ್ಟಿನಲ್ಲಿ ಕಳೆದ ವರ್ಷ ಸ್ಕ್ರೀನಿಂಗ್ ಅಭಿಯಾನ ಆರಂಭಿಸಲಾಗಿತ್ತು. ರಾಜ್ಯದಲ್ಲಿ ಬುಡಕಟ್ಟು ಸಮುದಾಯ ವಾಸಿಸುವ ಮೈಸೂರು, ಚಾಮರಾಜನಗರ, ಕೊಡಗು, ಚಿಕ್ಕಮಗಳೂರು, ಉಡುಪಿ ಹಾಗೂ ಉತ್ತರ ಕರ್ನಾಟಕದಲ್ಲಿ ಸ್ಕ್ರೀನಿಂಗ್ ನಡೆಸಲಾಗಿದ್ದು, ಅದರಲ್ಲಿ ಕೊಡಗಿನಲ್ಲಿ 31, ಮೈಸೂರಿನಲ್ಲಿ 96, ಚಾಮರಾಜನಗರದಲ್ಲಿ 75 ಮಂದಿಗೆ ಈ ಖಾಯಿಲೆ ಇರುವುದು ದೃಢಪಟ್ಟಿದೆ ಎಂದು ತಿಳಿಸಿದರು.

ರಾಜ್ಯದ 7 ಜಿಲ್ಲೆಗಳಲ್ಲಿ ಬುಡಕಟ್ಟು ಸಮುದಾಯದ 3,52,187 ಜನರು ವಾಸಿಸುತ್ತಿದ್ದು, ಅವರಲ್ಲಿ ಈಗಾಗಲೇ 55,503 ಜನರನ್ನು ಸ್ಕ್ರೀನಿಂಗ್ ಮಾಡಲಾಗಿದೆ. ಉಳಿದ 2.56 ಲಕ್ಷ ಜನರನ್ನು ಮುಂದಿನ ಎರಡು ವರ್ಷದೊಳಗೆ ಪರೀಕ್ಷಿಸುವ ಗುರಿ ಹೊಂದಲಾಗಿದೆ. ಇದಕ್ಕಾಗಿ ರಾಜ್ಯದಲ್ಲಿ 'ಪ್ರಾಜೆಕ್ಟ್ ಚಂದನ' ಕಾರ್ಯಕ್ರಮವನ್ನು ಜಾರಿಗೊಳಿಸಲಾಗಿದೆ. ಈ ಕಾರ್ಯಕ್ರಮದ ಮೂಲಕ ಆರೋಗ್ಯ ಕಾರ್ಯಕರ್ತರು ಬುಡಕಟ್ಟು ಸಮುದಾಯ ಜನರ ಮನೆ ಮನೆಗೆ ತೆರಳಿ ತಪಾಸಣೆ ನಡೆಸಲಿದ್ದಾರೆ. 2047ಕ್ಕೆ ಸಿಕಲ್ ಸೆಲ್ ಅನೀಮಿಯಾ ಮುಕ್ತ ಭಾರತ ಮಾಡುವ ಗುರಿ ಹೊಂದಲಾಗಿದೆಯಾದರೂ, ಪ್ರಾಜೆಕ್ಟ್ ಚಂದನದ ಮೂಲಕ ಇನ್ನಷ್ಟು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಿ 2–3 ವರ್ಷದಲ್ಲಿ ಸಿಕಲ್ ಸೆಲ್ ಮುಕ್ತಗೊಳಿಸುವ ಕಾರ್ಯಕ್ಕೆ ಪಣತೊಡುವಂತೆ ಸಲಹೆ ನೀಡಿದರು.

ಉತ್ತಮ ಸಮಾಜ ನಿರ್ಮಾಣಕ್ಕೆ ಆರೋಗ್ಯ ಮತ್ತು ಶಿಕ್ಷಣ ಕ್ಷೇತ್ರಕ್ಕೆ ಹೆಚ್ಚಿನ ಆದ್ಯತೆ ನೀಡಬೇಕಾಗಿದೆ. ಅದಕ್ಕಾಗಿ ರಾಜ್ಯ ಸರ್ಕಾರ ಬದ್ಧವಾಗಿದ್ದು ಜನರಿಗೆ ಉತ್ತಮ ಆರೋಗ್ಯ ಹಾಗೂ ಉತ್ತಮ ಶಿಕ್ಷಣ ನೀಡಲು ಅಗತ್ಯ ಕ್ರಮ ಕೈಗೊಂಡಿದೆ. ಅದೇ ಕಾರಣಕ್ಕೆ ಸಿಕಲ್ ಸೆಲ್ ಅನೀಮಿಯಾ ಮುಕ್ತಗೊಳಿಸುವ ಪಣ ತೊಡಲಾಗಿದೆ. ಕಳೆದ ವರ್ಷ ಆರಂಭಿಸಿದ್ದ ಹೆಣ್ಣು ಮಕ್ಕಳಲ್ಲಿನ ಅನೀಮಿಯಾ ತಪಾಸಣಾ ಅಭಿಯಾನವನ್ನು ಮತ್ತೆ ಮುಂದುವರೆಸಲಾಗುತ್ತಿದೆ ಎಂದು ತಿಳಿಸಿದರು.

ಇದೇ ವೇಳೆ ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಮಾತನಾಡಿ, ಚಾಮರಾಜನಗರ, ಕೊಡಗು ಹಾಗೂ ಮೈಸೂರು ಜಿಲ್ಲೆಗಳಲ್ಲಿ ಸಿಕಲ್ ಸೆಲ್ ಅನೀಮಿಯಾ ಕಂಡುಬಂದಿದೆ. ಇದನ್ನು ನಿರ್ಮೂಲನೆ ಮಾಡಲು ಹೆಚ್ಚಾಗಿ ಪರೀಕ್ಷೆಗಳನ್ನು ಮಾಡಿ ಚಿಕಿತ್ಸೆ ನೀಡಬೇಕಿದೆ. ಈ ನಿಟ್ಟಿನಲ್ಲಿ ಆರೋಗ್ಯ ಇಲಾಖೆ ಕಾರ್ಯನಿರ್ವಹಿಸುತ್ತಿದೆ. ನಮ್ಮ ಕ್ಷೇತ್ರದ ಹಾಡಿಗಳಲ್ಲಿ ಸಿಕಲ್ ಸೆಲ್ ಅನೀಮಿಯಾ ಕಾಣಿಸಿಕೊಂಡಿದೆ. ಇದನ್ನು ನಿಯಂತ್ರಿಸಲು ಅಗತ್ಯ ಸಹಕಾರ ನೀಡುವುದಾಗಿ ಭರವಸೆ ನೀಡಿದರು.

ಜಿಲ್ಲಾಧಿಕಾರಿ ಡಾ. ಕೆ.ವಿ.ರಾಜೇಂದ್ರ ಮಾತನಾಡಿ, ಬುಡಕಟ್ಟು ಜನಾಂಗದಲ್ಲಿ ಹೆಚ್ಚಾಗಿ ಸಿಕಲ್ ಸೆಲ್ ಅನೀಮಿಯಾ ಕಂಡುಬರುತ್ತಿದೆ. ಅರಣ್ಯ ಪ್ರದೇಶದ ಹಾಡಿಗಳಲ್ಲಿ ವಾಸಿಸುತ್ತಿರುವವರಲ್ಲಿ ಮಲೇರಿಯಾ, ಚಿಕನ್‌ಗುನ್ಯಾ ಹೆಚ್ಚಾಗಿ ಕಂಡುಬರುತ್ತದೆ. ಬುಡಕಟ್ಟು ಜನರು ಮದುವೆ ಆಗುವಾಗ ಜೆನೆಟಿಕ್ಸ್ ಟೆಸ್ಟ್ ಮಾಡಿಸಿ ಮದುವೆ ಆಗುವುದು ಉತ್ತಮ. ಸಿಕಲ್ ಸೆಲ್ ಅನೀಮಿಯಾ ಲಕ್ಷಣ ಕಂಡು ಬರುವವರನ್ನು ವಿವಾಹವಾದರೆ, ಅದು ಇನ್ನಷ್ಟು ಜನರಿಗೆ ಹರಡುತ್ತದೆ. ಈ ಹಿನ್ನೆಲೆಯಲ್ಲಿ ಸಮುದಾಯದ ಮುಖಂಡರು ಜಾಗೃತಿ ವಹಿಸಬೇಕು. ಸಿಕಲ್ ಸೆಲ್ ಅನೀಮಿಯಾ ಇರುವವರು ಪೌಷ್ಟಿಕ ಆಹಾರ ಸೇವನೆ, ಸೂಕ್ತ ಚಿಕಿತ್ಸೆ ಪಡೆದುಕೊಳ್ಳುವುದು, ಆರೋಗ್ಯ ಕಾರ್ಯಕರ್ತರು ನೀಡುವ ಮಾರ್ಗದರ್ಶನ ಪಡೆದು ಆರೋಗ್ಯ ಸುಧಾರಿಸಿಕೊಳ್ಳಬೇಕು ಮಾಡಬೇಕು ಎಂದರು.

ಚಾಮರಾಜ ವಿಧಾನಸಭಾ ಕ್ಷೇತ್ರದ ಶಾಸಕ ಕೆ. ಹರೀಶ್‌ಗೌಡ ಮಾತನಾಡಿ, ಮೈಸೂರು ಜಿಲ್ಲಾ ಆಸ್ಪತ್ರೆ ಉತ್ತಮ ಮಟ್ಟದ ಚಿಕಿತ್ಸೆ ನೀಡುತ್ತಿದೆ. ಒಂದು ವರ್ಷದ ಹಿಂದೆ ಜಿಲ್ಲಾ ಆಸ್ಪತ್ರೆಯಲ್ಲಿ ಮಾಸಿಕ 30 ರಿಂದ 40 ಹೆರಿಗೆಗಳು ಆಗುತ್ತಿದ್ದವು. ಉತ್ತಮ ಸೌಲಭ್ಯಗಳನ್ನು ಸಚಿವರು ಒದಗಿಸಿದ್ದರಿಂದ ಇಂದು ಮಾಸಿಕ 250 ರವರೆಗೆ ಹೆರಿಗೆಗಳು ಆಗುತ್ತಿವೆ. ಸಿಕಲ್ ಸೆಲ್ ಅನೀಮಿಯಾ ನಿರ್ಮೂಲನೆ ಮಾಡಲು ಎಲ್ಲರೂ ಸಹಕರಿಸಿ ಎಂದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಅಭಿಯಾನದ ನಿರ್ದೇಶಕ ಡಾ. ವೈ.ನವೀನ್ ಭಟ್ ಪ್ರಾಸ್ತಾವಿಕವಾಗಿ ಮಾತನಾಡಿದರು.

ಇದೇ ವೇಳೆ ಹೆಚ್.ಡಿ.ಕೋಟೆ ತಾಲೂಕಿನ ವಿವಿಧ ಹಾಡಿಗಳಿಂದ ಕರೆತರಲಾಗಿದ್ದ ಸಿಕಲ್ ಸೆಲ್ ಅನೀಮಿಯಾ ಕಾಯಿಲೆಗೆ ತುತ್ತಾಗಿರುವ ಮಕ್ಕಳಿಗೆ ಜೆನಿಟಿಕ್ ಕಾರ್ಡ್‌ಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಪಂ ಸಿಇಒ ಕೆ.ಎಂ. ಗಾಯತ್ರಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಯೋಜನಾ ನಿರ್ದೇಶಕ ಡಾ.ಜಿ. ಎನ್.ಶ್ರೀನಿವಾಸ್, ರಾಜ್ಯ ರಕ್ತಕೋಶ ನಿಧಿಯ ಉಪ ನಿರ್ದೇಶಕರಾದ ಡಾ.ಎನ್.ಶಕೀಲಾ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ವಿಭಾಗೀಯ ಉಪ ನಿರ್ದೇಶಕರಾದ ಡಾ.ಕೆ.ಹೆಚ್.ಪ್ರಸಾದ್, ಡಾ.ಮಲ್ಲಿಕಾ, ಬಿಇಎಲ್ ಜನರಲ್ ಮ್ಯಾನೇಜರ್ ಆರ್.ಎನ್.ದುಬೆ, ಸಿಜಿಎಂ ಬಾಲಕೃಷ್ಣ ನಾಯಕ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಪಿ.ಸಿ.ಕುಮಾರಸ್ವಾಮಿ ಹಾಗೂ ಇನ್ನಿತರರು ಉಪಸ್ಥಿತರಿದ್ದರು.



ಬುಡಕಟ್ಟು ಸಮುದಾಯದಲ್ಲಿ ಕಂಡು ಬರುವ ಅನುವಂಶೀಯ ಖಾಯಿಲೆ ಸಿಕಲ್ ಸೆಲ್ ಅನೀಮಿಯಾ ಪತ್ತೆ ಮಾಡಲು ಭಾರತೀಯ ವಿಜ್ಞಾನ ಸಂಸ್ಥೆ ಅಭಿವೃದ್ಧಿಪಡಿಸಿರುವ ನೂತನ ಹೆಚ್‌ಪಿಎಲ್‌ಸಿ ಯಂತ್ರವನ್ನು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ಹೆಚ್.ಡಿ.ಕೋಟೆ ತಾಲೂಕು ಆರೋಗ್ಯಾಧಿಕಾರಿ ಡಾ.ಟಿ.ರವಿಕುಮಾರ್, ಡಿಹೆಚ್‌ಒ ಡಾ.ಪಿ.ಸಿ. ಕುಮಾರಸ್ವಾಮಿ ಅವರಿಗೆ ಹಸ್ತಾಂತರಿಸಿದರು. ಚಿತ್ರದಲ್ಲಿ ಜಿಪಂ ಸಿಇಒ ಕೆ.ಎಂ.ಗಾಯತ್ರಿ ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಶಾಸಕ ಕೆ.ಹರೀಶ್ ಗೌಡ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಅಭಿಯಾನದ ನಿರ್ದೇಶಕ ಡಾ. ವೈ.ನವೀನ್ ಭಟ್ ಅವರನ್ನು ಕಾಣಬಹುದು.

ಹೆಚ್‌ಪಿಎಲ್‌ಸಿ ಸಾಧನ ಬಳಕೆ

ರಾಜ್ಯದಲ್ಲಿ ಸಿಕಲ್ ಸೆಲ್ ಅನೀಮಿಯಾ ಮುಕ್ತಗೊಳಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಹೊಸದಾಗಿ ಜಾರಿಗೊಳಿಸಿರುವ 'ಪ್ರಾಜೆಕ್ಟ್ ಚಂದನ' ಕಾರ್ಯಕ್ರಮದಲ್ಲಿ ಬಳಸಲು ನೂತನ ಸಾಧನವೊಂದನ್ನು ಬಳಸಲಾಗುತ್ತಿದೆ. ಸಿಕಲ್ ಸೆಲ್ ಅನೀಮಿಯಾವನ್ನು ಸುಲಭ ಹಾಗೂ ಶೀಘ್ರವಾಗಿ ಪತ್ತೆ ಮಾಡಲು ಭಾರತೀಯ ವಿಜ್ಞಾನ ಸಂಸ್ಥೆ(ಇಂಡಿಯನ್ ಇನ್ಸ್‌ಟ್ಯೂಟ್ ಆಫ್ ಸೈನ್ಸ್)ಯ ವಿಜ್ಞಾನಿ ಪ್ರೊ.ಸಾಯಿ ಶಿವಮೂರ್ತಿ ಅಭಿವೃದ್ಧಿಪಡಿಸಿರುವ ಹೆಚ್‌ಪಿಎಲ್‌ಸಿ ಸಾಧನವನ್ನು ಇಂಡಿಯನ್ ಆಯಿಲ್ ಕಾರ್ಪೋರೇಷನ್ ಸಿಎಸ್‌ಆರ್ ಅನುದಾನದಲ್ಲಿ 18 ಕೋಟಿ ರೂ. ವಿನಿಯೋಗಿಸಿ ಆರೋಗ್ಯ ಇಲಾಖೆಗೆ ನೀಡುತ್ತಿದೆ. ಇದರಿಂದ ಸಿಕಲ್ ಸೆಲ್ ಅನೀಮಿಯಾವನ್ನು ಸರಳ ಹಾಗೂ ತ್ವರಿತಗತಿಯಲ್ಲಿ ಪತ್ತೆ ಮಾಡಲು ಸಹಕಾರಿಯಾಗಿದೆ. ಸ್ಕ್ರೀನಿಂಗ್ ಬೇಗ ಮಾಡುವುದರಿಂದ ಸಮಸ್ಯೆ ಪತ್ತೆ ಮಾಡಿ ಸೂಕ್ತ ಚಿಕಿತ್ಸೆ ನೀಡಲು ಸಹಕಾರಿಯಾಗಲಿದೆ ಎಂದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	**(ದೂ: 2521923)**
ಹರೋಂ ಹರ (ತೆ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	**(ದೂ: 2422871)**
ಮಹಾರಾಜ (ತ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	**(ದೂ: 2497199)**
ಚಂದು ಚಾಂಪಿಯನ್ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	**(ಮೊ:9900820093)**
ಮಹಾರಾಜ (ತ)	4 ಪ್ರದರ್ಶನಗಳು
ಗಾಯಿತ್ರಿ	
ಜಡ್ಜ್‌ಮೆಂಟ್ (ಕ)	4 ಪ್ರದರ್ಶನಗಳು
ರಾಜಕಮಲ್	
ಮಹಾರಾಜ (ತ)	4 ಪ್ರದರ್ಶನಗಳು
ಸಂಗಂ	
ಕೋಟಿ (ಕ)	4 ಪ್ರದರ್ಶನಗಳು
ಲಿಡೋ	
ಕರಟಕ ದಮನಕ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಮಹಾರಾಜ (ತ)	4 ಪ್ರದರ್ಶನಗಳು
ಪ್ರಭಾ	
ಅಮೀನ (ಹಿಂ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಇನ್‌ಸೈಟ್ ಔಟ್ 2(3ಡಿ) (ಇಂ): ಬೆ.10.15ಕ್ಕೆ, ಮ.12.15ಕ್ಕೆ, ಮ.2.15ಕ್ಕೆ, ಚಂದು ಚಾಂಪಿಯನ್ (ಹಿಂ): ಸಂ.4.15ಕ್ಕೆ, ರಾ.7.05ಕ್ಕೆ, ರಾ.10.05ಕ್ಕೆ.
ಸ್ಕ್ರೀನ್ 2	ಲವ್ ಲಿ (ಕ): ಬೆ.11ಕ್ಕೆ, ರಾ.7ಕ್ಕೆ, ಮುಂಜ್ಯಾ (ಹಿಂ): ಮ.2.15ಕ್ಕೆ, ಶಿವಮ್ಮ ಯರೆಹಂಚಿನಾಳ (ಕ): ಸಂ.4.40ಕ್ಕೆ, ಹರೋಂ ಹರ (ತೆ): ರಾ.10.15ಕ್ಕೆ.
ಸ್ಕ್ರೀನ್ 3	ಮುಂಜ್ಯಾ (ಹಿಂ): ಬೆ.10.40ಕ್ಕೆ, ಮಹಾರಾಜ (ತ): ಮ.1.15ಕ್ಕೆ, ಸಂ.4.20ಕ್ಕೆ, ಚೆಫ್ ಚಿದಂಬರ (ಕ): ರಾ.7.20ಕ್ಕೆ, ಡಿಎನ್‌ಎ (ಮ): ರಾ.9.50ಕ್ಕೆ.
ಸ್ಕ್ರೀನ್ 4	ಕೋಟಿ (ಕ): ಬೆ.10.10ಕ್ಕೆ, ಮ.1.25ಕ್ಕೆ, ಸಂ.6.45ಕ್ಕೆ, ರಾ.10ಕ್ಕೆ, ಇನ್‌ಸೈಟ್ ಔಟ್ (3ಡಿ)(ಇಂ): ಸಂ.4.40ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಇನ್‌ಸೈಟ್ ಔಟ್ (3ಡಿ)(ಹಿಂ): ಬೆ.11ಕ್ಕೆ, ಇನ್‌ಸೈಟ್ ಔಟ್ (3ಡಿ)(ಇಂ): ಮ.1.20ಕ್ಕೆ, ಸಂ.4.20ಕ್ಕೆ, ಸಂ.6.40ಕ್ಕೆ, ಮುಂಜ್ಯಾ (ಹಿಂ): ರಾ.9ಕ್ಕೆ.
ಸ್ಕ್ರೀನ್ 2	ಮುಂಜ್ಯಾ (ಹಿಂ): ಬೆ.10ಕ್ಕೆ, ರಾ.7.35ಕ್ಕೆ, ರಾಕ್‌ಸ್ಟಾರ್ (ಹಿಂ): ಮ.12.45ಕ್ಕೆ, ಕೋಟಿ (ಕ): ಸಂ.4.05ಕ್ಕೆ, ರಾ.10.20ಕ್ಕೆ,
ಸ್ಕ್ರೀನ್ 3	ಚಂದು ಚಾಂಪಿಯನ್ (ಹಿಂ): ಬೆ.9.50ಕ್ಕೆ, ಮ.1ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ.
ಸ್ಕ್ರೀನ್ 4	ಕೋಟಿ (ಕ): ಬೆ.10.05ಕ್ಕೆ, ಮಹಾರಾಜ (ತ): ಮ.1.35ಕ್ಕೆ, ರಾ.7.05ಕ್ಕೆ, ಶಿವಮ್ಮ ಹರೆಹಂಚಿನಾಳ (ಕ): ಸಂ.4.40ಕ್ಕೆ, ಜಿಆರ್‌ಆರ್‌ಆರ್ (ಮ): ರಾ.10.10ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಚೆಫ್ ಚಿದಂಬರ (ಕ): ಬೆ.11.15ಕ್ಕೆ, ಶಿವಮ್ಮ ಹರೆಹಂಚಿನಾಳ (ಕ): ಮ.1.30ಕ್ಕೆ, ಮ್ಯೂಸಿಕ್ ಶಾಪ್ ಮೂರ್ತಿ (ತೆ): ಮ.3.45ಕ್ಕೆ, ಹರೋಂ ಹರ (ತೆ): ಸಂ.6.15ಕ್ಕೆ, ಮಹಾರಾಜ (ತ): ರಾ.9.15ಕ್ಕೆ.
ಸ್ಕ್ರೀನ್ 2	ಇನ್‌ಸೈಟ್ ಔಟ್ (3ಡಿ)(ಇಂ): ಬೆ.11ಕ್ಕೆ, ಕೋಟಿ (ಕ): ಮ.1ಕ್ಕೆ, ಸಂ.4.15ಕ್ಕೆ, ರಾ.7.30ಕ್ಕೆ.
ಸ್ಕ್ರೀನ್ 3	ಲವ್ ಲಿ (ಕ): ಮ.1ಕ್ಕೆ, ಮಹಾರಾಜ (ತ): ಸಂ.4.05ಕ್ಕೆ, ಸಂ.6.45ಕ್ಕೆ, ಇನ್‌ಸೈಟ್ ಔಟ್ (3ಡಿ)(ಇಂ): ರಾ.9.30ಕ್ಕೆ.
ಸ್ಕ್ರೀನ್ 4	ಕೋಟಿ (ಕ): ಬೆ.10.40ಕ್ಕೆ, ರಾ.9.20ಕ್ಕೆ, ಚೆಫ್ ಚಿದಂಬರ (ಕ): ಮ.1.55ಕ್ಕೆ, ಲವ್ ಲಿ (ಕ): ಸಂ.4.10ಕ್ಕೆ, ಇನ್‌ಸೈಟ್ ಔಟ್ (3ಡಿ)(ಇಂ): ರಾ.7.20ಕ್ಕೆ.

ಪಿವಿಆರ್ ಸಿನಿಮಾಸ್
PVR CINEMAS
ನೆಕ್ಸಸ್ ಸೆಂಟರ್‌ಸಿಟಿ ಮಾಲ್,
2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಸ್ವಚ್ಛತೆ ಕಾಪಾಡಿಕೊಳ್ಳದ ಬಸ್ ನಿಲ್ದಾಣದ ವ್ಯಾಪಾರ ಮಳಿಗೆ, ಆಹಾರ ಉದ್ದಿಮೆಗಳ ವಿರುದ್ಧ ಕ್ರಮ

ಬೆಂಗಳೂರು, ಜೂ.19 (ಕೆಎಂಶಿ)– ರಾಜ್ಯದ ಬಸ್ ನಿಲ್ದಾಣಗಳಲ್ಲಿನ ವ್ಯಾಪಾರ ಮಳಿಗೆಗಳು ಮತ್ತು ಆಹಾರ ಉದ್ದಿಮೆಗಳಲ್ಲಿ ಅವಧಿ ಮೀರಿದ ಆಹಾರ ಮಾರಾಟ ಹಾಗೂ ಸ್ವಚ್ಛತೆ ಕೊರತೆ ಸೇರಿದಂತೆ ಹಲವು ಲೋಪದೋಷಗಳನ್ನು ಸರಿಪಡಿಸಿಕೊಳ್ಳದಿದ್ದರೆ ಅಂತಹ ಉದ್ದಿಮೆಗಳ ಮಾಲೀಕರ ವಿರುದ್ಧ ಕ್ರಮಕೈಗೊಳ್ಳಲಾಗುವುದು ಎಂದು ಸರ್ಕಾರ ಎಚ್ಚರಿಸಿದೆ.

ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆ 2006 ಮತ್ತು ನಿಯಮಗಳು 2011ರ ಅನ್ವಯ ಈ ತಿಂಗಳಲ್ಲಿ ಕೈಗೊಂಡ ಪರಿಶೀಲನೆ ಸಂದರ್ಭದಲ್ಲಿ ಕಂಡುಬಂದ ಲೋಪದೋಷಗಳನ್ನು ಸರಿಪಡಿಸಿಕೊಳ್ಳುವಂತೆ ಸೂಚಿಸಲಾಗಿದೆ.

ಈ ಸಂಬಂಧ ಪತ್ರಿಕಾ ಪ್ರಕಟಣೆ ನೀಡಿರುವ ಮುಖ್ಯಮಂತ್ರಿಗಳ ಕಾರ್ಯಾಲಯ, ಸಾಮಾಜಿಕ ಮಾಧ್ಯಮಗಳಲ್ಲಿ ಬಿತ್ತರವಾದ ವರದಿಗಳನ್ನು ಆಧರಿಸಿ ಮುಖ್ಯಮಂತ್ರಿ ಕಚೇರಿಯ ಸಾರ್ವಜನಿಕ ಕುಂದುಕೊರತೆ ವಿಭಾಗದ ವಿಶೇಷ ಕರ್ತವ್ಯಾಧಿಕಾರಿಗಳು ತಕ್ಷಣವೇ ಅಗತ್ಯಕ್ರಮ ಕೈಗೊಂಡಿರುತ್ತಾರೆ ಎಂದು ತಿಳಿಸಿದೆ.

ಆಹಾರ ಸುರಕ್ಷತೆ ಮತ್ತು ಗುಣಮಟ್ಟ ನಿಯಮ ಪಾಲನೆ ಕುರಿತು ಪ್ರಸಕ್ತ ಜೂನ್ ತಿಂಗಳಲ್ಲಿ ವಿಶೇಷ ಅಭಿಯಾನ ಕೈಗೊಳ್ಳಲಾಗಿದೆ.

ವ್ಯಾಪಾರ ಮಳಿಗೆಗಳು ಹಾಗೂ ಆಹಾರ ಉದ್ದಿಮೆಗಳಲ್ಲಿ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದುಕೊಳ್ಳುವಂತೆ ಮಾಲೀಕರಿಗೆ ಎಚ್ಚರಿಕೆ ನೀಡಲಾಗಿರುತ್ತದೆ.

ರಾಜ್ಯಾದ್ಯಂತ 201 ಜಿಲ್ಲಾ ಮತ್ತು ತಾಲೂಕು ಕೇಂದ್ರಗಳ ಕಚೇರಿ ಹಾಗೂ ಖಾಸಗಿ ಬಸ್ ನಿಲ್ದಾಣಗಳಲ್ಲಿನ 748 ವ್ಯಾಪಾರ ಮಳಿಗೆಗಳು ಮತ್ತು ಆಹಾರ ಉದ್ದಿಮೆಗಳನ್ನು ಪರಿಶೀಲನೆ ಮಾಡಲಾಗಿದ್ದು, ಆಹಾರ ಸುರಕ್ಷತೆ ಮತ್ತು ಗುಣಮಟ್ಟ ನಿಯಮ ಪಾಲಿಸುವಂತೆ ಅರಿವು ಮೂಡಿಸಲಾಗಿದೆ.

ಮುಂದಿನ ದಿನಗಳಲ್ಲಿ ನಡೆಯಲಿರುವ ಪುನರ್ ಪರಿಶೀಲನೆ ವೇಳೆ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆ ಮತ್ತು ನಿಯಮಗಳ ಪಾಲನೆಯಾಗಿರಬೇಕು, ತಪ್ಪಿದಲ್ಲಿ ಕಠಿಣ ಕ್ರಮ ಜರುಗಿಸಲಾಗುವುದು ಎಂದು ಕಾರ್ಯಾಲಯ ಎಚ್ಚರಿಸಿದೆ.

ರೇಣುಕಾಸ್ವಾಮಿ ಹತ್ಯೆ ಆರೋಪಿಗಳಿಗೆ ಶಿಕ್ಷೆ ಆಗಲೇಬೇಕು

ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಪ್ರತಿಕ್ರಿಯೆ

ಮೈಸೂರು,ಜೂ.19(ಎಂಟಿವೈ)– ನಟ ದರ್ಶನ್ ಅಂಡ್ ಗ್ಯಾಂಗ್‌ನಿಂದ ನಡೆದಿರುವ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಪೊಲೀಸರು ಅಗತ್ಯ ಕ್ರಮ ಕೈಗೊಂಡಿದ್ದಾರೆ. ತಪ್ಪಿತಸ್ಥರಿಗೆ ಶಿಕ್ಷೆ ಆಗಲೇಬೇಕು ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಪ್ರತಿಕ್ರಿಯಿಸಿದ್ದಾರೆ.



ಮೈಸೂರಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ನಟ ದರ್ಶನ್ ತಂಡ ನಡೆಸಿದ ಕಗ್ಗೊಲೆಗೆ ಸಂಬಂಧಿಸಿದಂತೆ ವೈದ್ಯರು ನೀಡಿದ ಮರಣೋತ್ತರ ಪರೀಕ್ಷೆ ವರದಿ ತಿರುಚುವ ಪ್ರಯತ್ನ ನಡೆಸಲಾಗುತ್ತಿದೆ ಎಂದು ಪತ್ರಕರ್ತರು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ವರದಿ ತಿರುಚುವ ಬಗ್ಗೆ ನನ್ನ ಗಮನಕ್ಕೆ ಬಂದಿಲ್ಲ. ಹಾಗೆ ವರದಿ ತಿರುಚಲು ಸಾಧ್ಯವಿಲ್ಲ. ಈಗಾಗಲೇ ಪೊಲೀಸರು ಎಲ್ಲಾ ರೀತಿಯ ಕ್ರಮ ತೆಗೆದುಕೊಂಡಿದ್ದಾರೆ. ರೇಣುಕಾಸ್ವಾಮಿ ಕೊಲೆ ಅತ್ಯಂತ ಅಮಾನವೀಯ ರೀತಿಯಲ್ಲಿ ನಡೆದಿದೆ. ಈ ಪ್ರಕರಣದಲ್ಲಿ ಯಾರೇ ತಪ್ಪು ಮಾಡಿದ್ದರೂ ಅವರಿಗೆ ಶಿಕ್ಷೆ ಆಗಲೇಬೇಕು. ಸಮಾಜದಲ್ಲಿ ಇಂತಹ ಘಟನೆಗಳು ನಡೆಯಬಾರದು. ಕೋಪದಲ್ಲಿ ಇಂತಹ ಘಟನೆಗಳು ಆಗುತ್ತವೆ.

ಈ ಹಿಂದೆಯೂ ಇಂತಹ ಘಟನೆ ನಡೆದಿವೆ. ಯಾವುದೇ ಸರ್ಕಾರಗಳಾದರೂ ಸರಿ, ಇಂತಹ ಘಟನೆಗಳ ಬಗ್ಗೆ ಕಠಿಣ ಕ್ರಮ ತೆಗೆದುಕೊಳ್ಳಬೇಕು. ನಾನೇ ಸರಿ, ನಾನು ಮಾಡಿದ್ದೇ ಸರಿ ಎನ್ನುವ ಅತಿರೇಕದ ವರ್ತನೆ ಹೆಚ್ಚಾದಾಗ ಇಂತಹ ಘಟನೆಗಳು ನಡೆಯುತ್ತವೆ. ಇಂತಹ ಘಟನೆಗಳು ಸಮಾಜಕ್ಕೆ ಒಳ್ಳೆಯದಲ್ಲ ಎಂದು ವಿಷಾದಿಸಿದರು.

ಭ್ರೂಣ ಹತ್ಯೆ ಮೇಲೆ ಇಲಾಖೆಯ ಹದ್ದಿನ ಕಣ್ಣು: ರಾಜ್ಯದ ಹಲವೆಡೆ ಬೆಳಕಿಗೆ ಬಂದಿರುವ ಭ್ರೂಣಹತ್ಯೆ ಪ್ರಕರಣಗಳ ವಿಚಾರದಲ್ಲಿ ಆರೋಗ್ಯ ಮತ್ತು ಪೊಲೀಸ್ ಇಲಾಖೆ ಹದ್ದಿನ ಕಣ್ಣಿಟ್ಟಿವೆ. ಭ್ರೂಣ ಹತ್ಯೆ ಮಾಹಿತಿ ಬಂದ ಸ್ಥಳದಲ್ಲೆಲ್ಲಾ ದಾಳಿ ಮಾಡಿ ಆರೋಪಿಗಳನ್ನು ಬಂಧಿಸಲಾಗಿದೆ. ತಪ್ಪು ಮಾಡಿದ್ದ ನಮ್ಮ ಇಲಾಖೆ ಸಿಬ್ಬಂದಿಯನ್ನೂ ಪತ್ತೆ ಮಾಡುತ್ತೇವೆ. ತಪ್ಪಿತಸ್ಥರಿಗೆ ನ್ಯಾಯಾಲಯದ ಮೂಲಕ ಶಿಕ್ಷೆ ಆಗಬೇಕು ಎಂದರು.

ಇಂಧನ ಬೆಲೆ ಬೇರೆ ರಾಜ್ಯಕ್ಕೆ ಹೋಲಿಸಿ: ರಾಜ್ಯದಲ್ಲಿ ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆಗೆ ವ್ಯಾಪಕ ವಿರೋಧ ವ್ಯಕ್ತವಾಗುತ್ತಿರುವುದಕ್ಕೆ ಸಂಬಂಧಿಸಿದಂತೆ ಮಾತನಾಡಿದ ಅವರು, ಬೇರೆ ರಾಜ್ಯಗಳಿಗೆ ಹೋಲಿಕೆ ಮಾಡಿದರೆ ನಮ್ಮ ರಾಜ್ಯದಲ್ಲಿ ಬೆಲೆ ಕಡಿಮೆಯಿದೆ. ಕೇಂದ್ರ ಸರ್ಕಾರ ಈ ಹಿಂದೆ ಮುಖ್ಯಮಂತ್ರಿಯಾಗಿದ್ದ ಬಸವರಾಜ ಬೊಮ್ಮಾಯಿ ಅವರ ಮೇಲೆ ಒತ್ತಡ ತಂದು ರಾಜ್ಯದಲ್ಲಿ ಬೆಲೆ ಇಳಿಕೆ ಮಾಡಿಸಿತ್ತು. ಆಂಧ್ರಪ್ರದೇಶ, ತೆಲಂಗಾಣ, ತಮಿಳುನಾಡು, ಮಹಾರಾಷ್ಟ್ರಕ್ಕೆ ಹೋಲಿಸಿದರೆ ಕರ್ನಾಟಕದಲ್ಲಿ ಪೆಟ್ರೋಲ್, ಡೀಸೆಲ್ ಬೆಲೆ ಕಡಿಮೆಯಿದೆ ಎಂದು ಸ್ಪಷ್ಟಪಡಿಸಿದರು.

ಗ್ಯಾರಂಟಿ ಯೋಜನೆ ಹಾಗೂ ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆಗೂ ಸಂಬಂಧವಿಲ್ಲ. ಗ್ಯಾರಂಟಿ ಯೋಜನೆಗಳಿಗೆ ಖರ್ಚು ಮಾಡುತ್ತಿರುವ ಹಣ ಇಂಧನ ಬೆಲೆ ಹೆಚ್ಚಳದಿಂದ ಬಂದ ಹಣವಲ್ಲ. ಈ ಗ್ಯಾರಂಟಿ ಯೋಜನೆಗಳಿಂದ ರಾಜ್ಯದ ಲಕ್ಷಾಂತರ ಬಡ ಜನರಿಗೆ ಸಹಾಯವಾಗುತ್ತಿದೆ. ಸರ್ಕಾರದಿಂದ ಒಳ್ಳೆಯ ಕಾರ್ಯಕ್ರಮ ತಂದಿದ್ದೇವೆ. ಅದನ್ನು ಸ್ಥಗಿತಗೊಳಿಸುವ ಪ್ರಶ್ನೆಯೇ ಇಲ್ಲ ಎಂದು ಭರವಸೆ ನೀಡಿದರು.

ಬೆಂಗಳೂರು ಟರ್ಫ್ ಕ್ಲಬ್‌ನಲ್ಲಿ ಕುದುರೆ ರೇಸ್ ಆಯೋಜಿಸಲು ಹೈಕೋರ್ಟ್ ಗ್ರೀನ್ ಸಿಗ್ನಲ್

ಬೆಂಗಳೂರು, ಜೂ.19– ಕುದುರೆ ರೇಸ್ ಆಯೋಜನೆಗೆ ಅನುಮತಿ ಕೋರಿ ಬೆಂಗಳೂರು ಟರ್ಫ್ ಕ್ಲಬ್ (ಬಿಟಿಸಿ) ಸಲ್ಲಿಸಿದ್ದ ಮನವಿಯನ್ನು ತಿರಸ್ಕರಿಸಿದ್ದ ರಾಜ್ಯ ಸರ್ಕಾರದ ನಿಲುವಿಗೆ ಹೈಕೋರ್ಟ್ ಮಂಗಳವಾರ ಅತೃಪ್ತಿ ವ್ಯಕ್ತಪಡಿಸಿದ್ದು, ಕುದುರೆ ಪಂದ್ಯಗಳ ಆಯೋಜನೆಗೆ ಅನುಮತಿಸಿದೆ.

ಪಂದ್ಯಗಳ ಆಯೋಜನೆಗಾಗಿ ಕ್ಲಬ್ ಕೋರಿದ್ದ ಮನವಿಯನ್ನು ತಿರಸ್ಕರಿಸಿದ್ದ ರಾಜ್ಯ ಸರ್ಕಾರದ ಕ್ರಮ ಪ್ರಶ್ನಿಸಿ ಬೆಂಗಳೂರು ಟರ್ಫ್ ಕ್ಲಬ್ ಲಿಮಿಟೆಡ್ ಕಂಪೆನಿ ಹಾಗೂ ಇತರರು ಸಲ್ಲಿಸಿದ್ದ ಅರ್ಜಿಗಳ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಸ್.ಆರ್. ಕೃಷ್ಣ ಕುಮಾರ್ ಅವರ ಏಕಸದಸ್ಯ ಪೀಠ ಮಧ್ಯಂತರ ಆದೇಶ ಮಾಡಿದೆ. ಇದರಿಂದಾಗಿ ಕಳೆದ ಮೂರು ತಿಂಗಳಿನಿಂದ ಸ್ಥಗಿತಗೊಂಡಿದ್ದ ಪಂದ್ಯಾವಳಿಗಳು ಪುನಾರಂಭಗೊಳ್ಳಲಿವೆ.



ಬಿಟಿಸಿಯು ಆನ್ ಕೋರ್ಸ್ (ಬೆಂಗಳೂರು) ಮತ್ತು ಆಫ್ ಕೋರ್ಸ್ (ಮೈಸೂರು, ಮುಂಬೈ) ಮೂಲಕ ಪಂದ್ಯಗಳನ್ನು ನಡೆಸಬಹುದಾಗಿದೆ. ಎಲ್ಲಾ ಪಂದ್ಯಗಳೂ, ಸರ್ಕಾರ ಈಗಾಗಲೇ 2024ರ ಮಾರ್ಚ್‌ನಲ್ಲಿ ನೀಡಿರುವ ಪರವಾನಗಿಗೆ ಅನುಗುಣವಾದ ಷರತ್ತು ಮತ್ತು ನಿಯಮಗಳಿಗೆ ಒಳಪಟ್ಟಿರುತ್ತವೆ. ಅಂತೆಯೇ, ಪ್ರತಿವಾದಿಗಳು ರೇಸಿಂಗ್ ಚಟುವಟಿಕೆಗಳ ಮೇಲೆ ನಿಗಾ ವಹಿಸಲು ಸ್ವಾತಂತ್ರ್ಯ ಹೊಂದಿದ್ದಾರೆ ಎಂದು ಪೀಠ ಆದೇಶದಲ್ಲಿ ವಿವರಿಸಿದೆ.

ಯಡಿಯೂರು ಸಿದ್ದಲಿಂಗೇಶ್ವರ ದೇವಾಲಯದ 75 ವರ್ಷದ ಗಂಗಾಶ್ರೀ ಆನೆ ಸಾವು

ಕೋಲಾರ, ಜೂ.19– ಅನಾರೋಗ್ಯದಿಂದ ಬಳಲುತ್ತಿದ್ದ ಯಡಿಯೂರು ಸಿದ್ದಲಿಂಗೇಶ್ವರ ದೇವಾಲಯದಲ್ಲಿದ್ದ 75 ವರ್ಷದ ಗಂಗಾಶ್ರೀ ಆನೆಯು ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದೆ. ಯಡಿಯೂರು ಸಿದ್ದಲಿಂಗೇಶ್ವರ ದೇವಾಲಯದಲ್ಲಿದ್ದ ಗಂಗಾಶ್ರೀ ಆನೆಗೆ ಅನಾರೋಗ್ಯ ಉಂಟಾಗಿತ್ತು ಹೀಗಾಗಿ ಕಳೆದ ಮೂರು ತಿಂಗಳಿಂದ ಕೋಲಾರ ತಾಲೂಕಿನ ಖಾಜಿಕಲ್ಲಹಳ್ಳಿ ಗ್ರಾಮದ ಬಳಿ ಇರುವ ಆನೆಗಳ ಆರೈಕೆ ಕೇಂದ್ರದಲ್ಲಿ ಚಿಕಿತ್ಸೆ ನೀಡಲಾಗುತ್ತಿತ್ತು. ಆದರೆ ಚಿಕಿತ್ಸೆ ಫಲಿಸದೆ 75 ವರ್ಷದ ಗಂಗಾಶ್ರೀ ಮೃತಪಟ್ಟಿದೆ.






ಆನೆಯ ಮರಣೋತ್ತರ ಪರೀಕ್ಷೆ ನಡೆಯಲಿದ್ದು, ಬಳಿಕ ಪುನರ್ವಸತಿ ಕೇಂದ್ರ ಮುಖ್ಯಸ್ಥರು ಹಾಗೂ ಅರಣ್ಯ ಇಲಾಖೆ ಸಿಬ್ಬಂದಿ ಸಮ್ಮುಖದಲ್ಲಿ ಅಂತಿಮ ಸಂಸ್ಕಾರ ನಡೆಯಲಿದೆ 1996ರಲ್ಲಿ ಗದುಗಿನ ಮಠದ ಸ್ವಾಮೀಜಿಯೊಬ್ಬರು ಯಡಿಯೂರು ದೇವಾಲಯಕ್ಕೆ ಗಂಗಾಶ್ರೀ ಆನೆಯನ್ನು ಕೊಡುಗೆಯಾಗಿ ನೀಡಿದ್ದರು. ಅಂದಿನ ಸಿಎಂ ಆಗಿದ್ದ ಜೆಹೆಚ್ ಪಟೇಲ್ ಅವರು ಸರ್ಕಾರದ ವತಿಯಿಂದ ಸ್ವೀಕರಿಸಿ ದೇವಾಲಯಕ್ಕೆ ಹಸ್ತಾಂತರ ಮಾಡಿದ್ದರು.

ಉತ್ತರ ಕನ್ನಡದ ಬನವಾಸಿಯಲ್ಲಿ ಶಂಕಿತ ಉಗ್ರ ಎನ್‌ಐಎ ವಶಕ್ಕೆ

ಬನವಾಸಿ (ಉತ್ತರ ಕನ್ನಡ): ಮಂಗಳೂರು ಕುಕ್ಕರ್ ಸ್ಫೋಟ, ಬೆಂಗಳೂರು ರಾಮೇಶ್ವರಂ ಕೆಫೆ ಸ್ಫೋಟ ಮತ್ತು ಶಿವಮೊಗ್ಗ ಮಸೀದಿ ಸ್ಫೋಟ ಪ್ರಕರಣಗಳಲ್ಲಿ ಭಾಗಿಯಾಗಿದ್ದ ಆರೋಪಿಗಳಿಗೆ ಪ್ರಚೋದನೆ ನೀಡಿದ ಆರೋಪದ ಮೇಲೆ ಬನವಾಸಿ ತಾಲೂಕಿನ ದಾಸನಕೊಪ್ಪ ಗ್ರಾಮದಲ್ಲಿ ಶಂಕಿತ ಉಗ್ರನೊಬ್ಬನನ್ನು ರಾಷ್ಟ್ರೀಯ ತನಿಖಾ ದಳ ಮಂಗಳವಾರ ಬಂಧನಕ್ಕೊಳಪಡಿಸಿದೆ.



ಶಿರಸಿ ಮತ್ತು ಬನವಾಸಿಯ ಹಲವು ಸ್ಥಳಗಳಲ್ಲಿ ದಾಳಿ ನಡೆಸಿದ ಎನ್‌ಐಎ ಅಧಿಕಾರಿಗಳು, ಅಬ್ದುಲ್ ಶಕೂರ್ (34) ಎಂಬಾತನನ್ನು ಬಂಧಿಸಲಾಗಿದೆ. ದಾಸನಕೊಪ್ಪ ಗ್ರಾಮದವರನಾದ ಶಕೂರ್ ದುಬೈನಲ್ಲಿ ಕೆಲಸ ಮಾಡುತ್ತಿದ್ದು, ನಿಷೇಧಿತ ಪಾಪ್ಯುಲರ್ ಫ್ರಂಟ್ ಆಫ್ ಇಂಡಿಯಾದ ಸದಸ್ಯನಾಗಿದ್ದ ಎಂದು ತಿಳಿದು ಬಂದಿದೆ. ಬಕ್ರೀದ್ ಆಚರಣೆಗಾಗಿ ಈತ ಗ್ರಾಮಕ್ಕೆ ಬಂದಿದ್ದ ಎನ್ನಲಾಗಿದ್ದು, ಈ ಬಗ್ಗೆ ಮಾಹಿತಿ ತಿಳಿಸಿದ ರಾಷ್ಟ್ರೀಯ ತನಿಖಾ ಸಂಸ್ಥೆ ಆತನನ್ನು ಬಂಧನಕ್ಕೊಳಪಡಿಸಿದೆ. ಶಕೂರ್ ಅನೇಕ ಭಯೋತ್ಪಾದಕ ಸಂಘಟನೆಗಳೊಂದಿಗೆ ಆನ್‌ಲೈನ್‌ನಲ್ಲಿ ಸಂಪರ್ಕದಲ್ಲಿರುತ್ತಾನೆ ಎಂದು ಮೂಲಗಳು ತಿಳಿಸಿವೆ

ಮೌಲ್ವಿಯಾಗಿದ್ದ ಶಕೂರ್ 2018–19ರಲ್ಲಿ ತೀರ್ಥಳ್ಳಿಗೆ ಭೇಟಿ ನೀಡಿದ್ದು, ಆಗ ಮಂಗಳೂರು ಕುಕ್ಕರ್, ರಾಮೇಶ್ವರಂ ಕೆಫೆ ಮತ್ತು ಶಿವಮೊಗ್ಗ ಮಸೀದಿ ಸ್ಫೋಟದ ಪ್ರಮುಖ ಆರೋಪಿಯನ್ನು ಭೇಟಿಯಾಗಿದ್ದ. ಈತನನ್ನು ಬಂಧನಕ್ಕೊಳಪಡಿಸಿರುವ ಎನ್‌ಐಎ ಅಜ್ಞಾತ ಸ್ಥಳಕ್ಕೆ ಕರೆದೊಯ್ದು ವಿಚಾರಣೆ ನಡೆಸುತ್ತಿದೆ ಎಂದು ತಿಳಿದುಬಂದಿದೆ.

ನೈರುತ್ಯ ರೈಲ್ವೆಯ ಮೈಸೂರು ವಿಭಾಗದ ಸಮಯೋಚಿತ ಕ್ರಮ

ರೈಲ್ ಮದದ್ ವಾರ್ ರೂಂಗೆ ಸಲ್ಲಿಸುವ ದೂರುಗಳ ಸಂಖ್ಯೆ ಗಣನೀಯ ಇಳಿಕೆ



ಮೈಸೂರು, ಜೂ.19(ಬಿಎಲ್‌ಯು)– ನೈರುತ್ಯ ರೈಲ್ವೆಯ ಸಮಯೋಚಿತ ಕ್ರಮಗಳಿಂದ ರೈಲ್ ಮದದ್ ವಾರ್ ರೂಮ್ ನಿರ್ವಹಿಸಿದ ದೂರುಗಳಲ್ಲಿ ಗಮನಾರ್ಹವಾದ ಇಳಿಕೆ ಕಂಡು ಬಂದಿದೆ ಎಂದು ನೈರುತ್ಯ ರೈಲ್ವೆಯ ಮೈಸೂರು ವಿಭಾಗದ ವಿಭಾಗೀಯ ವಾಣಿಜ್ಯ ವ್ಯವಸ್ಥಾಪಕ ಗಿರೀಶ ಧರ್ಮರಾಜ ಕಲಗೊಂಡ ತಿಳಿಸಿದ್ದಾರೆ.

ರೈಲ್ ಮದದ್ ರೂಮ್ ಪ್ರಯಾಣಿಕರಿಗೆ ಲಭ್ಯವಿದೆ. ಸೆಂಟರ್ ಫಾರ್ ರೈಲ್ ಇನ್ಫರ್‌ಮೇಷನ್ ಸಿಸ್ಟಂ ಅಭಿವೃದ್ಧಿಪಡಿಸಿರುವ ಈ ಕೇಂದ್ರಿಕೃತ ಡೇಟಾಬೇಸ್ ನೈಜ ಸಮಯದಲ್ಲಿಯೇ ಪ್ರಯಾಣಿಕರ ದೂರುಗಳಿಗೆ ಪರಿಹಾರ ಒದಗಿಸಲು ಅನುಕೂಲ ಮಾಡಿಕೊಡುತ್ತದೆ ಎಂದು ಹೇಳಿದ್ದಾರೆ.

2024 ರ ಏಪ್ರಿಲ್‌ನಿಂದ ಜೂನ್ ತನಕ ಕಳೆದು ಹೋದ ವಸ್ತುಗಳು, ಅಸಮರ್ಪಕ ವಿದ್ಯುತ್ ಉಪಕರಣಗಳು, ಕಾಯ್ದಿರಿಸಿದ ಕೋಚ್‌ಗಳಲ್ಲಿ ಅನಧಿಕೃತ ಪ್ರಯಾಣ, ಶೌಚಾಲಯಗಳ ಅಶುಚಿತ್ವ ಸೇರಿದಂತೆ ಹಲವು ರೀತಿಯ 5,122 ದೂರುಗಳನ್ನು ಸ್ವೀಕರಿಸಲಾಗಿದೆ. ಈ ದೂರುಗಳಿಗೆ ಕೂಡಲೇ ಪರಿಹಾರ ಕಲ್ಪಿಸಿ ವರದಿಗಳನ್ನು ಪ್ರ.ಧಾನಿಕರಿಗೆ ಕಳುಹಿಸಲಾಗಿದೆ ಎಂದು ತಿಳಿಸಿದ್ದಾರೆ.


ಇದರಿಂದ ಜೂನ್ 9 ರಂದು ಸರಾಸರಿ 90 ಇದ್ದ ದೂರುಗಳು ಜೂನ್ 18 ರಂದು 38ಕ್ಕೆ ಇಳಿಕೆಯಾಗಿದೆ. ರೈಲುಗಳಲ್ಲಿ ಕಾಯ್ದಿರಿಸಿದ ಬೋಗಿಗಳಲ್ಲಿ ಅನಧಿಕೃತ ಪ್ರಯಾಣಿಕರನ್ನು ತಡೆಗಟ್ಟಲು ಹಲವು ಕ್ರಮ ಕೈಗೊಳ್ಳಲಾಗಿದೆ. ಟಿಕೆಟ್ ಪರೀಕ್ಷಕರಿಗೆ ಸಹಾಯ ಮಾಡಲು ರೈಲ್ವೆ ಸಂರಕ್ಷಣಾ ದಳದ ಸಿಬ್ಬಂದಿ ನಿಯೋಜಿಸಲಾಗಿದೆ. ಈ ಮೂಲಕ 624 ಪ್ರಯಾಣಿಕರಿಗೆ 3,48,770 ರೂಪಾಯಿ ದಂಡ ವಿಧಿಸಲಾಗಿದೆ ಎಂದ ಗಿರೀಶ ಧರ್ಮರಾಜ ಕಲಗೊಂಡ ಅಂಕಿ ಅಂಶಗಳ ವಿವರ ನೀಡಿದ್ದಾರೆ.

ಮೈಸೂರು ವಿಭಾಗವು ಹೆಚ್ಚು ಜನ ಸಂದಣಿ ಇರುವ ವಿವಿಧ ರೈಲುಗಳಿಗೆ 61 ಹೆಚ್ಚುವರಿ ಕೋಚ್‌ಗಳನ್ನು ಸೇರಿಸಲಾಗಿದೆ. ಅಲ್ಲದೆ ಅಜ್ಮೀರ್, ಮುಜಾಫರ್‌ಪುರ ಸೇರಿದಂತೆ ಇತರೆ ಸ್ಥಳಗಳಿಗೆ 14 ವಿಶೇಷ ರೈಲುಗಳನ್ನು ಸೇರಿಸಲಾಗಿದೆ. ಎಲ್ಲಾ ರೈಲುಗಳಲ್ಲಿ ಸ್ವಚ್ಛತೆಗೆ ವಿಶೇಷ ಒತ್ತು ನೀಡಲಾಗಿದೆ ಎಂದು ತಿಳಿಸಿದ್ದಾರೆ.

ವಿಭಾಗೀಯ ರೈಲ್ವೆ ವ್ಯವಸ್ಥಾಪಕರಾದ ಶಿಲ್ಪಿ ಅಗರವಾಲ್ ಅವರ ನೇತೃತ್ವದಲ್ಲಿ ಇಂತಹ ಹಲವು ಸುಧಾರಣಾ ಕ್ರಮ ಕೈಗೊಳ್ಳಲಾಗಿದೆ ಎಂದು ಗಿರೀಶ್ ಧರ್ಮರಾಜ ಕಲಗೊಂಡ ಹೇಳಿದ್ದಾರೆ.

ಮೆಗಾಸ್ಟಾರ್ ಚಿರಂಜೀವಿ ಮಾಜಿ ಅಳಿಯ ಶಿರೀಶ್ ಭಾರಧ್ವಾಜ್ ನಿಧನ

ಹೈದರಾಬಾದ್: ಮೆಗಾಸ್ಟಾರ್ ಚಿರಂಜೀವಿಯ ಮಾಜಿ ಅಳಿಯ ಶಿರೀಶ್ ಭಾರದ್ವಜ್ ಹೃದಯಾಘಾತದಿಂದ ಸಾವನ್ನಪ್ಪಿದ್ದಾರೆ. ಶಿರೀಶ್, ಮೆಗಾಸ್ಟಾರ್ ಚಿರಂಜೀವಿಯ ಪುತ್ರಿ ಶ್ರೀಜಾ ಕೊನಿಡೆಲಾ ಅವರನ್ನು ವಿವಾಹವಾಗಿದ್ದರು.



ಅಸಲಿಗೆ ಈ ವಿವಾಹಕ್ಕೆ ಚಿರಂಜೀವಿ ಅವರ ತೀವ್ರ ವಿರೋಧವಿತ್ತು, ಹಾಗಾಗಿ ಕುಟುಂಬಕ್ಕೆ ತಿಳಿಯದೆ ಶಿರೀಶ್ ಹಾಗೂ ಶ್ರೀಜಾ ವಿವಾಹವಾಗಿದ್ದರು. ಆದರೆ ಬಳಿಕ ಶ್ರೀಜಾ, ಶೀರೀಶ್ ಅವರಿಂದ ವಿಚ್ಛೇದನ ಪಡೆದುಕೊಂಡಿದ್ದರು, ಇಂದು ಬೆಳಿಗ್ಗೆ ಶಿರೀಶ್ ನಿಧನ ಹೊಂದಿದ್ದಾರೆ.

ಶಿರೀಶ್ ಕಳೆದ ಕೆಲವು ತಿಂಗಳಿನಿಂದಲೂ ಶ್ವಾಸಕೋಶಕ್ಕೆ ಸಂಬಂಧಿಸಿದ ಸಮಸ್ಯೆಯಿಂದ ಬಳಲುತ್ತಿದ್ದು, ಅದಕ್ಕೆ ಚಿಕಿತ್ಸೆ ಪಡೆಯುತ್ತಿದ್ದರಂತೆ. ಆದರೆ ಅವರು ಬುಧವಾರ ಬೆಳಿಗ್ಗೆ ಹೃದಯಾಘಾತದಿಂದ ಮೃತಪಟ್ಟಿದ್ದಾರೆ.

ಕೆಎಸ್‌ಆರ್‌ಟಿಸಿಯಿಂದ 100 ಸೀಟರ್ ಕಮ್ ಸ್ಲೀಪರ್ ಐಷರಾಮಿ ಬಸ್ ಖರೀದಿ

ಮೈಸೂರಿನಿಂದ ತಿರುಪತಿ, ಚೆನ್ನೈಗೆ ತಲಾ ಎರಡು ಬಸ್ ಸಂಚಾರ

ಖಾಸಗಿ ಬಸ್‌ಗಳಿಗೆ ಪೈಪೋಟಿ ನೀಡುವಂತಹ ಗುಣಮಟ್ಟ ; ಟೆಂಡರ್ ಪ್ರಕ್ರಿಯೆ ಆರಂಭ ; ಪ್ರಾಯೋಗಿಕವಾಗಿ 15 ಬಸ್‌ಗಳ ಸಂಚಾರ; ಪ್ರಯಾಣಿಕರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾದರೆ ಮತ್ತಷ್ಟು ಬಸ್ ಖರೀದಿ

ಮೈಸೂರು, ಜೂ.19(ಬಿಎಲ್‌ಯು)– ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಪ್ರಯಾಣಿಕರಿಗೆ ಮತ್ತಷ್ಟು ಉತ್ತಮ ಸೇವೆ ಕಲ್ಪಿಸಲು ಸಜ್ಜಾಗುತ್ತಿದೆ. ಈ ನಿಟ್ಟಿನಲ್ಲಿ 100, ಸೀಟರ್ ಕಮ್ ಸ್ಲೀಪರ್ ಐಷರಾಮಿ ಬಸ್‌ಗಳನ್ನು ಖರೀದಿ ಮಾಡುತ್ತಿದ್ದು, ಇದರಲ್ಲಿ ನಾಲ್ಕು ಬಸ್‌ಗಳನ್ನು ಮೈಸೂರಿಗೆ ನೀಡುವ ಪ್ರಸ್ತಾವನೆ ಸಲ್ಲಿಸಲಾಗಿದೆ.

ಕೆಎಸ್‌ಆರ್‌ಟಿಸಿಯ ಸಾಮಾನ್ಯ, ರಾಜಹಂಸ, ಐರಾವತ ಸೇರಿದಂತೆ ವಿವಿಧ ಮಾದರಿಯ ಎಸಿ, ನಾನ್ ಎಸಿ ಹಾಗೂ ಸ್ಲೀಪರ್ ಬಸ್‌ಗಳು ಈಗಾಗಲೇ ಸಂಚರಿಸುತ್ತಿವೆ. ಆದರೆ ಇವು ಖಾಸಗಿ ಬಸ್‌ಗಳಿಗೆ ಪೈಪೋಟಿ ನೀಡುವಷ್ಟು ಐಷಾರಾಮಿ ಆಗಿಲ್ಲ. ಅದರಲ್ಲೂ ಸೀಟರ್ ಕಮ್ ಸ್ಲೀಪರ್ ಬಸ್‌ಗಳು ಕೆಎಸ್‌ಆರ್‌ಟಿಸಿ ಬಳಿ ಇಲ್ಲ. ಈ ಕಾರಣದಿಂದ ಬಹಳಷ್ಟು ಪ್ರಯಾಣಿಕರು ಖಾಸಗಿ ಬಸ್‌ಗಳ ಮೊರೆ ಹೋಗುತ್ತಿದ್ದಾರೆ.

ಈ ಹಿನ್ನೆಲೆಯಲ್ಲಿ ಇದೇ ಮೊದಲ ಬಾರಿಗೆ ಕೆಎಸ್‌ಆರ್‌ಟಿಸಿ ಸೀಟರ್ ಕಮ್ ಸ್ಲೀಪರ್ ಬಸ್‌ಗಳನ್ನು ಖರೀದಿ ಮಾಡುತ್ತಿದೆ. ಈ ಬಸ್‌ಗಳು ಖಾಸಗಿ ಬಸ್‌ಗಳನ್ನು ಮೀರಿಸುವಷ್ಟು ಐಷಾರಾಮಿಯಾಗಿರಲಿವೆ. ಇಂತಹ 100 ಬಸ್‌ಗಳನ್ನು ನೀಡುವಂತೆ ಕೆಎಸ್‌ಆರ್‌ಟಿಸಿ ಟೆಂಡರ್ ಕರೆದಿದೆ.

ಒಟ್ಟು 100 ಬಸ್‌ಗಳಲ್ಲಿ ಎಸಿ ಯುಳ್ಳ, ಸೀಟರ್ ಕಮ್ ಸ್ಲೀಪರ್ 30, ನಾನ್ ಎಸಿ ಇರುವ ಸೀಟರ್ ಕಮ್ ಸ್ಲೀಪರ್ 70 ಬಸ್‌ಗಳನ್ನು ಖರೀದಿ ಮಾಡಲಾಗುತ್ತಿದೆ. ಜೂನ್ 14 ರಂದು ಟೆಂಡರ್ ಕರೆದಿದ್ದು, ಇನ್ನು ಆರು ತಿಂಗಳಲ್ಲಿ ಹೊಸ ಬಸ್ ಖರೀದಿ ಪ್ರಕ್ರಿಯೆ ಪೂರ್ಣಗೊಳ್ಳಲಿದೆ.

ಎಸಿ ಇರುವ ಸೀಟರ್ ಕಮ್ ಸ್ಲೀಪರ್ 5 ಬಸ್ ಹಾಗೂ ನಾನ್ ಎಸಿ ಇರುವ ಸೀಟರ್ ಕಮ್ ಸ್ಲೀಪರ್ 10 ಬಸ್‌ಗಳನ್ನು ಪ್ರಾಯೋಗಿಕವಾಗಿ ಸಂಚಾರಕ್ಕಿಳಿಸಲಾಗಿದ್ದು, ಜನರ ಪ್ರತಿಕ್ರಿಯೆ ನೋಡಿಕೊಂಡು ಹೆಚ್ಚು ಬಸ್‌ಗಳನ್ನು ಖರೀದಿ ಮಾಡಲು ಕೆಎಸ್‌ಆರ್‌ಟಿಸಿ ತೀರ್ಮಾನ ಕೈಗೊಂಡಿದೆ.

ಪ್ರಾಯೋಗಿಕ ಸಂಚಾರದಲ್ಲಿ ತಜ್ಞರ ತಂಡ ಈ ಬಸ್‌ಗಳ ವಿವಿಧ ಪರೀಕ್ಷೆ ನಡೆಸಲಿದ್ದು, ಒಂದು ವೇಳೆ ತೃಪ್ತಿದಾಯಕವಾಗಿಲ್ಲ ಎಂದು ಕಂಡು ಬಂದರೆ ಖರೀದಿ ಪ್ರಕ್ರಿಯೆ ಸ್ಥಗಿತಗೊಳಿಸಲು ಕಂಪನಿಗೆ ಷರತ್ತು ವಿಧಿಸಲಾಗಿದೆ.

ಈಗ ಸೀಟರ್ ಕಮ್ ಸ್ಲೀಪರ್ ಐಷರಾಮಿ ಬಸ್‌ಗಳು ಕೆಎಸ್‌ಆರ್‌ಟಿಸಿಗೆ ಬಂದರೆ ಪ್ರಯಾಣಿಕರ ಸಂಖ್ಯೆ ಮತ್ತಷ್ಟು ಹೆಚ್ಚಾಗುತ್ತದೆ. ಒಟ್ಟಾರೆ ಬಸ್‌ಗಳಲ್ಲಿ ಪ್ರಯಾಣಿಕರಿಗೆ ಐಷರಾಮಿ ಅನುಭವ ನೀಡಲು ಕೆಎಸ್‌ಆರ್‌ಟಿಸಿ ಈಗಲಾದರೂ ಮುಂದಾಗಿರುವುದು ಸಮಾಧಾನಕರ ಸಂಗತಿ.

ಈಗ ಖರೀದಿ ಮಾಡುತ್ತಿರುವ ಇಂತಹ ಬಸ್‌ಗಳು ಎಷ್ಟು ಬೇಕಿದೆ, ಯಾವ ಮಾರ್ಗದಲ್ಲಿ ಅವು ಸಂಚರಿಸಬೇಕು ಎಂಬ ವಿವರ ನೀಡುವಂತೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ರಾಜ್ಯದ ಎಲ್ಲಾ ವಿಭಾಗಗಳಿಗೆ ಕೇಳಿತ್ತು ಎಂದು ಕೆಎಸ್‌ಆರ್‌ಟಿಸಿಯ ಮೈಸೂರು ವಿಭಾಗೀಯ ನಿಯಂತ್ರಣಾಧಿಕಾರಿ ಶ್ರೀನಿವಾಸ್ ತಿಳಿಸಿದರು.

ಈ ಕುರಿತು 'ಮೈಸೂರು ಮಿತ್ರ'ನಿಗೆ ವಿವರ ನೀಡಿದ ಅವರು, ಸೀಟರ್ ಕಮ್ ಸ್ಲೀಪರ್ ನಾಲ್ಕು ಬಸ್‌ಗಳು ಬೇಕೆಂದು ಪ್ರಸ್ತಾವನೆ ಸಲ್ಲಿಸಿದ್ದೇವೆ. ತಲಾ ಎರಡು ಬಸ್‌ಗಳು ತಿರುಪತಿ ಹಾಗೂ ಚೆನ್ನೈ ಮಾರ್ಗದಲ್ಲಿ ಸಂಚರಿಸುತ್ತವೆ ಎಂಬ ವಿವರ ನೀಡಲಾಗಿದೆ ಎಂದರು.

ಹೊರ ರಾಜ್ಯಗಳಿಗೆ ಹೋಗಲು ಮೈಸೂರಿನಿಂದ ಹೆಚ್ಚು ಸ್ಲೀಪರ್, ಸೀಟರ್ ಕಮ್ ಸ್ಲೀಪರ್ ಬಸ್‌ಗಳಾಗಲೀ ಇಲ್ಲ. ಖಾಸಗಿ ಬಸ್‌ಗಳಲ್ಲಿ ಈ ಸೌಲಭ್ಯ ಮೈಸೂರಿನಲ್ಲಿ ಅಷ್ಟಷ್ಟೆ ಇದರಿಂದ ಬಹಳಷ್ಟು ಜನರು ಬೆಂಗಳೂರಿಗೆ ಹೋಗಿ ಅಲ್ಲಿಂದ ಸ್ಲೀಪರ್ ಬಸ್ ಹಾಗೂ ಸೀಟರ್ ಕಮ್ ಸ್ಲೀಪರ್ ಬಸ್‌ಗಳಲ್ಲಿ ಸಂಚರಿಸುತ್ತಾರೆ. ಈಗ ಕೆಎಸ್‌ಆರ್‌ಟಿಸಿ ಇಂತಹ ಬಸ್‌ಗಳನ್ನು ಖರೀದಿಸಿ, ಸಂಚಾರಕ್ಕೆ ಬಿಡುತ್ತಿರುವುದರಿಂದ ಹೊರ ರಾಜ್ಯಗಳಿಗೆ ಹೋಗುವ ಪ್ರಯಾಣಿಕರಿಗೆ ಬಹಳ ಅನುಕೂಲಕಾರಿ.

ಪರೀಕ್ಷೆ ನಡೆದ ಮರುದಿನವೇ UGC-NET ಪರೀಕ್ಷೆ ರದ್ದು

ನವದೆಹಲಿ: UGC-NET (ವಿಶ್ವವಿದ್ಯಾಲಯ ಅನುದಾನ ಆಯೋಗ ರಾಷ್ಟ್ರೀಯ ಅರ್ಹತಾ ಪರೀಕ್ಷೆ) ಪರೀಕ್ಷೆಯನ್ನು ನಡೆಸಿದ ಮರುದಿನವೇ ರಾಷ್ಟ್ರೀಯ ಪರೀಕ್ಷಾ ಸಂಸ್ಥೆ (NTA) ರದ್ದುಗೊಳಿಸಿ ಆದೇಶ ನೀಡಿದ್ದು, ಅಭ್ಯರ್ಥಿಗಳು ಹೊಸದಾಗಿ ಪರೀಕ್ಷೆ ಬರೆಯಬೇಕಾಗಿದೆ.

ಪರೀಕ್ಷೆಯಲ್ಲಿನ ಅಕ್ರಮ ನಡೆದಿದೆ ಎಂಬ ದೂರು ಬಂದ ಬೆನ್ನಲ್ಲೇ ಈ ನಿರ್ಧಾರ ಕೈಗೊಂಡಿದ್ದು, ಈ ಸಂಬಂಧ ಸಿಬಿಐ ತನಿಖೆಗೆ ಆದೇಶಿಸಲಾಗಿದೆ. ಜೂನ್ 18ರಂದು UGC-NET ಪರೀಕ್ಷೆಯನ್ನು ದೇಶದಾದ್ಯಂತ 317 ನಗರಗಳಲ್ಲಿ 1205 ಪರೀಕ್ಷಾ ಕೇಂದ್ರಗಳಲ್ಲಿ ನಡೆಸಲಾಯಿತು. 11 ಲಕ್ಷಕ್ಕೂ ಹೆಚ್ಚು ಅಭ್ಯರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದರು.

ಮಂಗಳವಾರ ನಡೆದ ಪರೀಕ್ಷೆಯಲ್ಲಿ ಅಕ್ರಮ ನಡೆದಿರುವುದು ಬೆಳಕಿಗೆ ಬಂದಿದೆ. ಹೀಗಾಗಿ ಪರೀಕ್ಷಾ ಪ್ರಕ್ರಿಯೆಯ ಪಾರದರ್ಶಕತೆಯನ್ನು, ಪಾವಿತ್ರ್ಯತೆಯನ್ನು ಉಳಿಸಿಕೊಳ್ಳಲು ಶಿಕ್ಷಣ ಸಚಿವಾಲಯವ ಪರೀಕ್ಷೆಯನ್ನು ರದ್ದುಗೊಳಿಸಲು ನಿರ್ಧರಿಸಿದೆ.

ಭಾರತೀಯ ವಿಶ್ವವಿದ್ಯಾಲಯಗಳು ಮತ್ತು ಕಾಲೇಜುಗಳಲ್ಲಿ ಸಹಾಯಕ ಪ್ರಾಧ್ಯಾಪಕ ಮತ್ತು/ಅಥವಾ ಜೂನಿಯರ್ ರಿಸರ್ಚ್ ಫೆಲೋಶಿಪ್ (JRF) ಹುದ್ದೆಗೆ ಅರ್ಹತೆಯನ್ನು ನಿರ್ಧರಿಸಲು UGC-NET ಅನ್ನು ನಡೆಸಲಾಗುತ್ತದೆ.

ಸಾರ್ವಜನಿಕ ಪ್ರಕಟಣೆ

ಸಾರ್ವಜನಿಕರಿಗೆ ಈ ಮೂಲಕ ತಿಳಿಯಪಡಿಸುವುದೇನೆಂದರೆ, ಈ ಕೆಳಗೆ ವಿವರಿಸಿರುವ ಷೆಡ್ಯೂಲ್ ಸ್ವತ್ತಿನ ಮಾಲೀಕರಾದ ಡಾ. ಹೆಚ್.ಆರ್. ಸಂಜಯ್ ರವರ ಪತ್ನಿ ಮತ್ತು ಶ್ರೀ. ಸುಬ್ಬರಾವ್ ರವರ ಮಗಳು ಶ್ರೀಮತಿ. ಯೋಗಿತಾ @ ಡಾ. ಯೋಗಿತಾ ರಾವ್ ಎಂ., ರವರು ಷೆಡ್ಯೂಲ್ ಸ್ವತ್ತನ್ನು ನನ್ನ ಕಕ್ಷಿದಾರರಿಗೆ ಮಾರಾಟ ಮಾಡಲು ಒಪ್ಪಿರುತ್ತಾರೆ ಮತ್ತು ಸದರಿ ಶ್ರೀಮತಿ. ಯೋಗಿತಾ, ರವರು ಷೆಡ್ಯೂಲ್ ಸ್ವತ್ತಿನ ಮೂಲ ಪತ್ರಗಳನ್ನು ಕಳೆದುಕೊಂಡಿದ್ದು. ನನ್ನ ಕಕ್ಷಿದಾರರು ಷೆಡ್ಯೂಲ್ ಸ್ವತ್ತನ್ನು ಶುದ್ಧಕ್ರಯಕ್ಕೆ ಪಡೆಯಲು ಸಿದ್ಧರಿರುವುದರಿಂದ ಸದರಿ ಸ್ವತ್ತಿನ ಮೇಲೆ ಯಾರಿಗಾದರೂ ಯಾವುದೇ ರೀತಿಯ ಹಕ್ಕು, ಅಧಿಕಾರ, ಹಿತಾಸಕ್ತಿ ಆಕ್ಷೇಪಣೆ, ಸಿವಿಲ್ ವ್ಯಾಜ್ಯ, ತಂಟೆ-ತಕರಾರುಗಳು ಇದ್ದಲ್ಲಿ ಈ ಪ್ರಕಟಣೆ ಪ್ರಕಟವಾದ ದಿನದಿಂದ 05 (ಐದು) ದಿನಗಳ ಒಳಗಾಗಿ ತಮ್ಮ ಆಕ್ಷೇಪಣೆಗಳನ್ನು ಲಿಖಿತ ರೂಪದಲ್ಲಿ ಅಥವಾ ಖುದ್ದಾಗಿ ಸೂಕ್ತ ದಾಖಲಾತಿಗಳೊಂದಿಗೆ ಈ ಕೆಳಗೆ ನಮೂದಿಸಿರುವ ಕಛೇರಿ ವಿಳಾಸಕ್ಕೆ ಸಲ್ಲಿಬಹುದಾಗಿದೆ. ತಪ್ಪಿದಲ್ಲಿ ನನ್ನ ಕಕ್ಷಿದಾರರು ಷೆಡ್ಯೂಲ್ ಸ್ವತ್ತನ್ನು ಶುದ್ಧ ಕ್ರಯಕ್ಕೆ ಪಡೆದುಕೊಳ್ಳುತ್ತಾರೆ. ಮೇಲ್ಕಂಡ ಅವಧಿ ನಂತರ ಬರುವ ಆಕ್ಷೇಪಣೆ, ತಂಟೆ-ತಕರಾರುಗಳಿಗೆ ನನ್ನ ಕಕ್ಷಿದಾರರು ಬಾಧ್ಯರಾಗುವುದಿಲ್ಲ ಎಂಬ ಅಂಶವನ್ನು ಈ ಮೂಲಕ ತಿಳಿಯಪಡಿಸಲಾಗಿದೆ.

ಷೆಡ್ಯೂಲ್ ಸ್ವತ್ತಿನ ವಿವರ: ಮೈಸೂರು ತಾಲ್ಲೂಕು, ತಿ. ನರಸಿಪುರ ತಾಲ್ಲೂಕು, ಕಸಬಾ ಹೋಬಳಿ, ಅಗಸ್ತಿ ಪುರ ಗ್ರಾಮಲ್ಲಿರುವ [ಹಳೇ ಸರ್ವೆ ನಂ. 48/1] ಹೊಸ ಸರ್ವೆ ನಂ. 48/4 ರಲ್ಲಿ ವಿಸ್ತೀರ್ಣ 02 ಗುಂಟೆ ಮತ್ತು ಸರ್ವೆ ನಂ. 48/5 ರಲ್ಲಿ ವಿಸ್ತೀರ್ಣ 23 ಗುಂಟೆ, ಉಳ್ಳ ಸ್ವತ್ತಿನ ಚಕ್ಕುಬಂದಿ ಪೂರ್ವಕ್ಕೆ: ಸರ್ವೆ ನಂ. 48/6 ರಲ್ಲಿ ಮಹದೇವಮ್ಮ @ ಸಣ್ಣಮ್ಮನ ಜಮೀನು, ಪಶ್ಚಿಮಕ್ಕೆ: ಸರ್ವೆ ನಂ. 45 ರ ಜಮೀನು, ಉತ್ತರಕ್ಕೆ: ರಸ್ತೆ ಮತ್ತು ದಕ್ಷಿಣಕ್ಕೆ: ಸರ್ವೆ ನಂ. 46ರ ಜಮೀನು. ಸದರಿ ಸ್ವತ್ತನ್ನು 16 ಗುಂಟೆ ನಾಲೆಗಾಗಿ ಭೂಸ್ವಾಧೀನಗೊಂಡ ಜಮೀನು ಎರಡು ಭಾಗವಾಗಿ ವಿಭಜಿಸಿದೆ.

ಸಹಿ/- ಶ್ರೀಲತಾ ದೀಕ್ಷಿತ್, ವಕೀಲರು
ಎಸ್‌ಎಲ್‌ಡಿ ಲಾ ಫರ್ಮ್
ನಂ.1458/ಎ, ನಾರಾಯಣಶಾಸ್ತ್ರಿ ರಸ್ತೆ, ಸಪ್ನ ಬುಕ್ ಹೌಸ್ ಸಮೀಪ, ಮೈಸೂರು.
ಮೊ: 9844640641, email: sldlawfirm2021@gmail.com

ಜಿಲ್ಲಾ ಪಂಚಾಯತ್, ಮೈಸೂರು
ತಾಲ್ಲೂಕು ಪಂಚಾಯತ್, ಪಿರಿಯಾಪಟ್ಟಣ
ಕಿತ್ತೂರು ಗ್ರಾಮಪಂಚಾಯಿತಿ ಕಾರ್ಯಾಲಯ,
ಕಿತ್ತೂರು, ಪಿರಿಯಪಟ್ಟಣ ತಾಲ್ಲೂಕು, ಮೈಸೂರು ಜಿಲ್ಲೆ

ಸಂಖ್ಯೆ: ಗ್ರಾ.ಪಂ1/2024-25 ದಿನಾಂಕ:14-06-2024

ಆಡು, ಕುರಿ ಕೋಳಿ ಮಾಂಸದ ಅಂಗಡಿ ಮಳಿಗೆ ಹಕ್ಕು ಬಹಿರಂಗ ಹರಾಜು ಪ್ರಕಟಣೆ

ದಿನಾಂಕ:14-06-2024ರ ಸಾಮಾನ್ಯ ಸಭೆಯ ನಿರ್ಣಯದಂತೆ ಈ ಮೂಲಕ ತಿಳಿಯಪಡಿಸುವುದೇನೆಂದರೆ, ಕಿತ್ತೂರು ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಸೇರಿದ ಕೆ.ಆರ್ ನಗರ ರಸ್ತೆಯಲ್ಲಿ ಕಿತ್ತೂರು ಗ್ರಾಮದ ಪಂಚಾಯತ್ ನಿಂದ ನೀಡುವ (08) ಮಳಿಗೆಗಳಲ್ಲಿ ಮಾತ್ರ ರೂಡಿಸಿಕೊಳ್ಳಲು ಕಿತ್ತೂರು ಗ್ರಾಮ ಪಂಚಾಯಿತಿ ಅಧ್ಯಕ್ಷರು ಅಥವಾ ಇವರಿಂದ ಅಧಿಕಾರ ಪಡೆದ ಅಧಿಕಾರಿಗಳಂದ ಮಾರಟ ಪರವಾನಿಗೆ ಬಹಿರಂಗ ಹರಾಜನ್ನು ದಿನಾಂಕ: 21-06-2024 ನೇ ಶುಕ್ರವಾರ ಬೆಳಗ್ಗೆ 10-30 ಗಂಟೆಗೆ ಗ್ರಾಮ ಪಂಚಾಯಿತಿ ಕಚೇರಿಯಲ್ಲಿ ಏರ್ಪಡಿಸಲಾಗಿದೆ. ಆಸಕ್ತರು ಭಾಗವಹಿಸಬಹುದು.

ಕೋಳಿ ಮಾಂಸ ಮಾರಾಟ ಪರವಾನಿಗೆಗಾಗಿ ಹರಾಜಿನಲ್ಲಿ ಭಾಗವಹಿಸುವವರು ರೂ. 40,000/-ಗಳ ಠೇವಣಿ ಮೊತ್ತವನ್ನು ಮುಂಗಡವಾಗಿ ಕಟ್ಟಿ ಹರಾಜಿನಲ್ಲಿ ಭಾಗವಹಿಸಬೇಕು. ಬಿಡ್ ನಲ್ಲಿ ಭಾಗವಹಿಸುವ ಠೇವಣಿದಾರರನ್ನು ಹೊರತುಪಡಿಸಿ ಬೇರೆಯವರಿಗೆ ಹರಾಜಿನಲ್ಲಿ ಭಾಗವಹಿಸಲು ಅವಕಾಶವಿಲ್ಲ ಹಾಗೂ ಈ ಹರಾಜು ಪ್ರಕ್ರಿಯೆ ಒಂದು ವರ್ಷಕ್ಕೆ ಮಾತ್ರ ಅನ್ವಯಿಸುವುದು. (ಷರತ್ತು ಮತ್ತು ನಿಬಂಧನೆಗಳು ಒಳಪಟ್ಟಿರುತ್ತದೆ)

ಸಹಿ/- ಸದಸ್ಯರುಗಳು ಮತ್ತು ಸಿಬ್ಬಂದಿ ವರ್ಗ, ಕಿತ್ತೂರು ಗ್ರಾಮ ಪಂಚಾಯಿತಿ.

ಪುರಸಭಾ ಕಾರ್ಯಾಲಯ, ತಿ.ನರಸೀಪುರ, ಮೈಸೂರು ಜಿಲ್ಲೆ.
Email : itstaff_ulb_tnarasipura@yahoo.com
Email : ka.tnarasipura.tmc@gmail.com
Phone : 08227-261232

ನಂ.ತಿ.ನಪು/ಪುಸ/ಪೌಗೃಭಾ/ಸಿ.ಆರ್/01/2023-24 ದಿ: 12.06.2024

ಸಾರ್ವಜನಿಕ ಪ್ರಕಟಣೆ

ತಿ.ನರಸೀಪುರ ಪುರಸಭೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರು ಹಾಗೂ ಇತರ ಸ್ವಚ್ಛತಾ ಕೆಲಸ ಮಾಡುತ್ತಿರುವ ವಸತಿ ರಹಿತರಿಗೆ ಪೌರಕಾರ್ಮಿಕರ ಗೃಹಭಾಗ್ಯ ಯೋಜನೆಯಲ್ಲಿ ಮನೆ ನಿರ್ಮಿಸಲು ಜಮೀನಿನ ಅವಶ್ಯಕತೆ ಇದ್ದು, ಪಟ್ಟಣದ 5 ಕಿ.ಮೀ ವ್ಯಾಪ್ತಿ ಒಳಗೆ ವಸತಿಗೆ ಸೂಕ್ತವಾದ 4 ಎಕರೆ ಜಮೀನು ಅವಶ್ಯಕತೆ ಇರುತ್ತದೆ. ಸೂಕ್ತವಾದ ಖಾಸಗಿ ಜಮೀನನ್ನು ಸರ್ಕಾರದ ನಿಗದಿತ ದರದಲ್ಲಿ ಖರೀದಿಸಲು ಮಾನ್ಯ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿರುವ ಜಿಲ್ಲಾ ಜಮೀನು ಖರೀದಿ ಸಮಿತಿಯ ಮುಖಾಂತರ ಕ್ರಮವಹಿಸಲಾಗುತ್ತದೆ. ಪ್ರಯುಕ್ತ ಪುರಸಭೆ ವ್ಯಾಪ್ತಿಯಲ್ಲಿ ಖಾಸಗಿ ಜಮೀನು ಖರೀದಿಗೆ ನೀಡಲು ಇಚ್ಛೆಯುಳ್ಳ ಭೂ ಮಾಲೀಕರು ಜಮೀನಿನ ದಾಖಲಾತಿಗಳು ಹಾಗೂ ಒಪ್ಪಿಗೆ ಪತ್ರದೊಂದಿಗೆ ಮುಖ್ಯಾಧಿಕಾರಿಗಳು ಪುರಸಭೆ ತಿ.ನರಸೀಪುರ ರವರಿಗೆ ದಿ: 15.07.2024 ರ ಒಳಗಾಗಿ ಸಲ್ಲಿಸಲು ಕೋರಿದೆ. ಹೆಚ್ಚಿನ ವಿಷಯಗಳ ಬಗ್ಗೆ ಮಾಹಿತಿ ಬೇಕಾದಲ್ಲಿ ಕಛೇರಿಗೆ ಸಂಪರ್ಕಿಸಿ ಪಡೆಯಬಹುದಾಗಿದೆ.

ಸಹಿ/- ಮುಖ್ಯಾಧಿಕಾರಿ, ಪುರಸಭೆ, ತಿ.ನರಸೀಪುರ

DIPR/DDMYS-99/KSMCA-74/2024-25